ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಮೇ 19 ಸೋಮವಾರ 2025
ಸಂಪುಟ: 46 | ಸಂಚಿಕೆ: 33 | ಪುಟಗಳು: 12
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4

ಸರ್ಕಾರಿ ಆಸ್ಪತ್ರೆಗಳಲ್ಲೂ ಕೀಮೋಥೆರಪಿ ಸೌಲಭ್ಯ

● ಶೀಘ್ರದಲ್ಲೇ ಮೈಸೂರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಚಾಲನೆ ● ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಘೋಷಣೆ


ದಿನೇಶ್ ಗುಂಡೂರಾವ್



ಬೆಂಗಳೂರು, ಮೇ18– ಸರ್ಕಾರಿ ಆಸ್ಪತ್ರೆಗಳಲ್ಲೂ 'ಕೀಮೋಥೆರಪಿ ಸೌಲಭ್ಯ ವನ್ನು ಕಲ್ಪಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರು ಮೈಸೂರಿನಲ್ಲಿ ಶೀಘ್ರದಲ್ಲೇ ಚಾಲನೆ ನೀಡಲಿದ್ದಾರೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಘೋಷಿಸಿದರು.

ಸ್ಪರ್ಶ್ ಆಸ್ಪತ್ರೆ ಸಮೂಹ ಸಂಸ್ಥೆಯು ಬೆಂಗಳೂರಿನ ಹೆಣ್ಣೂರು ರಸ್ತೆಯಲ್ಲಿ ಭಾನುವಾರ ನೂತನವಾಗಿ ಆರಂಭಿಸಿದ ವಿಶೇಷ ಚಿಕಿತ್ಸಾ ಸೌಲಭ್ಯಗಳನ್ನೊಳ ಗೊಂಡ ಸ್ಪರ್ಶ್ ಆಸ್ಪತ್ರೆ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದರು,

ಬಡರೋಗಿಗಳು ಕೀಮೋಥೆರಪಿ ಮಾಡಿ ಸಲು ಸಾವಿರಾರು ರೂಪಾಯಿ ವ್ಯಯಿಸು ತ್ತಿದ್ದಾರೆ, ಸರ್ಕಾರಿ ಆಸ್ಪತ್ರೆಯಲ್ಲೂ ಈ ಸೌಲಭ್ಯ ಒದಗಿಸಿದರೆ ಸಾಕಷ್ಟು ಜನರಿಗೆ ಸಹಕಾರಿಯಾಗಲಿದೆ. ಈ ನಿಟ್ಟಿನಲ್ಲಿ ಕೀಮೋ ಥೆರಪಿಯನ್ನೂ ಸಹ ಸರ್ಕಾರಿ ಆಸ್ಪತ್ರೆಗ ಳಲ್ಲಿ ಒದಗಿಸಲು ಮುಂದಾಗಿದ್ದು, ಶೀಘ್ರವೇ ಈ ಸೇವೆಗೆ ಚಾಲನೆ ಸಿಗಲಿದೆ ಎಂದರು.

ಸರ್ಕಾರಿ ಆಸ್ಪತ್ರೆಗಳನ್ನು ಖಾಸಗಿ ಆಸ್ಪತ್ರೆಗಳ ರೀತಿಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನಾಗಿ ಮಾಡುವುದು ಕಷ್ಟಸಾಧ್ಯ. ಆದರೆ, ಸರ್ಕಾರಿ ಆಸ್ಪತ್ರೆ ಗಳಲ್ಲೂ ಆಧುನಿಕ ತಂತ್ರಜ್ಞಾನಗಳೊಂ ದಿಗೆ ಸುಧಾರಿತ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಈಗಾಗಲೇ ಕ್ರಮ ಕೈಗೊಂಡಿದ್ದೇವೆ. ಸಾಕಷ್ಟು ಸೌಲಭ್ಯಗಳು ರೋಗಿಗಳ ಸೇವೆಗೆ ಲಭ್ಯವಿದೆ ಎಂದು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ ಪಾಟೀಲ್ ಮಾತನಾಡಿ, ನಮ್ಮ ರಾಜ್ಯದಲ್ಲಿ ಬಡ ಮಕ್ಕಳೂ ಸಹ ವೈದ್ಯ ರಾಗಬೇಕು ಎಂಬ ಕನಸನ್ನು ನನಸು ಮಾಡಲು ಸರ್ಕಾರಿ ಕೋಟಾದಡಿ ಲಭ್ಯವಿರುವ ವೈದ್ಯಕೀಯ ಸೀಟುಗಳ ಸಂಖ್ಯೆ ಹೆಚ್ಚಿಸಿದ್ದೇವೆ. ಇತರೆ ರಾಜ್ಯ ಗಳಿಗೆ ಹೋಲಿಸಿದರೆ ನಮ್ಮಲ್ಲಿಯೇ ಹೆಚ್ಚು ಸರ್ಕಾರಿ ಕೋಟಾ ವೈದ್ಯಕೀಯ ಸೀಟು ಮೀಸಲಿಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸುತ್ತೂರು ಮಠದ ಶ್ರೀಗಳಾದ ಶ್ರೀ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿಯವರು ದಿವ್ಯಸಾನ್ನಿಧ್ಯ ವಹಿಸಿದ್ದರು. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಶಿವರಾಜ್ ವಿ.ಪಾಟೀಲ್, ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ, ಬಿ.ಎ.ಬಸವರಾಜ ಭಾಗವಹಿಸಿದ್ದರು.

ಯಶಸ್ವಿಯಾಗಿ ಉಡಾವಣೆಗೊಂಡ ಇಸ್ರೋ ಬೇಹುಗಾರಿಕಾ ಉಪಗ್ರಹಕ್ಕೆ ತಾಂತ್ರಿಕ ದೋಷ




ವಿ. ನಾರಾಯಣನ್

ಶ್ರೀಹರಿಕೋಟಾ, ಮೇ18– ಇಸ್ರೋ 101ನೇ ಉಪಗ್ರಹ (ಬೇಹುಗಾರಿಕಾ ಉಪಗ್ರಹ)ಉಡಾವಣೆ ಮಾಡಿ ಇತಿಹಾಸ ಸೃಷ್ಟಿಸಿದೆ. ಆದರೆ, ಯಶಸ್ವಿಯಾಗಿ ಉಡಾವಣೆ ಮಾಡಿದ ಉಪಗ್ರಹದಲ್ಲಿ ತಾಂತ್ರಿಕ ಸಮಸ್ಯೆ ಕಾಣಿಸಿಕೊಂಡಿದೆ.

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಭಾನುವಾರ ಬೆಳಗ್ಗೆ 5.59ಕ್ಕೆ ಇಒಎಸ್ –09 (ಭೂಸರ್ವೇಕ್ಷಣಾ) ಉಪಗ್ರಹ ಉಡಾವಣೆ ಮಾಡಿ ಸಾಧನೆ ಮಾಡಿತ್ತು. ಈ ಐತಿಹಾಸಿಕ ಮೈಲಿಗಲ್ಲನ್ನು ಇಸ್ರೋ ಯಶಸ್ವಿಯಾಗಿ ನೆರವೇರಿಸಿತ್ತು.

ಆಂಧ್ರಪ್ರದೇಶದ ಶ್ರೀಹರಿ ಕೋಟದಿಂದ ಇಸ್ರೋದ ಇಒಎಸ್ –09 (ಭೂಸರ್ವೇಕ್ಷಣಾ) ಉಪಗ್ರಹ ಪಿಎಸ್‌ಎಲ್‌ವಿ –ಸಿ61 ರಾಕೆಟ್ ಹೊತ್ತು ಯಶಸ್ವಿ ಯಾಗಿ ಉಡಾವಣೆಗೊಂಡಿತು. ಆದರೆ, ಇದೀಗ 3ನೇ ಹಂತದಲ್ಲಿ ತಾಂತ್ರಿಕ ಸಮಸ್ಯೆ ಎದುರಾಗಿದೆ ಎಂದು ಹೇಳಲಾಗುತ್ತಿದೆ.

ಇಒಎಸ್–09 ಉಪಗ್ರಹದ ಉಡಾವಣೆಯ 3ನೇ ಹಂತದಲ್ಲಿ ತಾಂತ್ರಿಕ ಸಮಸ್ಯೆಗಳು ಕಂಡುಬಂದಿದ್ದು, ಇದರಿಂದಾಗಿ ಕಾರ್ಯಾಚರಣೆಯನ್ನು ಪೂರ್ಣ ಗೊಳಿಸಲು ಸಾಧ್ಯವಾಗಲಿಲ್ಲ ಎಂದು ಇಸ್ರೋ ಮುಖ್ಯಸ್ಥ ವಿ. ನಾರಾಯಣನ್ ಅವರು ಹೇಳಿದ್ದಾರೆ. ಮೂರನೇ ಹಂತದ ಕಾರ್ಯನಿರ್ವಹಣೆಯ ಸಮಯದಲ್ಲಿ ತಾಂತ್ರಿಕ ಸಮಸ್ಯೆ ಕಂಡು ಬಂದಿದ್ದು, ಕಾರ್ಯಾಚರಣೆಯನ್ನು ಸಾಧಿಸಲು ಸಾಧ್ಯವಾಗಲಿಲ್ಲ. ಈ ಕುರಿತು ವಿಶ್ಲೇಷಣೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲೂ ಪೋಸ್ಟ್ ಮಾಡಿರುವ ಇಸ್ರೋ, ಇಂದು 101 ನೇ ಉಡಾವಣೆಯನ್ನು ಪ್ರಯತ್ನಿಸಲಾಯಿತು, ಪಿಎಸ್‌ಎಲ್‌ವಿ–ಸಿ 61 ಕಾರ್ಯಕ್ಷಮತೆ 2 ನೇ ಹಂತದವರೆಗೆ ಸಾಮಾನ್ಯವಾಗಿತ್ತು. 3ನೇ ಹಂತದಲ್ಲಿ ತಾಂತ್ರಿಕ ಸಮಸ್ಯೆ ಎದುರಾಗಿದ್ದು, ಕಾರ್ಯಾಚರಣೆ ಸಾಧಿಸಲು ಸಾಧ್ಯವಾಗಲಿಲ್ಲ ಎಂದು ತಿಳಿಸಿದೆ.

PSLV-C-61 ರ ಹಾರಾಟದ ಅನುಕ್ರಮವು ವಿವಿಧ ಹಂತಗಳನ್ನು ಒಳಗೊಂಡಿದೆ, PS1 ಮತ್ತು PSOM ಅನ್ನು ನೆಲದಲ್ಲಿ ಉಡಾಯಿಸುವುದರಿಂದ ಹಿಡಿದು, ವಿವಿಧ ವಿಭಾಗಗಳನ್ನು ಬೇರ್ಪಡಿಸುವ ಹಂತವನ್ನು ಹೊಂದಿದೆ. ಅಂತಿಮವಾಗಿ ಉಪಗ್ರಹವನ್ನು ರಾಕೆಟ್‌ನಿಂದ ಬೇರ್ಪಡಿಸುತ್ತದೆ. ಇದರಂತೆ ಮೂರನೇ ಹಂತದಲ್ಲಿ ಸಮಸ್ಯೆ ಎದುರಾಗಿದೆ. ಇದು ಘನ ರಾಕೆಟ್ ಮೋಟಾರ್ ಆಗಿದ್ದು, ಇದು ಉಡಾವಣೆಯ ಹಂತದ ನಂತರ ಮೇಲಿನ ಹಂತಕ್ಕೆ ಒತ್ತಡ ಹೆಚ್ಚಾಗುತ್ತದೆ. ಈ ಹಂತವು 240 ಕಿಲೋನ್ಯೂಟನ್‌ಗಳ ಗರಿಷ್ಠ ಒತ್ತಡವನ್ನು ಹೊಂದಿದೆ ಎಂದು ಇಸ್ರೋ ಮಾಹಿತಿ ನೀಡಿದೆ.

ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ನಡೆದಿದ್ದ

ಗುಂಡಿನ ದಾಳಿಯ ಪ್ರಮುಖ ಸಂಚುಕೋರ, ಲಷ್ಕರ್ ಉಗ್ರ ಪಾಕ್‌ನಲ್ಲಿ ಹತ್ಯೆ


ಸೈಫುಲ್ಲಾ

ಇಸ್ಲಾಮಾಬಾದ್, ಮೇ 18– ಭಾರತದಲ್ಲಿ ನಡೆದ ಮೂರು ಪ್ರಮುಖ ಭಯೋತ್ಪಾದಕ ದಾಳಿಯ ಸಂಚುಕೋರನಾಗಿದ್ದ ಲಷ್ಕರ್–ಎ–ತೈಬಾ (ಎಲ್‌ಇಟಿ)ಸಂಘಟನೆಯ ಟಾಪ್ ಉಗ್ರನನ್ನು ಪಾಕಿಸ್ತಾನದ ಸಿಂಧ್ ಪ್ರಾಂತ್ಯ ದಲ್ಲಿ ಭಾನುವಾರ ಹತ್ಯೆ ಮಾಡಲಾಗಿದೆ.

ಸೈಫುಲ್ಲಾ ಅಲಿಯಾಸ್ ವಿನೋದ್ ಕುಮಾರ್ ಅಲಿಯಾಸ್ ಮೊಹಮ್ಮದ್ ಸಲೀಮ್ ಅಲಿ ಯಾಸ್ ಖಾಲಿದ್ ಅಲಿಯಾಸ್ ವನಿಯಾಲ್ ಅಲಿಯಾಸ್ ವಾಜಿದ್ ಅಲಿಯಾಸ್ ಸಲೀಂ ಭಾಯ್ ಹೆಸರುಗಳಿಂದ ಮೋಸ್ಟ್ ವಾಂಟೆಡ್ ಆಗಿದ್ದ ಲಷ್ಕರ್ ಉಗ್ರನನ್ನು ಸಿಂಧ್ ಪ್ರಾಂತ್ಯದ ಬಾದಿನ್ ಜಿಲ್ಲೆಯ ಮಟ್ಲಿ ತಾಲೂಕಿನಲ್ಲಿ ಅಪರಿಚಿತ ಗುಂಪೊಂದು ಹತ್ಯೆ ಮಾಡಿದೆ.

2001ರಲ್ಲಿ ರಾಂಪುರದಲ್ಲಿ ನಡೆದ ಸಿಆರ್‌ಪಿಎಫ್ ಶಿಬಿರದ ಮೇಲಿನ ದಾಳಿ, 2005ರಲ್ಲಿ ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ■ 6ನೇ ಪುಟಕ್ಕೆ

ಭಾರತ–ಪಾಕಿಸ್ತಾನ ಕದನ ವಿರಾಮ ಮುಂದುವರಿಯಲಿದೆ

ಸೇನಾ ಹಿರಿಯ ಅಧಿಕಾರಿಗಳ ಹೇಳಿಕೆ

ನವದೆಹಲಿ, ಮೇ 18– ಮೇ 12 ರಂದು ಭಾರತ ಮತ್ತು ಪಾಕಿಸ್ತಾನ ನಡುವೆ ನಡೆದ ಕದನ ವಿರಾಮ ಒಪ್ಪಂದ ಮುಂದುವರೆಯಲಿದೆ ಎಂದು ಸೇನಾ ಹಿರಿಯ ಅಧಿಕಾರಿ ಗಳು ಭಾನುವಾರ ಹೇಳಿದ್ದಾರೆ.

ಕದನ ವಿರಾಮ ತಾತ್ಕಾಲಿಕವಾಗಿದ್ದು, ಕೊನೆಗೊಳ್ಳುವ ನಿರೀಕ್ಷೆಯಿದೆ ಎಂಬ ಊಹಾಪೋಹಗಳು ಕುರಿತು ಪ್ರತಿಕ್ರಿಯೆ ನೀಡಿರುವ ಸೇನಾಧಿಕಾರಿ, ಡಿಜಿಎಂಒಗಳ (ಮಿಲಿಟರಿ ಕಾರ್ಯಾ ಚರಣೆಗಳ ಮಹಾನಿರ್ದೇಶಕರು) ಮಾತುಕತೆ ಸಮಯದಲ್ಲಿ ಒಪ್ಪಿಕೊಂಡ ಯುದ್ಧ ಕುರಿತ ನಿಲುವಿಗೆ ■ 6ನೇ ಪುಟಕ್ಕೆ

ಹೈದರಾಬಾದ್‌ನ ಚಾರ್ಮಿನಾರ್ ಬಳಿ ಅಗ್ನಿ ದುರಂತ: 8 ಮಕ್ಕಳು ಸೇರಿ 17 ಮಂದಿ ಸಾವು


ಬೆಂಕಿ ನಂದಿಸುತ್ತಿರುವ ಅಗ್ನಿಶಾಮಕ ದಳ ಸಿಬ್ಬಂದಿ.

ಹೈದರಾಬಾದ್, ಮೇ 18– ಐತಿಹಾಸಿಕ ಚಾರ್ಮಿನಾರ್ ಬಳಿಯ ಗುಲ್ಜಾರ್ ಹೌಸ್ ನಲ್ಲಿರುವ ಆಭರಣ ಅಂಗಡಿಯಲ್ಲಿ ಭಾನು ವಾರ ಮುಂಜಾನೆ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಮೃತಪಟ್ಟವರ ಸಂಖ್ಯೆ 17ಕ್ಕೆ ಏರಿಕೆಯಾಗಿದ್ದು, ಅವರಲ್ಲಿ 8 ಮಕ್ಕಳು ಸೇರಿದ್ದಾರೆ. ಹಲವರು ಗಾಯಗೊಂಡಿದ್ದಾರೆ.

ಅಗ್ನಿಶಾಮಕ ಅಧಿಕಾರಿಗಳ ಪ್ರಕಾರ ಬೆಳಗ್ಗೆ 6 ಗಂಟೆ ಸುಮಾರಿಗೆ ಬೆಂಕಿ ಕಾಣಿಸಿ ಕೊಂಡಿದೆ. ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿಗೆ ತುರ್ತು ಕರೆ ಬಂದು ನಂತರ 12 ಅಗ್ನಿಶಾಮಕ ದಳದ ವಾಹನ ಗಳು ಸ್ಥಳಕ್ಕೆ ಧಾವಿಸಿವೆ ಎಂದು ತಿಳಿಸಿದ್ದಾರೆ. ಬೆಂಕಿಯನ್ನು ನಿಯಂತ್ರಣಕ್ಕೆ ತರುವ ಪ್ರಯತ್ನಗಳು ಹಲವಾರು ಗಂಟೆಗಳ ಕಾಲ ಮುಂದುವರೆದವು. ಗಾಯಗೊಂಡವರಲ್ಲಿ ಹಲವಾರು ಮಕ್ಕಳು ಸೇರಿದ್ದಾರೆ. ಎಲ್ಲರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸ್ಥಳಾಂತ ರಿಸಲಾಗಿದೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಲಾಗಿದೆ. ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಘಟನೆಯ ಬಗ್ಗೆ ದುಃಖ ವ್ಯಕ್ತಪಡಿಸಿದ್ದಾರೆ. ರಕ್ಷಣಾ ಕಾರ್ಯಾಚರಣೆಯನ್ನು ■ 6ನೇ ಪುಟಕ್ಕೆ



ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ

ಆನ್‌ಲೈನ್‌ನಲ್ಲಿ ಸ್ವಯಂ ಘೋಷಣೆಗೆ ಇಂದು ಲಿಂಕ್ ಬಿಡುಗಡೆ

● ಜಾತಿ ಪ್ರಮಾಣ ಪತ್ರದ 'ಆರ್‌ಡಿ ಸಂಖ್ಯೆ' ನಮೂದಿಸುವುದು ಕಡ್ಡಾಯ ● ಮೈಸೂರು ಜಿಲ್ಲೆಯಲ್ಲಿ ಮನೆ ಮನೆ ಸಮೀಕ್ಷೆಗೆ ಗಣತಿದಾರರಾಗಿ 3500ಕ್ಕೂ ಹೆಚ್ಚು ಶಿಕ್ಷಕರ ನಿಯೋಜನೆ ● ಸಮೀಕ್ಷೆ ಜಿಲ್ಲಾ ಸಂಯೋಜಕ ಬಿ.ರಂಗೇಗೌಡ ಮಾಹಿತಿ

ಮೈಸೂರು, ಮೇ 18(ಪಿಎಂ)– ರಾಜ್ಯದಲ್ಲಿ ನಡೆಯು ತ್ತಿರುವ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ಸಂಬಂಧ 3ನೇ ಹಂತದಲ್ಲಿ ಆನ್‌ಲೈನ್ ಮೂಲಕ ಸ್ವಯಂ ಘೋಷಣೆಗೆ ಅವಕಾಶ ಕಲ್ಪಿಸಲಾಗಿದ್ದು, ಮೇ 19 ರಂದು ಆನ್‌ಲೈನ್‌ನ ಲಿಂಕ್ ಬಿಡುಗಡೆಯಾಗಲಿದೆ.

ಆನ್‌ಲೈನ್‌ನಲ್ಲಿ ಸ್ವಯಂ ಆಗಿ ಮಾಹಿತಿ ನಮೂದಿ ಸಲು ಮೇ 19ರಿಂದ ಅವಕಾಶ ಕಲ್ಪಿಸುತ್ತಿದ್ದು, 28 ರವರೆಗೆ ಈ ವಿಧಾನದ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳಬಹುದು. ಮೇ 19ರಂದೇ ಆನ್‌ಲೈನ್ ಲಿಂಕ್ ಸಹ ಬಿಡುಗಡೆಯಾಗುತ್ತಿದೆ. ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನ ದಾಸ್ ಅವರ ಏಕಸದಸ್ಯ ವಿಚಾರಣಾ ಆಯೋಗದ ಶಿಫಾರಸ್ಸಿನಂತೆ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣಕ್ಕಾಗಿ ಮೂರು ಹಂತಗಳಲ್ಲಿ ಸಮೀಕ್ಷೆ ನಡೆಸಲಾಗುತ್ತಿದೆ.

ಅದರಂತೆ 1ನೇ ಹಂತದಲ್ಲಿ ಗಣತಿದಾರರು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ. ಇದು ಮೇ 25ರವರೆಗೆ ನಡೆಯಲಿದೆ. ಅದೇ ರೀತಿಯಲ್ಲಿ ಮತಗಟ್ಟೆ ಪ್ರದೇಶವಾರು ವಿಶೇಷ ಶಿಬಿರಗಳ ಸಮೀಕ್ಷೆಯು ಮೇ 26ರಿಂದ 28ರವರೆಗೆ ನಿಗದಿಗೊಳಿಸಲಾಗಿದ್ದು, ಇದನ್ನು 2ನೇ ಹಂತ ವೆಂದು ಕರೆಯಲಾಗಿದೆ. ಇನ್ನು 3ನೇ ಹಂತದ ಸ್ವಯಂ ಘೋಷಣೆಯು (ಆನ್‌ಲೈನ್ ಮೂಲಕ) ಮೇ 19 ರಿಂದ ಚಾಲನೆ ಪಡೆದುಕೊಳ್ಳುತ್ತಿದೆ. 'ಮೈಸೂರು ಮಿತ್ರ' ನೊಂದಿಗೆ ಮಾತನಾಡಿದ ■ 6ನೇ ಪುಟಕ್ಕೆ

ರಾಜ್ಯ ಸರ್ಕಾರಕ್ಕೆ 2 ವರ್ಷ: ನಾಳೆ ಸಾಧನಾ ಸಮಾವೇಶ

ಸಂಪುಟ ಪುನಾರಚನೆ ವಿಚಾರ ಮತ್ತೆ ಮುನ್ನೆಲೆಗೆ



ಹೊಸಪೇಟೆ, ಮೇ 18– ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಗಳನ್ನು ಬಿಂಬಿಸುವ 'ಸಮರ್ಪಣೆ ಸಂಕಲ್ಪ ಸಮಾವೇಶ' ಹೊಸಪೇಟೆಯಲ್ಲಿ ಮೇ 20 ರಂದು ನಡೆಯಲಿದೆ. ಜಿಲ್ಲಾಡ ಳಿತವು ಕಾರ್ಯಕ್ರಮದ ಯಶಸ್ಸಿಗೆ ಭರದ ಸಿದ್ಧತೆ ನಡೆಸುತ್ತಿದ್ದು, ಸಾರಿಗೆ, ಊಟ, ಮತ್ತು ವಸತಿ ವ್ಯವಸ್ಥೆಗಳನ್ನು ಒಳಗೊಂಡಂತೆ ಸಕಲ ಸಿದ್ಧತೆಗಳನ್ನು ಮಾಡಲಾಗಿದೆ. ಈ ನಡುವೆ ಸಂಪುಟ ಪುನಾರಚನೆ ವಿಚಾರ ಮತ್ತೆ ಮುನ್ನೆಲೆಗೆ ಬಂದಿದೆ.

ಇಲ್ಲಿನ ಜಿಲ್ಲಾ ಕ್ರೀಡಾಂ ಗಣದಲ್ಲಿ ಮೇ 20ರಂದು ನಡೆಯುವ ಸಮರ್ಪಣಾ ಸಂಕಲ್ಪ ಸಮಾವೇಶವು ಎರಡನೇ ಸಿದ್ದರಾಮೋತ್ಸವವಾಗಿ ಹೊರ ಹೊಮ್ಮಲಿದೆ. ಮೊದಲನೇ ಸಿದ್ದ ರಾಮೋತ್ಸವ ದಾವಣಗೆರೆಯಲ್ಲಿ ಈಗಾಗಲೇ ಜರುಗಿದೆ ಎಂದು ವಸತಿ ಸಚಿವ ಜಮೀರ್ ಅಹ ಮದ್ ಖಾನ್ ಹೇಳಿದರು.

ಸಮಾವೇಶಕ್ಕೆ ರಾಜ್ಯ ಸಾರಿಗೆ ಸಂಸ್ಥೆಯ 3,700 ಬಸ್‌ಗಳನ್ನು ಕಾಯ್ದಿ ರಿಸಲಾಗಿದೆ. ಪ್ರತ್ಯೇಕವಾಗಿ ನಾನು 2,000 ಬಸ್‌ಗಳನ್ನು ಕಾಯ್ದಿರಿಸಿದ್ದೇನೆ. ಹಲವು ಶಾಸಕರು ಶಾಲಾ, ಕಾಲೇಜು ಬಸ್‌ಗಳನ್ನೂ ಬಳಸುತ್ತಾರೆ. ಹೀಗಾಗಿ 3 ಲಕ್ಷಕ್ಕೂ ಹೆಚ್ಚು ಜನರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಅವರು ಶನಿವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. 1.50 ಲಕ್ಷ ಕುರ್ಚಿ ಗಳನ್ನು ಹಾಕಿ, 2 ಲಕ್ಷ ಜನರಿಗೆ ಊಟದ ವ್ಯವಸ್ಥೆ ಮಾಡಲಾಗು ವುದು. ಬೆಳಿಗ್ಗೆ 9 ರಿಂದ ಒಟ್ಟು 500 ಕೌಂಟರ್‌ಗಳಲ್ಲಿ ಊಟ ಬಡಿಸಲಾಗುವುದು. ತುರ್ತು ಅಗತ್ಯಕ್ಕೆ 50 ಸಾವಿರ ಊಟದ ಪ್ಯಾಕೆಟ್ ಸಿದ್ಧಪಡಿಸಲಾಗುವುದು. 5 ಲಕ್ಷ ನೀರಿನ ಪ್ಯಾಕೆಟ್ ತರಿಸಲಾಗು ವುದು. ಹೊಸಪೇಟೆ ಸುತ್ತಮುತ್ತ 200 ಎಕರೆ ಪ್ರದೇಶದಲ್ಲಿ 10 ಸಾವಿರಕ್ಕೂ ಹೆಚ್ಚು ವಾಹನಗಳ ನಿಲುಗಡೆಗೆ ವ್ಯವಸ್ಥೆ ಮಾಡಲಾಗುವುದು ಎಂದರು.

ಸಂಪುಟ ಪುನಾರಚನೆ ವಿಚಾರ: ನಾಗೇಂದ್ರ ಅವರನ್ನು ಮತ್ತೆ ನೇಮಿಸಿ ಕೊಳ್ಳಲು ಹೈಕಮಾಂಡ್ ಮನವೊಲಿ ಸಲು ಸಿದ್ದರಾಮಯ್ಯ ಅವರು ಹಲವಾರು ಬಾರಿ ಪ್ರಯತ್ನಿಸಿದ್ದರು. ■ 6ನೇ ಪುಟಕ್ಕೆ

ಐಎಂಎಫ್ ನಿಧಿ ಉಗ್ರ ಚಟುವಟಿಕೆಗೆ ಸೇರುವ ಬಗ್ಗೆ ಭಾರತದ ಕಳವಳ

ಪಾಕಿಸ್ತಾನಕ್ಕೆ 11 ಹೊಸ ಷರತ್ತು ವಿಧಿಸಿದ ಐಎಂಎಫ್



ನವದೆಹಲಿ, ಮೇ 18– ಆರ್ಥಿಕ ಸಂಕಷ್ಟದಿಂದ ಬಳಲು ತ್ತಿರುವ ಪಾಕಿಸ್ತಾನಕ್ಕೆ ಐಎಂಎಫ್ ತನ್ನ ಬೇಲ್ ಔಟ್ ಕಾರ್ಯ ಕ್ರಮವನ್ನು ವಿಸ್ತರಿಸಿದೆ. ಆದರೆ ಹಣಕಾಸು ನೆರವು ನೀಡು ವುದಕ್ಕೆ 11 ಹೊಸ ಷರತ್ತು ಗಳು ಮತ್ತು 50 ರಚನಾತ್ಮಕ ಮಾನದಂಡಗಳನ್ನು ವಿಧಿಸಿದೆ.

ಇತ್ತೀಚೆಗೆ ಪಹಲ್ಗಾಮ್ ದಾಳಿಯ ನಂತರ ಭಾರತ ಕೈಗೊಂಡ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯು ಜಗತ್ತಿನ ಮುಂದೆ ಪಾಕಿಸ್ತಾನದ ಬಣ್ಣವನ್ನು ಬಯಲು ಮಾಡಿದೆ. ವಿಧ್ವಂಸಕ ಕೃತ್ಯ ಎಸಗುತ್ತಿರುವ ಭಯೋತ್ಪಾದಕರ ಬೆನ್ನಿಗೆ ನಿಂತಿರುವುದಲ್ಲದೇ ಅವರಿಗೆ ಮೂಲ ಸೌಕರ್ಯ ಒದಗಿಸುತ್ತಿರುವ ಪಾಕಿಸ್ತಾನದ ಕೃತ್ಯ ಇಂದು ರಹಸ್ಯವಾಗೇನು ಉಳಿದಿಲ್ಲ, ಈ ಪಾಕಿಸ್ತಾನದ ಈ ದ್ವಿಮುಖ ವರ್ತನೆ ಯನ್ನು ಭಾರತ ಇಡೀ ಜಗತ್ತಿನ ಮುಂದೆ ತೆರೆದಿಟ್ಟಿದೆ. ಜೊತೆಗೆ ವಿಶ್ವ ಹಣಕಾಸು ನಿಧಿ(ಐಎಂಎಫ್)ಪಾಕಿಸ್ತಾನಕ್ಕೆ ನೀಡು ತ್ತಿರುವ ಹಣವನ್ನು ಅದು ಭಯೋ ತ್ಪಾದನೆಗೆ ಹಾಗೂ ಭಯೋತ್ಪಾದಕರಿಗೆ ಮೂಲಸೌಕರ್ಯ ಒದಗಿಸುವುದಕ್ಕೆ ಬಳಸು ತ್ತಿದೆ ಎಂಬುದನ್ನು ಭಾರತ ಮತ್ತೆ ಮತ್ತೆ ಹೇಳುತ್ತಲೇ ಬಂದಿದೆ. ಹೀಗಾಗಿ ಭಾರತವೂ ಕೂಡ ಐಎಂಎಫ್‌ಗೆ ■ 6ನೇ ಪುಟಕ್ಕೆ

ಐಎಂಎಫ್ ವಿಧಿಸಿರುವ 11 ಹೊಸ ಷರತ್ತುಗಳು

17.6 ಟ್ರಿಲಿಯನ್ ರೂ.ಗಳ ಫೆಡರಲ್ ಬಜೆಟ್‌ಗೆ ಸಂಸತ್ತಿನ ಅನುಮೋದನೆ ಪಡೆಯುವುದು. ಜೂನ್ 2025 ರೊಳಗೆ ಐಎಂಎಫ್ ಕಾರ್ಯಕ್ರಮದ ಗುರಿಗಳಿಗೆ ಅನುಗುಣವಾಗಿ ಪಾಕಿಸ್ತಾನ 2025–26 ರ ಹಣಕಾಸು ವರ್ಷಕ್ಕೆ ಹೊಸ ಬಜೆಟ್ ಅನ್ನು ಅಂಗೀಕರಿಸುವುದು.

ಪಾಕಿಸ್ತಾನದ ನಾಲ್ಕು ಪ್ರಾಂತ್ಯಗಳು ಜೂನ್ ವೇಳೆಗೆ ಹೊಸ ಕಾನೂನುಗಳನ್ನು ಜಾರಿಗೆ ತರಬೇಕು, ತೆರಿಗೆದಾರರ ಗುರುತಿಸುವಿಕೆ ಮತ್ತು ನೋಂದಣಿ, ಒಂದು ಆಶಯದ ಸುಧಾರಣೆಗೆ ಯೋಜನೆ, ಸಂವಹನ ಅಭಿಯಾನ ಗಳು, ಕಾರ್ಯಾಚರಣೆಯ ಮೌಲ್ಯ ಮಾಪನ ಮಾಡಲು ವೇದಿಕೆ ಇವು ಆ ಹೊಸ ಕಾನೂನುಗಳಾಗಿವೆ.

ಆಡಳಿತ ಕ್ರಿಯಾ ಯೋಜನೆ: ಸರ್ಕಾರವು ಐಎಂಎಫ್‌ನ ಆಡಳಿತ ನಿರ್ಣಯ ಮೌಲ್ಯಮಾಪನದ ಆಧಾರದ ಮೇಲೆ ಆಡಳಿತ ಸುಧಾರಣಾ ಕಾರ್ಯತಂತ್ರವನ್ನು ಪ್ರಕಟಿಸಬೇಕು.

2027 ರ ನಂತರದ ಹಣಕಾಸು ವಲಯದ ಕಾರ್ಯತಂತ್ರ: 2027 ರ ನಂತರದ ಹಣಕಾಸು ವಲಯದ ಸಾಂಸ್ಥಿಕ ಮತ್ತು ನಿಯಂತ್ರಕ ಉದ್ದೇಶ ಗಳನ್ನು ವಿವರಿಸುವ ದೀರ್ಘಾವಧಿಯ ಯೋಜನೆಯನ್ನು ಸಿದ್ಧಪಡಿಸಬೇಕು ಮತ್ತು ಪ್ರಕಟಿಸಬೇಕು. ವಾರ್ಷಿಕ ವಿದ್ಯುತ್ ದರ ಮರು ಆಧಾರ ಅಧಿಸೂಚನೆ ಸುಂಕಗಳನ್ನು ವೆಚ್ಚ ವಸೂಲಾತಿ ಮಟ್ಟ ದಲ್ಲಿ ನಿರ್ವಹಿಸಲು ಜುಲೈ ವೇಳೆಗೆ ಹೊರಡಿಸಬೇಕು. ■ 6ನೇ ಪುಟಕ್ಕೆ

ಮೈಸೂರು ಮಿತ್ರ

ಪ್ರಜ್ಞಾವಂತ ಜಗತ್ತು ನಿರ್ಮಾಣಕ್ಕೆ ರಂಗಭೂಮಿ ಚಟುವಟಿಕೆ ಪ್ರಮುಖ ಪಾತ್ರ



'ಎದೆಗೆ ಬಿದ್ದ ಅಕ್ಷರ' ನಾಟಕ ಪ್ರದರ್ಶನ, ಪ್ರಜ್ಞಾ ರಂಗೋತ್ಸವದ ಸಂದರ್ಭ.

ಮೈಸೂರು, ಮೇ 18(ಎಸ್‌ಪಿಎನ್)– ಮುಂದಿನ ಪ್ರಜ್ಞಾವಂತ ಜಗತ್ತು ನಿರ್ಮಿಸಲು ಇಂದಿನ ರಂಗಭೂಮಿ ಚಟುವಟಿಕೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಮೈಸೂರು ಕನ್ನಡ-ಸಂಸ್ಕೃತಿ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ ಅಭಿಪ್ರಾಯಪಟ್ಟರು.

ಮೈಸೂರು ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಹಿರಿಯ ಸಾಹಿತಿ ದೇವನೂರ ಮಹದೇವ ರಚಿತ 'ಎದೆಗೆ ಬಿದ್ದ ಅಕ್ಷರ' ನಾಟಕ ಪ್ರದರ್ಶನ ಹಾಗೂ ಪ್ರಜ್ಞಾ ರಂಗೋತ್ಸವ-2025 ಸಮಾರೋಪದಲ್ಲಿ ಭಾಗವಹಿಸಿ, ಮಾತನಾಡಿದರು. ಮೈಸೂರಿನ ಕಲಾಮಂದಿರ ಆವರಣದಲ್ಲಿ ಒಂದಿಲ್ಲೊಂದು ನಾಟಕೋತ್ಸವ, ರಂಗಶಿಬಿರಗಳನ್ನು ಆಯೋಜಿಸುತ್ತಿವೆ. ಇದು ಮೈಸೂರಿನ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಹೆಚ್ಚಿಸುತ್ತಿದೆ. ಅಲ್ಲದೆ, ಪ್ರಜ್ಞಾವಂತ ಜಗತ್ತು ನಿರ್ಮಿಸಲು ಸಹಕಾರಿಯಾಗುತ್ತಿವೆ ಎಂದು ಬಣ್ಣಿಸಿದರು.

ಹಿರಿಯ ರಂಗಕರ್ಮಿ ಸಿ.ಬಸವಲಿಂಗಯ್ಯ (ಬಸು) ಮಾತನಾಡಿ, ಹಿರಿಯ ಸಾಹಿತಿ ದೇವನೂರ ಮಹದೇವ ರಚಿತ 'ಎದೆಗೆ ಬಿದ್ದ ಅಕ್ಷರ' ನಾಟಕ ಪ್ರಾಯೋಗಿಕವಾಗಿದ್ದು, ಎಲ್ಲಾ ಸಂದರ್ಭಕ್ಕೂ ಪ್ರಸ್ತುತವಾಗುತ್ತದೆ. ಹಾಗಾಗಿ ಈ ನಾಟಕ ಇಂದಿನ ಎಲ್ಲಾ ಯುವಕರು ನೋಡಬೇಕಾದ ನಾಟಕವಾಗಿದೆ ಎಂದರು. ವೇದಿಕೆಯಲ್ಲಿ ಅಕ್ಕ ಐಎಎಸ್ ಅಕಾಡೆಮಿ ನಿರ್ದೇಶಕ ಡಾ.ಶಿವಕುಮಾರ್, ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಅಧ್ಯಕ್ಷ ಸೋಸಲೆ ಸಿದ್ದರಾಜು, ಕಾರ್ಯದರ್ಶಿ ಕೆ.ಎಂ.ಶಿವರಾಜು ಉಪಸ್ಥಿತರಿದ್ದರು.

ಸಾವಿನಲ್ಲೂ ಸಂಪನ್ಮೂಲ ಕ್ರೋಢೀಕರಣ ನಿರ್ಧಾರ ಕೈಬಿಡಿ; ಜನರ ಹಿತ ಕಾಪಾಡಿ

ಎಬಿಜಿಪಿ ವತಿಯಿಂದ ನಗರಪಾಲಿಕೆಗೆ ಮನವಿ



ಶವಗಳ ಅಂತ್ಯಸಂಸ್ಕಾರಕ್ಕೂ 500 ರೂ. ಶುಲ್ಕ ವಿಧಿಸಿರುವುದನ್ನು ವಿರೋಧಿಸಿ ಎಬಿಜಿಪಿ ಮೈಸೂರು ಘಟಕದ ವತಿಯಿಂದ ಮೈಸೂರು ನಗರಪಾಲಿಕೆ ಆರೋಗ್ಯಾಧಿಕಾರಿ ಡಾ.ವೆಂಕಟೇಶ್ ಅವರಿಗೆ ಮನವಿ ಸಲ್ಲಿಸಲಾಯಿತು.

ಮೈಸೂರು, ಮೇ 18– ಮೈಸೂರು ಮಹಾನಗರಪಾಲಿಕೆ, ಸ್ಮಶಾನಗಳಲ್ಲಿ ಶವಗಳ ಅಂತ್ಯಸಂಸ್ಕಾರಕ್ಕೂ 500 ರೂ. ಶುಲ್ಕ ವಿಧಿಸಿರುವುದನ್ನು ವಿರೋಧಿಸಿ ಅಖಿಲ ಭಾರತೀಯ ಗ್ರಾಹಕ ಪಂಚಾಯಿತಿ (ಎಬಿಜಿಪಿ) ಮೈಸೂರು ಘಟಕದ ವತಿಯಿಂದ ಮೈಸೂರು ನಗರಪಾಲಿಕೆ ಆರೋಗ್ಯ ಅಧಿಕಾರಿ ಡಾ.ವೆಂಕಟೇಶ್ ಅವರಿಗೆ ಮನವಿ ಸಲ್ಲಿಸಲಾಯಿತು.

ಮೈಸೂರು ನಾಗರಿಕರಿಗೆ ಮೂಲ ಸೌಲಭ್ಯದ ಜೊತೆಗೆ ಜನನ ಮತ್ತು ಮರಣಕ್ಕೆ ಸಂಬಂಧಿಸಿದಂತೆ ದಾಖಲೆಯು ಸೇರಿದಂತೆ ಅವಶ್ಯಕ ವ್ಯವಸ್ಥೆಯನ್ನು ಒದಗಿಸುವುದು, ತೆರಿಗೆ ಸಂಗ್ರಹಿಸುವುದು ಮೈಸೂರು ಪಾಲಿಕೆ ಕರ್ತವ್ಯ. ಈಗಾಗಲೇ ಪ್ರತಿಯೊಂದು ಮನೆಯಿಂದ ವಾರ್ಷಿಕ ತೆರಿಗೆಯಲ್ಲಿ 150 ರೂಗಳ ಸೆಸ್, ಸ್ಮಶಾನ ನಿರ್ವಹಣೆಗೆಂದು ಸಂದಾಯ ಮಾಡಿಸಿಕೊಳ್ಳುವ ಪಾಲಿಕೆ, ಸ್ಮಶಾನದಲ್ಲಿ ನೀರಿನ ವ್ಯವಸ್ಥೆ, ವಿದ್ಯುತ್ ದೀಪ ಮತ್ತು ಸ್ವಚ್ಛತೆಯ ಬಗ್ಗೆ ಅಧಿಕಾರಿಗಳು ಕಿಂಚಿತ್ತು ಗಮನಹರಿಸಿಲ್ಲ. ಸ್ಮಶಾನ ಅಭಿವೃದ್ಧಿ ಬಗ್ಗೆ ಚಿಂತಿಸದ ಪಾಲಿಕೆ ಜನನ-ಮರಣ ವಿಭಾಗ ಚಿತೆಗೇರುವ ಹೆಣಗಳ ಮೇಲೆ ತೆರಿಗೆ ವಿಧಿಸಿ ವಸೂಲಿ ಮಾಡಲು ಹೊರಟಿದೆ. ಇದು ಮೈಸೂರಿಗರಿಗೆ ಆಗುತ್ತಿರುವ ಮಹಾ ಅನ್ಯಾಯ. ಜನಪ್ರತಿನಿಧಿಯೇ ಇಲ್ಲದ ಪಾಲಿಕೆಯಲ್ಲಿ ಅಧಿಕಾರಿಗಳ ದುರಾಲೋಚನೆಯು ಜನಸಾಮಾನ್ಯರಿಗೆ ಬರೆ ಹಾಕಿದಂತಾಗಿದೆ. ಸಾವಿನಲ್ಲೂ ಸಂಪನ್ಮೂಲ ಸಂಗ್ರಹಿಸುತ್ತಿರುವುದು ನಗರಪಾಲಿಕೆಯ ಅಮಾನವೀಯತೆ ಮತ್ತು ದುರಾಡಳಿತಕ್ಕೆ ಕೈಗನ್ನಡಿಯಾಗಿದೆ. ಕೂಡಲೇ ಪಾಲಿಕೆ ಆಯುಕ್ತರು ಈ ಬಗ್ಗೆ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ. ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ಅಧ್ಯಕ್ಷ ಚಂದ್ರಶೇಖರ್, ಪಾಲಿಕೆ ಮಾಜಿ ಸದಸ್ಯ ಪಾರ್ಥಸಾರಥಿ, ಕಾರ್ಯದರ್ಶಿ ವಿಕ್ರಂ ಅಯ್ಯಂಗಾರ್, ಅಜಯ್ ಶಾಸ್ತ್ರಿ, ಎಸ್.ಎನ್.ರಾಜೇಶ್, ರವಿಚಂದ್ರ, ಶ್ರೀಧರ್ ಇನ್ನಿತರರು ಈ ವೇಳೆ ಹಾಜರಿದ್ದರು.

ಶ್ರೀ ವೈಷ್ಣವ ಸಾಮೂಹಿಕ ಉಪನಯನ

ಮೈಸೂರು,ಮೇ18–ಮೈಸೂರಿನ ಶ್ರೀ ವೈಷ್ಣವ ಸಾಮೂಹಿಕ ಉಪನಯನ ಸಮಿತಿ ವತಿಯಿಂದ ಶ್ರೀ ವೈಷ್ಣವ ವಟುಗಳಿಗೆ ಜೂ.13ರಂದು ಕೃಷ್ಣಮೂರ್ತಿಪುರಂನ ಶ್ರೀ ರಾಮಮಂದಿರದಲ್ಲಿ ಶ್ರೀ ವೈಷ್ಣವ ಸಾಮೂಹಿಕ ಉಪನಯನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಮೇ 31ರೊಳಗೆ ಅರ್ಜಿ ಸಲ್ಲಿಸಿ, ಸೂಕ್ತ ಸಲಹೆಗಳನ್ನು ಪಡೆದುಕೊಳ್ಳಲು ಕೋರಲಾಗಿದೆ. ಮಾಹಿತಿಗೆ ಮೊ.9448872458, 9448330197 ಸಂಪರ್ಕಿಸಿ.

ನಿಧನ

ವಾಮನರಾವ್



ಮೈಸೂರು: ರಾಷ್ಟ್ರೀಯ ಸ್ವಯಂಸೇವಕ ಸಂಘದ ಹಿರಿಯ ಕಾರ್ಯಕರ್ತರು, ಸಮಾಜ ಸೇವಾ ಮುಖಂಡರಾದ ವಾಮನ ರಾವ್ (71) ಭಾನುವಾರ ಸಂಜೆ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ ಪತ್ನಿ, ಪುತ್ರ ಮತ್ತು ಒಬ್ಬ ಪುತ್ರಿ ಇದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘದಲ್ಲಿ ಕಳೆದ 50 ವರ್ಷಗಳಿಂದ ಅಹರ್ನಿಶಿ ಸೇವೆ ಸಲ್ಲಿಸಿದ್ದ ವಾಮನ ರಾವ್ ಅವರು, ಪುತ್ತೂರು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಅವರು ಪೂರ್ಣಾವಧಿ ಕಾರ್ಯಕರ್ತರಾಗಿ , ಜಿಲ್ಲಾ ಪ್ರಚಾರಕರಾಗಿ ಮಹತ್ತರವಾದ ಸೇವೆಯನ್ನು ಸಲ್ಲಿಸಿದ್ದರು. ಮೂಲತಃ ಮೈಸೂರಿನವರಾದ ವಾಮನರಾವ್ ಅವರು ಸದ್ಯ ಸಂಘ ಪರಿವಾರದ ಧರ್ಮ ಜಾಗರಣ ಸಂಘಟನೆಯಲ್ಲಿ ಪ್ರಧಾನ ಸಂಚಾಲಕರಾಗಿ ಸೇವೆ ಸಲ್ಲಿಸುತ್ತಿದ್ದರು. ಶಾಸಕ ಶ್ರೀವತ್ಸ, ಮಾಜಿ ಶಾಸಕ ನಾಗೇಂದ್ರ ಸೇರಿದಂತೆ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪ್ರಮುಖರು, ಹಿರಿಯ ಕಾರ್ಯಕರ್ತರು ಮೃತರ ಅಂತಿಮ ದರ್ಶನ ಪಡೆದರು. ಮೃತರ ಅಂತ್ಯಕ್ರಿಯೆ ಭಾನುವಾರ ರಾತ್ರಿ ನಗರದ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು.

ಮಹೇಶ್ ಆರ್.



ಮೈಸೂರಿನ ಆಲನಹಳ್ಳಿ ನಿವಾಸಿ ಹಾಗೂ ಕಂದಾಯ ಇಲಾಖೆ ನಿರೀಕ್ಷಕರಾದ ಮಹೇಶ್ ಆರ್. (49) ಅವರು ಹೃದಯಾಘಾತದಿಂದ ಭಾನುವಾರ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ತಾಯಿ ಜಯಮ್ಮ, ಸಹೋದರ ರಂಗನಾಥ, ಸಹೋದರಿಯರಾದ ಗೀತಾ, ಪ್ರತಿಮಾ, ನಿಹಾನ್ ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ನಾಳೆ (ಸೋಮವಾರ) ಬೆಳಗ್ಗೆ 10 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಹರಿಶ್ಚಂದ್ರ ಘಾಟ್‌ನಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಿ.ಶಂಕ್ರಪ್ಪ



ಮೈಸೂರಿನ ಕುವೆಂಪುನಗರ ಅನಿಕೇತನ ರಸ್ತೆಯ ನಿವಾಸಿ ವಿಜಯ ಬ್ಯಾಂಕಿನ ಮಾಜಿ ಉದ್ಯೋಗಿ ಹಾಗೂ ಅನಿಕೇತನ ನಿವಾಸಿಗಳ ಸಂಘದ ಸಹ ಕಾರ್ಯದರ್ಶಿ ಸಿ.ಶಂಕ್ರಪ್ಪ (70) ಅವರು ಶನಿವಾರ ಸಂಜೆ ನಿಧನರಾದರು.

ಮೃತರು ಪತ್ನಿ ಚಿಕ್ಕಮ್ಮ, ಪುತ್ರ ಎಸ್.ಹರೀಶ್, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಭಾನುವಾರ ಮಧ್ಯಾಹ್ನ 12 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬ ವರ್ಗ ತಿಳಿಸಿದೆ. ಇವರ ನಿಧನಕ್ಕೆ ಅನಿಕೇತನ ನಿವಾಸಿಗಳ ಸಂಘದ ನಿಕಟಪೂರ್ವ ಕಾರ್ಯದರ್ಶಿ ವಿಕ್ರಾಂತ್ ಪಿ.ದೇವೇಗೌಡ ಸಂತಾಪ ಸೂಚಿಸಿದ್ದಾರೆ.

ರೈತರ ಆದಾಯ ದ್ವಿಗುಣ!

- ರಾಜ್ಯದಲ್ಲಿ ಸೆಕೆಂಡರಿ ಕೃಷಿ ಮಾರ್ಗಸೂಚಿ ಬಿಡುಗಡೆ
- ಕೌಶಲಗಳ ಮೂಲಕ ರೈತರ ಆದಾಯ ಹೆಚ್ಚಳ ಗುರಿ



ಸೆಕೆಂಡರಿ ಕೃಷಿ ಚಟುವಟಿಕೆಗಳಲ್ಲಿ ಒಂದಾದ ಜೇನು ಸಾಕಾಣಿಕೆ.

● ಮೋಹನ್ ಕಾಯಕ

ಮೈಸೂರು, ಮೇ 18– ರಾಜ್ಯ ರೈತರ ಆದಾಯ ದ್ವಿಗುಣಗೊಳಿಸುವ ಸೆಕೆಂಡರಿ ಕೃಷಿ ಮಾರ್ಗಸೂಚಿ ಬಿಡುಗಡೆಯಾಗಿದೆ...

ರಾಷ್ಟ್ರದಲ್ಲೇ ಪ್ರಥಮ ಬಾರಿಗೆ ಮಾದರಿಯಾಗಿ ಕರ್ನಾಟಕ ರಾಜ್ಯದಲ್ಲಿ ಸೆಕೆಂಡರಿ ಕೃಷಿ ಯೋಜನೆ ಅನುಷ್ಠಾನಗೊಳಿಸಲು ಯೋಜಿಸಲಾಗಿದ್ದು, ರಾಜ್ಯ ಕೃಷಿ ನಿರ್ದೇಶನಾಲಯವು ಸೆಕೆಂಡರಿ ಕೃಷಿ ಮಾರ್ಗಸೂಚಿ ಹೊರಡಿಸಿದೆ. ಕೃಷಿಯ ಪ್ರಾಥಮಿಕ ಉತ್ಪನ್ನಗಳನ್ನು(ಅಕ್ಕಿ, ರಾಗಿ, ಜೋಳ ಇತ್ಯಾದಿ) ಸ್ಥಳೀಯ ಮಾನವ ಸಂಪನ್ಮೂಲ ಮತ್ತು ಕೌಶಲಗಳನ್ನು ಬಳಸಿ, ಮೌಲ್ಯವರ್ಧನೆ ಮಾಡುವ ಮೂಲಕ ರೈತರ ಆದಾಯ ಹೆಚ್ಚಿಸುವ ಸೆಕೆಂಡರಿ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯ ರಾಜ್ಯಮಟ್ಟದ ಚಾಲನಾ ಸಮಿತಿ ಹಾಗೂ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಧ್ಯಕ್ಷತೆಯ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯನ್ನು ರಚನೆ ಮಾಡಲಾಗಿದೆ. ಕೃಷಿಯಲ್ಲಿ ಇಳುವರಿ ಹೆಚ್ಚಳಕ್ಕೆ ಮಹತ್ವ ನೀಡುತ್ತಿದ್ದಂತೆ, ಸೆಕೆಂಡರಿ ಕೃಷಿಯಲ್ಲಿ ಉಪ ಉತ್ಪನ್ನಗಳನ್ನು ತಯಾರಿಸಲು ಉತ್ತೇಜಿಸುವ ಜೊತೆಗೆ ಸ್ಥಳೀಯ ಉದ್ಯೋಗ ಸೃಜನೆ ಮೂಲಕ ಆರ್ಥಿಕ ವೃದ್ಧಿಗೂ ಮಹತ್ವ ನೀಡಲಾಗಿದೆ.

ಸೆಕೆಂಡರಿ ಕೃಷಿಯಲ್ಲಿ ಸ್ಥಳೀಯವಾಗಿ ಲಭ್ಯವಿರುವ ಕೃಷಿ ಮತ್ತು ಇತರೆ ಜೈವಿಕ ಸಂಪನ್ಮೂಲಗಳ ಪ್ರಾಥಮಿಕ ಉತ್ಪನ್ನಮತ್ತು ಉಪ-ಉತ್ಪನ್ನಗಳನ್ನು ಕಚ್ಚಾ ವಸ್ತುವಾಗಿ ಬಳಸಿಕೊಂಡು ಸಂಸ್ಕರಣೆ, ಮೌಲ್ಯವರ್ಧನೆ, ಪ್ಯಾಕಿಂಗ್ ಹಾಗೂ ಸೂಕ್ತ ಬ್ರ್ಯಾಂಡ್ ಕಲ್ಪಿಸಿ ರೈತರ ಆದಾಯ ಹೆಚ್ಚಿಸಲಾಗುತ್ತದೆ. ಉಪ್ಪಿನಕಾಯಿ, ಪಾಪಡ್, ಟೊಮ್ಯಾಟೋ ಕೆಚಪ್ ಸೇರಿದಂತೆ ಇನ್ನಿತರೆ ಆಹಾರ ಉತ್ಪನ್ನಗಳು, ಕಾಂಪೋಸ್ಟ್, ಚಾರ್ ಕೋಲ್‌ನಂತಹ ಆಹಾರೇತರ ಉತ್ಪನ್ನಗಳು ಹಾಗೆಯೇ ಬಿಸಿ ಮಾಡಿ ತಿನ್ನಲು ಸಿದ್ಧವಾದ ಆಹಾರಗಳು, ಉನ್ನತ ಮಟ್ಟದ ಸಂಸ್ಕರಣೆ ನಡೆಸಿ ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಅವಕಾಶಗಳನ್ನು ಸೃಷ್ಟಿಸುವುದಾಗಿದೆ.

ಸೆಕೆಂಡರಿ ಕೃಷಿಯ ಉದ್ದೇಶ: ಕೃಷಿ ಮತ್ತು ಕೃಷಿಯೇತರ ಚಟುವಟಿಕೆ ಮೂಲಕ ಉದ್ಯೋಗ ಸೃಷ್ಟಿಸಿ, ರೈತರ ಆದಾಯ ಹೆಚ್ಚಿಸುವುದು, ರೈತರ ಕುಟುಂಬಗಳಿಗೆ ವಿವಿಧ ಆದಾಯ ಮೂಲಗಳ ಸೃಜನೆ, ಪ್ರಾದೇಶಿಕ ಉತ್ಪನ್ನಗಳನ್ನು ಸ್ಥಳೀಯವಾಗಿ ಪ್ರಸಿದ್ಧಗೊಳಿಸುವುದು, ಬೆಳೆ ಉತ್ಪಾದಕತೆಯಲ್ಲಿ ಸುಧಾರಣೆ ಹಾಗೂ ಕೃಷಿಯಿಂದ ಕೃಷಿಯೇತರ ಚಟುವಟಿಕೆ ಕೈಗೊಳ್ಳಲು ಪ್ರೇರೇಪಿಸುವುದು ಸೆಕೆಂಡರಿ ಕೃಷಿ ಯೋಜನೆಯ ಉದ್ದೇಶವಾಗಿದೆ.

ಸೆಕೆಂಡರಿ ಕೃಷಿ ಚಟುವಟಿಕೆಗಳು: ಕೃಷಿ ಮತ್ತು ತೋಟಗಾರಿಕೆ ಬೆಳೆ ಪದ್ಧತಿ, ಪಶು ಸಂಗೋಪನೆ, ರೇಷ್ಮೆ, ಮೀನುಗಾರಿಕೆ, ಕೃಷಿ ಪ್ರವಾಸೋದ್ಯಮ, ಜೇನು ಸಾಕಾಣಿಕೆ, ಅಣಬೆ ಬೇಸಾಯ, ಬಿದಿರು ಕೃಷಿ, ಕೃಷಿ-ಅರಣ್ಯ, ಅಡುಗೆ ಎಣ್ಣೆ ಉತ್ಪಾದನೆ, ಡೈರಿ ಉತ್ಪನ್ನಗಳು ಹಾಗೆಯೇ ಬೆಳೆಯ ತ್ಯಾಜ್ಯಗಳಿಂದ ಕಾಂಪೋಸ್ಟ್ ತಯಾರಿಕೆ, ಇಂಗಾಲ ಆಧಾರಿತ ರಾಸಾಯನಿಕ ತಯಾರಿಕೆ ಸೇರಿದಂತೆ ಹಲವು ಚಟುವಟಿಕೆಗಳನ್ನು ಸೆಕೆಂಡರಿ ಕೃಷಿ ಯೋಜನೆ ಒಳಗೊಂಡಿದೆ.

ಸಹಯೋಗ ನೀಡುವ ಇಲಾಖೆ ಮತ್ತು ಸಂಸ್ಥೆಗಳು: ಸೆಕೆಂಡರಿ ಕೃಷಿಗಾಗಿ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಜಲಾನಯನ ಅಭಿವೃದ್ಧಿ ಇಲಾಖೆ, ಪಶು ಸಂಗೋಪನಾ ಇಲಾಖೆ, ರೇಷ್ಮೆ ಇಲಾಖೆ, ಮೀನುಗಾರಿಕೆ ಇಲಾಖೆ, ಅರಣ್ಯ ಇಲಾಖೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಸಹಕಾರ ಇಲಾಖೆ, ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೆಪಿಟಿಸಿಎಲ್, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಹಾಗೂ ಬೆಳಗಾವಿ ಕಬ್ಬು ನಿರ್ದೇಶನಾಲಯ, ಎಲ್ಲಾ ಕೃಷಿ, ತೋಟಗಾರಿಕೆ ಹಾಗೂ ಪಶು ವೈದ್ಯಕೀಯ ವಿಶ್ವವಿದ್ಯಾಲಯಗಳು, ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾಲಯ, ನಬಾರ್ಡ್, ಲೀಡ್ ಬ್ಯಾಂಕ್, ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಒಕ್ಕೂಟ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ, ಕರ್ನಾಟಕ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಹಾಗೂ ಕೃಷಿ ಉತ್ಪನ್ನಗಳ ಉತ್ಪಾದನೆ ಮತ್ತು ಮಾರಾಟದಲ್ಲಿ ತೊಡಗಿಕೊಂಡಿರುವ ಪ್ರತಿಷ್ಠಿತ ಸಂಸ್ಥೆಗಳು ಸಹಯೋಗ ನೀಡಲಿವೆ.

ಸೆಕೆಂಡರಿ ಕೃಷಿ ಚಟುವಟಿಕೆಗೆ ಶೇ.50ರಷ್ಟು ಸಹಾಯ ಧನ...

ಸೆಕೆಂಡರಿ ಕೃಷಿ ಚಟುವಟಿಕೆ ನಡೆಸಲು 3ರಿಂದ 15 ಲಕ್ಷ ರೂ.ವರೆಗೆ ಬ್ಯಾಂಕ್ ಸಾಲದ ರೂಪದಲ್ಲಿ ಶೇ.50ರಷ್ಟು ಸಹಾಯಧನ ಪಡೆಯಬಹುದಾಗಿದೆ. ವೈಯಕ್ತಿಕ ಹಾಗೂ ಸಮುದಾಯ ಸೆಕೆಂಡರಿ ಕೃಷಿ ಉದ್ದಿಮೆಗೆ 3ರಿಂದ 15 ಲಕ್ಷ ರೂ.ವರೆಗೆ ಸಾಲ ದೊರೆಯಲಿದ್ದು, ಯಂತ್ರೋಪಕರಣಗಳು, ಸಲಕರಣೆಗಳು, ಶೆಡ್ ಇತ್ಯಾದಿ ಸಿವಿಲ್ ಕಾಮಗಾರಿಗಳಿಗೆ ಸಾಲದ ಹಣವನ್ನು ಸದ್ಬಳಕೆ ಮಾಡಿಕೊಳ್ಳಲು ಅವಕಾಶವಿದೆ.

"ಸೆಕೆಂಡರಿ ಕೃಷಿಗೆ ಶೇ.50ರಷ್ಟು ಸಹಾಯ ಧನ ದೊರೆಯಲಿದ್ದು, ರೈತರ ಆದಾಯ ಹೆಚ್ಚಿಸಲು ಈ ಯೋಜನೆ ಸಹಕಾರಿಯಾಗಿದೆ. ಕೃಷಿ ಎಂದರೆ ಕೇವಲ ಉತ್ಪಾದನೆಯಲ್ಲ. ಉತ್ಪಾದನೆ ಮಾಡಿದ ಆಹಾರ ಉತ್ಪನ್ನಗಳನ್ನು ಮೌಲ್ಯವರ್ಧನೆಗೊಳಿಸಿದರೆ, ಮಾರುಕಟ್ಟೆಯಲ್ಲಿ ಉತ್ಪನ್ನದ ಮೌಲ್ಯ ಹೆಚ್ಚಾಗಲಿದೆ. ಮೈಸೂರು ಜಿಲ್ಲೆಯಲ್ಲಿ 100ಕ್ಕೂ ಹೆಚ್ಚು ಫಲಾನುಭವಿಗಳು ಸೆಕೆಂಡರಿ ಕೃಷಿ ಯೋಜನೆ ಅಳವಡಿಸಿಕೊಂಡಿದ್ದು, ಹೆಚ್ಚಿನ ಚಟುವಟಿಕೆಗಳನ್ನು ಸೇರ್ಪಡೆ ಮಾಡಲಾಗಿದೆ. ಬ್ಯಾಂಕ್ ಮೂಲಕ ಸಾಲ ದೊರೆಯಲಿದ್ದು, ಐದು ಲಕ್ಷ ರೂ. ಸಾಲ ಪಡೆದರೆ, 2.50 ಲಕ್ಷ ಸಬ್ಸಿಡಿ ಇರಲಿದೆ. ಇಷ್ಟೇ ಜನ ಪಡೆದುಕೊಳ್ಳಬೇಕು ಎಂಬ ಲಿಮಿಟ್ ಇಲ್ಲ. ಆಸಕ್ತಿ ಇರುವ ಯಾರಾದರೂ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು.

–ಕೆ.ಹೆಚ್.ರವಿ, ಜಂಟಿ ಕೃಷಿ ನಿರ್ದೇಶಕ, ಮೈಸೂರು

'ಮೊಳಕೆ', 'ಗರಿಕೆ' ಕೃತಿಗಳ ಲೋಕಾರ್ಪಣೆ



ರಂಗಾಯಣದ ಬಿ.ವಿ.ಕಾರಂತ ರಂಗ ಚಾವಡಿಯಲ್ಲಿ ಚಾವಡಿ ಗೆಳೆಯರ ಬಳಗದಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 'ಮೊಳಕೆ' (ಕಥಾ ಸಂಕಲನ) ಮತ್ತು 'ಗರಿಕೆ' (ಅಂಕಣ ಬರಹ ಸಂಕಲನ) ಪುಸ್ತಕಗಳನ್ನು ಪ್ರೊ.ರಾಮೇಗೌಡ(ರಾಗೌ) ಬಿಡುಗಡೆಗೊಳಿಸಿದರು.

ಮೈಸೂರು, ಮೇ18(ಜಿಎ)–ಇತ್ತೀಚಿನ ದಿನಗಳಲ್ಲಿ ಬರೆಯುತ್ತಿರುವವರೂ ಸಹ ಬರೆಯುವುದನ್ನು ನಿಲ್ಲಿಸುತ್ತಿದ್ದಾರೆ. ಇದೊಂದು ಆತಂಕ ಹಾಗೂ ಆಶ್ಚರ್ಯಕರ ಸಂಗತಿಯಾಗುತ್ತಿದೆ ಎಂದು ವಿದ್ವಾಂಸ ಪ್ರೊ.ರಾಮೇಗೌಡ(ರಾಗೌ) ಆತಂಕ ವ್ಯಕ್ತಪಡಿಸಿದರು.

ಮೈಸೂರಿನ ರಂಗಾಯಣದಲ್ಲಿರುವ ರಂಗ ಚಾವಡಿಯಲ್ಲಿ ಚಾವಡಿ ಗೆಳೆಯರ ಬಳಗದಿಂದ ಭಾನುವಾರ ಆಯೋಜಿಸಿದ್ದ 'ಮೊಳಕೆ' (ಕಥಾ ಸಂಕಲನ) ಮತ್ತು 'ಗರಿಕೆ' (ಅಂಕಣ ಬರಹ ಸಂಕಲನ) ಪುಸ್ತಕಗಳ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಮೊಬೈಲ್ ಬಂದ ಮೇಲಂತೂ ಮೊಬೈಲ್‌ನಲ್ಲೇ ಮುಳುಗಿ ಕಾಲವನ್ನು ಕಳೆಯುತ್ತಿದ್ದಾರೆ. ಪ್ರಮುಖವಾಗಿ ವಾಟ್ಸಪ್ ಬಂದು ಗ್ರೂಪ್‌ಗಳು ಹುಟ್ಟಿಕೊಂಡ ನಂತರ ಒಟ್ಟಿಗೆ ಸೇರುವವರ ಸಂಖ್ಯೆಯೂ ಕಡಿಮೆಯಾಗುತ್ತಿದೆ ಎಂದು ವಿಷಾದಿಸಿದರು.

ಪ್ರಸ್ತುತ ಪ್ರಾಮಾಣಿಕತೆ ಮಾಯವಾಗಿದೆ. ದ್ವೇಷ, ಅಸೂಯೆ ಹೆಚ್ಚಾಗಿದೆ. ಹಿಂದೆ ಈ ರೀತಿ ಇರಲಿಲ್ಲ ಎಂಬುದಕ್ಕೆ ಅವರು ಕನ್ನಡ ಮೊದಲ ಪ್ರಾಧ್ಯಾಪಕ ಹುದ್ದೆ ಟಿ.ಎಸ್.ವೆಂಕಣ್ಣಯ್ಯ, ಎ.ಆರ್.ಕೃಷ್ಣಶಾಸ್ತ್ರಿಗಳ ಪೈಕಿ ಯಾರಿಗೆ ಸಿಗಬೇಕು ಎಂಬ ವಿಷಯ ಬಂದಾಗ ಇಬ್ಬರೂ ನಿಮಗೆ ಮೊದಲು ನಿಮಗೆ ಮೊದಲು ಎಂದರು. ಕುಲಸಚಿವರಾಗಿದ್ದ ಬಿಎಂಶ್ರೀ ಅವರು ಅಂತಿಮವಾಗಿ ಟಿ.ಎಸ್.ವೆಂಕಣ್ಣಯ್ಯ ಅವರನ್ನು ಆಯ್ಕೆ ಮಾಡಿದರು. ಈಗ ಈ ರೀತಿಯ ಪರಿಸ್ಥಿತಿ ಇದೆಯೇ? ಎಂದು ಅವರು ಪ್ರಶ್ನಿಸಿದರು.

ಕವಿತೆಗಳನ್ನು ಓದುವಾಗ ವಾಸ್ತವತೆಯನ್ನು ಅರಿಯಬೇಕು. ಕುವೆಂಪು ಅವರು ದೋಣಿ ಸಾಗಲಿ...ಮುಂದೆ ಹೋಗಲಿ ಕವನವನ್ನು ಕುಕ್ಕರಹಳ್ಳಿ ಕೆರೆಯ ದಡದಲ್ಲಿ ಕುಳಿತು ಬರೆದಿದ್ದಾರೆ ಎಂದು ಭಾವಿಸಬಾರದು. ಯಾವುದೇ ಕವಿಯಾದರೂ ತನ್ನ ಮನಸ್ಸಿಗೆ ಹೊಳೆದಿದ್ದನ್ನು ಯಾವ ಕ್ಷಣದಲ್ಲಿ ಬೇಕಾದರೂ ಬರೆದಿರಬಹುದು ಎಂದ ಅವರು, ಆತ್ಮಚರಿತ್ರೆ ಕೇವಲ ದೊಡ್ಡ ದೊಡ್ಡ ಕವಿಗಳಿಗೆ. ವ್ಯಕ್ತಿಗಳಿಗೆ ಮಾತ್ರ ಸೀಮಿತವಾದುದಲ್ಲ. ರೈತ ಬೇಕಾದರೂ ಆತ್ಮಚರಿತ್ರೆ ಬರೆಯಬಹುದು. ಆತನಿಗೆ ಅವನದೆ ಆದ ಸಮಸ್ಯೆಗಳಿರುತ್ತವೆ ಎಂದರು.

ಪ್ರತಿಭಾವಂತರು, ಬುದ್ಧಿವಂತರು ಈಗಲಾದರೂ ಎಚ್ಚೆತ್ತುಕೊಳ್ಳಬೇಕು. ಏನನ್ನು ಬರೆಯುತ್ತೀರೋ ಅದನ್ನು ಆಸಕ್ತಿಯಿಂದ ಬರೆಯಿರಿ. ಆದರೆ ಅದರ ಬಗ್ಗೆ ನಿರೀಕ್ಷೆ ಇಟ್ಟುಕೊಳ್ಳಬಾರದು. ಇಂದು ಮಾರ್ಕೆಟಿನ ವಿಚಾರ ಏನೆ ಇರಲಿ ಪ್ರಕಾಶಕರು ತುಂಬಾ ಎಚ್ಚೆತ್ತುಕೊಂಡಿದ್ದಾರೆ. ಈಗಾಗಿ ಬರಹಗಳು ಉತ್ಕೃಷ್ಟವಾಗಿ ಮೂಡಿಬರಬೇಕು ಎಂದರು.

ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿ 25 ವರ್ಷಗಳ ಹಿಂದೆ ವಿದ್ಯಾರ್ಥಿಗಳಾಗಿದ್ದವರು ಕಥೆ, ಲೇಖನಗಳನ್ನು ಬರೆದು, ಪುಸ್ತಕ ರೂಪದಲ್ಲಿ ಪ್ರಕಟಿಸಿರುವುದು ದೊಡ್ಡ ವಿಷಯ ಎಂದು ಅವರು ಶ್ಲಾಘಿಸಿ, ಇದೇ ರೀತಿ ನಿಷ್ಠೆಯಿಂದ ಕೆಲಸ ಮಾಡಿ, ಕನ್ನಡ ಸಾಹಿತ್ಯ ಸೇವೆಯನ್ನು ಮುಂದುವರೆಸಿ ಎಂದು ಅವರು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಅಂಶಿಪ್ರಸನ್ನಕುಮಾರ್, ಸಂಸ್ಕೃತಿ ಬುಕ್ ಪ್ರಕಾಶಕ ಸಂಸ್ಕೃತಿ ಸುಬ್ರಮಣ್ಯ, ಪ್ರೊ.ಕಾಳೇಗೌಡ ನಾಗವಾರ, ಪ್ರೊ.ಪಂಡಿತಾರಾಧ್ಯ, ಪ್ರೊ.ಎನ್.ಎಂ.ತಳವಾರ್, ಪ್ರೊ.ಮಹಾದೇವ ಸೇರಿದಂತೆ ಇನ್ನಿತರರು ಹಾಜರಿದ್ದರು.

ಮೈಸೂರಲ್ಲಿ ಭಾರತೀಯ ಸೇನೆಗೆ ತಿರಂಗಾ ಯಾತ್ರೆ ಗೌರವ, ಯಶಸ್ವಿ

ಬಿಜೆಪಿ ಮುಖಂಡ ವಿ.ಶೈಲೇಂದ್ರ ಹರ್ಷ



ಮೈಸೂರು,ಮೇ 18(ಪಿಎಂ)– ಪಹಲ್ಗಾವ್‌ನಲ್ಲಿ ಉಗ್ರರು ನಡೆಸಿದ ಪ್ರವಾಸಿಗರ ಹತ್ಯಾಕಾಂಡಕ್ಕೆ ಪ್ರತೀಕಾರವಾಗಿ ಭಾರತೀಯ ಸೇನೆಯು ಆಪರೇಷನ್ ಸಿಂಧೂರ್ ಮೂಲಕ ತಕ್ಕ ಪ್ರತ್ಯುತ್ತರ ಕೊಟ್ಟಿದೆ. ಅಂತಹ ಶೌರ್ಯ ಮೆರೆದ ನಮ್ಮ ಸೇನೆಗೆ ಗೌರವ ಸಲ್ಲಿಸಲು ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆ ಮೈಸೂರಿನಲ್ಲಿ ಯಶಸ್ವಿಯಾಗಿದೆ ಎಂದು ಮಾಜಿ ಉಪಮೇಯರ್ ಹಾಗೂ ಬಿಜೆಪಿ ಮುಖಂಡ ವಿ.ಶೈಲೇಂದ್ರ ಹರ್ಷ ವ್ಯಕ್ತಪಡಿಸಿದ್ದಾರೆ.

ಪಾಪಿ ಪಾಕಿಸ್ತಾನ ಬೆಂಬಲಿತ ನೂರಾರು ಉಗ್ರರನ್ನು ಹತ್ಯೆಗೈಯುವಲ್ಲಿ ನಮ್ಮ ಭಾರತೀಯ ಸೇನೆ ಯಶಸ್ವಿಯಾಗಿದೆ. ಭಯೋತ್ಪಾದಕರ ನೆಲೆಗಳನ್ನು ಬುಡಸಮೇತ ನೆಲಸಮ ಮಾಡಿದ ಭಾರತೀಯ ಸೇನೆಗೆ ತಿರಂಗಾ ಯಾತ್ರೆ ಮೂಲಕ ಸಾವಿರಾರು ಸಂಖ್ಯೆಯಲ್ಲಿ ಮೈಸೂರಿನ ನಾಗರಿಕರು ಗೌರವ ಸಲ್ಲಿಸಿರುವುದು ಅರ್ಥಪೂರ್ಣವಾಗಿದೆ. ಆದರೆ ಕಾಂಗ್ರೆಸ್ ಮುಖಂಡರು ಪರೋಕ್ಷವಾಗಿ ಪಾಕಿಸ್ತಾನ ಪರವಾದ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಕೇಂದ್ರ ಸರ್ಕಾರದ ಮೇಲೆ ಇಲ್ಲಸಲ್ಲದ ಆರೋಪಗಳನ್ನು ಮಾಡುವುದನ್ನು ಬಿಟ್ಟು ಕಾಂಗ್ರೆಸ್, ಇನ್ನಾದರೂ ದೇಶದ ರಕ್ಷಣೆಗಾಗಿ ನಿಲ್ಲಬೇಕು. ಅಂತೆಯೇ ದೇಶದ ಯುವ ಜನರು, ವಿಚಾರವಾದಿಗಳು, ಚಿಂತಕರು ಸೇರಿದಂತೆ ರಾಷ್ಟ್ರದ ಸಮಸ್ತ ನಾಗರಿಕರು ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಪರವಾಗಿ ನಿಲ್ಲಬೇಕೆಂದು ಪ್ರಕಟಣೆಯಲ್ಲಿ ಅವರು ಕೋರಿದ್ದಾರೆ.

ಕೆ.ಎಸ್.ದೀಪ್ತಿಗೆ ಶೇ.81.5 ಅಂಕ



ಮೈಸೂರು, ಮೇ 18– ಮೈಸೂರಿನ ಶ್ರೀ ಶಾರದಾ ಪಬ್ಲಿಕ್ ಸ್ಕೂಲ್‌ನ ವಿದ್ಯಾರ್ಥಿನಿ ಕೆ.ಎಸ್.ದೀಪ್ತಿ ಈ ಬಾರಿಯ ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಶೇ.81.5 ಅಂಕ ಪಡೆದು ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾಳೆ. ಇವಳು ಲೇಖಕ, ವಿಮರ್ಶಕ ಕಾಳಿಹುಂಡಿ ಶಿವಕುಮಾರ್ ಮತ್ತು ಅನುಪಮಾ ಸಿ.ಎಸ್. ದಂಪತಿ ಪುತ್ರಿ. ಈ ಸಂದರ್ಭದಲ್ಲಿ ಮೈಸೂರು ಆಕಾಶವಾಣಿಯ ಸಮುದ್ಯತಾ ಕೇಳುಗರ ಬಳಗದ ಅಧ್ಯಕ್ಷ ಕಣ್ಣೂರು ವಿ ಗೋವಿಂದಾಚಾರಿ ಅವರು ಅವರ ಮನೆಯಲ್ಲಿ ಕೆ.ಎಸ್.ದೀಪ್ತಿಯನ್ನು ಅಭಿನಂದಿಸಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

19.05.2025 ಸೋಮವಾರ, ಮಳೆ ನಕ್ಷತ್ರ: ಕೃತ್ತಿಕ 11.05.2025ರಿಂದ 24.05.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ,
ತಿಥಿ: ಸಪ್ತಮಿ, ನಕ್ಷತ್ರ: ಶ್ರವಣ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗದಿಂದ ಕಣ್ಣಿನ ದೃಷ್ಟಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ವಿಶೇಷ ಬೇಸಿಗೆ ಆರೋಗ್ಯ ಶಿಬಿರ, ಬೊಜ್ಜು ನಿವಾರಣಾ ಮೂತ್ರ ಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ಶ್ರೀ ಶ್ರೀನಿವಾಸಸ್ವಾಮಿ ಕೈಂಕರ್ಯ ಸಭಾ :** ಶ್ರೀ ಶ್ರೀನಿವಾಸಸ್ವಾಮಿಯವರ ವಾರ್ಷಿಕ ಮಹೋತ್ಸವ, ಬೆಳಗ್ಗೆ 9ಕ್ಕೆ ಶ್ರೀಯುನವರಿಗೆ ಮಹಾಭಿಷೇಕ, ಸಂಜೆ 7 ಗಂಟೆಗೆ ವಷೋತ್ಸವ, ಸ್ಥಳ: ಶ್ರೀ ಶ್ರೀನಿವಾಸಸ್ವಾಮಿಯವರ ದೇವಸ್ಥಾನ, ತಿಲಕ್‌ನಗರ.

■ **ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕರ ಸಂಘ (ಬೆಂಗಳೂರು), ಮೈಸೂರು ಜಿಲ್ಲಾ ಘಟಕ, ಕರ್ನಾಟಕ ರಾಜ್ಯ ಮಹಾ ವಿದ್ಯಾಲಯ ಶಿಕ್ಷಕರ ಸಂಘ:** ಡಾ.ಕಸ್ತೂರಿ ರಂಗನ್ ಅವರಿಗೆ ಶ್ರದ್ಧಾಂಜಲಿ ಕಾರ್ಯಕ್ರಮ, ಅಧ್ಯಕ್ಷತೆ: ಕರ್ನಾಟಕ ರಾಜ್ಯ ಮಹಾವಿದ್ಯಾಲಯ ಶಿಕ್ಷಕರ ಸಂಘದ ರಾಜ್ಯ ಪ್ರಮುಖರಾದ ಡಾ.ಬಿ.ಸಿ.ರಾಜಣ್ಣ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್.ಶ್ರೀವತ್ಸ, ನುಡಿ ನಮನ: ನಿಕಟಪೂರ್ವ ಉಪಕುಲಪತಿ ಡಾ.ಹರೀಶ್ ರಾಮಸ್ವಾಮಿ, ಸ್ಥಳ: ಎಬಿವಿಪಿ ಕಾರ್ಯಾಲಯ, 4ನೇ ಕ್ರಾಸ್, ನಾರಾಯಣಶಾಸ್ತ್ರಿ ರಸ್ತೆ, ಸಂಜೆ 4.30ಕ್ಕೆ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಸಂಧಿವಾತ ವ್ಯಾಧಿಗೆ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಬಳಿ, ಕೆಬಿಎಲ್ ಲೇಔಟ್, ಬೆಳಗ್ಗೆ 10ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗ, ಚಾಲ್‌ಚೌಟ್ ಕ್ರಿಕೆಟ್ ಅಕಾಡೆಮಿ:** ಮಹಿಳೆಯರ ಕ್ರಿಕೆಟ್ ಟೂರ್ನಮೆಂಟ್, ಉದ್ಘಾಟನೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮತ್ತು ಕುಲಸಚಿವೆ ಎಂ.ಕೆ.ಸವಿತಾ, ಸ್ಥಳ: ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರಿಕೆಟ್ ಸ್ಟೇಡಿಯಂ, ಬೆಳಗ್ಗೆ 11 ಗಂಟೆಗೆ.

■ **ಜೆಎಸ್‌ಎಸ್ ಕಾನೂನು ಕಾಲೇಜು:** ನವೀಕೃತ ಅಣಕು ನ್ಯಾಯಾಲಯ ಉದ್ಘಾಟನೆ, ದಿವ್ಯ ಸಾನ್ನಿಧ್ಯ: ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಉದ್ಘಾಟನೆ: ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ನ್ಯಾ. ಇ.ಎಸ್.ಇಂದಿರೇಶ್, ಅಧ್ಯಕ್ಷತೆ: ಹುಬ್ಬಳ್ಳಿಯ ರಾಜ್ಯ ಕಾನೂನು ವಿವಿಯ ಉಪಕುಲಪತಿ ಪ್ರೊ.ಡಾ.ಸಿ.ಬಸವರಾಜು, ಗೌರವ ಅತಿಥಿ: ಜೆಎಸ್‌ಎಸ್ ಮಹಾ ವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ, ಸ್ಥಳ: ಕಾಲೇಜು ಆವರಣ, ಕುವೆಂಪುನಗರ, ಸಂಜೆ 5ಕ್ಕೆ.

ಮೈಸೂರು ಆಕಾಶವಾಣಿ




ಬೆಳಗ್ಗೆ: 6.10–ಚಿಂತನ, ವೀರಣ್ಣ ಸಿ ಹುರಕಡ್ಲಿ, 6.15 ಗೀತಾರಾಧನ, 6.35 ಮತ್ತು ಸಂಜೆ 6.10: ಆಧಾರ ಶಿಲೆ–ಮೈಸೂರು ಸುತ್ತಲಿನ ಪ್ರಾಗೈತಿಹಾಸಿಕ ತಾಣಗಳ ಪರಿಚಯ ಮಾಲಿಕೆ. ಪ್ರಸ್ತುತಿ: ಡಾ.ರಾಮದಾಸ್ ರೆಡ್ಡಿ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ –ಅಂಬಯ್ಯ ನುಲಿ, ದೀಪಿಕಾ ಪಾಂಡುರಂಗಿ ಮತ್ತು ಅಮೃತ ನಿತಿನ್ ಶಾಸ್ತ್ರೀ, ವ್ಯಾಖ್ಯಾನ–ಕೆ.ಎಲ್. ಪದ್ಮಿನಿ ಹೆಗಡೆ, 6.50–ರೈತರಿಗೆ ಸಲಹೆ, 7.15–ಭರವಸೆ ಹೊನಲು–ವೈದ್ಯರ ಕಿವಿಮಾತು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಟ್ರಸ್ಟ್‌ವೆಲ್ ಆಸ್ಪತ್ರೆ, ಜೆ.ಸಿ.ರಸ್ತೆ, ಬೆಂಗಳೂರು, ಮಕ್ಕಳಲ್ಲಿ ಉಸಿರಾಟದ ತೊಂದರೆಗಳು ಕುರಿತು ಬೆಂಗಳೂರಿನ Trust well hospitalನ ವೈದ್ಯರಾದ ಡಾ.ಚಂದ್ರಶೇಖರ್ ಅವರೊಡನೆ ಸಂದರ್ಶನ, ಸಂದರ್ಶಕರು: ನಿರ್ಮಲ .ಎಸ್, 8.30–ಯೋಗ ಕುರಿತ ವಿಶೇಷ ಸರಣಿ, ಮಹಾಯೋಗ ವಿಷಯ: ಯೋಗ ಮತ್ತು ಅಸ್ತಮಾ, ಭಾಗವಹಿಸುತ್ತಾರೆ –ಸಂಗೀತ ನಾಯಕ್, ನಿರ್ಮಾಣ–ನಂದನ್‌ಕುಮಾರ್ ಎಲ್.ಒ, 8.35–ಕನ್ನಡ ಚಿತ್ರಗೀತೆಗಳು, 9.00–ನೆನಪಿನಂಗಳ (ಧ್ವನಿ ಭಂಡಾರದಿಂದ) ಖ್ಯಾತ ಆಂಗ್ಲ ಬರಹಗಾರರಾದ ಡಾ.ಜಿ.ಕೆ.ನಾರಾಯಣ್ ಅವರೊಂದಿಗೆ ಡಾ.ಯು.ಆರ್. ಅನಂತಮೂರ್ತಿ ಅವರು ಇಂಗ್ಲೀಷ್‌ನಲ್ಲಿ ನಡೆಸಿದ್ದ ಸಂವಾದ. 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಕೆ.ಸುಧಾ, ಹಾಡುಗಾರಿಕೆ, ಮೈಸೂರು ಎಮ್.ನಾಗರಾಜ್–ವಯೋಲಿನ್, ತುಮಕೂರು ಬಿ.ರವಿಶಂಕರ್, ಮೃದಂಗ, 10.30– ಹಿಂದಿ ಚಿತ್ರಗೀತೆಗಳು, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ, ಗೇಮ್ ಷೋ, ಪ್ರಸ್ತುತಿ: ದಿಗ್ವಿಜಯ್. ಬಿ ಮತ್ತು ಚಿನ್ಮಯಿ.ಕೆ.ಎಸ್, 12.05 ವನಿತಾ ವಿಹಾರ –ಮಗಳು ನಮ್ಮ ಮನೆಯವಳು ಮಾಲತಿ ಹೆಗಡೆ ಅವರಿಂದ ಭಾಷಣ ನಂತರ ಅತ್ತೆ ಮನೆಯಲ್ಲಿ ಹೇಗಿರಬೇಕು? ಕುರಿತು ಮಾತನಾಡುತ್ತಾರೆ ಲಲಿತಾ ಬೆಟಗೇರಿ. 12.35–ದೇವರನಾಮ, 12.45 ನಮ್ಮ ಆರೋಗ್ಯ: ಸೋರಿಯಾಟಿಕ್ ಆರ್ ಥ್ರೈಟಿಸ್ ಲಕ್ಷಣಗಳು ಮತ್ತು ಚಿಕಿತ್ಸೆ ಕುರಿತು ಮೈಸೂರಿನ ಹರ್ಮಟಾಲಜಿಸ್ಟ್ ಡಾ.ಕೆ.ಎನ್.ಸಂಗೀತಾ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ ದಿಗ್ವಿಜಯ್.ಬಿ 1.00–ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳ ಸರಣಿ, ಸರಣಿ. ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ ಕುರಿತು ಮಾತನಾಡುತ್ತಾರೆ ಪತ್ರಕರ್ತರಾದ ಎಮ್.ಟಿ. ಯೋಗೇಶ್‌ಕುಮಾರ್, 1.20 ಭಾವಗೀತೆಗಳು, 2.30 ಪ್ರದೇಶ ಸಮಾಚಾರ, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಎ ಪದ್ಮಾವತಿ, ವೀಣಾ ಮಡಿಪಕ್ಕಂ ಸುರೇಶ್–ಮೃದಂಗ, ಅಡಂಬಾಕಂ ಶಂಕರ್–ಘಟಂ, 4.00 ಮಹಿಳಾರಂಗ –ಅಕ್ಕಾ ಕೇಳವ್ವ? ಮಹಿಳೆಯರ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ. ಪ್ರಸ್ತುತಿ: ಜಾಂಪಣ್ಣ ಆಶೀಹಾಳ್, 4.45–ಹಿಂದಿ ಪಾಠ, ಪ್ರಸ್ತುತಿ: ಡಾ.ಜಯಂತಿ ಪ್ರಸಾದ್ ನೌಟಿಯಾಲ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ: ಮುಂಗಾರಿಗೆ ಕೃಷಿ ಇಲಾಖೆ ಯೋಜನೆಗಳನ್ನು ಕುರಿತ ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ –ಮೈಸೂರು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಾದ ಕೆ.ಹೆಚ್.ರವಿ, ಪ್ರಸ್ತುತಿ: ಎನ್.ಕೇಶವಮೂರ್ತಿ, 7.45–ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ, 8.30 ಹಿಂದಿ ಚಿತ್ರಗೀತೆ, 8.20–ಕಾವ್ಯವಾಚನ–ಬುದ್ಧಪೂರ್ಣಿಮೆಯ ಸಂದರ್ಭದಲ್ಲಿ ವಿ.ಕೃ.ಗೋಕಾಕ್ ಅವರ ಸಿದ್ಧಾರ್ಥ ಮತ್ತು ದ.ರಾ.ಬೇಂದ್ರೆ ಅವರ ಬುದ್ಧ ಕಾವ್ಯ ಭಾಗಗಳನು ವಾಚಿಸುತ್ತಾರೆ ಬಿ.ಎನ್.ಪ್ರಭಾ. 8.30–ಹಿಂದಿ ಚಿತ್ರಗೀತೆಗಳು, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ಮಹತಿ.ಎಸ್–ಹಾಡುಗಾರಿಕೆ, 10.00 ಗದಾಯುದ್ಧ: ರಂಗನಾಟಕದ ಬಾನುಲಿ ರೂಪ, ಪ್ರಸ್ತುತಿ: ಮಂಡ್ಯದ, ರಂಗಕಲಾ ಟ್ರಸ್ಟಿನ ಕಲಾವಿದರು

ಮೈಸೂರು ಮಿತ್ರ ಸೋಮವಾರ 19 ಮೇ 2025

ಸರ್ಕಾರದ ಅಪಾಯಕಾರಿ ನೀತಿಗಳಿಂದ ಅಬಕಾರಿ ಆದಾಯದ ಮೂಲಕ್ಕೇ ಕೊಡಲಿ ಪೆಟ್ಟು

ವಿಪಕ್ಷ ನಾಯಕ ಆರ್. ಅಶೋಕ್ ಆಕ್ರೋಶ



ಬೆಂಗಳೂರು, ಮೇ.18– ಮದ್ಯ ಉತ್ಪಾದನೆ, ಬಾಟ್ಲಿಂಗ್, ಮಾರಾಟ ಮಳಿಗೆಗಳು ಸೇರಿ ಎಲ್ಲದರ ಮೇಲಿನ ಶುಲ್ಕಗಳನ್ನು ಶೇ 100 ರಷ್ಟು ಹೆಚ್ಚಿಸಲು ಸರ್ಕಾರ ಮುಂದಾಗಿದೆ. ಇಂತಹ ಅಪಾಯಕಾರಿ ನೀತಿಗಳಿಂದ ಅಬಕಾರಿ ಆದಾಯದ ಮೂಲಕ್ಕೇ ಕೊಡಲಿ ಪೆಟ್ಟು ಬೀಳಲಿದೆ ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಶುಲ್ಕಗಳ ಹೆಚ್ಚಳಕ್ಕೆ ಸಂಬಂಧಿಸಿದಂತೆ ಅಬಕಾರಿ ಕಾನೂನುಗಳಿಗೆ ತಿದ್ದುಪಡಿ ಮಾಡಿ ಕರಡು ನಿಯಮಗಳ ಅಧಿಸೂಚನೆ ಪ್ರಕಟಿಸಿದ್ದು, ಜುಲೈ 1 ರಿಂದ ಪರಿಷ್ಕೃತ ದರಗಳು ಜಾರಿಗೊಳ್ಳಲಿದೆ ಎಂದು ಅವರು ತಿಳಿಸಿದ್ದಾರೆ.

ದರ ಮತ್ತು ಸನ್ನದು ಶುಲ್ಕ ಏರಿಕೆಗೂ ಒಂದು ಮಾನದಂಡ ಇರುತ್ತದೆ. ಆದರೆ, ಒಂದೇ ವರ್ಷದಲ್ಲಿ ಮದ್ಯ ಮಾರಾಟ ಮತ್ತು ಸನ್ನದು ಶುಲ್ಕ ಅಡ್ಡಾದಿಡ್ಡಿ ಹೆಚ್ಚಿಸುತ್ತಿರುವುದರಿಂದ ಉದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಬಜೆಟ್‌ನಲ್ಲಿ ಯಾವುದೇ ತೆರಿಗೆ ಹಾಕಿಲ್ಲ ಎಂದು ಬೆನ್ನು ತಟ್ಟಿಕೊಂಡು ನಂತರ ಆಲ್ಕೋಹಾಲ್ ದರಗಳನ್ನು ಯದ್ವಾತದ್ವಾ ಹೆಚ್ಚಿಸಿದ್ದಾರೆ. ಅದರಲ್ಲೂ ಬಿಯರ್ ದರವನ್ನು ವರ್ಷದಲ್ಲಿ ಎರಡು, ಮೂರು ಸಲ ಹೆಚ್ಚಿಸಲಾಗಿದೆ. ಈ ಮೂಲಕ ಗ್ರಾಹಕರಿಗೆ ದೊಡ್ಡ ಹೊರೆ ಹೊರಿಸಲಾಗಿದೆ. ಮದ್ಯ ಪ್ರಿಯರು ಪ್ರತಿಭಟಿಸುವುದಿಲ್ಲ ಎಂಬ ಕಾರಣಕ್ಕೆ ಇಂತಹ ಕ್ರಮ ಅನುಸರಿಸುವುದು ಒಳ್ಳೆಯದಲ್ಲ ಎಂದು ಹೇಳಿದ್ದಾರೆ.

ಸರಿಯಾದ ಆರ್ಥಿಕ ಶಿಸ್ತು ಮತ್ತು ಸಿದ್ಧತೆಗಳಿಲ್ಲದೆ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲಾಯಿತು. ಇದರಿಂದ ಅಭಿವೃದ್ಧಿ ಕಾರ್ಯಕ್ರಮಗಳು ಸ್ಥಗಿತಗೊಂಡಿವೆ. ಬೊಕ್ಕಸ ಬರಿದಾಗಿ ಸರ್ಕಾರ ದಿವಾಳಿಯಾಗಿದೆ. ಇದನ್ನು ಹೇಗಾದರೂ ಮಾಡಿ ಸರಿಪಡಿಸಿಕೊಳ್ಳಲು ಹೆಣಗಾಡುತ್ತಿರುವ ಸರ್ಕಾರ, ಸಿಕ್ಕ ಸಿಕ್ಕ ಎಲ್ಲ ವಸ್ತುಗಳ ದರಗಳನ್ನು ಹೆಚ್ಚಳ ಮಾಡಿದೆ. ಆದರೂ ಪರಿಸ್ಥಿತಿ ಸುಧಾರಿಸುತ್ತಿಲ್ಲ. ಹೀಗಾಗಿ ಇಂತಹ ದರ ಮತ್ತು ಶುಲ್ಕ ಹೆಚ್ಚಳದಂತಹ ವಾಮಮಾರ್ಗಗಳ ಮೂಲಕ ಸರ್ಕಾರವು ಉದ್ಯಮವನ್ನು ಶೋಷಣೆ ಮಾಡುತ್ತಿದೆ ಎಂದು ತಿಳಿಸಿದ್ದಾರೆ.

ಅಬಕಾರಿ ಇಲಾಖೆಗೆ 40 ಸಾವಿರ ಕೋಟಿ ಆದಾಯ ಸಂಗ್ರಹದ ಗುರಿ ನಿಗದಿ ಮಾಡಲಾಗಿದೆ. ಈ ಗುರಿ ತಲುಪಲು ಅಧಿಕಾರಿಗಳು ಎಲ್ಲ ಅವಕಾಶಗಳನ್ನು ಬಳಕೆ ಮಾಡುತ್ತಿದ್ದಾರೆ. ಆ ಮೂಲಕ ಉದ್ಯಮವನ್ನು ಸಂಕಷ್ಟಕ್ಕೆ ದೂಡಲಾಗುತ್ತಿದೆ ಎಂದು ಅವರು ಟೀಕಿಸಿದ್ದಾರೆ.

ಉದ್ಯಮದ ಹಿತದೃಷ್ಟಿಯಿಂದ ಈಗಲೂ ಕಾಲ ಮಿಂಚಿಲ್ಲ ಅವೈಜ್ಞಾನಿಕ ಕ್ರಮಗಳನ್ನು ಬಿಟ್ಟು ಉದ್ಯಮ, ಮಾರಾಟಗಾರರು ಮತ್ತು ಗ್ರಾಹಕರ ಹಿತದೃಷ್ಟಿಯಿಂದ ನಿರ್ಧಾರ ಕೈಗೊಳ್ಳಬೇಕು. ಸನ್ನದು ಶುಲ್ಕ ಪರಿಷ್ಕರಣೆಯನ್ನು ಮರು ಪರಿಶೀಲಿಸಬೇಕು ಎಂದು ಅಶೋಕ ಆಗ್ರಹಿಸಿದ್ದಾರೆ.

ಸಿದ್ಧಾರ್ಥ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷರಾಗಿ ಅಶೋಕ್ ಸುಬ್ಬೇಗೌಡ ಆಯ್ಕೆ



ಸಿದ್ಧಾರ್ಥ ಸ್ಪೋರ್ಟ್ಸ್ ಕಬ್ಲ್‌ನ 2025–2027ನೇ ಸಾಲಿನ ಕಾರ್ಯಕಾರಿ ಸಮಿತಿ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ಚುನಾಯಿತರಾದ ಅಶೋಕ್ ಸುಬ್ಬೇಗೌಡ ಮತ್ತು ಅವರ ಬೆಂಬಲಿಗರು ಗೆಲುವಿನ ನಗೆ ಬೀರಿದರು.

ಮೈಸೂರು, ಮೇ 18(ಎಂಕೆ)– ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಸಿದ್ಧಾರ್ಥ ಸ್ಪೋರ್ಟ್ಸ್ ಕಬ್ಲ್‌ನ 2025–2027ನೇ ಸಾಲಿನ ಕಾರ್ಯಕಾರಿ ಸಮಿತಿ ಚುನಾವಣೆಯಲ್ಲಿ ಅಶೋಕ್ ಸುಬ್ಬೇಗೌಡ ನೂತನ ಅಧ್ಯಕ್ಷರಾಗಿ ಚುನಾಯಿತರಾದರು.

ಕ್ಲಬ್ ಆವರಣದಲ್ಲಿ ಭಾನುವಾರ ನಡೆದ ಚುನಾವಣೆಯಲ್ಲಿ 330 ಮತಗಳನ್ನು ಪಡೆದ ಅಶೋಕ್ ಸುಬ್ಬೇಗೌಡ ನೂತನ ಅಧ್ಯಕ್ಷರಾಗಿ ಆಯ್ಕೆಯಾದರೆ, 302 ಮತಗಳನ್ನು ಪಡೆದ ಆರ್.ಗೋವಿಂದೇಗೌಡ ಉಪಾಧ್ಯಕ್ಷ, 280 ಮತ ಪಡೆದ ಸಿ.ಚಂದ್ರಶೇಖರ್(ಆಡಿಟರ್) ಗೌರವ ಕಾರ್ಯದರ್ಶಿ, 295 ಮತ ಪಡೆದ ಸಿ.ಮನೋಹರ್ ಸಹಕಾರ್ಯದರ್ಶಿ, 302 ಮತ ಪಡೆದ ಎಸ್.ಷಡಕ್ಷರಿ ಖಜಾಂಚಿಯಾಗಿ ಆಯ್ಕೆಯಾದರು.

ಹಾಗೆಯೇ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಟಿ.ಟಿ. ಪಾರ್ಥಸಾರಥಿ(298 ಮತ), ಆರ್.ಈರಣ್ಣ (284), ಎನ್.ವಿ.ಸತೀಶ್‌ಚಂದ್ರ (275), ಸಿಂಗ್ರೀಗೌಡ (273), ಎಂ.ಕೆ.ವಿಜಯ್‌ಕುಮಾರ್ (268), ಎಸ್.ಜೆ.ಮಹೇಶ್ (262), ಟಿ.ಶಾಂತಕುಮಾರ್ (257) ಹಾಗೂ ಎನ್.ಶಿವಣ್ಣ (252 ಮತ) ಆಯ್ಕೆಯಾದರು ಎಂದು ಚುನಾವಣಾಧಿಕಾರಿ ಪುಟ್ಟಸ್ವಾಮಿಗೌಡ ಮಾಹಿತಿ ನೀಡಿದರು.

ಚುನಾವಣೆ ಫಲಿತಾಂಶ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ನೂತನ ಅಧ್ಯಕ್ಷ ಅಶೋಕ್ ಸುಬ್ಬೇಗೌಡ, ಕಳೆದ ಅವಧಿಯಲ್ಲಿ ಕಾರ್ಯದರ್ಶಿಯಾಗಿ ಕೆಲಸ ಮಾಡಿದ್ದೇನೆ ಈ ಬಾರಿ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದು, ಎಲ್ಲರ ಬೆಂಬಲದಿಂದ ಜಯ ದೊರೆತಿದೆ. ಚುನಾವಣೆಯಲ್ಲಿ ಮಾತ್ರವೇ ಬಣ, ನಂತರ ಎಲ್ಲರೂ ಒಂದಾಗಿ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.

ಬಿ–ಖಾತಾ ವಿತರಣೆಯಲ್ಲಿ ಮಧ್ಯವರ್ತಿಗಳ ಹಾವಳಿ

ಪಾಲಿಕೆ ಮಾಜಿ ಸದಸ್ಯೆ ಸವಿತಾ ಸುರೇಶ್ ಆರೋಪ



ಮೈಸೂರು, ಮೇ 18(ಎಂಕೆ)– ಮಹಾನಗರಪಾಲಿಕೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅನಧಿಕೃತ ಕಟ್ಟಡಗಳಿಗೆ ನೀಡುತ್ತಿರುವ ಬಿ–ಖಾತಾ ವಿತರಣೆಯಲ್ಲಿ ಮಧ್ಯವರ್ತಿ ಹಾವಳಿ ಹೆಚ್ಚಾಗಿದ್ದು, ರಾಜ್ಯ ಸರ್ಕಾರ ಕೂಡಲೇ ಮಧ್ಯವರ್ತಿಗಳ ಹಾವಳಿ ತಪ್ಪಿಸುವಂತೆ ನಗರಪಾಲಿಕೆ ಮಾಜಿ ಸದಸ್ಯೆ ಸವಿತಾ ಸುರೇಶ್ ಒತ್ತಾಯಿಸಿದ್ದಾರೆ.

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡ ಹಾಗೂ ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ ಅವರು ಸದನದಲ್ಲಿ ಮನವಿ ಮಾಡಿದ್ದರಿಂದಾಗಿ ಬಿ–ಖಾತಾ ನೀಡಲು ಹೆಚ್ಚುವರಿಯಾಗಿ ಮೂರು ತಿಂಗಳ ಕಾಲಾವಕಾಶ ನೀಡಿರುವುದು ಅಭಿನಂದನಾರ್ಹ. ಆದರೆ, ಬಿ–ಖಾತಾ ವಿತರಣೆಯನ್ನೇ ಮಧ್ಯವರ್ತಿಗಳು ಬಂಡವಾಳ ಮಾಡಿಕೊಂಡು ಸಾರ್ವಜನಿಕರಿಂದ ಹಣ ಸುಲಿಗೆ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

ಸರ್ಕಾರದ ಸುತ್ತೋಲೆ ಅನ್ವಯ ಸಬ್ ರಿಜಿಸ್ಟರ್ ಕಚೇರಿಯಲ್ಲಿ ನೋಂದಣಿ ಆದ ಆಸ್ತಿಗಳಿಗೆ ಮಾತ್ರ ಬಿ–ಖಾತೆ ಸಿಗುತ್ತಿದೆ. ಆದರೆ, ಖಾತೆ ಮಾಡಿಸಿಕೊಡುತ್ತೇವೆ ಎಂದು ಮಧ್ಯವರ್ತಿಗಳು ಕಟ್ಟಡ ಮಾಲೀಕರಿಂದ 25 ರಿಂದ 30 ಸಾವಿರ ರೂ.ವರೆಗೆ ಹಣ ಪಡೆಯುತ್ತಿದ್ದಾರೆ. ಕ್ಷೇತ್ರದ ಶಾಸಕರೂ ನೇರವಾಗಿ ಪಾಲಿಕೆ ಅಧಿಕಾರಿಗಳನ್ನೇ ಸಂಪರ್ಕಿಸಿ ಎಂದು ಸೂಚಿಸಿದ್ದರೂ ಜನರ ದಿಕ್ಕು ತಪ್ಪಿಸುತ್ತಿರುವ ಮಧ್ಯವರ್ತಿಗಳು ಹಣ ವಸೂಲಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಮೈಸೂರು ನಗರಪಾಲಿಕೆಯ 44ನೇ ವಾರ್ಡ್ ವ್ಯಾಪ್ತಿಯ ಜನತಾ ನಗರದಲ್ಲಿ ಸುಮಾರು 4000 ಅನಧಿಕೃತ ಕಟ್ಟಡಗಳಿವೆ. ಅವುಗಳಲ್ಲಿ ಶೇ.25 ಕಟ್ಟಡಗಳು ಮಾತ್ರವೇ ನೋಂದಣಿ ಆಗಿದ್ದು, ಶೇ.75 ರಷ್ಟು ಕಟ್ಟಡಗಳು ನೋಂದಣಿಯಾಗಿಲ್ಲ. ಬದಲಿಗೆ ನೋಟರಿ ಮೂಲಕ ಕ್ರಯ ಮಾಡಿಕೊಂಡು ಮನೆ ಕಟ್ಟಿಕೊಂಡು ವಾಸ ಮಾಡುತ್ತಿದ್ದಾರೆ. ನೋಂದಣಿ ಮಾಡಿಸದಿರುವವರು ಬಿ–ಖಾತಾ ದೊರೆಯದೆ ಆತಂಕದಲ್ಲಿದ್ದು, ಸರ್ಕಾರ ಕೂಡಲೇ ನೋಂದಣಿ ಮಾಡಿಸದಿರುವವರಿಗೆ ಬಿ–ಖಾತಾ ನೀಡಬೇಕು ಎಂದು ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

ದೇವೇಗೌಡರ ಹುಟ್ಟುಹಬ್ಬ: ಮೋದಿ, ಸಿದ್ದರಾಮಯ್ಯ ಶುಭಾಶಯ



ಬೆಂಗಳೂರು, ಮೇ18– ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡರು ಇಂದು 92ನೇ ಹುಟ್ಟುಹಬ್ಬವನ್ನು ಆಚರಿಸಿಕೊಂಡರು.

ಭಾನುವಾರ ಪ್ರಧಾನಿ ನರೇಂದ್ರ ಮೋದಿ ಸೇರಿ ಹಲವು ನಾಯಕರು ದೇವೇಗೌಡರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ಕೋರಿದ್ದಾರೆ.

ನಮ್ಮ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಜೀ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳು. ಅವರಿಗೆ ದೀರ್ಘಾಯುಷ್ಯ ಮತ್ತು ಆರೋಗ್ಯಕರ ಜೀವನಕ್ಕಾಗಿ ಪ್ರಾರ್ಥಿಸುತ್ತೇನೆ ಎಂದು ಮೋದಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ. ಗೌಡರು ತಮ್ಮ ಮುತ್ಸದ್ಧಿ ಮನೋಭಾವ ಮತ್ತು ಸಾರ್ವಜನಿಕ ಸೇವೆಯ ಬಗೆಗಿನ ಉತ್ಸಾಹಕ್ಕಾಗಿ ವ್ಯಾಪಕವಾಗಿ ಗೌರವಿಸಲ್ಪಡುತ್ತಾರೆ ಎಂದು ಪ್ರಧಾನಿ ಹೇಳಿದ್ದಾರೆ. ಹಲವು ವಿಷಯಗಳ ಕುರಿತು ಅವರ ಬುದ್ಧಿವಂತಿಕೆ ಮತ್ತು ಒಳನೋಟಗಳು ಶಕ್ತಿಯ ಮೂಲವಾಗಿವೆ ಎಂದು ಅವರು ಹೇಳಿದ್ದಾರೆ.

ನಾಡಿನ ಹಿರಿಯ ರಾಜಕಾರಣಿ, ಮಾಜಿ ಪ್ರಧಾನಿಗಳಾದ ಹೆಚ್.ಡಿ. ದೇವೇಗೌಡ ಅವರಿಗೆ ಜನ್ಮದಿನದ ಶುಭಾಶಯಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಮತ್ತಷ್ಟು ಕಾಲ ತಮಗೆ ಉತ್ತಮ ಆರೋಗ್ಯ ಮತ್ತು ಆಯಸ್ಸನ್ನು ದೇವರು ಕರುಣಿಸಲೆಂದು ಹಾರೈಸುತ್ತೇನೆ ಎಂದಿದ್ದಾರೆ. ದೇವೇಗೌಡರ ಜೊತೆಗಿನ ಚಿತ್ರವನ್ನೂ ಅವರು ಹಂಚಿಕೊಂಡಿದ್ದಾರೆ.

ಹಿರಿಯ ರಾಜಕೀಯ ಧುರೀಣ, ಮುತ್ಸದ್ದಿ ನೇತಾರ, ಮಾಜಿ ಪ್ರಧಾನಮಂತ್ರಿಗಳಾದ ಹೆಚ್.ಡಿ.ದೇವೇಗೌಡರಿಗೆ ಜನ್ಮದಿನದ ಹಾರ್ದಿಕ ಶುಭಾಶಯಗಳು. ದೇವರ ಆಶೀರ್ವಾದ ಸದಾ ತಮ್ಮ ಮೇಲಿರಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪೋಸ್ಟ್ ಹಂಚಿಕೊಂಡಿದ್ದಾರೆ.

ಸೈನಿಕರ ಸುರಕ್ಷೆಗೆ ಉಡುಪಿ ಪೇಜಾವರ ಶ್ರೀ ಮಾರ್ಗದರ್ಶನದಲ್ಲಿ ಸುದರ್ಶನ ಯಾಗ



ಉಡುಪಿ, ಮೇ.18– ಸೈನಿಕರ ಕ್ಷೇಮ, ದೇಶದ ಸುರಕ್ಷೆಗೆ ಪ್ರಾರ್ಥಿಸಿ ಉಡುಪಿ ಶ್ರೀ ಪೇಜಾವರ ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದರ ಮಾರ್ಗದರ್ಶನದಲ್ಲಿ ಮುಚ್ಲುಕೋಡು ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದಲ್ಲಿ ಸುದರ್ಶನ ಮಂತ್ರ ಯಾಗ ನಡೆಯಿತು. ದೇಶದ ಗಡಿಭಾಗದಲ್ಲಿ ಶತ್ರುರಾಷ್ಟ್ರಗಳ ಸವಾಲುಗಳನ್ನೆದುರಿಸಿ ಯುದ್ಧ ಸನ್ನದ್ಧ ಸ್ಥಿತಿಯಲ್ಲಿ ದಿಟ್ಟತನದಿಂದ ದೇಶವನ್ನು ಕಾಯುತ್ತಾ ಸೈನಿಕರ ಯೋಗಕ್ಷೇಮ ಮತ್ತು ದೇಶದ ಸುರಕ್ಷೆ ಸಮೃದ್ಧಿಗಾಗಿ ಪ್ರಾರ್ಥಿಸಿ ಶ್ರೀ ಪೇಜಾವರ ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದರ ಸಂಕಲ್ಪಾನುಸಾರ ಈ ಯಾಗ ಹಮ್ಮಿಕೊಳ್ಳಲಾಗಿತ್ತು.

ಉಡುಪಿಯ ಪ್ರಾಚೀನ ಮುಚ್ಲುಕೋಡು ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದಲ್ಲಿ ಸಂಜೆ ಮಹಾಸುದರ್ಶನ ಮಂತ್ರ ಯಾಗ, ವಿದ್ವಾನ್ ಯಾಗ ಹೋಮ ನೆರವೇರಿದವು. ಯಾಗದ ಪೂರ್ಣಾಹುತಿಯಲ್ಲಿ ಪಾಲ್ಗೊಂಡ ಶ್ರೀಗಳು ದೇವ ಸೇನಾಧಿಪತಿಯಾದ ಸುಬ್ರಹ್ಮಣ್ಯ ದೇವರ ಸನ್ನಿಧಿಯಲ್ಲಿ ನಡೆಸಿದ ಈ ಯಾಗದ ಪೂರ್ಣ ಶ್ರೇಯಸ್ಸು ದೇಶದ ಗಡಿಕಾಯುವ ಸೈನಿಕರ ಶ್ರೇಯಸ್ಸಿಗಾಗಿ ಮತ್ತು ದೇಶದ ಸುರಕ್ಷತೆಗಾಗಿ ಅರ್ಪಿಸೋಣ ಎಂದರು.

ಭೂಶಾಂತಿ ಮತ್ತು ವೈಕುಂಠ ಸಮಾರಾಧನೆ ಆಹ್ವಾನ ಪತ್ರಿಕೆ




ಶ್ರೀಮತಿ ಕಾಮಾಕ್ಷಿ

ಇವರು ದಿನಾಂಕ 10-05-2025 ಶನಿವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾದ ಕಾರ್ಯವನ್ನು ದಿನಾಂಕ 21-05-2025 ನೇ ಬುಧವಾರ ಬೆಳಗ್ಗೆ 11 ಗಂಟೆಗೆ ಹಾಲು-ತುಪ್ಪ (ಚಾಮುಂಡಿಬೆಟ್ಟದ ಪಾದದಲ್ಲಿ) ಹಾಗೂ ಅದೇ ದಿನ ಮಧ್ಯಾಹ್ನ 12 ಗಂಟೆಗೆ ಭೂಶಾಂತಿ-ಮತ್ತು ವೈಕುಂಠ ಸಮಾರಾಧನೆಯನ್ನು ನಮ್ಮ ಸ್ವಗೃಹ ಮೈಸೂರು ಸಿಟಿ, ನಜರ್‌ಬಾದ್, ಕಾಮಾಟಗೇರಿ, 1ನೇ ಕ್ರಾಸ್, ಮನೆ ನಂ. 557/1 ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ದುಃಖತಪ್ತರು: ಶೇಷಾದ್ರಿ ಹಾಗೂ ಕುಟುಂಬದವರು

3ನೇ ವರ್ಷದ ಸವಿನೆನಪು



ನಿಮ್ಮ ಆತ್ಮಕ್ಕೆ ಚಿರಶಾಂತಿ ಕೋರುವ ರಾಮೇಗೌಡ್ರು ಕುಟುಂಬ, ಕ್ಯಾತನಹಳ್ಳಿ

ಕೆ.ಎಲ್. ರಾಮೇಗೌಡ್ರು
P.S.S.K (LTD) Rtd.
ಜನನ: 31.05.1942, ಮರಣ: 19.05.2022

ನಕ್ಕರೆ ಅದೇ ಸ್ವರ್ಗ

ಗಂಡ : ನಾನು ಬೆಳಗ್ಗೆ ಬೇಗ ಎದ್ದೇಳಬೇಕು. ನನ್ನ 5 ಗಂಟೆಗೆ ಎಬ್ಬಿಸು
ಹೆಂಡತಿ : ಸರಿ ಆಯ್ತು... ನೀವು ನನ್ನನ್ನು 4.55ಕ್ಕೆ ಎಚ್ಚರ ಮಾಡಿ. ನಾನು ನಿಮ್ಮನ್ನು 5 ಗಂಟೆಗೆ ಎಬ್ಬಿಸ್ತೀನಿ!

ಮೈಸೂರು ಮಿತ್ರ

ಸೋಮವಾರ, 19 ಮೇ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

'ನೆಮ್ಮದಿಯ ಜೀವನಕ್ಕೆ ಕೆಲವರನ್ನು ಕ್ಷಮಿಸಿ ಬಿಡಬೇಕು. ಇನ್ನೂ ಕೆಲವರನ್ನು ಮರೆತು ಬಿಡಬೇಕು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕಂಕುಳಲ್ಲಿ ದೊಣ್ಣೆ; ಕೈಯಲ್ಲಿ ಶರಣಾರ್ಥಿ

ನಿಮ್ಮ ಪತ್ರಗಳು

ದೇವೇಗೌಡರಿಗೆ ತೊಂಬತ್ತ ಮೂರು



ಮಾನ್ಯರೆ,

ದೇವೇಗೌಡರಿಗಿಂದು ತುಂಬಿತು ತೊಂಬತ್ತು ಮೂರು
ಇಷ್ಟಾದರೂ ಬರುತ್ತಿಲ್ಲ ಯಾರಿಂದಲೂ ದೂರು,
ಸದನದಲ್ಲಿ ಇಂದೂ ಮಾತಿನ ಜೋರು,
ಒಮ್ಮೊಮ್ಮೆ ಬಂದುಬಿಡುತ್ತದೆ ಕಣ್ಣಲ್ಲಿ ನೀರು.
ದೇವೇಗೌಡರೆಂದರೆ ಯಾರು?
ಅವರೇ ಅಲ್ಲವೇ ಮಣ್ಣಿನ ಪುತ್ರರು,
ರಾಜಕೀಯದಲ್ಲೂ ಅತಿ ಚಾಣಾಕ್ಷರು,
ಯಾರಿಗೂ ಎಂದೂ ಸೊಪ್ಪು ಹಾಕದವರು.
ಇಂದಿಗೂ ದೆಹಲಿಗೆ ತಿರುಗಾಡುತಿಹರು,
ಅನಿಸುವುದೇ ಇಲ್ಲ ಅವರಿಂದು ದಣಿದಿಹರು,
ರಾಜಕೀಯ ವರಸೆ ಮಾತ್ರ ಬಿಟ್ಟಿಹರು,
ಅವರಿನ್ನೂ ಬಾಳಿ ಬದುಕಲಿ ವರುಷ ನೂರು !

–ಶಂಕರನಾರಾಯಣ ಭಟ್, ಜಯಲಕ್ಷ್ಮಿಪುರಂ, ಮೈಸೂರು

ಸೇತುವೆ ಕಾಮಗಾರಿ ಪೂರ್ಣಗೊಳಿಸಿ, ತಡೆಗೋಡೆ ನಿರ್ಮಿಸಿ, ಅನಾಹುತ ತಪ್ಪಿಸಿ



ಮಾನ್ಯರೆ,

ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಹಲಗೂರು ಮತ್ತು ಗೊಲ್ಲರಹಳ್ಳಿ ನಡುವೆ ಇರುವ ಭೀಮಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣವಾಗಿದೆ. ಸರ್ಕಾರ 2.5 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ಈ ಸೇತುವೆಗೆ ತಡೆಗೋಡೆಯೇ ಇಲ್ಲ. ಬ್ಯಾಡರಹಳ್ಳಿ, ಕರಲಕಟ್ಟೆ, ಗಾನಾಳು ಸೇರಿದಂತೆ ಮುತ್ತತ್ತಿ ಮತ್ತು ಭೀಮೇಶ್ವರಿ ಪ್ರಕೃತಿಯ ಪ್ರಸಿದ್ಧ ಪ್ರವಾಸಿ ತಾಣಗಳಾಗಿದ್ದು, ಪ್ರತಿದಿನ ಈ ಸೇತುವೆ ಮೇಲೆ ಸಾವಿರಾರು ವಾಹನಗಳು ಸಂಚರಿಸುತ್ತವೆ. ತಡೆಗೋಡೆಯೇ ಇಲ್ಲದ ಸೇತುವೆ ಮೇಲೆ ವಾಹನಗಳು ಸಂಚರಿಸುವ ವೇಳೆ ಆಯತಪ್ಪಿ ಅನಾಹುತಗಳಾದರೆ ಯಾರು ಹೊಣೆ?.

ಈ ಸೇತುವೆಯು ಸುಮಾರು ಎರಡು ವರ್ಷಗಳಿಂದ ಇದೇ ಪರಿಸ್ಥಿತಿಯಲ್ಲಿದೆ. ಈ ಸಂಬಂಧ ಸ್ಥಳೀಯರು ಮೇಲಾಧಿಕಾರಿಗಳು ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತಂದರೂ ಯಾವುದೇ ಸಕಾರಾತ್ಮಕ ಪ್ರಯತ್ನವಾಗಿಲ್ಲ. ಸೇತುವೆಯ ಕಾಮಗಾರಿಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸದೆ ಅಸಡ್ಡೆ ತೋರಿರುವ ಸ್ಥಳೀಯ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಮೇಲಾಧಿಕಾರಿಗಳು ಇನ್ನೂ ಯಾವುದೇ ಕ್ರಮ ಜರುಗಿಸಿಲ್ಲ. ಮಂಡ್ಯ ಜಿಲ್ಲೆಯಲ್ಲಿ ಕಾಲುವೆ ಮತ್ತು ಸೇತುವೆಗಳಿಗೆ ತಡೆಗೋಡೆಗಳಿಲ್ಲದೆ ಬಹುದೊಡ್ಡ ಅಪಘಾತಗಳು ನಡೆದಿರುವ ಇತಿಹಾಸವಿದೆ. ಆದ್ದರಿಂದ ಈ ಕೂಡಲೇ ಸದರಿ ಸೇತುವೆಯ ಕಾಮಗಾರಿಯನ್ನು ಸಂಪೂರ್ಣಗೊಳಿಸಿ, ಮುಂದಾಗುವ ಅನಾಹುತಗಳನ್ನು ತಪ್ಪಿಸಬೇಕಿದೆ.

–ರಘುಗೌಡ ಆರ್, ಡಿ.ಬನುಮಯ್ಯ ವಾಣಿಜ್ಯ–ಕಲಾ ಕಾಲೇಜು, ಮೈಸೂರು.

ವಿಪಕ್ಷಗಳು ವಿವೇಚನೆಯಿಂದ ವರ್ತಿಸಲಿ

ಮಾನ್ಯರೆ,

ಜಮ್ಮು–ಕಾಶ್ಮೀರದ ಪಹಲ್ಗಾಮ್ ದಾಳಿಗೆ ಪ್ರತ್ಯುತ್ತರವಾಗಿ, ಭಾರತ ಪಾಕಿಸ್ತಾನದ ವಿರುದ್ಧ ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಯಶಸ್ಸು ಯಾರಿಗೆ ಸಲ್ಲಬೇಕು ಎನ್ನುವುದರ ಕುರಿತಂತೆ ಆಡಳಿತ ಹಾಗೂ ವಿರೋಧ ಪಕ್ಷಗಳ ನಡುವೆ ಸಾಕಷ್ಟು ಕೆಸರೆರಚಾಟ ನಡೆಯುತ್ತಿದೆ. ಈ ಬಗ್ಗೆ ಕೆಲವು ಕಾಂಗ್ರೆಸ್ ಮುಖಂಡರು, ಕಾರ್ಯಾಚರಣೆ ಯಶಸ್ಸು ಸೇನಾಧಿಕಾರಿಗಳಿಗೆ ಹಾಗೂ ಇಡೀ ಸೈನ್ಯಕ್ಕೆ ಸೇರಬೇಕು ಎಂದು ಹೇಳಿ ಭಾರತೀಯ ಜನತಾ ಪಕ್ಷ ಇದರ ದುರ್ಲಾಭ ಪಡೆಯುತ್ತಿದೆ ಎಂದು ಆರೋಪಿಸಿದ್ದಾರೆ. ಇಂತಹ ಸೂಕ್ಷ್ಮ ವಿಚಾರದಲ್ಲಿ ರಾಜಕೀಯ ನುಸುಳಿರುವುದು ದುರ್ದೈವದ ಸಂಗತಿ. ಆಪರೇಷನ್ ಸಿಂಧೂರ ಕಾರ್ಯಾಚರಣೆ ಯಶಸ್ಸು ಸಹಜವಾಗಿ ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಪಕ್ಷಕ್ಕೆ ಅಥವಾ ಕೇಂದ್ರ ಸರ್ಕಾರಕ್ಕೆ ಸಲ್ಲಬೇಕಾಗಿದೆ.

1971ರಲ್ಲಿ ನಡೆದ ಭಾರತ–ಪಾಕಿಸ್ತಾನದ ಯುದ್ಧದಲ್ಲಿ ಗೆಲುವು ಸಾಧಿಸಿ, ಬಾಂಗ್ಲಾದೇಶ ಸ್ವತಂತ್ರ ದೇಶವಾದ ಯಶಸ್ಸು ಅಂದಿನ ಪ್ರಧಾನಮಂತ್ರಿ ಶ್ರೀಮತಿ ಇಂದಿರಾಗಾಂಧಿಯವರಿಗೂ 1999ರಲ್ಲಿ ನಡೆದ ಕಾರ್ಗಿಲ್ ಯುದ್ಧದ ಯಶಸ್ಸು ಅಂದಿನ ಪ್ರಧಾನ ಮಂತ್ರಿ ಅಟಲ ಬಿಹಾರಿ ವಾಜಪೇಯಿಯವರಿಗೂ ಸಂದಿತ್ತು. ನಮ್ಮ ಸೈನಿಕರು ಪರಾಕ್ರಮದಿಂದ ಕಾರ್ಯಾಚರಣೆ ನಡೆಸಿದ್ದಾರೆ ಹಾಗೂ ಸ್ವತಃ ಪ್ರಧಾನ ಮಂತ್ರಿಗಳೇ ಅವರ ಸೇವೆಯನ್ನು ಶ್ಲಾಘಿಸಿರುವುದು ನಮ್ಮ ಸೈನಿಕರ ಉತ್ಸಾಹವನ್ನು ಅರಳಿಸಿ ಶೌರ್ಯವನ್ನು ಮೆರೆಸುತ್ತದೆ. ಇಂತಹ ಸೂಕ್ಷ್ಮ ವಿಚಾರಗಳಲ್ಲಿ ಅದರಲ್ಲೂ ಮುಖ್ಯವಾಗಿ ವಿರೋಧ ಪಕ್ಷಗಳು ಇನ್ನು ಮುಂದಾದರೂ ವಿವೇಚನೆಯಿಂದ ವರ್ತಿಸಲಿ. –ಕೆ.ವಿ.ವಾಸು, ವಕೀಲರು ಮತ್ತು ನೋಟರಿ.

ಉದ್ಯಾನವನಗಳಿಗೂ ಸಿಸಿ ಕ್ಯಾಮರಾ ಅಳವಡಿಸಿ

ಮಾನ್ಯರೆ,

ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಖದೀಮರು ಮನೆಗಳಲ್ಲಿ ಹಣ ಒಡವೆಗಳನ್ನು ಕಳ್ಳತನ ಮಾಡಿದರೆ, ರಸ್ತೆಯಲ್ಲಿ ನಿಂತಿರುವ ದ್ವಿಚಕ್ರ ವಾಹನಗಳನ್ನು, ಸೇರಿದಂತೆ ಇತರ ವಾಹನಗಳಲ್ಲಿ ಆಗಾಗ ಕಳ್ಳತನ ಮಾಡಿ ತಲೆ ಮರೆಸಿಕೊಳ್ಳುತ್ತಿದ್ದಾರೆ. ಮತ್ತು ರಸ್ತೆಗಳಲ್ಲಿ ಕೆಲ ಯುವ ಸಮೂಹ ಗುಂಪು ಕಟ್ಟಿಕೊಂಡು ಧೂಮಪಾನ, ಮದ್ಯಪಾನ, ಸೇರಿ ಗಲಾಟೆ ಮಾಡುತ್ತಾ ಕಿರುಚಾಡುತ್ತಾ, ರಾತ್ರಿಯ ವೇಳೆಯಲ್ಲಿ ಕೆಲ ದುಬಾರಿ ಬೆಲೆಬಾಳುವ ಬೈಕ್‌ಗಳಲ್ಲಿ ಅತೀ ವೇಗವಾಗಿ ಚಾಲನೆ ಮಾಡುತ್ತಾ, ಹೋಗುತ್ತಾರೆ, ಇತ್ತೀಚಿನ ದಿನಗಳಲ್ಲಿ ಉದ್ಯಾನವನಗಳಲ್ಲಿ ಕುಳಿತು ಧೂಮಪಾನ, ಮದ್ಯಪಾನ, ಜೊತೆಗೆ ಶಾಲಾ–ಕಾಲೇಜಿಗೆ ಹೋಗದೆ ಪ್ರೀತಿ ಪ್ರೇಮದ ನೆಪದಲ್ಲಿ ಉದ್ಯಾನವನಗಳಲ್ಲಿಯೇ ಮೋಜು ಮಸ್ತಿ ಮಾಡುವಂತಾಗಿದೆ ಆದ್ದರಿಂದ ಇಂತಹ ವಿಷಯಗಳನ್ನು ತಡೆಯಲು ರಸ್ತೆಗಳು ಮತ್ತು ಉದ್ಯಾನವನಗಳಿಗೆ ಭದ್ರತೆ ಒದಗಿಸಲು ಸಿಸಿ ಕ್ಯಾಮರಾ ಅಳವಡಿಸಲು ಸರ್ಕಾರ ಕ್ರಮ ಕೈಗೊಳ್ಳಲು ಮುಂದಾಗಬೇಕು. –ನಾಗೇಶ್, ಮಾನಸಗಂಗೋತ್ರಿ, ಮೈಸೂರು.



ಜಿ. ಎಲ್. ತ್ರಿಪುರಾಂತಕ
ಮೊ: 96866–77284

ಅರಿವು

ನಾರಿನ ಜೊತೆ ಹೂವು ನರಕ ಸೇರಬಹುದು... ಜೋಕೆ!

ಹೂವಿನ ಜೊತೆ ನಾರು ಸ್ವರ್ಗ ಸೇರಿದಂತೆ ಎಂಬ ನಾಣ್ಣುಡಿ ಪ್ರಚಲಿತವಾಗಿದೆ. ಅಂದರೆ ಅಪಾತ್ರರು ಸತ್ಪಾತ್ರರ ಜೊತೆ ಸೇರಿ ಒಂದು ಗಮ್ಯ ಸ್ಥಾನ ತಲುಪುವ, ನಿರೀಕ್ಷೆಗೂ ಮೀರಿದ್ದನ್ನು ಗಳಿಸುವ, ತಮಗೆ ಎಟುಕದ ಆಸೆಯನ್ನು ಈಡೇರಿಸಿಕೊಳ್ಳುವ, ಅಸಾಧ್ಯವೆನಿಸಿದ್ದನ್ನು ಸಾಧಿಸಿಬಿಡುವ, ಅವಕಾಶ ಸಿಕ್ಕಾಗ ಹೇಳುವ ಸಾಮಾನ್ಯವಾದ ಮಾತು ಇದು. ದೊಡ್ಡವರ ಜೊತೆ ಇದ್ದಾರೆ ಎಂಬ ಒಂದೇ ಕಾರಣಕ್ಕೆ ಯೋಗ್ಯತೆ ಇರಲಿ, ಇಲ್ಲದಿರಲಿ ಯೋಗ ಪುರುಷರಂತೆ ಬದುಕಿನಲ್ಲಿ ಊಹಿಸದೇ ಇರುವ ಸ್ಥಾನ ತಲುಪಿದಾಗ ಅವರಿಂದ ಉವಾಚವಾಗುವುದು ಹೂವಿನಿಂದ ನಾರು ಸ್ವರ್ಗ ಸೇರಿತು ಎಂಬ ಮಾತು. ಇಂದಿನ ಕೆಲ ವಿದ್ಯಮಾನಗಳನ್ನು ಗಮನಿಸಿದರೆ ಹೊಸ ನಾಣ್ಣುಡಿ ಬರೆಯಬೇಕೆನಿಸುತ್ತದೆ. ಅದೇನೆಂದರೆ ನಾರಿನ ಜೊತೆ ಹೂವು ನರಕ ಸೇರಿದಂತೆ ಎಂಬುದು. ಏಕೆ ಈ ರೀತಿ ಅನಿಸಿತು ಎಂದರೆ ಎಷ್ಟೋ ಅಯೋಗ್ಯರು ತಮ್ಮ ಆತ್ಮೀಯರಾದ ಯೋಗ್ಯರನ್ನು ದಾರಿತಪ್ಪಿಸಿ ಸಮಾಜದಲ್ಲಿ ಅವರ ಗೌರವಕ್ಕೆ ಧಕ್ಕೆ ಬರುವಂತೆ ಮಾಡಿಬಿಡುತ್ತಾರೆ. ಮೇಲ್ನೋಟಕ್ಕೆ ಅಮಾಯಕರಂತೆ ಕಾಣುವ ಈ ಅಯೋಗ್ಯರು ಒಳಗೆ ಭಯಾನಕವಾದ ವ್ಯಕ್ತಿತ್ವ ಹೊಂದಿರುತ್ತಾರೆ. ಪುರುಷ, ಮಹಿಳೆ ಎಂಬ ಭೇದವಿಲ್ಲದೆ ಎಲ್ಲಾ ವರ್ಗದಲ್ಲೂ ಇಂತಹವರು ಇರುತ್ತಾರೆ.

ಸತ್ಯ, ಧರ್ಮ, ನೈತಿಕತೆ, ಪ್ರಾಮಾಣಿಕತೆ ಅನುಸರಿಸುವವರು ಹೂಗಳಂತೆ. ಅಸತ್ಯ, ಅಧರ್ಮ, ಅನೀತಿ, ಅಕ್ರಮ ಅನುಸರಿಸುವವರು ನಾರುಗಳಂತೆ. ಇಂತಹ ನಾರುಗಳಿಂದ ಸ್ವರ್ಗ ದರ್ಶನವನ್ನು ಎಂದಿಗೂ ನಿರೀಕ್ಷಿಸಲು ಸಾಧ್ಯವಿಲ್ಲ. ಅನೇಕ ಸಂದರ್ಭಗಳಲ್ಲಿ ಹಿತೈಷಿಗಳ ಮುಖವಾಡ ಧರಿಸಿ ಅಹಿತವಾದ ಕೆಲಸ ಮಾಡಿ ಹಿತಶತ್ರುಗಳಾಗುವವರು ಸಹ ಇರುತ್ತಾರೆ. ಪಾಪಪುಣ್ಯಗಳ ಕುರಿತು ಇವರು ಚಿಂತಿಸುವುದೇ ಇಲ್ಲ. ಇವರಿಗೆ ಆಚಾರವೇ ನರಕ, ಅನಾಚಾರವೇ ಸ್ವರ್ಗ. ಅನಾಚಾರದ ಮೂಲಕ ಸಜ್ಜನರನ್ನು ಅವರ ಸ್ವರ್ಗಕ್ಕೆ ಕರೆದೊಯ್ಯುವುದು ಮಾತ್ರ ದುರದೃಷ್ಟಕರ. ಇತ್ತೀಚಿಗೆ ಪಹಲ್ಗಾಮ್‌ನಲ್ಲಿ ನಡೆದ ದುರ್ಘಟನೆಯಲ್ಲಿ ಉಗ್ರರಿಗೆ ಸ್ಥಳೀಯರು ನೆರವು ನೀಡದೆ ಅವರು ಆ ಕೃತ್ಯ ಎಸಗಲು ಸಾಧ್ಯವಿಲ್ಲ. ಆ ಸ್ಥಳೀಯ ದೇಶದ್ರೋಹಿಗಳೇ ನಾರುಗಳು. ಅವರು ಹೂವುಗಳನ್ನು ನರಕಕ್ಕೆ ಸೇರಿಸುವ ಕೆಲಸ ಮಾಡಿ, ಯಾವುದೇ ಪಾಪಪ್ರಜ್ಞೆಯನ್ನೂ ಅನುಭವಿಸುವುದಿಲ್ಲ. ಅವರಿಗೆ ಅದೇ ಧರ್ಮ ಎನಿಸುತ್ತದೆ.

ಸಹವಾಸದಿಂದ ಸಂನ್ಯಾಸಿ ಕೆಟ್ಟ ಎಂಬ ಗಾದೆ ಮಾತು ಅಕ್ಷರಶಃ ನಿಜವಾಗಿದೆ. ಕೆಲವು ಸಂನ್ಯಾಸಿಗಳು ಆಪ್ತರು ಎನಿಸಿಕೊಂಡ ಅವಿವೇಕಿಗಳ ಮಾತಿಗೆ ಬೆಲೆಕೊಟ್ಟು ತಮ್ಮ ಗೌರವವನ್ನು ಕಳೆದುಕೊಂಡ ಉದಾಹರಣೆಗಳು ಅನೇಕ. ಅನೇಕ ಯೋಗ್ಯರು ಅರಿವಿಲ್ಲದೆ ಅಯೋಗ್ಯರ ಸಂಗ ಮಾಡಿಬಿಡುತ್ತಾರೆ. ನಂತರ ಅವರಿಂದ ಬಿಡುಗಡೆ ಪಡೆಯಲು ಆಗುತ್ತಿರುವುದಿಲ್ಲ. ಅದರಿಂದ ಯೋಗ್ಯರು ಅನೇಕ ರೀತಿಯ ಕಷ್ಟನಷ್ಟಗಳನ್ನು ಅನುಭವಿಸಬೇಕಾಗುತ್ತದೆ. ಅಯೋಗ್ಯರಿಗೆ ಕಳೆದುಕೊಳ್ಳಲು ಏನೂ ಇರುವುದಿಲ್ಲ. ಅವರ ವ್ಯಕ್ತಿತ್ವಕ್ಕೆ ಧಕ್ಕೆ ಆಗುವಂತದ್ದೇನೂ ಇರುವುದಿಲ್ಲ. ಇಂತಹವರ ಸಹವಾಸವನ್ನು ಗೊತ್ತಿದ್ದೋ.. ಗೊತ್ತಿಲ್ಲದೆಯೋ ಮಾಡಿದರೆ ಸಜ್ಜನರ ಘನತೆಗೆ ಕುಂದು ಬರುವುದು ಗ್ಯಾರಂಟಿ.

ಅನೇಕ ಜನನಾಯಕರು ಹಲವಾರು ವರ್ಷಗಳ ಪರಿಶ್ರಮ ಹಾಗೂ ಹೋರಾಟದ ಫಲವಾಗಿ ಮಂತ್ರಿಗಿರಿ ಗಿಟ್ಟಿಸಿರುತ್ತಾರೆ. ಅಧಿಕಾರ ಹಾಗೂ ಹಣ ಇದ್ದಾಗ ಅಯೋಗ್ಯರು ನೊಣಗಳು ಮುತ್ತುವಂತೆ ಮುತ್ತುತ್ತಾರೆ. ಎಚ್ಚರ ತಪ್ಪಿ ಅವರೊಂದಿಗೆ ವ್ಯವಹರಿಸಿದರೆ ಹಣದ ಜೊತೆಗೆ ಮಾನವೂ ಮಣ್ಣುಪಾಲಾಗುತ್ತದೆ. ಕುಂಬಾರನಿಗೆ ವರುಷ, ದೊಣ್ಣೆಗೆ ನಿಮಿಷ ಎಂಬ ಮಾತಿನಂತೆ ಹತ್ತಾರು ವರ್ಷಗಳಿಂದ ಗಳಿಸಿದ ಗೌರವ ಒಂದೇ ಒಂದು ದುರ್ನಡತೆಯ ಘಟನೆಯಿಂದ ಹಾಳಾಗಿಹೋಗುತ್ತದೆ. ಅನೇಕ ಮಂತ್ರಿಮಹೋದಯರು ಇಂತಹ ನಾರುಗಳ ಸಹವಾಸ ಮಾಡಿ ನರಕ ಅನುಭವಿಸಿರುವುಂಟು. ನಾಯಕರುಗಳ ದೌರ್ಬಲ್ಯ ಅರಿಯುವ ಈ ಕ್ರಿಮಿಗಳು ಅವರನ್ನು ಸುಲಭವಾಗಿ ಖೆಡ್ಡಾಕ್ಕೆ ಬೀಳಿಸಿಬಿಡುತ್ತಾರೆ. ಅನೇಕ ಜನಪ್ರತಿನಿಧಿಗಳು ಇಂತಹ ಚಿಲ್ಲರೆ ಚೇಲಾಗಳಿಂದ ತಮ್ಮ ಮಂತ್ರಿ ಸ್ಥಾನವನ್ನು ಕಳೆದುಕೊಂಡಿರುವುದುಂಟು. ಮಂತ್ರಿ ಸ್ಥಾನವನ್ನೇನೋ ಯಾವುದಾದರೂ ಪ್ರಯತ್ನದಿಂದ, ಜಾತಿ ಬಲದಿಂದಲೋ ಮರಳಿ ಪಡೆಯಬಹುದು, ಹಣ ಹೋದರೆ ಮತ್ತೆ ಬಹುವಿಧದಲ್ಲಿ ಗಳಿಸಬಹುದು, ಆದರೆ ಒಮ್ಮೆ ಹೋದ ಮಾನವನ್ನು ಮತ್ತೆ ಗಳಿಸಲಾದೀತೆ? ಅದಕ್ಕೆ ಅಲ್ಲವೇ ಅಡಿಕೆಗೆ ಹೋದ ಮಾನ, ಆನೆ ಕೊಟ್ಟರೂ ಬಾರದು ಎಂಬ ಗಾದೆ ಮಾತು ಹುಟ್ಟಿಕೊಂಡಿರುವುದು.

ನೈತಿಕತೆ, ಪ್ರಾಮಾಣಿಕತೆ, ವಿವೇಕ, ಸ್ವಾಮಿನಿಷ್ಠೆ, ಧರ್ಮ, ನಿಸ್ವಾರ್ಥ ಇವುಗಳ ಕುರಿತಾಗಿ ಲವಲೇಶವೂ ಚಿಂತಿಸದ ಕೀಳು ಅಭಿರುಚಿಯ ಜನರು, ತಮ್ಮ ಚಟಕ್ಕೆ, ತಮ್ಮ ಹೊಟ್ಟೆಪಾಡಿಗೆ ಏನನ್ನು ಬೇಕಾದರೂ ಮಾಡಲು ಸಿದ್ಧರಿರುತ್ತಾರೆ. ಇವರು ಹೊಗಳಿಕೆ ಎಂಬ ಅಸ್ತ್ರವನ್ನು ಪ್ರಬಲವಾಗಿ ಬಳಸಿ ಜನಪ್ರಿಯ ವ್ಯಕ್ತಿಗಳಿಗೆ ಬಹುಬೇಗ ಹತ್ತಿರವಾಗುತ್ತಾರೆ. ಅವರ ಬೇಕು ಬೇಡಗಳನ್ನು ಈಡೇರಿಸುವ ಮೂಲಕ ಅವರ ದೌರ್ಬಲ್ಯವನ್ನು ತಿಳಿಯುತ್ತಾರೆ. ಕೆಲವು ಚಾಲಾಕಿ ಚೇಲಾಗಳು ಅಕ್ರಮ, ಅನೀತಿಯ ಚಟುವಟಿಕೆಗಳನ್ನು ಫೋಟೋ/ವಿಡೀಯೋ ಮಾಡಿಕೊಂಡಿರುತ್ತಾರೆ. ಯಾವುದೋ ಒಂದು ಸಂದರ್ಭದಲ್ಲಿ ಅವರನ್ನು ಉಪೇಕ್ಷಿಸಲ್ಪಟ್ಟಾಗ ಫೋಟೋ/ವಿಡೀಯೋ ದಾಖಲೆ ಮುಂದಿಟ್ಟುಕೊಂಡು ದೊಡ್ಡವರನ್ನೇ ಬ್ಲ್ಯಾಕ್‌ಮೇಲ್ ಮಾಡುತ್ತಾರೆ. ಅದಕ್ಕೆ ದೊಡ್ಡವರು ಜಗ್ಗದೇ, ಬಗ್ಗದೇ ಇದ್ದಲ್ಲಿ, ಮುಲಾಜಿಲ್ಲದೆ ದೊಡ್ಡವರ ಫೋಟೋ/ವಿಡೀಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಯಬಿಡುತ್ತಾರೆ. ಇದರಿಂದ ತುಂಬಲಾಗದ ನಷ್ಟವಾಗುವುದು ಮಾತ್ರ ದೊಡ್ಡ ಜನರಿಗೆ. ಹಾಗೆಯೇ ಒಂದೇ ದಿನದಲ್ಲಿ ಅವರು ಜನರ ದೃಷ್ಟಿಕೋನದಲ್ಲಿ ಸಣ್ಣವರಾಗಿಬಿಡುತ್ತಾರೆ. ಇಂತಹ ಕೃತ್ಯಗಳನ್ನು ಮಾಡುವ ಕ್ರಿಮಿಗಳಿಗೆ ಯಾವ ನಷ್ಟವೂ ಆಗುವುದಿಲ್ಲ. ಅವರು ಮತ್ತೊಬ್ಬ ದೊಡ್ಡ ಮನುಷ್ಯರ ಹುಡುಕಾಟದಲ್ಲಿರುತ್ತಾರೆ. ಇವರ ಮೇಲೆ ಯಾವ ರೀತಿಯಲ್ಲಿಯೂ ಮಾನನಷ್ಟ ಮೊಕದ್ದಮೆ ಹಾಕಲು ಸಾಧ್ಯವಿಲ್ಲ. ಹಾಗೆ ಮಾಡಿದರೆ ಮತ್ತಷ್ಟು ಮಾನಹಾನಿಯಾಗುವಂತಹ ದೊಡ್ಡವರ ಫೋಟೋ/ವಿಡೀಯೋ ಅಥವಾ ಸುದ್ದಿಗಳು ಸಮಾಜಕ್ಕೆ ರವಾನೆಯಾಗುವ ಸಾಧ್ಯತೆ ಇರುತ್ತದೆ.

ಅತ್ಯಂತ ಪ್ರಭಾವಿ ಹುದ್ದೆಯಲ್ಲಿದ್ದವರು, ನಾಡಿನ ದೊರೆ ಎನಿಸಿಕೊಂಡವರೂ ತಮ್ಮ ಜೊತೆಗೆ ಸದಾ ಇರುವ ಅವಿವೇಕಿ ಸಹಾಯಕರುಗಳ, ಹೊಗಳು ಭಟ್ಟರ ಅಲ್ಪ ಬುದ್ಧಿಗೆ ಮಾರು ಹೋಗಿ ಸಗಣಿ ತಿನ್ನುವ ಕೆಲಸ ಮಾಡಿ ಜೈಲು ಪಾಲಾಗಿರುವುದನ್ನು ಕಾಣಬಹುದು. ವ್ಯವಸ್ಥಿತ ಗುಂಪೊಂದು ತಮ್ಮ ನಾಯಕರನ್ನು ಅನಗತ್ಯವಾಗಿ ಹೊಗಳುತ್ತಾ, ನೀವು ಗ್ರೇಟ್, ನಿಮ್ಮನ್ನು ಯಾರೂ ಮುಟ್ಟಲು ಸಾಧ್ಯವಿಲ್ಲ ಎಂಬ ಬಿಲ್ಡಪ್ ಕೊಟ್ಟು ಅವರನ್ನು ಉನ್ಮಾದ ಸ್ಥಿತಿಗೆ ತರುತ್ತಾರೆ. ಬೆಂಬಲಿಗರ ಮಾತನ್ನು ನಂಬಿ ಮೈಮರೆತು ತಪ್ಪು ಹೆಜ್ಜೆ ಇಡುವ ನಾಯಕರು ಇಡೀ ಜೀವಮಾನದಲ್ಲಿ ತಲೆ ಎತ್ತಲಾಗದಂತೆ ಮಾಡಿಕೊಂಡು ಬಿಡುತ್ತಾರೆ. ಅವರ ಹೆಸರಿಗೆ ಕಳಂಕ ಬರುತ್ತಿದ್ದಂತೆಯೇ ಭಟ್ಟಂಗಿಗಳು ಒಬ್ಬೊಬ್ಬರಾಗಿ ದೂರಾಗುತ್ತಾರೆ. ತನ್ನ ಮೂರ್ಖತನಕ್ಕೆ ಬೈದುಕೊಂಡು ಆ ನಾಯಕರು ಜೀವಮಾನವಿಡಿ ಪಶ್ಚಾತ್ತಾಪದಲ್ಲಿಯೇ ಕಾಲಕಳೆಯಬೇಕಾಗುತ್ತದೆ. ಸಮಾಜ ಅವರನ್ನು ನೋಡುವ ದೃಷ್ಟಿಕೋನವೇ ಬೇರೆಯಾಗುತ್ತದೆ.

ಆದ್ದರಿಂದ ಯಾರನ್ನು ಎಲ್ಲಿ ಇಡಬೇಕೋ ಅಲ್ಲಿ ಇಡಬೇಕು. ಎಷ್ಟರಲ್ಲಿ ಇರಿಸಬೇಕೋ ಅಷ್ಟರಲ್ಲಿ ಇರಿಸಬೇಕು. ಎಷ್ಟೇ ಆತ್ಮೀಯ ವಲಯದಲ್ಲಿದ್ದರೂ ಕೆಲವು ರಹಸ್ಯಗಳನ್ನು ಹಂಚಿಕೊಳ್ಳಬಾರದು. ಎಷ್ಟೋ ಘಟನೆಗಳಲ್ಲಿ ನಾಯಿಗಿರುವ ನಿಯತ್ತಿನಲ್ಲಿ ಶೇ.10 ಸಹ ಈ ಕ್ಷುದ್ರ ಜನರಿಗೆ ಇರುವುದಿಲ್ಲ. ಅನ್ನ ಹಾಕಿದ ಮನೆಗೆ ಕನ್ನ ಹಾಕಲು ಸಹ ಹೇಸುವುದಿಲ್ಲ. ತಮ್ಮ ಸ್ವಾರ್ಥ ಸಾಧನೆಗೆ ಯಾರ ಹಿತವನ್ನಾದರೂ ಸಹ ಬಲಿಕೊಡಲು ಸಿದ್ಧರಿರುತ್ತಾರೆ. ನಾಚಿಕೆ, ಮಾನ, ಮರ್ಯಾದೆ, ಎಂಬುದನ್ನು ಹೊಂದಿರದ ಇವರಿಗೆ ಇಂದು ಛೀಮಾರಿ ಹಾಕಿದರೆ ನಾಳೆ ಹೊಸ ಮನುಷ್ಯರಾಗಿ ನಗುನಗುತ್ತಲೇ ಹಾಜರಾಗುತ್ತಾರೆ. ಇವರಿಗೆ ಸ್ವಾಭಿಮಾನವೇ ಇರುವುದಿಲ್ಲ. ಇಂತಹ ನಾರುಗಳಿಗೆ ಹೂವಿನ ಜೊತೆ ಸ್ವರ್ಗ ಸೇರುವ ಅವಕಾಶವಿದ್ದರೂ ತಮ್ಮೊಟ್ಟಿಗೆ ಹೂವನ್ನು ನರಕಕ್ಕೆ ಕರೆದೊಯ್ಯುತ್ತಾರೆ. ಹಂದಿಗೆ ಎಷ್ಟೇ ಉತ್ತಮ ಆಹಾರ ನೀಡಿದರೂ, ಅದಕ್ಕೆ ಮೋರಿಯ ಕೆಸರು ಇಷ್ಟವಾಗುವಂತೆ ಇಂತಹ ಅಯೋಗ್ಯರಿಗೆ ಕೆಟ್ಟ ಪ್ರವೃತ್ತಿಗಳೇ ಇಷ್ಟವಾಗುತ್ತಿರುತ್ತವೆ.

ಒಬ್ಬ ವ್ಯಕ್ತಿಯ ಮೌಲ್ಯವನ್ನು ಅರಿಯಬೇಕಾದರೆ ಆತನ ಸ್ನೇಹಿತರನ್ನು ನೋಡು ಎಂಬ ಮಾತೊಂದಿದೆ. ಅಕ್ರಮ ಸಂಬಂಧ, ಅಧರ್ಮದ ಸಂಪಾದನೆ, ಲಿವಿಂಗ್ ಟುಗೆದರ್ ಸಂಬಂಧ ಇವುಗಳಿಗೆ ಯಾವುದೇ ಕಟ್ಟುಪಾಡುಗಳಿರುವುದಿಲ್ಲ, ನೀತಿ ನಿಯಮಗಳಿರುವುದಿಲ್ಲ. ಒಪ್ಪಿಗೆ ಮೇರೆಗೆ ನಡೆಯುವ ತಪ್ಪು ನಡೆಗಳು ಇವು. ಇವುಗಳಿಗೆ ಆಯುಷ್ಯವೂ ಕಡಿಮೆ, ಸಮಾಜದಲ್ಲಿ ಮೌಲ್ಯವೂ ಕಡಿಮೆ. ಕವಿ ನಿಸಾರ್ ಅಹಮದ್ ಅವರು ಕಟ್ಟುಪಾಡುಗಳಿಲ್ಲದ ಬದುಕಿನಲ್ಲಿ ಮುಂದೆ ಪಾಡುಪಡಬೇಕಾಗುತ್ತದೆ ಎಂದು ಹೇಳಿರುವುದು ಸತ್ಯ. ಅಯೋಗ್ಯರ ಸಂಗ ಮಾಡಿ ಸ್ವೇಚ್ಛೆಯನ್ನು ಸ್ವಾತಂತ್ರ್ಯವೆಂದು ಪಾಲಿಸಿದರೆ ಮುಂದೆ ಅದರಿಂದ ನರಕ ಪ್ರಾಪ್ತಿಯಾಗುತ್ತದೆಯೇ ಹೊರತು, ಸ್ವರ್ಗವಲ್ಲ!

ಸಜ್ಜನರ ಸಂಗವದು ಹೆಜ್ಜೇನ ಸವಿದಂತೆ, ದುರ್ಜನರ ಸಂಗ ಬಚ್ಚಲ ಕೊಚ್ಚೆಯಂತಿಹುದು ಎಂದು ಸರ್ವಜ್ಞರು ಸಜ್ಜನರ ಸಾಂಗತ್ಯ ಹಾಗೂ ದುರ್ಜನರ ಸಾಂಗತ್ಯವನ್ನು ಬಹಳ ಅರ್ಥಪೂರ್ಣವಾಗಿ ಹೇಳಿದ್ದಾರೆ. ಆದ್ದರಿಂದ ಸ್ನೇಹ ಸಂಬಂಧ ಮಾಡಬೇಕಾದರೆ ಎಚ್ಚರಿಕೆಯಿಂದ ಮಾಡಬೇಕು. ಶಾರ್ಟ್‌ಕಟ್‌ನಲ್ಲಿ ನಮಗೆ ಕೆಲಸವಾಗುತ್ತದೆ ಎಂದು ಖುಷಿಪಡಬೇಕಿಲ್ಲ, ಮುಂದೆ ಅದಕ್ಕೆ ದಂಡ ಪಾವತಿಸಬೇಕಾಗಬಹುದು. ನಮ್ಮೊಟ್ಟಿಗೆ ಇರುವ ಮುಖವಾಡ ಧರಿಸಿದ ಜನರ ಮಾತಿಗೆ ಮರುಳಾಗುವ ಅಗತ್ಯವಿಲ್ಲ. ಸ್ವಂತ ವಿವೇಚನೆಯಿಂದ ಹೆಜ್ಜೆ ಇಡಬೇಕು. ಹತ್ತಾರು ವರ್ಷಗಳಿಂದ ಗಳಿಸಿದ ಖ್ಯಾತಿಯು ಗಾಜಿನ ಮನೆ ಇದ್ದಂತೆ, ಅದನ್ನು ಬಹಳ ಎಚ್ಚರಿಕೆಯಿಂದ ಕಾಪಾಡಿಕೊಳ್ಳಬೇಕು. ನಮ್ಮ ಹತ್ತಿರದಲ್ಲಿರುವ ಕೆಲವರು ಅಯೋಗ್ಯರು ಎಂದು ತಿಳಿದ ತಕ್ಷಣವೇ ಅವರಿಂದ ಅಂತರ ಕಾಪಾಡಿಕೊಳ್ಳಬೇಕು. ಯಾವುದು ಹೂವು, ಯಾವುದು ನಾರು ಎಂಬುದನ್ನು ಬಹುಬೇಗ ತಿಳಿಯುವ ಪ್ರಯತ್ನ ಮಾಡಬೇಕು. ಇಲ್ಲವಾದಲ್ಲಿ ಕೋತಿ ತಾನು ಮೊಸರನ್ನು ತಿಂದು ಮೇಕೆ ಬಾಯಿಗೆ ಒರಸಿದಂತೆ ಸಜ್ಜನರ ವ್ಯಕ್ತಿತ್ವಕ್ಕೆ ಕಳಂಕ ತರುವ ಕುತಂತ್ರಿಗಳ ತಂತ್ರಕ್ಕೆ ಬಲಿಯಾಗಬೇಕಾಗುತ್ತದೆ.

ಹೂರಣ: ನಂದಿ ಸಂಗ ಮಾಡಬೇಕೆ
ವಿನಃ ಹಂದಿಯ ಸಂಗವ ಮಾಡಬಾರದು.



> ಸತ್ಯ, ಧರ್ಮ, ನೈತಿಕತೆ, ಪ್ರಾಮಾಣಿಕತೆ ಅನುಸರಿಸುವವರು ಹೂಗಳಂತೆ. ಅಸತ್ಯ, ಅಧರ್ಮ, ಅನೀತಿ, ಅಕ್ರಮ ಅನುಸರಿಸುವವರು ನಾರುಗಳಂತೆ. ಇಂತಹ ನಾರುಗಳಿಂದ ಸ್ವರ್ಗ ದರ್ಶನವನ್ನು ಎಂದಿಗೂ ನಿರೀಕ್ಷಿಸಲು ಸಾಧ್ಯವಿಲ್ಲ. ಅನೇಕ ಸಂದರ್ಭಗಳಲ್ಲಿ ಹಿತೈಷಿಗಳ ಮುಖವಾಡ ಧರಿಸಿ ಅಹಿತವಾದ ಕೆಲಸ ಮಾಡಿ ಹಿತಶತ್ರುಗಳಾಗುವವರು ಸಹ ಇರುತ್ತಾರೆ. ಪಾಪಪುಣ್ಯಗಳ ಕುರಿತು ಇವರು ಚಿಂತಿಸುವುದೇ ಇಲ್ಲ. ಇವರಿಗೆ ಆಚಾರವೇ ನರಕ, ಅನಾಚಾರವೇ ಸ್ವರ್ಗ. ನಮ್ಮ ಹತ್ತಿರದಲ್ಲಿರುವ ಕೆಲವರು ಅಯೋಗ್ಯರು ಎಂದು ತಿಳಿದ ತಕ್ಷಣವೇ ಅವರಿಂದ ಅಂತರ ಕಾಪಾಡಿಕೊಳ್ಳಬೇಕು. ಯಾವುದು ಹೂವು, ಯಾವುದು ನಾರು ಎಂಬುದನ್ನು ಬಹುಬೇಗ ತಿಳಿಯುವ ಪ್ರಯತ್ನ ಮಾಡಬೇಕು. ಇಲ್ಲವಾದಲ್ಲಿ ಕೋತಿ ತಾನು ಮೊಸರನ್ನ ತಿಂದು ಮೇಕೆ ಬಾಯಿಗೆ ಒರೆಸಿದಂತೆ ಸಜ್ಜನರ ವ್ಯಕ್ತಿತ್ವಕ್ಕೆ ಕಳಂಕ ತರುವ ಕುತಂತ್ರಗಳ ತಂತ್ರಕ್ಕೆ ಬಲಿಯಾಗಬೇಕಾಗುತ್ತದೆ.

ಪಾಕ್ ಗಡಿ ಬಂದ್: ಮೈಸೂರಲ್ಲಿ ಡ್ರೈ ಫ್ರೂಟ್ಸ್ ದುಬಾರಿ

- ಪರಿಸ್ಥಿತಿ ಬಿಗಡಾಯಿಸಿದರೆ ಮಧ್ಯ ಪ್ರಾಚ್ಯದಿಂದ ಆಮದು ಅನಿವಾರ್ಯ
- ಪಾಕಿಸ್ತಾನದ ವಸ್ತು ಮುಟ್ಟಲ್ಲ ಎಂದು ಭಾರತೀಯ ಪ್ರಜೆಗಳ ಶಪಥ

● ಬಾಪುಲಿಂಗರಾಜ್ ಅರಸ್



ಮೈಸೂರು,ಮೇ18–ಭಾರತ–ಪಾಕಿಸ್ತಾನ ನಡುವೆ ಕದನ ವಿರಾಮ ಘೋಷಣೆಯಾದರೂ, ವ್ಯಾಪಾರ–ವಹಿವಾಟು ಪುನಾರಾರಂಭಗೊಂಡಿಲ್ಲ. ಇದರ ಪರಿಣಾಮ ಪಾಕಿಸ್ತಾನದಿಂದ ಬರುತ್ತಿದ್ದ ಡ್ರೈಫ್ರೂಟ್ಸ್ (ಒಣ ಹಣ್ಣು) ಸೇರಿದಂತೆ ಹಲವು ವಸ್ತುಗಳ ಬೆಲೆ ಭಾರತದಲ್ಲಿ ದುಬಾರಿಯಾಗಿದೆ.

ಭಾರತ, ಪಾಕಿಸ್ತಾನದ ವಿರುದ್ಧ ಕೈಗೊಂಡಿರುವ ಕಟ್ಟುನಿಟ್ಟಿನ ರಾಜತಾಂತ್ರಿಕ ನಿಲುವುಗಳಿಂದ ಉಭಯ ದೇಶಗಳ ಆಮದು–ರಫ್ತು ಸ್ಥಗಿತಗೊಂಡಿದೆ.

ಭಾರತದ ಮಾರುಕಟ್ಟೆಯಲ್ಲಿ ದೊರೆಯುವ ಡ್ರೈಫ್ರೂಟ್ಸ್‌ಗಳು ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದಿಂದ ಬಹುತೇಕ ಆಮದಾಗುತ್ತದೆ. ಆದರೆ, ಭಾರತ ಮತ್ತು ಪಾಕಿಸ್ತಾನದ ನಡುವಿನ ಬಿಗುವಿನ ಪರಿಸ್ಥಿತಿ ಮುಂದುವರೆದಿರುವ ಹಿನ್ನೆಲೆಯಲ್ಲಿ ಪಾಕಿಸ್ತಾನದಿಂದ ಬರುವಂತಹ ಎಲ್ಲಾ ವಸ್ತುಗಳ ಬೆಲೆ ದುಬಾರಿಯಾಗಿದೆ. ಅದರಲ್ಲೂ ಡ್ರೈ ಫ್ರೂಟ್ಸ್ ಬೆಲೆ ಶೇ.10 ರಿಂದ 20ರಷ್ಟು ಏರಿಕೆಯಾಗಿದೆ.

ಅಂಜೂರ ಕೆ.ಜಿ.ಗೆ 1 ಸಾವಿರದಿಂದ 1,300 ರೂ.ಗೆ ಮಾರಾಟವಾಗುತ್ತಿತ್ತು, ಆದರೆ ಈಗ 1,500 ರೂ.ಗೆ ಏರಿಕೆಯಾಗಿದೆ. ಬಾದಾಮಿ 700ರಿಂದ 900 ರೂ., ಪಿಸ್ತಾ 1,100ರಿಂದ 1,300 ರೂ., ಖರ್ಜೂರ 280ರಿಂದ 400 ರೂ., ಒಣ ದ್ರಾಕ್ಷಿ 260ರಿಂದ 410 ರೂ.,ಗೋಡಂಬಿ 900 ರಿಂದ 1,100 ರೂ., ಸಕ್ಕರ ಬಾದಾಮಿ 600ರಿಂದ 800 ರೂ. ಏರಿಕೆಯಾಗಿದ್ದು, ಕಪ್ಪು ಒಣ ದ್ರಾಕ್ಷಿ, ಶಾಜೀರ ಸೇರಿದಂತೆ ಹಲವು ಬಗೆಯ ಡ್ರೈ ಫ್ರೂಟ್ಸ್‌ಗಳ ಬೆಲೆಯೂ ಗಗನಕ್ಕೇರಿದೆ. ಇನ್ನು 250 ರೂ.ನಿಂದ 600 ರೂ.ಗೆ ಮಾರಾಟವಾಗುತ್ತಿದ್ದ ಒಂದು ಗ್ರಾಂ ಕೇಸರಿ ಬೆಲೆಯಲ್ಲೂ ಶೇ.20ರಷ್ಟು ಹೆಚ್ಚಳವಾಗಿದೆ. ಪಾಕಿಸ್ತಾನ, ಅಫ್ಘಾನಿಸ್ತಾನದ ಡ್ರೈ ಫ್ರೂಟ್ಸ್ ಸೇರಿದಂತೆ ಎಲ್ಲಾ ವಸ್ತುಗಳು ಅಟ್ಟಾರಿ ಮತ್ತು ವಾಘಾ ಗಡಿ ಮೂಲಕ ಭಾರತಕ್ಕೆ ಬರುತ್ತಿತ್ತು. ಆದರೆ ಈಗ ಎರಡೂ ಗಡಿಗಳನ್ನು ಮುಚ್ಚಿರುವ ಕಾರಣ ವ್ಯಾಪಾರ–ವಹಿವಾಟು ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಭಾರತವು ಯುನೈಟೆಡ್ ಅರಬ್ ಎಮಿರೇಟ್ಸ್, ಬಾಂಗ್ಲಾದೇಶ, ವಿಯೆಟ್ನಾಂನಿಂದಲೂ ಡ್ರೈ ಫ್ರೂಟ್ಸ್ ಆಮದು ಮಾಡಿಕೊಳ್ಳುತ್ತದೆ. ಆದರೆ ರುಚಿ, ಗುಣಮಟ್ಟದ ಆಧಾರದಲ್ಲಿ ಅಫ್ಘಾನಿಸ್ತಾನದಲ್ಲಿ ಬೆಳೆಯುವ ಡ್ರೈಫ್ರೂಟ್ಸ್‌ಗೆ ಹೆಚ್ಚು ಬೇಡಿಕೆ ಇದೆ. ಹಾಗಾಗಿ ಪರಿಸ್ಥಿತಿ ಹೀಗೆಯೇ ಮುಂದುವರೆದರೆ ಅಫ್ಘಾನಿಸ್ತಾನದ ಡ್ರೈ ಫ್ರೂಟ್ಸ್‌ಗಳನ್ನು ಮಧ್ಯಪ್ರಾಚ್ಯ ದೇಶಗಳ ಮೂಲಕ ಭಾರತಕ್ಕೆ ಆಮದು ಮಾಡಿಕೊಳ್ಳಬೇಕಾಗುತ್ತದೆ. ಅದರಿಂದ ಸಾಗಣಿಕೆ ವೆಚ್ಚ ಹೆಚ್ಚುವುದರಿಂದ ಬೆಲೆ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ.

ಡ್ರೈ ಫ್ರೂಟ್ಸ್ ಮಾತ್ರವಲ್ಲದೆ ಕಲ್ಲು ಉಪ್ಪು, ಕನ್ನಡಕ ಸಿದ್ಧಪಡಿಸಲು ಬಳಸುವ ಆಪ್ಟಿಕಲ್ ಲೆನ್ಸ್‌ಗಳು, ಸುಣ್ಣ, ಹತ್ತಿ, ಚರ್ಮದ ಪದಾರ್ಥಗಳು ಪಾಕಿಸ್ತಾನದಿಂದ ಆಮದಾಗುತ್ತಿದ್ದವು. ಸದ್ಯಕ್ಕೆ ಈ ವಸ್ತುಗಳ ಬೆಲೆ ಏರಿಕೆ ಆಗಿಲ್ಲ. ಆದರೆ ಮುಂದಿನ ದಿನಗಳಲ್ಲಿ ಆಗಬಹುದು. ಹಾಗೆಯೇ ಭಾರತದಿಂದ ಪಾಕಿಸ್ತಾನಕ್ಕೆ ರಫ್ತಾಗುತ್ತಿದ್ದ ಔಷಧಿಗಳು, ರಾಸಾಯನಿಕಗಳು, ಪಾಸ್ಟಿಕ್ ಉತ್ಪನ್ನಗಳು, ಹತ್ತಿ ಹಣ್ಣು, ತರಕಾರಿ, ಕಾಫಿ, ಚಹಾ, ಮಸಾಲೆ ಪದಾರ್ಥಗಳು, ಎಣ್ಣೆಕಾಳು, ಸಕ್ಕರೆ, ಪಶು ಆಹಾರ, ಡೈರಿ ವಸ್ತುಗಳು ಇನ್ನಿತರ ಉತ್ಪನ್ನಗಳ ಬೇಡಿಕೆ ತಗ್ಗಿ, ಬೆಲೆ ಕುಸಿಯಬಹುದು ಎನ್ನಲಾಗಿದೆ.

ಪಹಲ್ಗಾಮ್‌ನಲ್ಲಿ 26 ಪ್ರವಾಸಿಗರ ಹತ್ಯೆ ಮಾಡಿದ ಉಗ್ರರನ್ನು ಪೋಷಿಸುವ ಪಾಕಿಸ್ತಾನದೊಂದಿಗೆ ಯಾವುದೇ ವ್ಯಾಪಾರ–ವಹಿವಾಟು ಬೇಡ. ಹಾಗೆಯೇ ಪಾಕಿಸ್ತಾನದ ದುರ್ಬುದ್ಧಿ ತಿಳಿದೂ ಅದರ ಬೆಂಬಲಕ್ಕೆ ನಿಂತಿರುವ ಟರ್ಕಿ ಉತ್ಪನ್ನಗಳನ್ನೂ ಬಹಿಷ್ಕರಿಸಬೇಕು ಎಂಬುದು ಭಾರತೀಯರ ಒಕ್ಕೊರಲಿನ ಆಗ್ರಹವಾಗಿರುವುದರಿಂದ ಕೆಲ ಉತ್ಪನ್ನಗಳ ಬೆಲೆಯ ಏರಿಳಿತವನ್ನು ಸಹಿಸಿಕೊಳ್ಳಲೇಬೇಕಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹುಟ್ಟುಹಬ್ಬ ಆಚರಣೆ



ಮೈಸೂರಿನ ಜೆಡಿಎಸ್ ಕಚೇರಿಯಲ್ಲಿ ಭಾನುವಾರ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹುಟ್ಟುಹಬ್ಬ ಆಚರಿಸಲಾಯಿತು.

ಮೈಸೂರು, ಮೇ18(ಬಿಎಲ್‌ಯು)– ಮೈಸೂರಿನಲ್ಲಿ ಭಾನುವಾರ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹುಟ್ಟುಹಬ್ಬವನ್ನು ಆಚರಿಸಲಾಯಿತು.

ಇಂದು ಬೆಳಗ್ಗೆ ಚಾಮುಂಡಿಬೆಟ್ಟದಲ್ಲಿ ನಾಡದೇವತೆ ತಾಯಿ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿದ ಜೆಡಿಎಸ್ ಕಾರ್ಯಕರ್ತರು, ಹೆಚ್.ಡಿ.ದೇವೇಗೌಡರ ಹೆಸರಿನಲ್ಲಿ ಅರ್ಚನೆ ಮಾಡಿಸಿದರು. ತರುವಾಯ ಜೆಡಿಎಸ್ ಕಚೇರಿಯಲ್ಲಿ ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಕೇಕ್ ಕತ್ತರಿಸುವ ಮೂಲಕ ಆಚರಿಸಿದರು.


ಈ ವೇಳೆ ಮಾತನಾಡಿದ ಸಿ.ಎನ್. ಮಂಜೇಗೌಡ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಈ ರಾಜ್ಯ, ದೇಶ ಕಂಡಂತಹ ಅಪ್ಪಟ ದೇಶಾಭಿಮಾನಿ, ಜೆಡಿಎಸ್ ಪಕ್ಷವನ್ನು ಕಟ್ಟಿ ನೂರಾರು ರಾಜಕಾರಣಿಗಳನ್ನು ಸೃಷ್ಟಿ ಮಾಡಿದ ಮಹಾನಾಯಕ. ಇಂದು ಜೆಡಿಎಸ್‌ನಲ್ಲಿ ಬೆಳೆದ ನಾಯಕರೆಲ್ಲಾ ಕಾಂಗ್ರೆಸ್, ಬಿಜೆಪಿಯಲ್ಲಿ ಉನ್ನತ ಸ್ಥಾನಗಳನ್ನು ಅಲಂಕರಿಸಿದ್ದಾರೆ. ಪ್ರಧಾನಿಯಾಗಿದ್ದಾಗ ಜಮ್ಮು ಕಾಶ್ಮೀರಕ್ಕೆ ತೆರೆದ ವಾಹನದಲ್ಲಿ ತೆರಳಿದ ಮೊದಲ ಪ್ರಧಾನಿ ಹೆಚ್.ಡಿ.ದೇವೇಗೌಡರು ಎಂದು ಹೇಳಿದರು.

ಪಂಜಾಬಿನಲ್ಲಿ ಭತ್ತದ ತಳಿಗೆ ದೇವೇಗೌಡರ ಹೆಸರಿಟ್ಟಿದ್ದಾರೆ. ಗ್ರಾಪಂ, ತಾಪಂ, ಜಿಪಂನಲ್ಲಿ ಮೀಸಲಾತಿ ತಂದುಕೊಟ್ಟವರು, ಕಾವೇರಿ ನೀರಿನ ವಿಚಾರದಲ್ಲಿ ಹೆಚ್ಚು ತಿಳಿದುಕೊಂಡವರು. ರಾಜ್ಯಸಭೆಯಲ್ಲಿ ಈ ಬಗ್ಗೆ ಧನಿ ಎತ್ತಿದವರು. ಪಹಲ್ಗಾಮ್ ಹತ್ಯಾಕಾಂಡದ ವಿಚಾರದಲ್ಲಿ ದೇಶದ ಬೆಂಬಲಕ್ಕೆ ನಿಂತವರು, ಇಂತಹ ಮಹಾನ್ ನಾಯಕರ ಹುಟ್ಟುಹಬ್ಬವನ್ನು ಚಾಮುಂಡೇಶ್ವರಿ ತಾಯಿಗೆ ವಿಶೇಷ ಪೂಜೆ ಸಲ್ಲಿಸುವುದರೊಂದಿಗೆ ನಗರದಲ್ಲಿ ಆಚರಿಸಲಾಗುತ್ತಿದೆ. ವಿವಿಧ ಪಕ್ಷದ ಮುಖಂಡರು ಅವರಿಗೆ ಶುಭ ಹಾರೈಸುತ್ತಿದ್ದಾರೆ. ನಾಡಿನ ಜನರ ಆಶೀರ್ವಾದ, ತಾಯಿ ಚಾಮುಂಡೇಶ್ವರಿ ದೇವಿಯ ಆಶೀರ್ವಾದದಿಂದ ಇನ್ನೂ ನೂರು ವರ್ಷ ಬಾಳಲಿ. ಯುವ ರಾಜಕಾರಣಿಗಳಿಗೆ ಮಾರ್ಗದರ್ಶನ ನೀಡಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜೆಡಿಎಸ್ ನಗರ ಅಧ್ಯಕ್ಷ ಚಲುವೇಗೌಡ, ನಗರ ಹಿರಿಯ ಉಪಾಧ್ಯಕ್ಷ ಫಾಲ್ಕನ್ ಬೋರೇಗೌಡ, ನಗರ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಮಾಜಿ ಮೇಯರ್ ಲಿಂಗಪ್ಪ, ಮೈಲ್ಯಾಕ್ ಅಂಡ್ ಪೈಂಟ್ಸ್ ಮಾಜಿ ಅಧ್ಯಕ್ಷ ಕೃಷ್ಣ, ನಗರಪಾಲಿಕೆ ಮಾಜಿ ಸದಸ್ಯರಾದ ಎಸ್‌ಬಿಎಂ ಮಂಜು, ಪ್ರೇಮಾ ಶಂಕರೇಗೌಡ, ಮುಖಂಡರಾದ ರಮೇಶ್, ದಿನೇಶ್, ಮಂಜುನಾಥ್, ರಾಜಶೇಖರ್, ಲಕ್ಷ್ಮಮ್ಮ ಇನ್ನಿತರರು ಉಪಸ್ಥಿತರಿದ್ದರು.

ಹೆಚ್.ಡಿ.ದೇವೇಗೌಡರು ದೇಶ ಕಂಡ ಅಪ್ರತಿಮ ರೈತ ನಾಯಕರು

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಬಣ್ಣನೆ



ಮೈಸೂರಿನ ಅರವಿಂದನಗರದಲ್ಲಿರುವ ಜೆಎಸ್‌ಎಸ್ ವೃದ್ಧಾಶ್ರಮದಲ್ಲಿ ಭಾನುವಾರ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ಜನ್ಮದಿನದ ಪ್ರಯುಕ್ತ ವೃದ್ಧಾಶ್ರಮದ ಹಿರಿಯ ನಾಗರಿಕರಿಗೆ ಸೀರೆ, ಪಂಚೆ ಹಾಗೂ ಹಣ್ಣು ಹಂಪಲು ವಿತರಿಸಲಾಯಿತು.

ಮೈಸೂರು, ಮೇ 18(ಪಿಎಂ)– ಅರವಿಂದನಗರದಲ್ಲಿರುವ ಜೆಎಸ್‌ಎಸ್ ವೃದ್ಧಾಶ್ರಮದಲ್ಲಿ ಹೆಚ್.ಡಿ.ದೇವೇಗೌಡರ ಅಭಿಮಾನಿ ಬಳಗ ಹಾಗೂ ಎಸ್.ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದ ಜಂಟಿ ಆಶ್ರಯದಲ್ಲಿ ಭಾನುವಾರ ವೃದ್ಧಾಶ್ರಮದ ಹಿರಿಯ ನಾಗರಿಕರಿಗೆ ಸೀರೆ, ಪಂಚೆ, ದಿನಸಿ ಸಾಮಗ್ರಿ ಹಾಗೂ ಹಣ್ಣು ಹಂಪಲು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ಹುಟ್ಟುಹಬ್ಬ ಆಚರಿಸಲಾಯಿತು.

ಇದೇ ವೇಳೆ ಮಾತನಾಡಿದ ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಹೆಚ್.ಡಿ.ದೇವೇಗೌಡರು ದೇಶ ಕಂಡ ಅಪ್ರತಿಮ ರೈತ ನಾಯಕರು. ಹಾಸನ ಜಿಲ್ಲೆಯಿಂದ ಗೆದ್ದು ಪ್ರಧಾನಮಂತ್ರಿಯಾಗಿ ಆಡಳಿತ ಮಾಡಿದ ಏಕಮಾತ್ರ ಕನ್ನಡಿಗರು ಎಂಬ ಹೆಗ್ಗಳಿಕೆ ಅವರಿಗೆ ಸಲ್ಲುತ್ತದೆ. ಅವರ ಜನ್ಮದಿನ ಆಚರಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯವೇ ಸರಿ. ಅವರು ದೀರ್ಘಾಯುಷಿಯಾಗಿ ಆರೋಗ್ಯದಿಂದ ಬಾಳುವ ಮೂಲಕ ನಾಡು ಹಾಗೂ ರಾಷ್ಟ್ರದ ಸಮೃದ್ಧಿಗೆ ಅವರ ಮಾರ್ಗದರ್ಶನ ಮುಂದುವರೆಯಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆಂದು ಹೇಳಿದರು.

ಹೆಚ್.ಡಿ.ದೇವೇಗೌಡರ ಗರಡಿಯಲ್ಲಿ ಬೆಳೆದ ಸಾಕಷ್ಟು ಮಂದಿ ಮುಖ್ಯಮಂತ್ರಿಗಳು, ಸಚಿವರು ಹಾಗೂ ಕೇಂದ್ರ ಮಂತ್ರಿಗಳಾಗಿದ್ದಾರೆ. ದೇವೇಗೌಡರೇ ಒಂದು ದೊಡ್ಡ ಶಕ್ತಿ ಎಂದು ಅಭಿಮಾನ ವ್ಯಕ್ತಪಡಿಸಿದರು.

ಹಿರಿಯ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಮಾತನಾಡಿ, ದೇಶ ಕಂಡಂತಹ ಮಹಾನ್ ರಾಜಕೀಯ ಮುತ್ಸದ್ಧಿ ಹೆಚ್.ಡಿ. ದೇವೇಗೌಡರು. ಹೊಳೆನರಸಿಪುರದಲ್ಲಿ ಸಣ್ಣ ಮಟ್ಟದಲ್ಲಿ ರಾಜಕೀಯ ಪ್ರಾರಂಭ ಮಾಡಿದ ಅವರು ಮುಖ್ಯಮಂತ್ರಿಯಾಗಿದ್ದು ಮಾತ್ರವಲ್ಲದೇ, ನಮ್ಮ ದೇಶದ ಪ್ರಧಾನಿಯಾದರು. ರಾಷ್ಟ್ರದ ಅಂತಹ ಉನ್ನತ ಸ್ಥಾನ ಅಲಂಕರಿಸಿದ ಏಕಮಾತ್ರ ಕನ್ನಡಿಗರು ದೇವೇಗೌಡರು. ಇದು ನಮ್ಮ ಕರ್ನಾಟಕ ಹಾಗೂ ಕನ್ನಡಿಗರ ಹೆಮ್ಮೆಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಹೆಚ್.ಡಿ.ದೇವೇಗೌಡರು ಕೃಷಿ ಕ್ಷೇತ್ರದ ಬಗ್ಗೆ ಅಪಾರ ಆಸಕ್ತಿ ಹೊಂದಿದ್ದು, ಅವರಿಗೆ ರೈತರ ಕುರಿತು ಅತೀವ ಕಾಳಜಿ ಇದೆ. ಒಬ್ಬ ಸಣ್ಣ ರೈತರಿಗೂ ಅನ್ಯಾಯ ವಾದರೆ ಅವರು ಸಹಿಸುವುದಿಲ್ಲ. ಅವರಿಗೆ ದೀರ್ಘಾಯುಷ್ಯ ದೊರೆತು ಅವರ ಮಾರ್ಗದರ್ಶನ ದೇಶಕ್ಕೆ ಇನ್ನೂ ಲಭಿಸಬೇಕು. ಈ ನಿಟ್ಟಿನಲ್ಲಿ ನಾವೆಲ್ಲರೂ ಹಾರೈಸೋಣ ಎಂದರು.

ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೊಮದೇವ್, ಗಾಯಕ ಯಶವಂತ್ ಕುಮಾರ್, ಜೆಡಿಎಸ್ ಮುಖಂಡ ಹರ್ಷ, ಮುಖಂಡರಾದ ಛಾಯಾ, ಪಿಂಕಿಕುಮಾರಿ, ರಾಜೇಶ್ ಕುಮಾರ್, ವೀರಭದ್ರಸ್ವಾಮಿ, ಸುಬ್ರಮಣಿ, ರಮೇಶ್‌ರಾಮಪ್ಪ, ಗಗನ್, ಶ್ರೀಧರ್, ಎಲ್‌ಐಸಿ ವೆಂಕಟೇಶ್, ಶ್ರೀಧರ್ ಮತ್ತಿತರರು ಹಾಜರಿದ್ದರು.

ಶಾಸಕ ಟಿ.ಎಸ್.ಶ್ರೀವತ್ಸ, ಗೋಪಾಲ್‌ರಾಜ್ ಅವರಿಗೆ ಸನ್ಮಾನ...



ಕೆ.ಆರ್.ಕ್ಷೇತ್ರದ ಶಾಸಕರಾಗಿ ಎರಡು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಟಿ.ಎಸ್.ಶ್ರೀವತ್ಸ ಹಾಗೂ ಕೆ.ಆರ್.ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲ್‌ರಾಜ್ ಅರಸ್ ಅವರನ್ನು ಕೆ.ಆರ್.ಕ್ಷೇತ್ರದ ಬಿಜೆಪಿ ಕಚೇರಿಯಲ್ಲಿ ಅಭಿನಂದಿಸಲಾಯಿತು. ಈ ವೇಳೆ ಶ್ರೀ ರಾಮಾನುಜ ಸಹಕಾರ ಸಂಘದ ಅಧ್ಯಕ್ಷ ಎಚ್.ಕೆ.ರಾಜಗೋಪಾಲನ್, ಯತಿರಾಜ ಮಠದ ವೀರ ರಾಘವಾಚಾರ್, ಮುಖಂಡರಾದ ಕೆ.ಆರ್.ಯೋಗ ನರಸಿಂಹ (ಮುರುಳಿ), ಪುಟ್ಟಸ್ವಾಮಿ, ಯತಿರಾಜ್, ಶ್ರೀನಿವಾಸ್ ಪ್ರಸಾದ್, ಟಿ.ಎಸ್.ಅರುಣ್, ಚಕ್ರಪಾಣಿ, ಅನಂತ್ ಕೃಷ್ಣ, ರಾಮಸ್ವಾಮಿ, ಶಾಂತರಾಮ್, ಆಂಡಾಳ್, ಅನುರಾಧ, ಲಕ್ಷ್ಮಿ ಇನ್ನಿತರರಿದ್ದರು.

ಜನೌಷಧಿ ಕೇಂದ್ರ ಬಂದ್‌ಗೆ ಆದೇಶ




ಬೆಂಗಳೂರು, ಮೇ 18– ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿರುವ ಜನೌಷಧಿ ಕೇಂದ್ರಗಳನ್ನು ಬಂದ್ ಮಾಡುವಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಈ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿ ಶ್ರೀಪತಿ ಪಿ.ಕೆ. ಆದೇಶ ಹೊರಡಿಸಿದ್ದು, ಸರ್ಕಾರಿ ಆಸ್ಪತ್ರೆಗಳ ಹೊರಗೆ ಜನೌಷಧಿ ಕೇಂದ್ರಗಳ ಸ್ಥಾಪನೆಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬಾರದ ಕಾರಣ ಅವು ಮುಂದುವರೆಯಬಹುದಾಗಿದೆ. ಆರೋಗ್ಯ ಇಲಾಖೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಅಸ್ತಿತ್ವದಲ್ಲಿರುವ ಜನೌಷಧಿ ಕೇಂದ್ರಗಳನ್ನು ಅವರೊಂದಿಗೆ ಮಾಡಿಕೊಂಡಿರುವ ಒಪ್ಪಂದ ನಿಯಮಗಳ ಪ್ರಕಾರ ಸ್ಥಗಿತಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಆದೇಶದಲ್ಲಿ ತಿಳಿಸಲಾಗಿದೆ.

ಹಾಗೆಯೇ ಜೆನೆರಿಕ್ ಔಷಧಿಗಳ ಖರೀದಿಗೆ ಬಿಪಿಪಿಐಯೊಂದಿಗೆ ಕೆಎಸ್‌ಎಂಎಸ್‌ಸಿಎಲ್ ಅವರು ವಿಶೇಷ ದರಗಳನ್ನು ರೂಪಿಸಲು ಸೂಚಿಸಿದೆ. ಪರ್ಯಾಯವಾಗಿ ಆಸ್ಪತ್ರೆಗಳು ಬಿಪಿಪಿಐಯಿಂದ ಔಷಧಿಗಳನ್ನು ಖರೀದಿಸಿ ರೋಗಿಗಳಿಗೆ ಉಚಿತವಾಗಿ ವಿತರಿಸಲು ಕ್ರಮ ವಹಿಸುವಂತೆ ತಿಳಿಸಿದ್ದಾರೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ರೋಗಿಗಳಿಗೆ ಯಾವುದೇ ಔಷಧಿಗಳನ್ನು ಹೊರಗಿನಿಂದ ಖರೀದಿಸಲು ಶಿಫಾರಸ್ಸು ಮಾಡದಂತೆ ನೋಡಿಕೊಳ್ಳುವುದು ಸರ್ಕಾರದ ನೀತಿಯಾಗಿದೆ. ಈ ಹಿನ್ನೆಲೆಯಲ್ಲಿ ಆಸ್ಪತ್ರೆ ಆವರಣದೊಳಗೆ ಜನೌಷಧಿ ಕೇಂದ್ರಗಳನ್ನು ತೆರೆಯುವುದು ಸರ್ಕಾರದ ನೀತಿಗೆ ವ್ಯತಿರಿಕ್ತವಾಗುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತರು ಸಲ್ಲಿಸಿರುವ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಆದೇಶವನ್ನು ಹೊರಡಿಸಿದೆ.

ಕಾರು ಬಾವಿಗೆ ಬಿದ್ದು ಕರ್ನಾಟಕದ ಮೂವರು ಸಾವು



ಅನ್ನಮಯ್ಯ, ಮೇ18– ಆಂಧ್ರ ಪ್ರದೇಶದ ಅನ್ನಮಯ್ಯ ಜಿಲ್ಲೆಯ ಕುರಪ್ಪಲ್ಲಿ ಗ್ರಾಮದ ಬಳಿ ಭಾನುವಾರ ಚಾಲಕನ ನಿಯಂತ್ರಣ ತಪ್ಪಿ ಕಾರು ಬಾವಿಗೆ ಉರುಳಿಬಿದ್ದಿದ್ದು, ಅಪಘಾತದಲ್ಲಿ ಕರ್ನಾಟಕದ ಮೂವರು ಸಾವನ್ನಪ್ಪಿದ್ದಾರೆ.

ಮೃತರನ್ನು ಚಿಂತಾಮಣಿ ತಾಲೂಕಿನ ಮುತ್ತಕದಲ್ಲಿ ಗ್ರಾಮದ ನಿವಾಸಿಗಳಾದ ಲೊಕೇಶ(34), ಚಂದನಹಳ್ಳಿ ಶಿವಾನಂದ, ಕೋಲಾರ ಜಿಲ್ಲೆಯ ಸುಗಟೂರು ಚಲಪತಿ ಎಂದು ಗುರುತಿಸಲಾಗಿದೆ ಅಪಘಾತದಲ್ಲಿ ಇಬ್ಬರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಅಡುಗೆ ಕೆಲಸಕ್ಕಾಗಿ ಕಾರಿನಲ್ಲಿ ಐವರು ತೆರಳುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ ಈ ದುರ್ಘಟನೆ ಸಂಭವಿಸಿದೆ. ಬಾವಿ ಆಳವಾಗಿದ್ದರಿಂದ ಕಾರಿನೊಳಗೆ ಮೂವರು ಮೃತಪಟ್ಟಿದ್ದಾರೆ. ಸ್ಥಳೀಯರು, ಪೊಲೀಸರು ಬಾವಿಯಲ್ಲಿ ಬಿದ್ದಿದ್ದ ಕಾರನ್ನು ಕ್ರೇನ್ ಮೂಲಕ ಮೇಲಕ್ಕೆತ್ತಿದ್ದಾರೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 18–ಸಂಯುಕ್ತ ಆಟೋರಿಕ್ಷಾ ಚಾಲಕರ ಮತ್ತು ಮಾಲೀಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಪಡೆದ ಸಂಘದ ಸದಸ್ಯರ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಅಂಕಪಟ್ಟಿ, ಪೋಷಕರ ಚಾಲನಾ ಪತ್ರ, ಕಾರ್ಡ್, ಆಧಾರ್ ಕಾರ್ಡ್ ನಕಲನ್ನು ಮೇ 31ರೊಳಗೆ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ 93424 21021, 9980613324 ಸಂಪರ್ಕಿಸಲು ಕೋರಲಾಗಿದೆ.

ಮೈಸೂರಲ್ಲಿ ಅಂತಾರಾಷ್ಟ್ರೀಯ ವಸ್ತುಸಂಗ್ರಹಾಲಯ ದಿನಾಚರಣೆ

ಮ್ಯೂಜಿಯಂ ಆನ್ ವ್ಹೀಲ್ಸ್ ಮೂಲಕ ವಸ್ತುಸಂಗ್ರಹಾಲಯದ ವಿವರಣೆ



ಮ್ಯೂಜಿಯಂ ಆನ್ ವ್ಹೀಲ್ಸ್‌ನಲ್ಲಿ ಸಿದ್ಧಾರ್ಥನಗರದ ಪ್ರಾದೇಶಿಕ ವಿಜ್ಞಾನ ವಸ್ತುಸಂಗ್ರಹಾಲಯದ ಮಹತ್ವವನ್ನು ಮಕ್ಕಳಿಗೆ ತಿಳಿಸಿಕೊಡಲಾಯಿತು.

ಮೈಸೂರು, ಮೇ18(ಬಿಎಲ್‌ಯು)– ಅಂತರರಾಷ್ಟ್ರೀಯ ವಸ್ತುಸಂಗ್ರಹಾಲಯ ದಿನಾಚರಣೆ ಅಂಗವಾಗಿ ಮೈಸೂರಿನಲ್ಲಿ ಇಂದು ಆಯೋಜಿಸಿದ್ದ ಮ್ಯೂಜಿಯಂ ಆನ್ ವ್ಹೀಲ್ಸ್‌ನಲ್ಲಿ ವಸ್ತುಸಂಗ್ರಹಾಲಯಗಳ ಮಹತ್ವ ಸಾರಲಾಯಿತು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯೋಜಿಸಿದ್ದ ಮ್ಯೂಜಿಯಂ ಆನ್ ವ್ಹೀಲ್ಸ್ ಅನ್ನು ನಗರದ ಇರ್ವಿನ್ ರಸ್ತೆಯ ವೆಲ್ಲಿಂಗ್ಟನ್ ಸರ್ಕಾರಿ ವಸ್ತುಸಂಗ್ರಹಾಲಯ ಮತ್ತು ಕಲಾ ಗ್ಯಾಲರಿಯಲ್ಲಿ ಚಾಲನೆ ನೀಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತ ದೇವರಾಜು ಅವರು, ವಸ್ತು ಸಂಗ್ರಹಾಲಯಗಳ ಇತಿಹಾಸ ಹಾಗೂ ಮಹತ್ವವನ್ನು ತಿಳಿಸಿದರು. ಈ ಕಾರ್ಯಕ್ರಮದಿಂದ ಮಕ್ಕಳು, ಹಿರಿಯರು ಸೇರಿದಂತೆ ಎಲ್ಲರಿಗೂ ಬಹಳಷ್ಟು ವಿಚಾರಗಳು ಮನವರಿಕೆಯಾಗುತ್ತದೆ ಎಂದರು.

ಮೈಸೂರು, ಮಂಡ್ಯ ಮತ್ತು ಹಾಸನ ಜಿಲ್ಲೆಯ 150ಕ್ಕೂ ಹೆಚ್ಚು ಮಂದಿ ಮ್ಯೂಜಿಯಂ ಆನ್‌ವ್ಹೀಲ್ಸ್‌ನಲ್ಲಿ ಭಾಗಿಯಾಗಿದ್ದರು. ಮೊದಲು ವೆಲ್ಲಿಂಗ್ಟನ್‌ನ ವಸ್ತುಸಂಗ್ರಹಾಲಯವನ್ನು ತೋರಿಸಲಾಯಿತು. ಇಲ್ಲಿನ ಕಲಾ ಗ್ಯಾಲರಿಯಲ್ಲಿ ಸಂಗ್ರಹಿಸಲ್ಪಟ್ಟ ಕಲಾಕೃತಿಗಳ ಪ್ರಕಾರವನ್ನು ಆರು ವಿಭಾಗಗಳಾಗಿ ವಿಂಗಡಿಸಿ, ಕಲಾ ಗ್ಯಾಲರಿಯಲ್ಲಿ ಪ್ರದರ್ಶಿಸಲಾಗಿದೆ ಎಂದು ವಿವರಿಸಿ ಹೇಳಲಾಯಿತು. ಮೈಸೂರಿನ ಸಾಂಪ್ರದಾಯಿಕ ಚಿತ್ರಕಲೆ, ತಂಜಾವೂರು ಸಾಂಪ್ರದಾಯಿಕ ಚಿತ್ರಕಲೆ, ಭಾರತೀಯ ಸಮಕಾಲೀನ ಚಿತ್ರಕಲೆ, ಮೈಸೂರು ರಾಜಮನೆತನದ ಪರಂಪರೆ, ಆಸ್ಥಾನ ಕಲಾವಿದರ ಚಿತ್ರಗಳ ಬಗ್ಗೆ ವಿವರಣೆ ನೀಡಲಾಯಿತು.

ನೆಲ ಮಹಡಿಯಲ್ಲಿ ರಾಷ್ಟ್ರೀಯ ಮಾನವ ಸಂಗ್ರಹಾಲಯವಿದ್ದು, ಇಲ್ಲಿ ದೇಶದ ವಿವಿಧ ಬುಡಕಟ್ಟು ಜನಾಂಗದ ಸಂಸ್ಕೃತಿ ಬಿಂಬಿಸುವ ವಸ್ತುಗಳನ್ನು ಪ್ರದರ್ಶನಕ್ಕಿಟ್ಟಿರುವುದನ್ನು ತೋರಿಸಿ ಇದರ ಬಗ್ಗೆ ಕೂಡ ವಿವರಣೆ ನೀಡಲಾಯಿತು. ತರುವಾಯ ಶ್ರೀರಂಗಪಟ್ಟಣ ತಾಲೂಕಿನ ನಗುವಿನಹಳ್ಳಿಯಲ್ಲಿ ಸ್ಥಾಪಿಸಿರುವ ಪಯಣ (ಕಾರು ವಸ್ತುಸಂಗ್ರಹಾಲಯ)ಕ್ಕೆ ಕರೆದೊಯ್ದು ಹಳೆಯ ವಿಂಟೇಜ್ ಕಾರುಗಳನ್ನು ತೋರಿಸಿ ಅದರ ಇತಿಹಾಸ ವಿವರಿಸಲಾಯಿತು.

ಮೈಸೂರಿನ ಸಿದ್ಧಾರ್ಥನಗರದ ಪ್ರಾದೇಶಿಕ ಪ್ರಾಕೃತಿಕ ವಿಜ್ಞಾನ ವಸ್ತು ಸಂಗ್ರಹಾಲಯದಲ್ಲಿರುವ ಸಸ್ಯ ಪ್ರಾಣಿಗಳ ಮಾದರಿಗಳು, ಮಕ್ಕಳಿಗಾಗಿ ಅಭಿವೃದ್ಧಿ ಪಡಿಸಿರುವ ಅನ್ವೇಷಣಾ ಕೇಂದ್ರ, ಪರಿಸರ ಸಂರಕ್ಷಣೆ, ಪಶ್ಚಿಮಘಟ್ಟಗಳ ಜೀವ ವೈವಿಧ್ಯತೆ ಕುರಿತ ಪ್ರದರ್ಶನವನ್ನು ತೋರಿಸಿ ಅದರ ಇತಿಹಾಸವನ್ನು ಮನವರಿಕೆ ಮಾಡಿಕೊಡಲಾಯಿತು.

ಮಾನಂದವಾಡಿ ರಸ್ತೆಯ ರೈಲ್ವೆ ವಸ್ತು ಸಂಗ್ರಹಾಲಯಕ್ಕೆ ಭೇಟಿ ನೀಡಿ ರೈಲ್ವೆ ಬೋಗಿಗಳು, ಪರಿಕರಗಳು, ಲೋಕೋಮೋಟಿವ್ ಬೆಳವಣಿಗೆಗಳ ಛಾಯಾಚಿತ್ರಗಳು, ರೈಲ್ವೆ ಸಿಗ್ನಲ್, ಬ್ಯಾಟರಿ ಚಾಲಿತ ಮಿನಿ ರೈಲುಗಳ ಬಗ್ಗೆ ಮಾಹಿತಿ ನೀಡಲಾಯಿತು. ಈ ಮೂಲಕ ಮೈಸೂರಿನ ಪ್ರಮುಖ ವಸ್ತು ಸಂಗ್ರಹಾಲಯಗಳ ಬಗ್ಗೆ ಅರ್ಥಪೂರ್ಣ ಮಾಹಿತಿ ನೀಡಲಾಯಿತು. ಬಹಳಷ್ಟು ಮಕ್ಕಳು ವಸ್ತುಸಂಗ್ರಹಾಲಯದಲ್ಲಿ ನೀಡುತ್ತಿದ್ದ ವಿವರಣೆಯನ್ನು ಆಸಕ್ತಿಯಿಂದ ಪುಸ್ತಕದಲ್ಲಿ ದಾಖಲಿಸಿಕೊಂಡರು.

ಹಾಸನ ಮಿತ್ರ

27 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವು



ಅರಣ್ಯ ಅಧಿಕಾರಿಗಳ ನೇತೃತ್ವದಲ್ಲಿ ಒತ್ತುವರಿ ತೆರವು ಮಾಡಿದ ಸ್ಥಳದಲ್ಲಿ ಸಸಿ ನೆಟ್ಟು ಅರಣ್ಯ ಇಲಾಖೆ ಫಲಕ ಅಳವಡಿಸಲಾಯಿತು.

ಹಾಸನ, ಮೇ18– ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆಯಂತೆ ಭಾನುವಾರ ಬೆಳಿಗ್ಗೆ ಅರಣ್ಯಾಧಿಕಾರಿಗಳು ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ಬಾಗೂರು ಹೋಬಳಿಯ ಮಡಬ ಗ್ರಾಮದಲ್ಲಿ 27 ಎಕರೆ ಅರಣ್ಯ ಒತ್ತುವರಿ ತೆರವು ಮಾಡಿದ್ದಾರೆ.

ಮಡಬ ಗ್ರಾಮದ ಸರ್ವೆ ನಂ.27 ರಲ್ಲಿ ಸುಮಾರು 10 ಕೋಟಿಯಿಂದ 15 ಕೋಟಿ ಮೌಲ್ಯದ 26 ಎಕರೆ 33 ಗುಂಟೆ ಅರಣ್ಯ ಜಮೀನನ್ನು ಕೆಲವರು ಒತ್ತುವರಿ ಮಾಡಿ, ಅಲ್ಲಿದ್ದ ಮರಗಳನ್ನು ಕಡಿದು ತೋಟ ಮಾಡಿದ್ದರು. ಈ ಬಗ್ಗೆ ಅರಣ್ಯ ಇಲಾಖೆ ಕಚೇರಿಗೆ ದೂರು ಬಂದಿತ್ತು, ಅದನ್ನು ಆಧರಿಸಿ ಕಾನೂನು ರೀತ್ಯ ಕ್ರಮ ಜರುಗಿಸುವಂತೆ ಅಕ್ಟೋಬರ್ 23ರಂದು ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದರು.

ಈ ಜಮೀನು ಮೀಸಲು ಅರಣ್ಯವಾಗಿದ್ದು, ಅರಣ್ಯ ಒತ್ತುವರಿ ಮಾಡಿ ಮರ, ಗಿಡ ನಾಶ ಮಾಡಿ, ತೋಟ ಮಾಡಿದವರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ಅರಣ್ಯ ಇಲಾಖೆ ಅಧಿಕಾರಿಗಳು ಭಾನುವಾರ ಬೆಳಿಗ್ಗೆ ಜೆಸಿಬಿಯೊಂದಿಗೆ ಸ್ಥಳಕ್ಕೆ ತೆರಳಿ, ಅರಣ್ಯ ಭೂಮಿ ತೆರವು ಮಾಡಿದ್ದಾರೆ. ಸ್ಥಳೀಯ ಪ್ರಭೇದದ ಸಸಿಗಳನ್ನು ನೆಟ್ಟು ಇಲಾಖೆಯ ಫಲಕ ಹಾಕಿದ್ದಾರೆ.

ಕೆಲವು ವರ್ಷಗಳಿಂದ ಜಿಲ್ಲೆಯಲ್ಲಿ ಶುಂಠಿ ಬೆಳೆಯುವ ಹೆಸರಲ್ಲಿ ಕೆಲವರು ನಕಲಿ ದಾಖಲೆ ಸೃಷ್ಟಿಸಿಕೊಂಡು, ಅರಣ್ಯ ಭೂಮಿ ಕಬಳಿಸುತ್ತಿದ್ದು, ಬೆಲೆ ಬಾಳುವ ಮರ ಕಡಿದು ನಂತರ ತೋಟ ಮಾಡುತ್ತಿದ್ದಾರೆ. ಅರಣ್ಯ ಸಚಿವರ ಸೂಚನೆಯಂತೆ ಇಂತಹ ಅಕ್ರಮಗಳಿಗೆ ಕಡಿವಾಣ ಹಾಕಲಾಗುತ್ತಿದೆ ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ.

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಏಡುಕೊಂಡಲ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್‌ಕುಮಾರ್ ಹಾಗೂ ಅರಣ್ಯ ಅಧಿಕಾರಿಗಳು ಕಾರ್ಯಾಚರಣೆ ನೇತೃತ್ವ ವಹಿಸಿದ್ದರು. ಒತ್ತುವರಿ ತೆರವು ಮಾಡಿದ ಸ್ಥಳದಲ್ಲಿ ಸಸಿ ನೆಟ್ಟು ಅರಣ್ಯ ಇಲಾಖೆ ಫಲಕ ಅಳವಡಿಸಲಾಯಿತು.

ಈ ವರ್ಷ 200 ಪಾಲಿಕ್ಲಿನಿಕ್ ಹೊಸ ಕಟ್ಟಡಗಳಿಗೆ ಮಂಜೂರಾತಿ



ಹಾಸನ ಜಿಲ್ಲಾ ಪ್ರಾಣಿ ಪ್ರಯೋಗಾಲಯದ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಸಚಿವ ಕೆ.ವೆಂಕಟೇಶ್ ಮಾತನಾಡಿದರು.

ಹಾಸನ, ಮೇ 18– ಕಳೆದ ವರ್ಷ ತಾಲೂಕು ಮಟ್ಟದಲ್ಲಿ 20 ಪಾಲಿಕ್ಲಿನಿಕ್ ಪ್ರಾರಂಭ ಮಾಡಲಾಗಿದ್ದು, ಈ ವರ್ಷ 200 ಹೊಸ ಕಟ್ಟಡಕ್ಕೆ ಮಂಜೂರಾತಿ ದೊರೆತಿದೆ. 400 ವೈದ್ಯರನ್ನು ಗುತ್ತಿಗೆ ಆಧಾರದಲ್ಲಿ ತೆಗೆದುಕೊಳ್ಳಲಾಗಿದೆ. 700 ಡಿ ಗ್ರೂಪ್ ನೌಕರರನ್ನು ನೇಮಿಸಿಕೊಳ್ಳಲು ಈಗಾಗಲೇ ಟೆಂಡರ್ ಕರೆಯಲಾಗಿದೆ ಎಂದು ಪಶುಸಂಗೋಪನೆ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಸಹಯೋಗದಲ್ಲಿ ನಗರದ ಸಂತೇಪೇಟೆ ಸರ್ಕಲ್ ಬಳಿಯ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ಆರ್‌ಐಡಿಎಫ್ ಟ್ರಾಂಚ್ 28 ಯೋಜನೆಯಡಿ ಜಿಲ್ಲಾ ಪ್ರಾಣಿ ಪ್ರಯೋಗಾಲಯ (ಪಶು ರೋಗ ತನಿಖಾ ಪ್ರಯೋಗಾಲಯ ಮತ್ತು ಮಾಹಿತಿ ಕೇಂದ್ರ)ದ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ರಾಸುಗಳ ಸಾಕಾಣಿಕೆಯಲ್ಲಿ ದೇಶದಲ್ಲಿಯೇ ಕರ್ನಾಟಕ ರಾಜ್ಯ ಪ್ರಥಮ ಸ್ಥಾನದಲ್ಲಿದೆ. ರಾಜ್ಯದಲ್ಲಿ ಬೆಳಗಾವಿ ಜಿಲ್ಲೆ ಪ್ರಥಮ ಹಾಗೂ ಹಾಸನ ಜಿಲ್ಲೆ 2ನೇ ಸ್ಥಾನದಲ್ಲಿದೆ ಎಂದು ತಿಳಿಸಿದರು.

ರೈತರಿಗೆ ಅನುಕೂಲ ಕಲ್ಪಿಸುವ ಜವಾಬ್ದಾರಿ ನಮ್ಮ ಮೇಲಿದೆ. ಹೈನುಗಾರಿಕೆ ದಿನೇ ದಿನೆ ಬೆಳೆಯುತ್ತಿದೆ. ರೈತರಿಗೆ ಪ್ರಯೋಜನವಾಗಲಿ ಎಂದು ಈ ಪ್ರಯೋಗಾಲಯ ನಿರ್ಮಿಸಲಾಗುತ್ತಿದೆ. ಜಿಲ್ಲೆ ಜನತೆ ಇದರ ಸದುಪಯೋಗ ಪಡೆಯಬೇಕು ಎಂದರು.

ಗೃಹ ಮಂಡಳಿ ಅಧ್ಯಕ್ಷ, ಶಾಸಕ ಕೆ.ಎಂ.ಶಿವಲಿಂಗೇಗೌಡ ಮಾತನಾಡಿ, ಪಶು ಸಂಗೋಪನೆ ದೇಶದ ಹಾಗೂ ರೈತಾಪಿ ವರ್ಗದ ಆರ್ಥಿಕ ಅಭಿವೃದ್ಧಿಯಲ್ಲಿ ಮಹತ್ವದ ಸ್ಥಾನ ಪಡೆದಿದೆ. ಗ್ರಾಮೀಣ ಬಡ ಜನತೆ ಆರ್ಥಿಕ ನೆರವು ಇಲ್ಲದೇ ಹೈನುಗಾರಿಕೆ ಮಾಡಲು ಸಾಧ್ಯವಾಗುತ್ತಿಲ್ಲ. ಅವರಿಗೆ ಅನುಕೂಲ ಆಗುವಂತೆ ಬ್ಯಾಂಕ್‌ಗಳಲ್ಲಿ ಸಾಲ ಸೌಲಭ್ಯ ಒದಗಿಸಬೇಕು. ಜಾನುವಾರುಗಳಿಗೆ ಔಷಧಿ ಮತ್ತು ಚುಚ್ಚುಮದ್ದುಗಳನ್ನು ರಿಯಾಯಿತಿ ದರದಲ್ಲಿ ಒದಗಿಸಬೇಕು ಎಂದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಸಚಿವರು ಜನಸ್ನೇಹಿಯಾಗಿ ಕೆಲಸ ಮಾಡುತ್ತಿದ್ದಾರೆ. ಹಾಸನ ಜಿಲ್ಲೆಯಲ್ಲಿ ಹೊಸ ಪಶು ಚಿಕಿತ್ಸಾಲಯ ತೆರೆಯಲು ಹಾಗೂ ವೈದ್ಯರು ಮತ್ತು ಡಿ ಗ್ರೂಪ್ ನೌಕರರ ಕೊರತೆಯನ್ನು ನೀಗಿಸಲು ಮನವಿ ಮಾಡಿದರು.

ಮಹಾಪೌರ ಚಂದ್ರೇಗೌಡ ಎಂ. ಮಾತನಾಡಿದರು. ರಾಜ್ಯ ಕುಕ್ಕುಟ ಮಂಡಳಿ ಅಧ್ಯಕ್ಷ ಹರೀಶ್, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಆಯುಕ್ತೆ ರೂಪಾ, ನಿರ್ದೇಶಕ ಡಾ.ಮಂಜುನಾಥ್ ಪಾಳೆಗಾರ್, ಹೆಚ್ಚುವರಿ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ, ಅಧಿಕಾರಿಗಳು ಉಪಸ್ಥಿತರಿದ್ದರು.

ದೇವೇಗೌಡರ ಹುಟ್ಟುಹಬ್ಬ ಆಚರಣೆ



ಗಂಡಸಿ, ಮೇ18– ಗ್ರಾಮದೇವತೆಗಳಾದ ಉಡುಸಲಮ್ಮ, ಸೋಮೇಶ್ವರ ಸ್ವಾಮಿ, ಬೀರಲಿಂಗೇಶ್ವರಸ್ವಾಮಿ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ 93ನೇ ಹುಟ್ಟುಹಬ್ಬವನ್ನು ಶನಿವಾರ ರಾತ್ರಿ ಹೋಬಳಿಯ ಆಲದಹಳ್ಳಿಯಲ್ಲಿ ಆಚರಿಸಲಾಯಿತು.

ಕೇಕ್ ಕತ್ತರಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜೆಡಿಎಸ್ ಮುಖಂಡ ಎನ್.ಆರ್. ಸಂತೋಷ್, ಮಣ್ಣಿನ ಮಗ ದೇವೇಗೌಡರು ದೇಶದ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಕೆಲವೇ ದಿನಗಳಲ್ಲಿ ಕರ್ನಾಟಕ ಮಾತ್ರವಲ್ಲದೇ ರಾಷ್ಟ್ರಮಟ್ಟದಲ್ಲೂ ನೀರಾವರಿ ಸಮಸ್ಯೆಗಳನ್ನು ಪರಿಹರಿಸಿದ್ದಾರೆ. ಹಳ್ಳಿಯ ಕನ್ನಡಿಗ, ರೈತರ ಮಣ್ಣಿನ ಮಕ್ಕಳು ಸಹ ಪ್ರಧಾನಿ ಹುದ್ದೆ ನಿಭಾಯಿಸಬಲ್ಲರು ಎಂಬುದನ್ನು ತೋರಿಸಿದ್ದಾರೆ. ದೇಶ ಕಂಡ ಮುತ್ಸದ್ದಿ ರಾಜಕಾರಣಿ ದೇವೇಗೌಡರು ಆರೋಗ್ಯವಂತರಾಗಿ ಬಾಳಿ ಬದುಕಿ, ಯುವ ನಾಯಕರಿಗೆ ಮಾರ್ಗದರ್ಶನ ನೀಡಿ ಆಶೀರ್ವದಿಸಲಿ ಎಂದು ಪ್ರಾರ್ಥಿಸಿದರು.

ಈ ವೇಳೆ ಮುಖಂಡರಾದ ಗಂಗಾಧರ್, ಕುಮಾರ್, ವಕೀಲ ದೇವರಾಜು, ವಿಜಯ್, ಬಸವರಾಜು, ಮಂಜು, ಮುರುಳಿ, ಪುಟ್ಟರಾಜ್ ಮತ್ತು ಜೆಡಿಎಸ್ ಕಾರ್ಯಕರ್ತರು ಹಾಜರಿದ್ದರು.

ತಿರುಪತಿ ಸನ್ನಿಧಿಯಲ್ಲಿ ಹುಟ್ಟುಹಬ್ಬ ಆಚರಣೆ



ತಿರುಪತಿ ವೆಂಕಟೇಶ್ವರಸ್ವಾಮಿ ಸನ್ನಿಧಿಯಲ್ಲಿ ಮಾಜಿ ಸಚಿವ ಪುಟ್ಟರಾಜು ಅವರು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗೆ ಹುಟ್ಟುಹಬ್ಬದ ಶುಭಾಶಯ ಕೋರಿ, ದೇವೇಗೌಡರಿಗೆ ಹೆಚ್ಚಿನ ಆರೋಗ್ಯ ಆಯುಷ್ಯ ನೀಡಲೆಂದು ದೇವರಲ್ಲಿ ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಉಪಸ್ಥಿತರಿದ್ದರು.

ಅಣ್ಣೂರು ಗ್ರಾಮದ ಗದ್ದೆ ಬಯಲಿನಲ್ಲಿ ಚಿರತೆ: ಗ್ರಾಮಸ್ಥರ ಆತಂಕ



ಭಾರತೀನಗರ, ಮೇ 18– ಇಲ್ಲಿಗೆ ಸಮೀಪದ ಅಣ್ಣೂರು ಗ್ರಾಮದಲ್ಲಿ ಚಿರತೆ ಕಾಣಿಸಿಕೊಂಡಿದ್ದು, ಗ್ರಾಮಸ್ಥರು ಭಯಭೀತರಾಗಿದ್ದಾರೆ.

ಅಣ್ಣೂರು ಗ್ರಾಮದ ಮೂಡಕೆರೆ ರಸ್ತೆಯಲ್ಲಿನ ಪಟ್ಟೇಗೌಡರ ತಮ್ಮೇಗೌಡರ ಮಾವಿನಮರದ ಮೇಲೆ ಚಿರತೆ ಹಾಗೂ ಎರಡು ಮರಿಗಳು ರೈತರಿಗೆ ಕಾಣಿಸಿಕೊಂಡಿವೆ. ಇದಲ್ಲದೆ ವಿಸಿ ನಾಲಾ ಬಳಿಯ ದೊಡ್ಡ ಆಲದಮರ ಬಾವಿ ಹತ್ತಿರ ರಸ್ತೆಯ ಹೆಬ್ಬಾವಿನ ಬಳಿ ಚಿರತೆ ಕಾಣಿಸಿಕೊಂಡಿದೆ. ಇದರಿಂದ ಗಾಬರಿಗೊಂಡ ರೈತರು ಅರಣ್ಯ ಇಲಾಖಾಧಿಕಾರಿಗಳಿಗೆ ವಿಷಯ ಮುಟ್ಟಿಸಿದ್ದಾರೆ. ಸ್ಥಳಕ್ಕಾಗಮಿಸಿದ ಡಿಆರ್‌ಎಫ್ ಮುರುಳಿ ಹಾಗೂ ಸಿಬ್ಬಂದಿ ಗದ್ದೆ ಬಯಲು ಪ್ರದೇಶದಲ್ಲಿ ಪರಿಶೀಲನೆ ನಡೆಸಿದರು. ಮತ್ತೊಮ್ಮೆ ಚಿರತೆ ಕಾಣಿಸಿಕೊಂಡರೆ ರೈತರಾಗಲಿ ಅಥವಾ ಗ್ರಾಮಸ್ಥರಾಗಲಿ ವಿಷಯ ತಿಳಿಸಿದಲ್ಲಿ ಬೋನನ್ನು ಇಡಲಾಗುವುದು. ಅಲ್ಲಿಯವರೆಗೆ ಬೆಳಗಿನ ಜಾವ ಅಥವಾ ಸಂಜೆ ನಂತರ ರೈತರು ತಮ್ಮ ಹೊಲ ಗದ್ದೆಗಳಿಗೆ ಹೋಗುವುದನ್ನು ನಿಲ್ಲಿಸಬೇಕು. ಇದರಿಂದ ಮುಂದೆ ಉಂಟಾಗಬಹುದಾ ಅಪಾಯ ತಪ್ಪಲಿದೆ. ಆಗೊಂದು ವೇಳೆ ಹೋಗಲೇಬೇಕು ಎಂಬುವುದಾರೆ ಪಟಾಕಿಗಳನ್ನು ಸಿಡಿಸಿ ನಂತರ ಹೊಲ ಗದ್ದೆಗಳಿಗೆ ನೀರು ಹಾಯಿಸಲು ಹೋಗಬಹುದು ಎಂದು ತಿಳಿಸಿದ್ದಾರೆ.

ಕೆ.ಆರ್.ಪೇಟೆ ಕತ್ತರಘಟ್ಟ ಗ್ರಾಮದಲ್ಲಿ ನಿಗೂಢ ಪ್ರಕರಣ

ಸುಟ್ಟು ಕರಕಲಾದ ಹುಲ್ಲಿನ ಮೆದೆಯಲ್ಲಿ ಬೆಂದ ಸ್ಥಿತಿಯಲ್ಲಿ ಯುವಕನ ಶವ ಪತ್ತೆ

● ಮೃತ ಯುವಕನ ಜಮೀನಿನಲ್ಲಿ ಹುಲ್ಲಿನಮೆದೆ ಹಾಕಿಕೊಂಡು ತೊಂದರೆ ಕೊಡುತ್ತಿದ್ದ ವ್ಯಕ್ತಿ ● ಆರೋಪಿ ನಾಪತ್ತೆ, ಪೊಲೀಸರಿಂದ ಹುಡುಕಾಟ



ಮೃತ ಜಯಕುಮಾರ್ ಕುಟುಂಬ ಮತ್ತು ಗ್ರಾಮಸ್ಥರಿಂದ ಮಾಹಿತಿ ಪಡೆಯುತ್ತಿರುವ ಪೊಲೀಸರು.



ಜಯಕುಮಾರ್

ಕೆ.ಆರ್.ಪೇಟೆ, ಮೇ18– ತಾಲೂಕಿನ ಕತ್ತರಘಟ್ಟ ಗ್ರಾಮದಲ್ಲಿ ಸುಟ್ಟು ಬೂದಿಯಾದ ಹುಲ್ಲಿನ ಮೆದೆಯಲ್ಲಿ ದಲಿತ ಯುವಕನ ಶವವು ಬೆಂದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಈ ನಿಗೂಢ ಪ್ರಕರಣ ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ಕತ್ತರಘಟ್ಟ ಗ್ರಾಮದ ಜಯಕುಮಾರ್ ಎಂಬಾತನೇ ನಿಗೂಢ ರೀತಿಯಲ್ಲಿ ಸಾವನ್ನಪ್ಪಿದ ಯುವಕನಾಗಿದ್ದಾನೆ.

ಕತ್ತರಘಟ್ಟ ಗ್ರಾಮದ ಯುವಕ ಜಯಕುಮಾರ್ ಅವರಿಗೆ ಜಮೀನಿನಲ್ಲಿ ಅನಿಲ್ ಕುಮಾರ್ ಎಂಬಾತ ಹುಲ್ಲಿನ ಮೆದೆಯನ್ನು ಹಾಕಿಕೊಂಡು ಬೇಸಾಯ ಮಾಡಲು ಅವಕಾಶ ನೀಡದೆ ತೊಂದರೆ ನೀಡುತ್ತಿದ್ದನಂತೆ. ಈ ವಿಚಾರವಾಗಿ ಮೇ 15ರಂದು ಯುವಕ ಜಯಕುಮಾರ್ ಮತ್ತು ಅನಿಲ್ ಕುಮಾರ್ ನಡುವೆ ತೀವ್ರ ಮಾತಿನ ಚಕಮಕಿ ಹಾಗೂ ಪರಸ್ಪರ ಗಲಾಟೆಯಾಗಿತ್ತು. ನಾನು ಇಲ್ಲಿಂದ ಮೆದೆಯನ್ನು ಯಾವುದೇ ಕಾರಣಕ್ಕೂ ತೆರವುಗೊಳಿಸುವುದಿಲ್ಲ ಮದೆಗೆ ಬೆಂಕಿ ಹಾಕ್ತೀನಿ, ನೀನು ಬೇಕಾದರೆ ಬಿದ್ದು ಸಾಯಿ, ಇಲ್ಲದಿದ್ದರೆ ನಾನೇ ಬೆಂಕಿಯೊಳಗೆ ನೂಕಿ ನಿನ್ನನ್ನು ಸಾಯಿಸುತ್ತೇನೆ ಎಂದು ಬೆದರಿಕೆ ಹಾಕಿದ್ದನು, ಈ ಸಂಬಂಧ ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ಕೂಡ ದಾಖಲಾಗಿತ್ತು.

ಮೇ 17ರಂದು ಶನಿವಾರ ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಜಯಕುಮಾರ್ ಶವವು ಹುಲ್ಲಿನ ಮೆದೆಗೆ ಹೊತ್ತಿಕೊಂಡಿದ್ದ ಬೆಂಕಿಯಲ್ಲಿ ಬೆಂದು ಹೋದ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಶವಪತ್ತೆಯಾದ ಹಿನ್ನೆಲೆಯಲ್ಲಿ ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸರಿಗೆ ಮೃತ ಜಯಕುಮಾರ್ ಪತ್ನಿ ಲಕ್ಷ್ಮೀ ದೂರು ನೀಡಿ, ನನ್ನ ಪತಿಯ ಸಾವಿಗೆ ಅನಿಲ್ ಕುಮಾರ್ ಪ್ರಚೋದನೆ ಮತ್ತು ಬೆದರಿಕೆಯೇ ಮೂಲ ಕಾರಣವಾಗಿದೆ ಎಂದು ಆಪಾದಿಸಿದ್ದಾರೆ.

ಘಟನೆ ನಡೆದ ಬಳಿಕ ಆರೋಪಿ ಅನಿಲ್‌ಕುಮಾರ್ ತಲೆಮರೆಸಿಕೊಂಡಿದ್ದು ಆತನ ಪತ್ತೆಗಾಗಿ ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸರು ಶೋಧ ಕಾರ್ಯ ಕೈಗೊಂಡಿದ್ದಾರೆ.

ಸ್ಥಳಕ್ಕೆ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ್ ಬಾಲದಂಡಿ, ಉಪವಿಭಾಗಾಧಿಕಾರಿ ಕೆ.ಆರ್.ಶ್ರೀನಿವಾಸ್, ತಹಸೀಲ್ದಾರ್ ಡಾ.ಅಶೋಕ್, ನಾಗಮಂಗಲ ಡಿವೈಎಸ್ಪಿ ಚಲುವರಾಜು, ತಾಲೂಕು ಸಮಾಜ ಕಲ್ಯಾಣಾಧಿಕಾರಿ ಡಾ.ದಿವಾಕರ್, ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ಆನಂದೇಗೌಡ ಮತ್ತಿತರರು ಭೇಟಿ ನೀಡಿ ಪರಿಶೀಲನೆ ನಡೆಸಿ ಮೃತ ಕುಟುಂಬಕ್ಕೆ ಸಾಂತ್ವನ ಹೇಳಿದ್ದಾರೆ.

ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾದ ಮಾಜಿ ಜಿಲ್ಲಾಧ್ಯಕ್ಷ ಮಾಂಬಳ್ಳಿ ಜಯರಾಮ್, ತಾಲೂಕು ಛಲವಾದಿ ಮಹಾಸಭಾ ಅಧ್ಯಕ್ಷ ಊಚನಹಳ್ಳಿ ನಟರಾಜ್, ದಲಿತ ಮುಖಂಡರಾದ ಲಕ್ಷ್ಮಣರ ರಂಗಸ್ವಾಮಿ, ಕತ್ತರಘಟ್ಟ ರಾಜೇಶ್, ತೆಂಡೇಕೆರೆ ನಿಂಗಯ್ಯ, ಬಂಡಿಹೊಳೆ ರಮೇಶ್, ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ಆನಂದೇಗೌಡ ಇತರರು ಮೃತ ಜಯಕುಮಾರ್ ಪತ್ನಿಗೆ ಸಾಂತ್ವನ ಹೇಳಿದರು.

ಪೊಲೀಸ್ ಭದ್ರತೆಯಲ್ಲಿ ಇಂದು ಸಂಜೆ ಕತ್ತರಘಟ್ಟ ಗ್ರಾಮದಲ್ಲಿ ಮೃತ ಜಯಕುಮಾರ್ ಅಂತ್ಯಸಂಸ್ಕಾರವು ನಡೆಯಿತು.

ಹುಲ್ಲಿನ ಮೆದೆಗೆ ಬೆಂಕಿ ಹಾಕಿದವರು ಯಾರು? ಯುವಕ ಜಯಕುಮಾರ್ ಸಾವಿಗೆ ಯಾರು ಕಾರಣ, ಇದು ಕೊಲೆಯೇ, ಆತ್ಮಹತ್ಯೆಯೇ ಎಂಬುದು ತನಿಖೆಯಿಂದ ತಿಳಿದು ಬರಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬುದ್ಧಿಮಾಂದ್ಯ ಯುವತಿ ಮೇಲೆ ಅತ್ಯಾಚಾರ

ನಾಗಮಂಗಲದ ಬಳಿ ಪ್ರಶ್ನಿಸಲು ಮುಂದಾದ ಸಂತ್ರಸ್ತೆ ಕುಟುಂಬದ ಮೇಲೆ ದೌರ್ಜನ್ಯ

ನಾಗಮಂಗಲ: ತಾಲೂಕಿನ ಹೊನಕೆರೆ ಹೋಬಳಿ ಬೋಗಾದಿ ಪಂಚಾಯಿತಿ ವ್ಯಾಪ್ತಿಯ ಕರಿಕ್ಯಾತನಹಳ್ಳಿ ಗ್ರಾಮದಲ್ಲಿ ಬುದ್ಧಿಮಾಂದ್ಯ ಯುವತಿ ಮೇಲೆ ಅದೇ ಗ್ರಾಮದ ಪಕ್ಕದ ಮನೆಯ ನಿವಾಸಿ ಅತ್ಯಾಚಾರವೆಸಗಿದ್ದು, ಇದನ್ನು ಪ್ರಶ್ನಿಸಲು ಬಂದ ಸಂತ್ರಸ್ತೆಯ ಪೋಷಕರ ಮೇಲೆ ದೌರ್ಜನ್ಯದಿಂದ ವರ್ತಿಸಿದ ಘಟನೆ ಸಂಭವಿಸಿದೆ.

ಕರಿಕ್ಯಾತನಹಳ್ಳಿ ಗ್ರಾಮದ ನಿವಾಸಿ ಅಶೋಕ ಅಲಿಯಾಸ್ ಬಾಬು ಎಂಬುವರ ಮಗ ಪ್ರೀತಂ ಎಂಬಾತನೇ ಅತ್ಯಾಚಾರವೆಸಗಿದ ಆರೋಪಿ.

ಸಂತ್ರಸ್ತೆಯ ಪೋಷಕರು ತಮ್ಮ ಸಂಬಂಧಿಕರ ಅಂತ್ಯಕ್ರಿಯೆಗಾಗಿ ಶ್ರೀರಂಗಪಟ್ಟಣ ತಾಲೂಕಿನ ಗಣಂಗೂರು ಗ್ರಾಮಕ್ಕೆ ತೆರಳಿದ್ದರು. ಈ ವೇಳೆ ಆರೋಪಿ ಯುವತಿಯ ಮನೆಗೆ ನುಗ್ಗಿ ಆಕೆಯ ಮೇಲೆ ಹಲ್ಲೆ ನಡೆಸಿ ಅತ್ಯಾಚಾರ ಎಸಗಿದ್ದಾನೆ ಯುವತಿ ಜೋರಾಗಿ ಕಿರುಚಿಕೊಂಡಾಗ ಅಕ್ಕ–ಪಕ್ಕದ ಮನೆಯವರು ಬಂದು ಆಯ್ಕೆಯನ್ನು ಸಮಾಧಾನಪಡಿಸಿ ಆಕೆಯ ಪೋಷಕರಿಗೆ ವಿಷಯ ತಿಳಿಸಿದ್ದಾರೆ. ಈ ಮಧ್ಯೆ, ಆರೋಪಿ ಪರಾರಿಯಾಗಿದ್ದ.

ಇದರಿಂದ ಆತಂಕಗೊಂಡು ಮಾನಸಿಕವಾಗಿ ಜರ್ಜರಿತರಾದ ಸಂತ್ರಸ್ತೆಯ ಪೋಷಕರು ಪ್ರೀತಮ್ ಪೋಷಕರನ್ನು ಕೇಳಲು ಹೋದಾಗ ಆರೋಪಿಯ ತಾಯಿ, ತಂದೆ ಮತ್ತಿತರು ಸಂತ್ರಸ್ತೆ ಪೋಷಕರನ್ನು ನಿಂದಿಸಿ ಪೊಲೀಸರಿಗೆ ದೂರು ನೀಡಿದರೆ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಲಾಗಿದೆ.

ಘಟನೆ ಸಂಬಂಧ ನಾಗಮಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರೀತಮ್ ಸೇರಿದಂತೆ ನಾಲ್ವರ ವಿರುದ್ಧ ಎಸ್ಸಿ–ಎಸ್ಟಿ ದೌರ್ಜನ್ಯ ತಡೆ ಹಾಗೂ ಅತ್ಯಾಚಾರ ಪ್ರಕರಣ ದಾಖಲಾಗಿದೆ ಘಟನಾ ಸ್ಥಳಕ್ಕೆ ಪೊಲೀಸ್ ಡಿವೈಎಸ್ಪಿ ಚೆಲುವರಾಜು ಭೇಟಿ ನೀಡಿ ತನಿಖೆ ಆರಂಭಿಸಿದ್ದಾರೆ ಆರೋಪಿಗಳು ತಲೆಮರೆಸಿಕೊಂಡಿದ್ದಾರೆ.

ಘಟನಾ ಸ್ಥಳಕ್ಕೆ ಎಕೆಎಮ್‌ಎಸ್ ಸಂಘಟನೆಯ ರಾಜ್ಯ ಜಂಟಿ ಕಾರ್ಯದರ್ಶಿ ಹಾಗೂ ವಕೀಲರಾದ ಕಿರಣ್ ಕುಮಾರ್, ಮೈಸೂರು ಜಿಲ್ಲಾ ಮುಖಂಡ ರವಿಕುಮಾರ್, ಪಡುವಲ ಪಟ್ಟಣ ನಂಜುಂಡ ಶೆಟ್ಟಿ ಹಾಗೂ ಮಂಡ್ಯ ಜಿಲ್ಲಾ ಎಕೆಎಂಎಸ್ ಮುಖಂಡರಾದ ಸುರೇಶ್ ಭೇಟಿ ನೀಡಿ, ಗ್ರಾಮದಲ್ಲಿ ಸಭೆ ನಡೆಸಿ ಸಂತ್ರಸ್ತ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಸಿದ್ದಲಿಂಗ, ಡಿಎಸ್ಪಿ ಚೆಲುವರಾಜು ಮತ್ತಿತರೊಂದಿಗೆ ಚರ್ಚಿಸಿ ಕುಟುಂಬಕ್ಕೆ ಅಗತ್ಯ ಕಾನೂನು ಬೆಂಬಲ ಹಾಗೂ ಪರಿಹಾರ ಕ್ರಮವನ್ನು ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಅರ್ಜಿ ಆಹ್ವಾನ

ಮಂಡ್ಯ, ಮೇ 18– ತೋಟಗಾರಿಕೆ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ–ತಾಳೆಬೆಳೆ ಯೋಜನೆ, ರಾಷ್ಟ್ರೀಯ ತೋಟಗಾರಿಕೆ ಮಿಷನ್ ಈ ಎಲ್ಲಾ ಯೋಜನೆಗಳಿಗೆ ಸಾಮಾನ್ಯ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು, ವಿಶೇಷ ಚೇತನ ವರ್ಗದ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ, ಆಸಕ್ತ ರೈತರು ಜಿಲ್ಲೆಯ ಎಲ್ಲಾ ತೋಟಗಾರಿಕೆ ತಾಲೂಕು ಕಚೇರಿಗಳಿಗೆ ಅರ್ಜಿ ಸಲ್ಲಿಸುವುದು.

ಕೆ.ಆರ್.ಪೇಟೆಯಲ್ಲಿ ಹುಟ್ಟುಹಬ್ಬ ಆಚರಣೆ



ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹುಟ್ಟುಹಬ್ಬವನ್ನು ಕೆ.ಆರ್.ಪೇಟೆ ಶಾಸಕರಾದ ಹೆಚ್. ಟಿ.ಮಂಜು ನೇತೃತ್ವದಲ್ಲಿ ಪಟ್ಟಣದ ದುಂಡಶೆಟ್ಟಿ ಲಕ್ಷ್ಮಮ್ಮ ಸ್ಮಾರಕ ತಾಲೂಕು ಸರ್ಕಾರಿ ಆಸ್ಪತ್ರೆಯ ಎಲ್ಲಾ ಒಳ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಣೆ ಮಾಡಲಾಯಿತು.

ಪಾಂಡವಪುರದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹುಟ್ಟುಹಬ್ಬ ಆಚರಣೆ

ಪಾಂಡವಪುರ, ಮೇ 18– ಮಾಜಿ ಪ್ರಧಾನಿ, ಜೆಡಿಎಸ್ ಪಕ್ಷದ ವರಿಷ್ಠ ನಾಯಕರಾದ ಎಚ್.ಡಿ.ದೇವೇಗೌಡರ 93ನೇ ವರ್ಷದ ಹುಟ್ಟುಹಬ್ಬವನ್ನು ಜಿಪಂ ಮಾಜಿ ಸದಸ್ಯ ಸಿ. ಅಶೋಕ್ ಅವರ ನೇತೃತ್ವದಲ್ಲಿ ಜೆಡಿಎಸ್–ಬಿಜೆಪಿ ಕಾರ್ಯಕರ್ತರು, ಮುಖಂಡರು ದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ಆಸ್ಪತ್ರೆ ಒಳ–ಹೊರರೋಗಿಗಳಿಗೆ ಹಣ್ಣುಹಂಪಲು ವಿತರಿಸುವ ಮೂಲಕ ಆಚರಿಸಿದರು.

ಪಟ್ಟಣದ ಬನ್ನಾರಿಯ ಮಾರಮ್ಮ ದೇವಸ್ಥಾನದ ಬಳಿ ಜಮಾಯಿಸಿದ ಎನ್‌ಡಿಎ ಮೈತ್ರಿಕೂಟದ ಕಾರ್ಯಕರ್ತರು ಎಚ್.ಡಿ. ದೇವೇಗೌಡರ ಹೆಸರಿನಲ್ಲಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ತೆರಳಿ ರೋಗಿಗಳಿಗೆ ಹಣ್ಣುಹಂಪಲು ವಿತರಣೆ ಮಾಡಿ ತಮ್ಮ ನೆಚ್ಚಿನ ನಾಯಕನಿಗೆ ಶುಭಕೋರಿದರು.



ಎಚ್.ಡಿ.ದೇವೇಗೌಡರ ಹುಟ್ಟುಹಬ್ಬದ ಅಂಗವಾಗಿ ಜೆಡಿಎಸ್–ಬಿಜೆಪಿ ಪಕ್ಷದ ಕಾರ್ಯಕರ್ತರು ರೋಗಿಗಳಿಗೆ ಹಣ್ಣುಹಂಪಲು ವಿತರಿಸಿದರು.

ಜಿಪಂ ಮಾಜಿ ಸದಸ್ಯ ಸಿ.ಅಶೋಕ್ ಮಾತನಾಡಿ, ಕನ್ನಡ ನಾಡಿನ ಏಕೈಕ ಮಾಜಿ ಪ್ರಧಾನಿ, ನಮ್ಮ ಸರ್ವೋಚ್ಚ ನಾಯಕರು, ಹಿರಿಯರಾದ ಎಚ್.ಡಿ.ದೇವೇಗೌಡ ಅವರ ಹುಟ್ಟುಹಬ್ಬದ ಅಂಗವಾಗಿ ಎನ್‌ಡಿಎ ಮೈತ್ರಿಕೂಟದ ಕಾರ್ಯಕರ್ತರು, ಮುಖಂಡರು ಸೇರಿಕೊಂಡು ಬನ್ನಾರಿ ಮಾರಿಯಮ್ಮ ದೇವರಿಗೆ ವಿಶೇಷ ಪೂಜೆಸಲ್ಲಿಸಿ ಬಳಿಕ ರೋಗಿಗಳಿಗೆ ಹಣ್ಣುಹಂಪಲು ವಿತರಣೆ ಮಾಡಿದ್ದೇವೆ ಎಂದರು.

ಜಿಪಂ ಮಾಜಿ ಸದಸ್ಯ ಎಚ್.ಮಂಜುನಾಥ್ ಮಾತನಾಡಿ, ದೇವೇಗೌಡ ನೀರಾವರಿ ಹರಿಕಾರರು, ಜಿಲ್ಲೆ ಸೇರಿದಂತೆ ರಾಜ್ಯ, ದೇಶಕ್ಕೆ ಅವರ ಅಧಿಕಾರ ಅವಧಿಯಲ್ಲಿ ಅಪಾರವಾದ ಕೊಡುಗೆ ನೀಡಿದ್ದಾರೆ. ನಮ್ಮ ನಾಯಕರಾದ ಸಿ.ಎಸ್.ಪುಟ್ಟರಾಜು ಅವರನ್ನು ಮಾನಸ ಪುತ್ರರೆಂದು ಸ್ವೀಕರಿಸಿ ಅವರನ್ನು ರಾಜಕೀಯವಾಗಿ ಬೆಳೆಸುವ ಮೂಲಕ ಕ್ಷೇತ್ರಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ, ಇವರಿಗೆ ತಾಯಿ ಚಾಮುಂಡೇಶ್ವರಿ ಮತ್ತಷ್ಟು ಆಯಸ್ಸು, ಆರೋಗ್ಯ ದಯಪಾಲಿಸಲೆಂದು ಹಾರೈಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಎಸ್.ಎ.ಮಲ್ಲೇಶ್, ಧನಂಜಯ್, ಪಿ.ಚಲುವರಾಜು, ಗುರುಸ್ವಾಮಿ, ಪುರಸಭೆ ಅಧ್ಯಕ್ಷೆ ಜ್ಯೋತಿಲಕ್ಷ್ಮಿ ಉಪಾಧ್ಯಕ್ಷ ಅಶೋಕ್, ಟಿಎಪಿಸಿಎಂಎಸ್ ಅಧ್ಯಕ್ಷ ಡಿ.ಶ್ರೀನಿವಾಸ್ ರಾಮಕೃಷ್ಣೇಗೌಡ, ಲಿಂಗರಾಜು, ರಾಧಾಕೃಷ್ಣ ಆರ್.ಸೋಮಶೇಖರ್, ಶಿವಕುಮಾರ್, ಚಂದ್ರು, ಚಿಕ್ಕಾಡೆ ಪ್ರಸನ್ನಕುಮಾರ್, ಚೇತನ್, ಗಿರೀಶ್ ಸೇರಿದಂತೆ ಹಲವರು ಇದ್ದರು.

ಒಂದನೇ ಪುಟದಿಂದ

ಇಂದು ಲಿಂಕ್ ಬಿಡುಗಡೆ

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರೂ ಆದ ಸಮೀಕ್ಷೆಯ ಜಿಲ್ಲಾ ಸಂಚಾಲಕ ಬಿ.ರಂಗೇಗೌಡ, ನಾಳೆ (ಮೇ 19) ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ಸಂಬಂಧ ಲಿಂಕ್ ಬಿಡುಗಡೆ ಆಗಲಿದೆ. ಇಡೀ ರಾಜ್ಯಕ್ಕೆ ಸಂಬಂಧಿಸಿದಂತೆ ಈ ಲಿಂಕ್ ಬಿಡುಗಡೆಯಾಗಲಿದೆ ಎಂದು ತಿಳಿಸಿದರು.

ಕೆಲವು ಪ್ರಶ್ನೆಗಳ ಸಂಬಂಧ ಕಾಲಂ ಭರ್ತಿ ಮಾಡುವುದು ಕಡ್ಡಾಯ. ಅನೇಕ ಕಾಲಂಗಳಲ್ಲಿ ಗೊತ್ತಿಲ್ಲ ಎಂದು ನಮೂದಿಸಲು ಅವಕಾಶವಿದೆ. ಆನ್‌ಲೈನ್‌ನಲ್ಲಿ ಸ್ವಯಂ ಘೋಷಣೆ ಮಾಡಿಕೊಳ್ಳುವಾಗ, ಜಾತಿ ಪ್ರಮಾಣ ಪತ್ರದಲ್ಲಿರುವ 'ಆರ್‌ಡಿ ಸಂಖ್ಯೆ' ನಮೂದಿಸುವುದು ಕಡ್ಡಾಯ. ಮನೆ ಮನೆ ಸಮೀಕ್ಷೆ ವೇಳೆ ಆರ್‌ಡಿ ಸಂಖ್ಯೆ ನಮೂದಿಸುವುದು ಕಡ್ಡಾಯವಿಲ್ಲ. ಆದರೆ ಆನ್‌ಲೈನ್‌ನ ಸ್ವಯಂ ಘೋಷಣೆಯಲ್ಲಿ ಆರ್‌ಡಿ ಸಂಖ್ಯೆ ನಮೂದಿಸಲೇಬೇಕು ಎಂದರು. ಸಮೀಕ್ಷೆಯಲ್ಲಿ ಒಮ್ಮೆ ಮಾಹಿತಿಗಳನ್ನು ನಮೂದಿಸಿದ್ದರೆ ಮತ್ತೊಮ್ಮೆ ನಮೂದಿಸಲು ಸಾಧ್ಯವಿಲ್ಲ. ಏಕೆಂದರೆ ಸಮೀಕ್ಷಾ ಆಪ್ ಅದನ್ನು ತೆಗೆದುಕೊಳ್ಳುವುದಿಲ್ಲ. ಹಾಗಾಗಿ ಪುನರಾವರ್ತನೆಗೆ ಅವಕಾಶವಿಲ್ಲ. ಮನೆ ಮನೆ ಸಮೀಕ್ಷಾ ಕಾರ್ಯಕ್ಕಾಗಿ ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಕರನ್ನು ನೇಮಿಸಲಾಗಿದೆ. ಜಿಲ್ಲೆಯಲ್ಲಿ 3,500ಕ್ಕೂ ಹೆಚ್ಚು ಶಿಕ್ಷಕರನ್ನು ಗಣತಿದಾರರನ್ನಾಗಿ ನಿಯೋಜಿಸಲಾಗಿದೆ. ಗಣತಿದಾರರನ್ನು ಮೇಲ್ವಿಚಾರಣೆ ಮಾಡಲು 350 ಮಂದಿ ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ನಾಳೆ ಸಾಧನಾ ಸಮಾವೇಶ

ಆದರೆ ಅವರು ಯಶಸ್ವಿಯಾಗಲಿಲ್ಲ. ಈ ಬಾರಿಯೂ ಸಿದ್ದರಾಮಯ್ಯ ನಾಗೇಂದ್ರ ಅವರನ್ನು ಮತ್ತೆ ನೇಮಿಸಿದರೆ, ಅದು ತಪ್ಪು ಸಂದೇಶವನ್ನು ರವಾನಿಸುತ್ತದೆ. ಆದರೆ, ಆಗಸ್ಟ್‌ನಲ್ಲಿ ಸಂಪುಟ ಪುನರ್‌ರಚಿಸುವ ಸಾಧ್ಯತೆ ಹೆಚ್ಚಿದೆ ಎಂದು ಕಾಂಗ್ರೆಸ್ ನಾಯಕರೊಬ್ಬರು ಮಾಧ್ಯಮಕ್ಕೆ ತಿಳಿಸಿದ್ದಾರೆ. ಹೈಕಮಾಂಡ್ ಅನುಮೋದನೆ ಪಡೆದ ನಂತರ ಸಂಪುಟ ಪುನರ್‌ರಚನೆಯ ಸಮಯದಲ್ಲಿ ಕಾರ್ಯಕ್ಷಮತೆ ತೋರದ 12 ಸಚಿವರನ್ನು ಕೈಬಿಡುವ ಸಾಧ್ಯತೆಗಳಿವೆ ಎಂದು ಕಾಂಗ್ರೆಸ್ ನಾಯಕರೊಬ್ಬರು ಹೇಳಿದ್ದಾರೆ.

ಸರ್ಕಾರವು ಎರಡು ವರ್ಷಗಳನ್ನು ಪೂರೈಸುತ್ತಿರುವುದರಿಂದ ಸಂಪುಟ ಪುನರ್‌ರಚನೆಯಾಗುವ ಸಾಧ್ಯತೆಯಿದೆ. 2023 ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ನಾನು ಸಂಪುಟಕ್ಕೆ ಸೇರಲು ಸಾಧ್ಯವಾಗಲಿಲ್ಲ, ಈ ಬಾರಿ ಸೇರ್ಪಡೆಗೊಳ್ಳುವ ವಿಶ್ವಾಸವಿದೆ. ಆದರೆ ಈ ಬಗ್ಗೆ ಅಂತಿಮ ನಿರ್ಧಾರ ಸಿಎಂ ಮತ್ತು ಹೈಕಮಾಂಡ್‌ಗೆ ಬಿಟ್ಟದ್ದು ಎಂದು ಕಾಂಗ್ರೆಸ್ ಎಂಎಲ್‌ಸಿ ಸಲೀಮ್ ಅಹ್ಮದ್ ಹೇಳಿದ್ದಾರೆ. ಈ ಮಧ್ಯೆ, ಖಾಲಿ ಇರುವ ನಾಲ್ಕು ಎಂಎಲ್‌ಸಿ ಹುದ್ದೆಗಳಿಗೆ ಸಿಎಂ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಪ್ರಸ್ತಾಪಿಸಿದ ಹೆಸರುಗಳಿಗೆ ಹೈಕಮಾಂಡ್ ಇನ್ನೂ ಒಪ್ಪಿಗೆ ನೀಡಿಲ್ಲ ಹೀಗಾಗಿ, ಈ ಹುದ್ದೆಗಳಿಗೆ ಆಕಾಂಕ್ಷಿಗಳನ್ನು ಲಾಬಿ ಮುಂದುವರಿಸಿದ್ದಾರೆ. ಮೇ 20 ರ ಸಮಾವೇಶದ ಬಳಿಕ ಸಿಎಂ ಮತ್ತು ಡಿಸಿಎಂ ಈ ವಿಷಯದ ಬಗ್ಗೆ ಹೈಕಮಾಂಡ್ ನಾಯಕರ ಸಲಹೆಯನ್ನು ತೆಗೆದುಕೊಳ್ಳಲಿದ್ದು, ಒಂದು ವಾರದೊಳಗೆ ಖಾಲಿ ಇರುವ ಎಂಎಲ್‌ಸಿ ಹುದ್ದೆಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆಗಳಿವೆ ಎಂದು ಕಾಂಗ್ರೆಸ್ ಮೂಲಗಳು ಮಾಹಿತಿ ನೀಡಿವೆ. ಹೊಸಪೇಟೆ ಸಮಾವೇಶದ ನಂತರ, ಸರ್ಕಾರದ ಸಾಧನೆಗಳನ್ನು ಪ್ರದರ್ಶಿಸಲು ರಾಜ್ಯಾದ್ಯಂತ ಸರಣಿ ರ‍್ಯಾಲಿಗಳು ನಡೆಯುವ ಸಾಧ್ಯತೆಯಿದೆ.

ಐಎಂಎಫ್ ವಿಧಿಸಿರುವ 11 ಹೊಸ ಷರತ್ತುಗಳು

ಅರ್ಧ ವಾರ್ಷಿಕ ಅನಿಲ ಸುಂಕ ಹೊಂದಾಣಿಕೆ ಅಧಿಸೂಚನೆ: ಅನಿಲ ಬೆಲೆ ನಿಗದಿಯಲ್ಲಿ ವೆಚ್ಚ ಚೇತರಿಕೆ ಖಚಿತಪಡಿಸಿಕೊಳ್ಳಲು ಫೆಬ್ರವರಿ 2026 ರೊಳಗೆ ಸುಂಕ ಅಧಿಸೂಚನೆ ಹೊರಡಿಸುವ ಅಗತ್ಯವಿದೆ.

ಕ್ಯಾಪ್ಟಿವ್ ಪವರ್ ಲೆವಿ ಸುಗ್ರೀವಾಜ್ಞೆ ಕಾನೂನು: ಸಂಸತ್ತು ಮೇ ಅಂತ್ಯದ ವೇಳೆಗೆ ಈ ಸುಗ್ರೀವಾಜ್ಞೆಯನ್ನು ಶಾಶ್ವತಗೊಳಿಸಬೇಕು. ಇದು ಕೈಗಾರಿಕಾ ಇಂಧನ ಬಳಕೆಯನ್ನು ರಾಷ್ಟ್ರೀಯ ಗ್ರಿಡ್‌ಗೆ ವರ್ಗಾಯಿಸುವ ಗುರಿಯನ್ನು ಹೊಂದಿದೆ.

ಸಾಲ ಸೇವೆ ಸರ್‌ಚಾರ್ಜ್ ಮೇಲಿನ ಮಿತಿಯನ್ನು ತೆಗೆದುಹಾಕಿ: ಜೂನ್ ವೇಳೆಗೆ ಈ ಸರ್‌ಚಾರ್ಜ್ ಮೇಲಿನ ಪ್ರತಿ ಯೂನಿಟ್‌ಗೆ ರೂ 3.21 ಮಿತಿಯನ್ನು ತೆಗೆದು ಹಾಕಲು ಶಾಸನವನ್ನು ಅಂಗೀಕರಿಸಬೇಕು.

ವಿಶೇಷ ತಂತ್ರಜ್ಞಾನ ವಲಯ ಪ್ರೋತ್ಸಾಹಕಗಳಿಗಾಗಿ ಹಂತ–ಹಂತದ ಯೋಜನೆ: 2035 ರ ವೇಳೆಗೆ ಖಖಿಚ ಗಳು ಮತ್ತು ಇತರ ಕೈಗಾರಿಕಾ ಉದ್ಯಾನವನಗಳು/ವಲಯಗಳಿಗೆ ಎಲ್ಲಾ ಹಣಕಾಸಿನ ಪ್ರೋತ್ಸಾಹಕಗಳನ್ನು ತೆಗೆದುಹಾಕಲು ಪಾಕಿಸ್ತಾನವು 2025 ರ ಅಂತ್ಯದ ವೇಳೆಗೆ ಯೋಜನೆಯನ್ನು ಸಿದ್ಧಪಡಿಸಬೇಕು.

ಬಳಸಿದ ಕಾರು ಆಮದಿ ಹೇರಿದ ನಿರ್ಬಂಧ ತೆರವು: ಬಳಸಿದ ಕಾರುಗಳ ವಾಣಿಜ್ಯ ಆಮದಿನ ಮೇಲಿನ ಪರಿಮಾಣಾತ್ಮಕ ನಿರ್ಬಂಧಗಳನ್ನು (ಆರಂಭದಲ್ಲಿ ಐದು ವರ್ಷಗಳವರೆಗೆ) ತೆಗೆದುಹಾಕಲು ಜುಲೈ ಅಂತ್ಯದ ವೇಳೆಗೆ ಸಂಸತ್ತಿನಲ್ಲಿ ಶಾಸನ ರೂಪಿಸಿ.

ಅಭಿವೃದ್ಧಿ ವೆಚ್ಚ ಬದ್ಧತೆ: 17.6 ಟ್ರಿಲಿಯನ್ ರೂ. ಬಜೆಟ್‌ನಲ್ಲಿ, 1.07 ಟ್ರಿಲಿಯನ್ ರೂಗಳನ್ನು ಅಭಿವೃದ್ಧಿ ವೆಚ್ಚಕ್ಕಾಗಿ ಹಂಚಿಕೆ ಮಾಡುವ ಬದ್ಧತೆ ಷರತ್ತುಗಳನ್ನು ಪಾಕಿಸ್ತಾನಕ್ಕೆ ಐಎಂಎಫ್ ವಿಧಿಸಿದೆ

ಲಷ್ಕರ್ ಉಗ್ರ ಪಾಕ್‌ನಲ್ಲಿ ಹತ್ಯೆ

ನಡೆದಿದ್ದ ಗುಂಡಿನ ದಾಳಿ ಹಾಗೂ 2006ರಲ್ಲಿ ನಾಗ್ಪುರದ ಆರ್‌ಎಸ್‌ಎಸ್ ಪ್ರಧಾನ ಕಚೇರಿ ಮೇಲೆ ನಡೆದಿದ್ದ ದಾಳಿಗಳಿಗೆ ಖಾಲಿದ್ ಪ್ರಮುಖ ಸಂಚುಕೋರನಾಗಿದ್ದ. 5 ವರ್ಷಗಳ ಅವಧಿಯಲ್ಲಿ ನಡೆದಿದ್ದ ಈ ಮೂರು ದಾಳಿಗಳು ಹಲವಾರು ಜೀವಗಳನ್ನು ಬಲಿ ಪಡೆದಿದ್ದವು. ಇದಾದ ಬಳಿಕ ವಿನೋದ್ ಕುಮಾರ್ ಹೆಸರಿನಲ್ಲಿ ಖಾಲಿದ್ ಹಲವು ವರ್ಷಗಳ ಕಾಲ ನೇಪಾಳದಲ್ಲಿ ತಲೆ ಮರೆಸಿಕೊಂಡಿದ್ದ. ಅಲ್ಲಿಯೇ ನಗ್ಮಾ ಬಾನು ಎಂಬ ಮಹಿಳೆಯನ್ನು ವಿವಾಹವಾಗಿದ್ದ. ನಕಲಿ ಗುರುತು ಹೊಂದಿದ್ದ ಖಾಲಿದ್ ಆಗಾಗ್ಗೆ ಭಾರತಕ್ಕೆ ಬಂದು ಲಷ್ಕರ್ ಸಂಘಟನೆಯ ಉಗ್ರ ಚಟುವಟಿಕೆಗಳನ್ನು ಸಂಘಟಿಸುತ್ತಿದ್ದ ನೇಮಕಾತಿ ಮತ್ತು ಲಾಜಿಸ್ಟಿಕ್ಸ್‌ನಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದ ಎಂದು ವರದಿಗಳಿಂದ ತಿಳಿದುಬಂದಿದೆ. ಇತ್ತೀಚೆಗೆ ಖಾಲಿದ್ ನೇಪಾಳ ಬಿಟ್ಟು ಸಿಂಧ್ ಪ್ರಾಂತ್ಯದ ಬಾದಿನ್ ಜಿಲ್ಲೆಯ ಮತ್ಲಿಗೆ ಗ್ರಾಮದಲ್ಲಿ ನೆಲೆಸಿದ್ದ. ಅಲ್ಲಿ ನಿಷೇಧಿತ ಜಮಾತ್–ಉದ್–ದವಾ ಉಗ್ರ ಸಂಘಟನೆಯಲ್ಲಿ ಕೆಲಸ ಮಾಡುತ್ತಿದ್ದ. ಭಯೋತ್ಪಾದಕ ಚಟುವಟಿಕೆಗೆ ಯುವಕರನ್ನು ನೇಮಿಸಿಕೊಳ್ಳುವುದು ಮತ್ತು ನಿಧಿ ಸಂಗ್ರಹಿಸುವ ಕೆಲಸದಲ್ಲಿ ತೊಡಗಿದ್ದ ಎನ್ನಲಾಗಿದೆ.

ಕದನ ವಿರಾಮ ಮುಂದುವರಿಯಲಿದೆ

ಯಾವುದೇ ಮುಕ್ತಾಯ ದಿನಾಂಕವಿಲ್ಲ ಎಂದು ಹೇಳಿದರು. ಭಾನುವಾರ ಉಭಯ ದೇಶಗಳ ಡಿಜಿಎಂಒಗಳ ನಡುವೆ ಯಾವುದೇ ಹೊಸ ಮಾತುಕತೆ ನಿಗದಿಯಾಗಿಲ್ಲ ಎಂದು ಇದೇ ವೇಳೆ ಸ್ಪಷ್ಟಪಡಿಸಿದರು. ಮೇ 12 ರಂದು ಹೇಳಿಕೆ ನೀಡಿದ್ದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಾಕಿಸ್ತಾನದ ಭಯೋತ್ಪಾದಕ ಮತ್ತು ಮಿಲಿಟರಿ ತಾಣಗಳ ಮೇಲಿನ ನಮ್ಮ ದಾಳಿಯನ್ನು ಸದ್ಯಕ್ಕಷ್ಟೇ ನಿಲ್ಲಿಸಿದ್ದೇವೆ. ನೆರೆಯ ರಾಷ್ಟ್ರದ ಯಾವುದೇ ಪರಮಾಣು ಬೆದರಿಕೆಗಳು ಅಥವಾ ಬ್ಲ್ಯಾಕ್‌ಮೇಲಿಂಗ್ ಅನ್ನು ಸಹಿಸಲಾಗುವುದಿಲ್ಲ, ಭಾರತದಲ್ಲಿ ಭಯೋತ್ಪಾದಕ ದಾಳಿಗಳನ್ನು ಸಹಿಸುವುದಿಲ್ಲ. ಇದಕ್ಕೆ ಸೂಕ್ತ ಪ್ರತಿಕ್ರಿಯೆಯನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದ್ದರು.

8 ಮಕ್ಕಳು ಸೇರಿ 17 ಮಂದಿ ಸಾವು

ತೀವ್ರಗೊಳಿಸಲು ನಾನು ಅಧಿಕಾರಿಗಳಿಗೆ ಆದೇಶಿಸಿದ್ದೇನೆ. ಮೃತಪಟ್ಟವರ ಕುಟುಂಬಗಳಿಗೆ ಸರ್ಕಾರ ಸಾಧ್ಯವಿರುವ ಎಲ್ಲಾ ಬೆಂಬಲವನ್ನು ನೀಡುತ್ತದೆ ಎಂದು ಅವರು ಭರವಸೆ ನೀಡಿದರು. ಕೇಂದ್ರ ಕಲ್ಲಿದ್ದಲು ಸಚಿವ ಮತ್ತು ಹೈದರಾಬಾದ್ ಸಂಸದ ಜಿ. ಕಿಶನ್ ರೆಡ್ಡಿ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದರು. ಅವರು ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿ ಬೆಂಕಿಯ ಕಾರಣ ಮತ್ತು ನಡೆಯುತ್ತಿರುವ ರಕ್ಷಣಾ ಪ್ರಯತ್ನಗಳ ಬಗ್ಗೆ ವಿಚಾರಿಸಿದರು.

ಪ್ರಧಾನಿ ಪರಿಹಾರ ಘೋಷಣೆ: ಪ್ರಧಾನಿ ನರೇಂದ್ರ ಮೋದಿ ಅವರು ಬೆಂಕಿಯಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸಿ ಮೃತರ ಪ್ರತಿ ಕುಟುಂಬಕ್ಕೆ ಪ್ರಧಾನ ಮಂತ್ರಿ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ಘೋಷಿಸಿದ್ದಾರೆ.



ತೆಲಂಗಾಣದ ಹೈದರಾಬಾದ್‌ನಲ್ಲಿ ಸಂಭವಿಸಿದ ಬೆಂಕಿ ದುರಂತದಿಂದ ಜೀವ ಹಾನಿಯಿಂದ ತೀವ್ರ ದುಃಖಿತನಾಗಿದ್ದೇನೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸುತ್ತೇನೆ. ಗಾಯಾಳುಗಳು ಶೀಘ್ರದಲ್ಲೇ ಚೇತರಿಸಿಕೊಳ್ಳಲಿ. ಮೃತರ ಪ್ರತಿ ಕುಟುಂಬಕ್ಕೂ 2 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಗಾಯಾಳುಗಳಿಗೆ 50,000 ರೂ. ಪರಿಹಾರ ನೀಡಲಾಗುವುದು ಎಂದು ತಿಳಿಸಿದ್ದಾರೆ ಪ್ರಾಥಮಿಕ ತನಿಖೆಯಲ್ಲಿ ಶಾರ್ಟ್ ಸರ್ಕ್ಯೂಟ್ ಬೆಂಕಿಗೆ ಕಾರಣವಾಗಿರಬಹುದು ಎಂದು ತಿಳಿದುಬಂದಿದೆ. ಘಟನೆಯ ನಿಖರವಾದ ಕಾರಣವನ್ನು ಕಂಡುಹಿಡಿಯಲು ವಿವರವಾದ ತನಿಖೆ ನಡೆಯುತ್ತಿದೆ.

11 ಹೊಸ ಷರತ್ತು ವಿಧಿಸಿದ ಐಎಂಎಫ್

ನೀಡುವ ಹಣವೂ ಭಯೋತ್ಪಾದನೆಗೆ ಬಳಕೆಯಾಗಬಹುದು. ಹೀಗಾಗಿ ಐಎಂಎಫ್ ಪಾಕಿಸ್ತಾನಕ್ಕೆ ನೆರವು ನೀಡುವುದನ್ನು ನಿಲ್ಲಿಸಬೇಕು ಎಂದು ಭಾರತ ಐಎಂಎಫ್‌ಗೆ ಒತ್ತಡ ಹೇರಿದೆ. ಈ ಹಿನ್ನೆಲೆಯಲ್ಲಿ ಈಗ ಐಎಂಎಫ್ ಮುಂದೆ ಸಹಾಯಕ್ಕಾಗಿ ಮಂಡಿಯೂರಿ ಕುಳಿತಿರುವ ಪಾಕಿಸ್ತಾನಕ್ಕೆ ಹಣ ನೀಡುವುದಕ್ಕೆ ಹಲವು ಷರತ್ತುಗಳನ್ನು ಹೇರಿದೆ. ಐಎಂಎಫ್ ಪಾಕಿಸ್ತಾನಕ್ಕೆ ವಿಧಿಸಿರುವ ಷರತ್ತುಗಳಲ್ಲಿ ಮೊದಲನೇಯದಾಗಿ ಪಾಕಿಸ್ತಾನವು 17.6 ಟ್ರಿಲಿಯನ್ ರೂಪಾಯಿಗಳ ಬಜೆಟ್‌ಗೆ ಸಂಸತ್ತಿನ ಅನುಮೋದನೆ ಪಡೆಯಬೇಕು. ವಿದ್ಯುತ್ ಬಿಲ್‌ಗಳ ಮೇಲೆ ಹೆಚ್ಚಿನ ಸಾಲ ಸೇವಾ ಸರ್‌ಚಾರ್ಜ್‌ಗಳನ್ನು ಜಾರಿಗೆ ತರುವುದು ಮತ್ತು ಮೂರು ವರ್ಷಗಳಿಗಿಂತ ಹಳೆಯದಾದ ಬಳಸಿದ ಕಾರುಗಳ ಆಮದಿನ ಮೇಲಿನ ನಿರ್ಬಂಧಗಳನ್ನು ತೆಗೆದುಹಾಕುವುದು ಕೂಡ ಸೇರಿದೆ.

ಸ್ಪಿನ್ನರ್ ಹರಪ್ರೀತ್ ಬ್ರಾರ್ ಕೈಚಳಕ: ಆರ್‌ಆರ್ ವಿರುದ್ಧ ಪಂಜಾಬ್ ಕಿಂಗ್ಸ್‌ಗೆ 10 ರನ್‌ಗಳ ರೋಚಕ ಗೆಲುವು



ಜೈಪುರ, ಮೇ 18(ಎಂಕೆ)– ಎಡಗೈ ಸ್ಪಿನ್ನರ್ ಹರಪ್ರೀತ್ ಬ್ರಾರ್ ಅವರ ಕೈಚಳಕದೊಂದಿಗೆ ರಾಜಸ್ಥಾನ್ ರಾಯಲ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ 10 ರನ್‌ಗಳ ಭರ್ಜರಿ ಜಯದೊಂದಿಗೆ ಪ್ಲೇ ಆಫ್ ತಲುಪಿದೆ.

ಇಲ್ಲಿನ ಸವಾಯಿ ಮಾನ್‌ಸಿಂಗ್ ಸ್ಟೇಡಿಯಂನಲ್ಲಿ ಭಾನುವಾರ ನಡೆದ ಮೊದಲ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿದ ಪಂಜಾಬ್ ಕಿಂಗ್ಸ್ ನಿಗದಿತ 20 ಓವರ್‌ಗಳಲ್ಲಿ 5 ನಷ್ಟಕ್ಕೆ 219 ರನ್ ಗಳಿಸಿತು.

ಅರ್ಧ ಶತಕ ದಾಖಲಿಸಿದ ನೇಹಲ್ ವಧೇರಾ, 37 ಎಸೆತಗಳಲ್ಲಿ 5 ಬೌಂಡರಿ, 5 ಸಿಕ್ಸ್ ಸಹಿತ 70 ರನ್ ಗಳಿಸಿದರೆ, ಶಶಾಂಕ್ ಸಿಂಗ್, 30 ಎಸೆತಗಳಲ್ಲಿ 5 ಬೌಂಡರಿ, 3 ಸಿಕ್ಸ್ ಸಹಿತ ಅಜೇತ 59 ರನ್ ಬಾರಿಸಿದರು. ಉಳಿದಂತೆ ನಾಯಕ ಶ್ರೇಯಸ್ ಅಯ್ಯರ್ 30 ರನ್, ಅಜ್ಮತುಲ್ಲಾ ಓಮರ್ಜೈ ಹಾಗೂ ಪ್ರಭಸಿಮ್ರನ್ ಸಿಂಗ್ ತಲಾ 21 ರನ್ ಗಳಿಸುವ ಮೂಲಕ ತಂಡ ಮೊತ್ತ ಇನ್ನೂರರ ಗಡಿ ದಾಟಲು ನೆರವಾದರು.

220 ರನ್‌ಗಳ ಗುರಿ ಬೆನ್ನತ್ತಿದ್ದ ರಾಜಸ್ಥಾನ್ ರಾಯಲ್ಸ್ ನಿಗದಿತ 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 209 ರನ್ ಗಳಿಸಷ್ಟೇ ಶಕ್ತವಾಯಿತು. ಆರಂಭಿಕರಾದ ಯಶಸ್ವಿ ಜೈಸ್ವಾಲ್ 25 ಎಸೆತಗಳಲ್ಲಿ 9 ಬೌಂಡರಿ, 1 ಸಿಕ್ಸ್ 50 ರನ್ ಗಳಿಸಿದರೆ, ವೈಭವ್ ಸೂರ್ಯವಂಶಿ ಕೇವಲ 15 ಎಸೆತಗಳಲ್ಲಿ 4 ಬೌಂಡರಿ, 4 ಭರ್ಜರಿ ಸಿಕ್ಸರ್ ಸಹಿತ 40 ರನ್ ಚಚ್ಚಿದರು. ಈ ಜೋಡಿ ಮೊದಲ ವಿಕೆಟ್ 76 ಜೊತೆಯಾಟದೊಂದಿಗೆ ಉತ್ತಮ ಆರಂಭ ನೀಡಿತು. ನಂತರ ಧ್ರುವ ಜುರೇಲ್ 31 ಎಸೆತಗಳಲ್ಲಿ 3 ಬೌಂಡರಿ, 4 ಸಿಕ್ಸ್ ಸಹಿತ 53 ರನ್‌ಗಳಿಸಿ, ಗೆಲುವಿಗೆ ಹೋರಾಟ ನಡೆಸಿದರಾದರೂ ಅಂತಿಮವಾಗಿ 10 ರನ್‌ಗಳ ಸೋಲು ಅನುಭವಿಸುವಂತಾಯಿತು.

ಬ್ರಾರ್ ಕೈಚಳಕ: ಪಂಜಾಬ್ ಕಿಂಗ್ಸ್ ತಂಡದ ನಾಯಕ ಶ್ರೇಯಸ್ ಅಯ್ಯರ್ ಅವರಿಗೆ ಸಬ್‌ಸ್ಟಿಟ್ಯೂಟ್ ಆಗಿ ಕಣಕ್ಕಿಳಿದ ಎಡಗೈ ಸ್ಪಿನ್ನರ್ ಹರಪ್ರೀತ್ ಬ್ರಾರ್, ಪ್ರಮುಖ 3 ವಿಕೆಟ್‌ಗಳನ್ನು ಪಡೆಯುವ ಮೂಲಕ ತಂಡಕ್ಕೆ ಜಯ ತಂದರು. ಆರಂಭಿಕರಾದ ಯಶಸ್ವಿ ಜೈಸ್ವಾಲ್, ವೈಭವ್ ಸೂರ್ಯವಂಶಿ ಹಾಗೂ ರಿಯಾನ್ ಪರಾಗ್ ಅವರ ವಿಕೆಟ್ ಕಬಳಿಸುವ ಮೂಲಕ ಪಂದ್ಯಕ್ಕೆ ರೋಚಕ ತಿರುವು ನೀಡಿದ ಹರಪ್ರೀತ್ ಬ್ರಾರ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಆರ್‌ಸಿಬಿ, ಗುಜರಾತ್, ಪಂಜಾಬ್ ಪ್ಲೇಆಫ್‌ಗೆ ಎಂಟ್ರಿ

ಜಿಟಿ ವಿರುದ್ಧ ಡೆಲ್ಲಿಗೆ ಸೋಲು



ನವದೆಹಲಿ, ಮೇ 18– ಸಾಯಿ ಸುದರ್ಶನ್ ಅವರ ಭರ್ಜರಿ ಶತಕ ಹಾಗೂ ಶುಭಮನ್ ಗಿಲ್ ಅವರ ಆಕರ್ಷಕ ಅರ್ಧಶತಕದ ನೆರವಿನಿಂದ ಗುಜರಾತ್ ಟೈಟಾನ್ಸ್ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 10 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಆ ಮೂಲಕ 18ನೇ ಆವೃತ್ತಿಯ ಐಪಿಎಲ್‌ನಲ್ಲಿ ಗುಜರಾತ್ 12 ರಲ್ಲಿ 9 ಪಂದ್ಯ ಗೆದ್ದು 18 ಅಂಕ, ಆರ್‌ಸಿಬಿ ಹಾಗೂ ಪಂಜಾಬ್ 12ರಲ್ಲಿ ತಲಾ 8 ಪಂದ್ಯ ಗೆದ್ದು 17 ಅಂಕಗಳೊಂದಿಗೆ ಪ್ಲೇ ಆಫ್‌ಗೆ ಎಂಟ್ರಿ ಕೊಟ್ಟಿವೆ. ಅಲ್ಲದೇ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ 10ನೇ ಬಾರಿಗೆ ಪ್ಲೇ ಆಫ್ ಪ್ರವೇಶಿಸಿದರೇ, ಗುಜರಾತ್ ಟೈಟಾನ್ಸ್ 3ನೇ ಬಾರಿಗೆ ಹಾಗೂ ಪಂಜಾಬ್ ಕಿಂಗ್ಸ್ 11 ವರ್ಷಗಳ ಬಳಿಕ ಪ್ಲೇ ಆಫ್‌ಗೆ ಅರ್ಹತೆ ಪಡೆದುಕೊಂಡಿದೆ.

2022ರಲ್ಲಿ ಐಪಿಎಲ್‌ಗೆ ಪದಾರ್ಪಣೆ ಮಾಡಿದ್ದ ಗುಜರಾತ್ ಟೈಟಾನ್ಸ್ ಆರಂಭಿಕ 2 ಆವೃತ್ತಿಗಳಲ್ಲಿ ಆವೃತ್ತಿಗಳಲ್ಲೂ ಹಾರ್ದಿಕ್ ಪಾಂಡ್ಯ ನಾಯಕತ್ವದಲ್ಲಿ ಪ್ಲೇ ಆಫ್ ಪ್ರವೇಶಿಸಿತ್ತು. ಆದ್ರೆ 2024ರ ಆವೃತ್ತಿಯಲ್ಲಿ ಶುಭಮನ್ ಗಿಲ್ ನಾಯಕತ್ವದಲ್ಲಿ ಟೈಟಾನ್ಸ್ ಪಡೆ ಲೀಗ್ ಸುತ್ತಿನಲ್ಲೇ ಹೊರಬಿದ್ದಿತ್ತು. ಇನ್ನೂ 2014 ರಲ್ಲಿ ಕೊನೆಯ ಬಾರಿಗೆ ಪ್ಲೇ ಆಫ್ ಪ್ರವೇಶಿಸಿದ್ದ ಪಂಜಾಬ್ ಕಿಂಗ್ಸ್ ಇದೀಗ 11 ವರ್ಷಗಳ ಬಳಿಕ ಶ್ರೇಯಸ್ ಅಯ್ಯರ್ ನಾಯಕತ್ವದಲ್ಲಿ ಪ್ಲೇ ಆಫ್‌ಗೆ ಎಂಟ್ರಿ ಕೊಟ್ಟಿದೆ. ಉಳಿದ ಒಂದು ಸ್ಥಾನಕ್ಕಾಗಿ ಮುಂಬೈ ಇಂಡಿಯನ್ಸ್, ಡೆಲ್ಲಿ ಕ್ಯಾಪಿಟಲ್ಸ್, ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಪೈಪೋಟಿ ನಡೆಸಲಿವೆ.

ಇಲ್ಲಿನ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 199 ರನ್ ಗಳಿಸಿತು. 200 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಗುಜರಾತ್ ವಿಕೆಟ್ ನಷ್ಟವಿಲ್ಲದೇ 19 ಓವರ್‌ಗಳಲ್ಲಿ ಗುರಿ ತಲುಪುವಲ್ಲಿ ಯಶಸ್ವಿಯಾಯಿತು.

ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಸಾಯಿ ಸುದರ್ಶನ್ ಹಾಗೂ ಶುಭಮನ್ ಗಿಲ್ ಮೊದಲ ವಿಕೆಟ್‌ಗೆ 205 ರನ್ ಗಳಿಸುವ ಮೂಲಕ ತಂಡಕ್ಕೆ ಜಯ ತಂದುಕೊಟ್ಟರು. ಪಂದ್ಯದಲ್ಲಿ ಡೆಲ್ಲಿ ಬೌಲರ್‌ಗಳನ್ನು ಮನಬಂದಂತೆ ದಂಡಿಸಿದ ಸಾಯಿ ಸುದರ್ಶನ್ 61 ಎಸೆತಗಳಲ್ಲಿ 12 ಬೌಂಡರಿ, 4 ಸಿಕ್ಸರ್ ಒಳಗೊಂಡ ಅಜೇಯ 108 ರನ್ ಗಳಿಸಿದರೇ, ಗಿಲ್ 53 ಎಸೆತಗಳಲ್ಲಿ 7 ಸಿಕ್ಸರ್, 3 ಬೌಂಡರಿ ಒಳಗೊಂಡ ಅಜೇಯ 93 ರನ್ ಗಳಿಸಿದರು.

ಇದಕ್ಕೂ ಮುನ್ನಾ, ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ಪರ ಆರಂಭದಿಂದಲೂ ಅಬ್ಬರದ ಆಟ ಆಡಿದ ಕೆ.ಎಲ್.ರಾಹುಲ್ 65 ಎಸೆತಗಳಲ್ಲಿ 14 ಬೌಂಡರಿ, 4 ಸಿಕ್ಸರ್ ಒಳಗೊಂಡ ಅಜೇಯ 112 ರನ್ ಗಳಿಸುವ ಮೂಲಕ ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ಉಳಿದಂತೆ ಫಾಫ್ ಡುಪ್ಲೆಸಿಸ್ 5, ಅಭಿಷೇಕ್ ಪೋರೆಲ್ 30, ಅಕ್ಷರ್ ಪಟೇಲ್ 25 ರನ್ ಬಾರಿಸಿ ನಿರ್ಗಮಿಸಿದರು. ಟ್ರಿಸ್ಟನ್ ಸ್ಟಬ್ಸ್ 25 ರನ್‌ಗಳ ಕೊಡುಗೆ ನೀಡಿದರು. ಗುಜರಾತ್ ಪರ ಅರ್ಷದ್ ಖಾನ್, ಪ್ರಸಿದ್ಧ್ ಕೃಷ್ಣ, ರಶೀದ್ ಖಾನ್ ತಲಾ ಒಂದೊಂದು ವಿಕೆಟ್ ಕಬಳಿಸಿದರು. ಸಾಯಿ ಸುದರ್ಶನ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಮುಡಾ 'ಎಂಡಿಎ' ಆದ ಬಗ್ಗೆ ಮಿಶ್ರ ಪ್ರತಿಕ್ರಿಯೆ

ಹಗರಣ ಮರೆಮಾಚುವ ನಿಟ್ಟಿನಲ್ಲಿ ಹೆಸರು ಬದಲಾವಣೆ ತಂತ್ರ!

ಮೈಸೂರು, ಮೇ 18(ಪಿಎಂ, ಎಸ್‌ಬಿಡಿ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಇದೀಗ 'ಮೈಸೂರು ಅಭಿವೃದ್ಧಿ ಪ್ರಾಧಿಕಾರ(ಎಂಡಿಎ)'ವಾಗಿ ರೂಪಾಂತರಗೊಂಡಿದೆ. ಮೈಸೂರು ನಗರದ ವ್ಯವಸ್ಥಿತ ಅಭಿವೃದ್ಧಿ ದೃಷ್ಟಿಯಿಂದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು 1904ರಲ್ಲಿ ಸ್ಥಾಪಿಸಿದ 'ನಗರಾಭಿವೃದ್ಧಿ ವಿಶ್ವಸ್ಥ ಮಂಡಳಿ (ಸಿಐಟಿಬಿ)'ಯು 1988ರಲ್ಲಿ 'ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ'ವಾಗಿ ಬದಲಾಗಿತ್ತು. ಇದೀಗ ರಾಜ್ಯ ಸರ್ಕಾರದ ಅಧಿಸೂಚನೆಯಂತೆ ಮೊನ್ನೆಯಷ್ಟೇ 'ಮೈಸೂರು ಅಭಿವೃದ್ಧಿ ಪ್ರಾಧಿಕಾರ' ಸ್ಥಾಪಿತವಾಗಿದೆ. ಈ ಮೂಲಕ ಪ್ರಾಧಿಕಾರವನ್ನು ಸಂಪೂರ್ಣ ಸರ್ಕಾರದ ಹಿಡಿತಕ್ಕೆ ಪಡೆದಂತಾಗಿದೆ. ಸರ್ಕಾರದ ಈ ಕ್ರಮದ ಬಗ್ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ.



ಇದು ಒಳ್ಳೆಯ ಬೆಳವಣಿಗೆ ಅಲ್ಲ

'ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)'ವನ್ನು 'ಮೈಸೂರು ಅಭಿವೃದ್ಧಿ ಪ್ರಾಧಿಕಾರ'ವಾಗಿ ಬದಲಾಯಿಸಿರುವುದು ಒಳ್ಳೆಯ ಬೆಳವಣಿಗೆ ಅಲ್ಲ. ಶಾಸಕರು, ಸಂಸದರು, ವಿಧಾನಪರಿಷತ್ ಸದಸ್ಯರು, ಮಹಾನಗರ ಪಾಲಿಕೆ ಪ್ರತಿನಿಧಿ ಸೇರಿದಂತೆ ನಗರ ವ್ಯಾಪ್ತಿಯಲ್ಲಿರುವ ಜನಪ್ರತಿನಿಧಿಗಳು ಸದಸ್ಯರಾಗಿದ್ದಾಗಲೇ ಮುಡಾದಲ್ಲಿ ದೊಡ್ಡ ಹಗರಣವಾಗಿದೆ. ಅದಕ್ಕೆಲ್ಲಾ ಅಧಿಕಾರಿಗಳೇ ಕಾರಣ ಎನ್ನಲಾಗಿದೆ. ಈ ಪರಿಸ್ಥಿತಿಯಲ್ಲಿ ಜನಪ್ರತಿನಿಧಿಗಳನ್ನು ದೂರವಿಟ್ಟು, ಸಂಪೂರ್ಣ ಜವಾಬ್ದಾರಿಯನ್ನು ಅಧಿಕಾರಿಗಳಿಗೇ ನಿರ್ವಹಿಸುವಂತಾದರೆ ಏನಾಗಬಹುದು. ಎಲ್ಲವನ್ನೂ ಅಧಿಕಾರಿಗಳೇ ನಿರ್ವಹಿಸುವುದಾದರೆ ಜನಪ್ರತಿನಿಧಿಗಳು ಯಾಕೆ ಬೇಕು?. **–ಸಿ.ಎನ್.ಮಂಜೇಗೌಡ, ವಿಧಾನಪರಿಷತ್ ಸದಸ್ಯ**



ಯಾವುದೋ ಹಿಡನ್ ಅಜೆಂಡಾ ಇರಬೇಕು

ಪ್ರಾಧಿಕಾರದ ಹೆಸರು, ಲೆಟರ್‌ಹೆಡ್, ಸೀಲು ಬದಲಾವಣೆ ಹಾಗೂ ಅಧಿಕಾರಿಗಳ ಪದೋನ್ನತಿ ಹೊರತಾಗಿ 'ಮೈಸೂರು ಅಭಿವೃದ್ಧಿ ಪ್ರಾಧಿಕಾರ'ದಿಂದ ಮಧ್ಯಮ ಹಾಗೂ ಕೆಳಮಧ್ಯಮ ಜನರಿಗೆ ಯಾವುದೇ ಪ್ರಯೋಜನವಾಗದು. ಉದ್ಯೋಗಿಗಳ ಮನಸ್ಥಿತಿ ಬದಲಾಗದಿದ್ದರೆ ಯಾವ ಸುಧಾರಣೆಯೂ ಆಗುವುದಿಲ್ಲ. ಬೇರೆ ಇಲಾಖೆಗಳಿಂದ ನಿಯೋಜನೆಗೊಂಡಿರುವ ಬಹುತೇಕ ಅಧಿಕಾರಿಗಳು ವೇತನಕ್ಕಾಗಿ ಕೆಲಸ ಮಾಡುತ್ತಾರೆಯೇ ಹೊರತು ಅವರಿಗೆ ಮುಡಾದ ಮೂಲ ಉದ್ದೇಶದ ಅರಿವಿಲ್ಲ, ಕಾಳಜಿಯೂ ಇಲ್ಲ. ಮುಡಾ ಆಸ್ತಿ ಸಂರಕ್ಷಣೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಪ್ರಾಧಿಕಾರ ಮಂಡಳಿಯಲ್ಲಿ ಸರ್ಕಾರಿ ಇಲಾಖೆ ಹಾಗೂ ಸಂಸ್ಥೆಗಳ ಪ್ರತಿನಿಧಿಗಳಿದ್ದಾಗಲೇ ಸಾಕಷ್ಟು ಹಗರಣ ನಡೆದಿದೆ. ನಿವೃತ್ತ ನ್ಯಾಯಾಧೀಶರ ತನಿಖಾ ಸಮಿತಿ, ಮತ್ತೊಂದೆಡೆ ಲೋಕಾಯುಕ್ತ ತನಿಖೆ, ಇಡಿ ವಿಚಾರಣೆ ನಡೆಯುತ್ತಿದೆ. ಹೈಕೋರ್ಟ್‌ನಲ್ಲಿ ಪ್ರಕರಣ ವಿಚಾರಣೆಯಲ್ಲಿದೆ. ಇದೆಲ್ಲದರ ನಡುವೆ ಮೈಸೂರು ಅಭಿವೃದ್ಧಿ ಪ್ರಾಧಿಕಾರ ರಚಿಸುವ ಮೂಲಕ ಗಮನ ಬೇರೆಡೆ ಸೆಳೆಯುವ ಪ್ರಯತ್ನ ನಡೆದಿದೆ. ಇದರ ಹಿಂದೆ ಏನೋ ಹಿಡನ್ ಅಜೆಂಡಾ ಇದೆ. ಕಂದಾಯ ನಿಗದಿ ಹಾಗೂ ಸಂಗ್ರಹಕ್ಕೆ ಅಧಿಕಾರ ನೀಡಿರುವುದೂ ಪ್ರಾಧಿಕಾರದ ಮೂಲ ಉದ್ದೇಶಕ್ಕೆ ವಿರುದ್ಧವಾಗಿದೆ. ಎಲ್ಲಾ ವರ್ಗ ಹಾಗೂ ಕ್ಷೇತ್ರದವರಿಗೆ ನಿವೇಶನ ನೀಡುವ ಯೋಜನೆಯೇ ಇಲ್ಲ, ಅದಕ್ಕೆ ಅಗತ್ಯವಾದ ಭೂಮಿಯೂ ಇಲ್ಲ ಎನ್ನುವಾಗ ಹೆಸರು ಬದಲಾವಣೆ ಅಗತ್ಯವೇನಿತ್ತು? **–ಎ.ಪಿ.ನಾಗೇಶ್, ಮ್ಯಾನೇಜಿಂಗ್ ಪಾರ್ಟ್ನರ್, ಎಪಿಎನ್ ಪ್ರಾಪರ್ಟೀಸ್, ಮೈಸೂರು**

ಎಂಡಿಎಯಿಂದ ಪಾರದರ್ಶಕತೆ ಬರುವ ಆಶಾಭಾವನೆ ಇದೆ...



ಎಂಡಿಎ ಎಂಬ ಬದಲಾವಣೆಯಿಂದ ಪಾರದರ್ಶಕತೆ ಬರಲಿದೆ ಎಂಬ ಆಶಾಭಾವನೆ ಇದೆ. ಹಾಗಾಗಿ ಸರ್ಕಾರದ ಈ ಕ್ರಮ ಸ್ವಾಗತಾರ್ಹ. ಈ ಪರಿವರ್ತನೆಯಲ್ಲಿ ಹೆಚ್ಚಿನ ಸಂಖ್ಯೆಯ ಶಾಸಕರು ಸದಸ್ಯರಾಗುವುದನ್ನು ತಪ್ಪಿಸಲಾಗಿದೆ. ಇದು ಉತ್ತಮ ಕ್ರಮ ಎನ್ನಬಹುದು. ಹಾಗೆಂದ ಮಾತ್ರಕ್ಕೆ ಅವರಿಂದ ತೊಂದರೆಯಾಗುತ್ತಿತ್ತು ಎಂದು ಹೇಳುತ್ತಿಲ್ಲ. ರಾಜ್ಯ ಸರ್ಕಾರವು ಪ್ರಾಧಿಕಾರದ ಆಯುಕ್ತರನ್ನಾಗಿ ಐಎಎಸ್ ಅಥವಾ ಕೆಎಎಸ್ ಹಿರಿಯ ಶ್ರೇಣಿ ಇಲ್ಲವೇ ಅದರ ಮೇಲಿನ ದರ್ಜೆಯ ಅಧಿಕಾರಿಯನ್ನು ನೇಮಕ ಮಾಡಲಾಗುತ್ತದೆ. ವಾಸ್ತುಶಿಲ್ಪ ಜ್ಞಾನ ಹೊಂದಿರುವ ವ್ಯಕ್ತಿಯನ್ನು ಟೌನ್ ಪ್ಲಾನಿಂಗ್‌ಗೆ ನೇಮಕ ಮಾಡಲಾಗುತ್ತಿದೆ. ಹಣಕಾಸು ವ್ಯವಸ್ಥೆ ನೋಡಿಕೊಳ್ಳಲು ಒಬ್ಬರನ್ನು ನಿಯೋಜಿಸಲಾಗುತ್ತಿದೆ. ಈ ಎಲ್ಲವನ್ನೂ ಅವಲೋಕಿಸಿದರೆ ನಿಜಕ್ಕೂ ಇದು ಉತ್ತಮ ನಡೆ.

ಸಂಬಂಧಿಸಿದ ಹುದ್ದೆ ಮತ್ತು ಸ್ಥಾನಗಳಿಗೆ ಆಯಾಯ ವಿಚಾರದಲ್ಲಿ ತಜ್ಞರನ್ನೇ ನೇಮಕ ಮಾಡಬೇಕೆಂದು ಇರುವ ಕಾರಣ ಸಾಕಷ್ಟು ಸುಧಾರಣೆಯಾಗುವ ಮೂಲಕ ಸಾರ್ವಜನಿಕರ ಕೆಲಸ ಕಾರ್ಯಗಳು ತ್ವರಿತಗತಿಯಲ್ಲಿ ಆಗುವ ಲಕ್ಷಣ ಸದ್ಯ ಗೋಚರಿಸುತ್ತಿವೆ. ಎಂಡಿಎ ಉದ್ದೇಶ ಉತ್ತಮವಾಗಿದೆ. ಸಾರ್ವಜನಿಕರು ಸಹ ಜಾಗೃತರಾಗಿ ಈ ನೂತನ ವ್ಯವಸ್ಥೆಯ ಕಾರ್ಯವೈಖರಿ ಗಮನಿಸಬೇಕು. ನಮ್ಮ ಬಿಲ್ಡರ್ಸ್‌ಗಳು ಎದುರಿಸಿರುವ ಸಮಸ್ಯೆಗಳ ಬಗ್ಗೆ ಹೇಳುವುದಾದರೆ, ಹಿಂದಿನ ಮುಡಾದಲ್ಲಿ ಸಾಕಷ್ಟು ತೊಡಕುಗಳಿದ್ದವು. ಯಾವುದೇ ಅನುಮೋದನೆಗೆ ಸಾಕಷ್ಟು ವಿಳಂಬವಾಗಿದೆ. ನಮ್ಮ ಸದಸ್ಯರು ಕಷ್ಟಪಟ್ಟು ಬಡಾವಣೆ ನಿರ್ಮಿಸಿರುತ್ತಾರೆ. ಅಪಾರ್ಟ್‌ಮೆಂಟ್ ಕಟ್ಟಿರುತ್ತಾರೆ. ಅವುಗಳನ್ನು ಪಾಲಿಕೆಗೆ ಹಸ್ತಾಂತರ ಮಾಡುವ ಮುನ್ನ ಮುಡಾ (ಈಗಿನ ಎಂಡಿಎ) ಪ್ರಕ್ರಿಯೆ ಶೀಘ್ರಗತಿಯಲ್ಲಿ ಆದಲ್ಲಿ ಹೆಚ್ಚಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಬಿಲ್ಡರ್‌ಗಳು ಮುಂದಾಗಬಹುದು. ಈಗ ಎಂಡಿಎ ಎಂಬ ಬದಲಾವಣೆ ಸೂಕ್ತವಾಗಿದೆ. ಪಾರದರ್ಶಕತೆ ಮೂಡುವ ಭರವಸೆಯೂ ಇದೆ. **–ಎನ್.ಸುಬ್ರಹ್ಮಣ್ಯ, ಅಧ್ಯಕ್ಷರು, ಕರ್ನಾಟಕ ಘಟಕ, ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಬಿಎಐ),ಮಾಜಿ ಅಧ್ಯಕ್ಷರು, ಬಿಎಐ ಮೈಸೂರು ಘಟಕ.**



ಬಿಲ್ಡರ್–ಡೆವಲಪರ್ ಸಂಘಟನೆಗಳಿಂದ ಒಬ್ಬರನ್ನು ಸದಸ್ಯರನ್ನಾಗಿ ನೇಮಿಸಬೇಕು...

ಎಂಡಿಎ ಮಾಡಿರುವುದು ಒಳ್ಳೆಯ ಬೆಳವಣಿಗೆ. ಆದರೆ ಸ್ಥಳೀಯವಾದ ಬಿಲ್ಡರ್ ಮತ್ತು ಡೆವಲಪರ್ ಸಂಘಟನೆಗಳಿಂದ ಒಬ್ಬರನ್ನು ಸದಸ್ಯರನ್ನಾಗಿ ತೆಗೆದುಕೊಳ್ಳಬೇಕಿತ್ತು. ಈ ನಿಟ್ಟಿನಲ್ಲಿ ಸರ್ಕಾರ ಚಿಂತನೆ ನಡೆಸಬೇಕು. ಎಂಡಿಎ ಆಗಿರುವ ಹಿನ್ನೆಲೆಯಲ್ಲಿ ಈಗಲಾದರೂ ಪಾರದರ್ಶಕತೆ ತರುವ ಮೂಲಕ ಬಿಲ್ಡರ್ಸ್, ಡೆವಲಪರ್ಸ್ ಹಾಗೂ ಸಾರ್ವಜನಿಕರಿಗೆ ತ್ವರಿತಗತಿಯ ಸೇವೆ ಕಲ್ಪಿಸಿ, ಅನುಕೂಲ ಮಾಡಿಕೊಡಬೇಕು. ನಮ್ಮ ಸದಸ್ಯರು ಕೋಟ್ಯಾಂತರ ರೂಪಾಯಿ ಬಂಡವಾಳ ಹಾಕಿರುತ್ತಾರೆ. ಹಾಗಾಗಿ ಬಡಾವಣೆಗಳ ಸಂಬಂಧ ಅನುಮೋದನೆಗೆ ಪ್ರತಿ ತಿಂಗಳು ಸಭೆ ನಡೆಸುವುದು ಅಗತ್ಯ. **–ವಿ.ಸಿ.ರವಿಕುಮಾರ್, ಅಧ್ಯಕ್ಷರು, ನರೆಡ್ಕೊ ಮೈಸೂರು ಘಟಕ.**

'ಎಂಡಿಎ' ಅಧಿಕಾರಶಾಹಿ ಕಪಿಮುಷ್ಠಿಗೆ ಸಿಲುಕಿಸದಿರಿ



ರಾಜ್ಯ ಸರ್ಕಾರ 'ಮೈಸೂರು ಅಭಿವೃದ್ಧಿ ಪ್ರಾಧಿಕಾರ(ಎಂಡಿಎ)' ರಚನೆಗೆ ಮುಂದಾಗಿರುವುದು ಸ್ವಾಗತಾರ್ಹ. ಆದರೆ ಅಧಿಕಾರಿಗಳ ಹಿಡಿತಕ್ಕೆ ಒಳ ಪಡಿಸುತ್ತಿರುವುದು ಸರಿಯಲ್ಲ. ಮುಡಾ ಆಡಳಿತದಲ್ಲಿ ಸಾವಿರಾರು ಕೋಟಿ ಹಗರಣ ನಡೆದಿರುವುದು ಎಲ್ಲರಿಗೂ ತಿಳಿದ ಸಂಗತಿ. ಅಧಿಕಾರಿಗಳೇ ಎಲ್ಲಾ ಹಗರಣಗಳ ಕೇಂದ್ರ ಬಿಂಧುವೆಂದು ಬಿಂಬಿಸಲಾಗಿರುವುದನ್ನು ಅಲ್ಲಗಳೆಯುವಂತಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಕುಟುಂಬದ ಮೇಲೆ ಅಪಾದನೆ ಬಂದಾಗಲೂ ಅದು ಅಧಿಕಾರಿಗಳ ಲೋಪ ಎಂದಿದ್ದರು. ಹೀಗಿರುವಾಗ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಕಾರ್ಯಕಾರಿ ಮಂಡಳಿಯಲ್ಲಿ ಜನಪ್ರತಿನಿಧಿಗಳು ಸದಸ್ಯರಾಗಿದ್ದರೂ ಅವ್ಯವಹಾರ ನಡೆಸಿರುವ ಅಧಿಕಾರಿಶಾಹಿಗಳ ಕಪಿಮುಷ್ಠಿಗೆ ಎಂಡಿಎ ನೀಡಿದರೆ ಗತಿಯೇನು?. ಸರ್ಕಾರದ ಈ ಕ್ರಮ ಜನಪ್ರತಿನಿಧಿಗಳ ಮೇಲೆ ಮುಖ್ಯಮಂತ್ರಿಗಳಿಗೆ ವಿಶ್ವಾಸವಿಲ್ಲ ಎಂಬುದನ್ನು ತೋರಿಸುತ್ತದೆ. ಇದರಿಂದ ಮುಡಾ ಸದಸ್ಯರಾಗಿದ್ದ ಜನಪ್ರತಿನಿಧಿಗಳನ್ನು ಸಾರ್ವಜನಿಕರು ಅನುಮಾನದಿಂದ ನೋಡುವಂತಾಗಿದೆ. ಮೈಸೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯನ್ನೂ ಸ್ಪಷ್ಟಪಡಿಸಿಲ್ಲ. ಮೈಸೂರು ನಗರದ ಮೂವರು ಸೇರಿ ಜಿಲ್ಲೆಯಲ್ಲಿ ಒಟ್ಟು 11 ಮಂದಿ ಶಾಸಕರಿದ್ದು, ಇವರಲ್ಲಿ ಒಬ್ಬರನ್ನು ಯಾವ ಮಾನದಂಡದಡಿ ನೇಮಕ ಮಾಡುತ್ತಾರೆ ಎನ್ನುವುದಕ್ಕೆ ಸರ್ಕಾರವೇ ಉತ್ತರಿಸಬೇಕು. ಎಂಡಿಎ ವ್ಯಾಪ್ತಿಯನ್ನು ನಿಗದಿಪಡಿಸಿ, ಮೊದಲಿಗೆ ಮೈಸೂರು ಸುತ್ತ ಇರುವ ಬನ್ನೂರು, ತಿ.ನರಸೀಪುರ, ನಂಜನಗೂಡು, ಹುಣಸೂರು, ಶ್ರೀರಂಗಪಟ್ಟಣ ಭಾಗದಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವುದರ ಜೊತೆಗೆ ಸುಸಜ್ಜಿತ ಸರ್ಕಾರಿ ಶಾಲಾ ಕಾಲೇಜು, ಆಸ್ಪತ್ರೆ ಹಾಗೂ ಕೈಗಾರಿಕೆಗಳ ಸ್ಥಾಪನೆ ಮಾಡಬೇಕಿದೆ. ಇದರಿಂದ ಸ್ಥಳೀಯವಾಗಿ ಉದ್ಯೋಗ ಲಭ್ಯತೆ ಜೊತೆಗೆ ಪ್ರವಾಸಿ ತಾಣಗಳ ಅಭಿವೃದ್ಧಿಯೂ ಸಾಧ್ಯವಿದೆ. **–ಸಂದೇಶ್ ಸ್ವಾಮಿ, ಮಾಜಿ ಮೇಯರ್**

ಇಂದಿನಿಂದ ಹೃದ್ರೋಗ ತಪಾಸಣೆ ಶಿಬಿರ

ಮೈಸೂರು, ಮೇ 18– ಮೈಸೂರಿನ ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆಯಲ್ಲಿ ಮೇ 19ರಿಂದ 24ರವರೆಗೆ ಹೃದ್ರೋಗ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಮಾಹಿತಿಗಾಗಿ 0821–2533600, 99863 99862 ಸಂಪರ್ಕಿಸಬಹುದಾಗಿದೆ.

ಸೈಕಲ್ ಜಾಥಾ ಮೂಲಕ ಫಿಟ್ ಇಂಡಿಯಾ ಅಭಿಯಾನ

ಮೈಸೂರು, ಮೇ 18(ಎಂಟಿವೈ)– ಮೈಸೂರಲ್ಲಿ ಭಾನುವಾರ 'ಫಿಟ್ ಇಂಡಿಯಾ ಅಭಿಯಾನ'ದ ಅಂಗವಾಗಿ ಆಯೋಜಿಸಿದ್ದ ಸೈಕಲ್ ಜಾಥಾದಲ್ಲಿ ಹಲವು ಮಂದಿ ಪಾಲ್ಗೊಂಡು ಗಮನ ಸೆಳೆದರು.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಜಿಎಸ್‌ಟಿ ಭವನದ ಆವರಣದಲ್ಲಿ ಇಂದು ಬೆಳಗ್ಗೆ ಆಯೋಜಿಸಿದ್ದ ಸೈಕಲ್ ಜಾಥಾದಲ್ಲಿ ಜಿಎಸ್‌ಟಿ ಸಿಬ್ಬಂದಿ, ಸೈಕ್ಲಿಸ್ಟ್ ಹಾಗೂ ಕೆಲ ಸೈಕಲ್ ಪ್ರೇಮಿಗಳು ಸೈಕಲ್ ತುಳಿಯುವ ಮೂಲಕ ಫಿಟ್ ಇಂಡಿಯಾ ಅಭಿಯಾನಕ್ಕೆ ಬೆಂಬಲ ನೀಡಿದರು.

ಪ್ರಧಾನಿ ನರೇಂದ್ರ ಮೋದಿ 2019ರಲ್ಲಿ 'ಫಿಟ್ ಇಂಡಿಯಾ ಅಭಿಯಾನ'ಕ್ಕೆ ಚಾಲನೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಆರೋಗ್ಯ ಕಾಪಾಡಿಕೊಳ್ಳಲು ಸೈಕಲ್ ಬಳಕೆ ಉತ್ತೇಜಿಸಲು ಹಾಗೂ ಜಿಎಸ್‌ಟಿ ಜಾರಿಗೊಂಡು ಎಂಟು ವರ್ಷದ ಸ್ಮರಣಾರ್ಥ ಏರ್ಪಡಿಸಿದ್ದ ಸೈಕಲ್ ಜಾಥಾ ವಿವಿಧ ರಸ್ತೆಗಳಲ್ಲಿ ಸಂಚರಿಸಿತು.



ಫಿಟ್ ಇಂಡಿಯಾ ಅಭಿಯಾನದ ಅಂಗವಾಗಿ ಜಿಎಸ್‌ಟಿ ವಿಭಾಗದ ವತಿಯಿಂದ ಆಯೋಜಿಸಿದ್ದ ಸೈಕಲ್ ಜಾಥಾದಲ್ಲಿ ಪಾಲ್ಗೊಂಡಿರುವ ಸೈಕಲ್ ಪಟುಗಳು.

ಸಿದ್ಧಾರ್ಥನಗರದಲ್ಲಿರುವ ಜಿಎಸ್‌ಟಿ ಭವನದ ಆವರಣದಲ್ಲಿ ಸೈಕಲ್ ಜಾಥಾಗೆ ಜಿಎಸ್‌ಟಿ ಆಯುಕ್ತ ಪ್ರದೀಪ್ ಸುಮನ್ ಚಾಲನೆ ನೀಡಿದರು. ಬಳಿಕ ನಜ್ಜರ್ ಬಾದ್, ಚಾಮರಾಜೇಂದ್ರ ವೃತ್ತ, ಸಯ್ಯಾಜಿರಾವ್ ರಸ್ತೆ, ದೇವರಾಜ ಅರಸ್ ರಸ್ತೆ ಮೂಲಕ ಸಾಗಿದ ಸೈಕಲ್ ಸವಾರರು ಫಿಟ್ ಇಂಡಿಯಾ ಅಭಿಯಾನ ಸಂದೇಶ ಸಾರಿದರು. ಈ ಸಂದರ್ಭದಲ್ಲಿ ಜಿಲ್ಲಾ ಗ್ರಂಥಾಲಯ ಇಲಾಖೆ ಉಪನಿರ್ದೇಶಕ ಮಂಜುನಾಥ್, ನಿವೃತ್ತ ಎಸಿಪಿ ಧನಂಜಯ್, ದೀಪಕ್, ವಿಜಯ ಸಿಂಗ್, ಆದಿಲ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ನಾಳೆ ನೇರ ಸಂದರ್ಶನ

ಮೈಸೂರು, ಮೇ 18– ಮೈಸೂರು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ 'ನೇರ ಸಂದರ್ಶನ'ವನ್ನು ನಡೆಸುತ್ತಿದ್ದು, ಜೆ.ಕೆ.ಟೈರ್ ಇಂಡಸ್ಟ್ರೀಸ್ ಸಂಸ್ಥೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿಗಾಗಿ ಮೇ 20ರಂದು ಬೆಳಗ್ಗೆ 10 ಗಂಟೆಗೆ ನ್ಯಾಪ್ಸ್ ಟ್ರೈನಿ ಒಟ್ಟು 60 ಹುದ್ದೆಗಳಿಗೆ ಡಿಪ್ಲೊಮಾ (ಪಾಸ್/ಫೇಲ್) ಮೆಕ್ಯಾನಿಕಲ್ ಆಟೋಮೊಬೈಲ್ ಇಇಇ ಇ&ಸಿ ಮೆಕ್ಯಾಟ್ರಾನಿಕ್ಸ್–ಬಿಎಸ್ಸಿ (ಭೌತಶಾಸ್ತ್ರ)ನಲ್ಲಿ ತೇರ್ಗಡೆ ಹೊಂದಿದ 18ರಿಂದ 34 ವರ್ಷದ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ನೇರ ಸಂದರ್ಶನ ಮೂಲಕ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಮಾಹಿತಿಗೆ ಮೊ.ಸಂಖ್ಯೆ 9900527996 ಸಂಪರ್ಕಿಸಬಹುದು.

ಬ್ರಾಹ್ಮಣ ಮಹಾಸಭಾ ನೂತನ ಸದಸ್ಯರಿಗೆ ಗುರುತಿನ ಚೀಟಿ



ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಲಕ್ಷ್ಮಿನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ನೂತನ ಸದಸ್ಯರಿಗೆ ಗುರುತಿನ ಚೀಟಿ ವಿತರಿಸಲಾಯಿತು. ಈ ವೇಳೆ ಮೈಸೂರು ಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮಪ್ರಸಾದ್, ಮಹಾಸಭಾ ಉಪಾಧ್ಯಕ್ಷ ಎನ್.ಎಂ.ನವೀನ್‌ಕುಮಾರ್, ಅನಿಲ್‌ಕುಮಾರ್, ಸಂಘಟನಾ ಕಾರ್ಯದರ್ಶಿ ಡಾ.ಲಕ್ಷ್ಮೀದೇವಿ, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಅಧ್ಯಕ್ಷ ಎಚ್.ಎನ್.ಶ್ರೀಧರ ಮೂರ್ತಿ, ಸೌಭಾಗ್ಯ ಮೂರ್ತಿ, ಪುಷ್ಪ ಅಯ್ಯಂಗಾರ್, ಯೋಗ ನರಸಿಂಹ (ಮುರಳಿ) ಇನ್ನಿತರರು ಉಪಸ್ಥಿತರಿದ್ದರು.

ಇಂದು ಡಾ.ಕಸ್ತೂರಿ ರಂಗನ್ ಅವರಿಗೆ ಶ್ರದ್ಧಾಂಜಲಿ



ಮೈಸೂರು,ಮೇ 18(ಎಂಟಿವೈ)– ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಎಬಿವಿಪಿ ಕಚೇರಿ ಆವರಣದಲ್ಲಿ ನಾಳೆ(ಮೇ 19) ಸಂಜೆ 4.30ಕ್ಕೆ ದೇಶ ಕಂಡ ಅಪರೂಪದ ವಿಜ್ಞಾನಿ ಡಾ.ಕಸ್ತೂರಿ ರಂಗನ್ ಅವರಿಗೆ ಶ್ರದ್ಧಾಂಜಲಿ ಸಭೆ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಹಾ ವಿದ್ಯಾಲಯದ ಶಿಕ್ಷಕ ಸಂಘದ ರಾಜ್ಯ ಪ್ರಮುಖ ಪ್ರೊ.ಜಿ.ಸಿ.ರಾಜಣ್ಣ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟದ ರಾಜ್ಯ ಮಾಧ್ಯಮಿಕ ಶಿಕ್ಷಕ ಸಂಘ ಹಾಗೂ ಕರ್ನಾಟಕ ರಾಜ್ಯ ಮಹಾ ವಿದ್ಯಾಲಯದ ಶಿಕ್ಷಕ ಸಂಘಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಅತಿಥಿಗಳಾಗಿ ಆಗಮಿಸಲಿದ್ದು, ರಾಯಚೂರು ವಿವಿಯ ನಿಕಟ ಪೂರ್ವ ಕುಲಪತಿ ಡಾ.ಹರೀಶ್ ರಾಮಸ್ವಾಮಿ ನುಡಿ ನಮನ ಸಲ್ಲಿಸುವರು. ರಾಜ್ಯ ಮಹಾ ವಿದ್ಯಾಲಯದ ಶಿಕ್ಷಕ ಸಂಘಗಳ ವಿಭಾಗದ ಪ್ರಮುಖ ಕೆ.ಆರ್.ರಾಜು ಪ್ರಾಸ್ತಾವಿಕವಾಗಿ ಮಾತನಾಡಿದರೆ, ಸಂಘಟನಾ ಕಾರ್ಯದರ್ಶಿ ವೃಷಭೇಂದ್ರ ಸ್ವಾಮಿ, ಎ.ಗಂಗಾಧರಾಚಾರಿ ಪಾಲ್ಗೊಳ್ಳಲಿದ್ದಾರೆ ಎಂದರು.

ಕಸ್ತೂರಿ ರಂಗನ್ ಅವರ ಬುದ್ಧಿಮತ್ತೆಗೆ ಸೂಕ್ತವಾದ ಅನೇಕ ಅವಕಾಶಗಳು ಲಭ್ಯವಾದವು. ಅವರಲ್ಲಿ ಅತ್ಯಂತ ಮುಖ್ಯವಾದುದು ಇಸ್ರೋ ಅಧ್ಯಕ್ಷ ಸ್ಥಾನವಾಗಿದೆ. ಅವರ ನೇತೃತ್ವದಲ್ಲಿ ಇಸ್ರೋ ಕೈಗೆತ್ತಿಕೊಂಡ ಹಲವಾರು ಯೋಜನೆಗಳು ಅವರಿಗೆ ಸಾಕಷ್ಟು ಹೆಸರು ತಂದುಕೊಟ್ಟವು. ಅಲ್ಲದೆ, ಭಾರತ ಸರ್ಕಾರದ ಬಾಹ್ಯಾಕಾಶ ಸಚಿವಾಲಯದ ಕಾರ್ಯದರ್ಶಿಯಾಗಿ, ನೀತಿ ಆಯೋಗದ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದು, ಅವರು ರಾಷ್ಟ್ರಕ್ಕೆ ನೀಡಿದ ಕೊಡುಗೆ ಸ್ಮರಿಸಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಗೋಷ್ಠಿಯಲ್ಲಿ ಸಂಘದ ಪದಾಧಿಕಾರಿಗಳಾದ ಪ್ರೊ.ನಂದೀಶ್, ಪ್ರೊ.ಜಯಣ್ಣ ಇದ್ದರು.

ಶ್ರೀ ಕೃಷ್ಣಧಾಮದಲ್ಲಿ ಶ್ರೀನಿವಾಸ ಕಲ್ಯಾಣೋತ್ಸವ

ಮೈಸೂರು, ಮೇ 18– ಮೈಸೂರಿನ ಸರಸ್ವತಿಪುರಂ ಸಾಹುಕಾರ್ ಚೆನ್ನಯ್ಯ ರಸ್ತೆಯಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ಶ್ರೀ ಕೃಷ್ಣ ಟ್ರಸ್ಟ್ ಹಾಗೂ ಶ್ರೀ ಕೃಷ್ಣ ಮಿತ್ರ ಮಂಡಳಿ ವತಿಯಿಂದ ಶ್ರೀನಿವಾಸ ಕಲ್ಯಾಣೋತ್ಸವ ವಿಜೃಂಭಣೆಯಿಂದ ಯಶಸ್ವಿಯಾಗಿ ನೆರವೇರಿತು.

ನೆರೆದಿದ್ದ ಸಾವಿರಾರು ಭಕ್ತರು ಶ್ರೀನಿವಾಸನ ದರ್ಶನ ಪಡೆದು ಪುಳಕಿತರಾದರು. ಗಣ್ಯರು ಸೇರಿದಂತೆ ಸಾವಿರಾರು ಮಂದಿ ಕಲ್ಯಾಣೋತ್ಸವವನ್ನು ಕಣ್ಣು ತುಂಬಿಕೊಂಡು ಲೋಕಪಾಲಕ ಗೋವಿಂದನ ನಾಮಸ್ಮರಣೆ ಗೈದು ಶ್ರೀನಿವಾಸನ ಕೃಪೆಗೆ ಪಾತ್ರರಾದರು. ಇದೇ ವೇಳೆ ಭಕ್ತರಿಗೆ ತಿರುಪತಿ ಲಾಡು ಪ್ರಸಾದ ವಿತರಿಸಲಾಯಿತು.



ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣ ಧಾಮದಲ್ಲಿ ಶ್ರೀನಿವಾಸ ಕಲ್ಯಾಣೋತ್ಸವ ವಿಜೃಂಭಣೆಯಿಂದ ನೆರವೇರಿತು.

ಕಲ್ಯಾಣೋತ್ಸವದಲ್ಲಿ ಶ್ರೀ ಕೃಷ್ಣ ಟ್ರಸ್ಟ್ ಉಪಾಧ್ಯಕ್ಷ ರವಿಶಾಸ್ತ್ರಿ, ಪಿ.ಎಸ್.ಚಂದ್ರಶೇಖರ್, ಗೌರವ ಕಾರ್ಯದರ್ಶಿ ಕೆ.ವಿ.ಶ್ರೀಧರ್, ಕಿರಣ್ ತಂತ್ರಿ, ಶ್ರೀಕಾಂತ್ ರಾವ್, ಮಿತ್ರ ಮಂಡಳಿ ಅಧ್ಯಕ್ಷ ಪ್ರವೀಣ್, ಕಾರ್ಯದರ್ಶಿ ರಾಘವೇಂದ್ರ, ಸುಬ್ರಹ್ಮಣ್ಯ ತಂತ್ರಿ, ವಿಜೇಂದ್ರ, ಪದ್ಮನಾಭ ಭಟ್, ಶ್ರೀವತ್ಸ ಇನ್ನಿತರರು ಉಪಸ್ಥಿತರಿದ್ದರು.

ಸಿಬಿಎಸ್‌ಇ: ಇಂಪನಾಗೆ ಶೇ.97 ಅಂಕ



ಮೈಸೂರು, ಮೇ 18– ಸಿಬಿಎಸ್‌ಇ 10ನೇ ತರಗತಿಯಲ್ಲಿ ಎಂ.ಇಂಪನಾ ಶೇ.97 ಅಂಕ ಪಡೆಯುವ ಮೂಲಕ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಈಕೆ ಚಾಮರಾಜನಗರದ ಹೊರವಲಯದ ಮಾದಾಪುರ–ಕಿರಗಸೂರು ಗ್ರಾಮದ ಬಳಿಯಿರುವ ಕೇಂದ್ರೀಯ ವಿದ್ಯಾಲಯದ ವಿದ್ಯಾರ್ಥಿನಿಯಾಗಿದ್ದಾಳೆ. ಈಕೆ ಪೊಲೀಸ್ ಇಲಾಖೆಯ ಉದ್ಯೋಗಿ ಎಂ.ಮಹೇಶ್ ಹಾಗೂ ಪಿ.ಪವಿತ್ರ ದಂಪತಿಯ ಪುತ್ರಿ.

ಪಾಕ್‌ಗೆ ತಕ್ಕ ಪಾಠ; ಸಿಹಿ ಹಂಚಿ ಸಂಭ್ರಮ



ಕರ್ನಾಟಕ ಸೇನಾಪಡೆ ವತಿಯಿಂದ ಭಾರತೀಯ ಯೋಧರು, ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಿದ ಹಿನ್ನೆಲೆಯಲ್ಲಿ ಮೈಸೂರಿನ ಸರಸ್ವತಿಪುರಂ ಪೊಲೀಸ್ ಠಾಣೆ ಸಿಬ್ಬಂದಿಗಳಿಗೆ ಸಿಹಿ ವಿತರಿಸಿ, ಸಂಭ್ರಮಿಸಲಾಯಿತು. ಈ ವೇಳೆ ಠಾಣೆ ಇನ್ಸ್‌ಪೆಕ್ಟರ್ ಪುರುಷೋತ್ತಮ, ಕರ್ನಾಟಕ ಸೇನಾಪಡೆ ಅಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ಭಾಗ್ಯಮ್ಮ, ಮರಕೂಡು ಕೃಷ್ಣೇಗೌಡ, ಸಿಂಧುವಳ್ಳಿ ಶಿವಕುಮಾರ್, ಹನುಮಂತಯ್ಯ, ಪ್ರಭುಶಂಕರ್, ನೇಹಾ, ರಘು ಅರಸ್, ಬಸವರಾಜು, ಅಂಬಳೆ ಶಿವಣ್ಣ, ಪ್ರಭಾಕರ್, ಸುಬ್ಬೇಗೌಡ ಇತರರಿದ್ದರು.

ಸೈನಿಕರ ಒಳಿತಿಗಾಗಿ ಭಗವದ್ಗೀತಾ ಪಾರಾಯಣ



ಮೈಸೂರಿನ ಗಣಪತಿ ಸಚ್ಚಿದಾನಂದ ಆಶ್ರಮ ನಾದಮಂಟಪದಲ್ಲಿ ನಡೆದ ಭಗವದ್ಗೀತಾ ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ ಆರು ವರ್ಷದ ಪೂರ್ವಾಂಚ್ ದತ್ತ ಮತ್ತು ಸಿಸ್ಲ ಶ್ರೀಹಿತ ಅವರಿಗೆ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಪದಕ ಮತ್ತು ಪ್ರಮಾಣ ಪತ್ರ ವಿತರಿಸಿದರು.

ಮೈಸೂರು,ಮೇ 18(ಎಂಟಿವೈ)– ಭಾರತೀಯ ಸೈನಿಕರಿಗೆ ಒಳಿತಾಗಲಿ ಎಂದು ಪ್ರಾರ್ಥಿಸಿ, ಮೈಸೂರಿನ ಅವಧೂತ ದತ್ತ ಪೀಠದಲ್ಲಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಭಗವದ್ಗೀತಾ ಪಾರಾಯಣ ಮಾಡಿ ವಿಶೇಷ ಪೂಜೆ ಸಲ್ಲಿಸಿದರು.

ಮೈಸೂರು–ನಂಜನಗೂಡು ಮುಖ್ಯ ರಸ್ತೆಯಲ್ಲಿರುವ ಗಣಪತಿ ಸಚ್ಚಿದಾನಂದ ಆಶ್ರಮ ನಾದಮಂಟಪದಲ್ಲಿ ಭಾನುವಾರ ಬೆಳಗ್ಗೆ ಇಂಟರ್‌ನ್ಯಾಷನಲ್ ಗೀತಾ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಗವದ್ಗೀತಾ ಪಾರಾಯಣ ಮಾಡಿದ ಬಳಿಕ ಭಗವದ್ಗೀತೆ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದವರಿಗೆ ಪದಕ ಮತ್ತು ಪ್ರಮಾಣ ಪತ್ರ ವಿತರಿಸಿ ಮಾತನಾಡಿದ ಅವರು, ಪ್ರಸ್ತುತ ಸಂದರ್ಭದಲ್ಲಿ ಭಾರತೀಯ ಯೋಧರ ಮುಂದೆ ಸವಾಲು ಎದುರಾಗಿದೆ. ಭಾರತ–ಪಾಕಿಸ್ತಾನಗಳ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ಭಾರತೀಯ ಸೈನಿಕರು ದೇಶದ ಜನರನ್ನು ಕಾಪಾಡುವ ಮಹತ್ತರವಾದ ಸವಾಲಿನ ಕೆಲಸ ನಿಭಾಯಿಸುತ್ತಿದ್ದಾರೆ. ಸೈನಿಕರ ತ್ಯಾಗದಿಂದಾಗಿ ದೇಶದ ಜನ ನೆಮ್ಮದಿಯಿಂದ ಇರಲು ಸಾಧ್ಯ. ಈ ಹಿನ್ನೆಲೆಯಲ್ಲಿ ಸೈನಿಕರಿಗೆ ಒಳಿತು ಮಾಡುವಂತೆ, ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯಲ್ಲಿ ಮೃತಪಟ್ಟವರ ಆತ್ಮಕ್ಕೆ ಶಾಂತಿ ಕೋರಿ ಶ್ರೀ ಕೃಷ್ಣನಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಇಂಟರ್‌ನ್ಯಾಷನಲ್ ಗೀತಾ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ಭಗವದ್ಗೀತಾ ಪರೀಕ್ಷೆಯಲ್ಲಿ ವಯಸ್ಸಿನ ಬೇಧವಿಲ್ಲದೆ, ಎಲ್ಲಾ ವಯಸ್ಸಿನವರು ಪಾಲ್ಗೊಂಡಿದ್ದಾರೆ. ಚಿಕ್ಕ ಮಕ್ಕಳಿಂದ ಹಿರಿಯ ನಾಗರಿಕರವರೆಗೂ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವುದು ಶ್ಲಾಘನೀಯ. 5000 ಮಂದಿ ಭಗವದ್ಗೀತೆಯನ್ನು ಕಂಠಪಾಠ ಮಾಡಿರುವುದು ಸಂತೋಷ ತಂದಿದೆ. ಇದರಲ್ಲಿ ಅತ್ಯಂತ ಕಿರಿಯ ಮಕ್ಕಳು ಭಾಗವಹಿಸಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿರುವುದು ಒಳ್ಳೆಯ ಬೆಳವಣಿಗೆ ಎಂದರು.

ಇದೆ ವೇಳೆ ಭಗವದ್ಗೀತಾ ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ ಆರು ವರ್ಷದ ಪೂರ್ವಾಂಚ್ ದತ್ತ ಮತ್ತು ಸಿಸ್ಲ ಶ್ರೀಹಿತ ಹಾಗೂ 79 ವರ್ಷದ ಭ್ರಮರಾಂಭ ಸೇವಿ ಮತ್ತು ಸುಜಾತ ಪದಕ ಮತ್ತು ಪ್ರಮಾಣಪತ್ರ ವಿತರಿಸಿದರು.

2025–26ನೇ ಸಾಲಿನಲ್ಲಿ ಡಿಇಎಲ್‌ಇಡಿ ಪ್ರವೇಶಾತಿಗೆ ದಾಖಲಾತಿ ಪ್ರಾರಂಭ

ಮೈಸೂರು,ಮೇ 18– ಸರ್ಕಾರಿ ಮಹಾರಾಣಿ ಮಹಿಳಾ ಪ್ರಶಿಕ್ಷ ಸಂಸ್ಥೆ, ವತಿಯಿಂದ 2025–26ನೇ ಸಾಲಿನ ಡಿ.ಇ.ಎಲ್.ಇ.ಡಿ ದಾಖಲಾತಿ ಪ್ರಕ್ರಿಯೆಯು ಪ್ರಾರಂಭಗೊಂಡಿದ್ದು, ಕನ್ನಡ ಮತ್ತು ಆಂಗ್ಲ ಎರಡೂ ಮಾಧ್ಯಮದಲ್ಲಿಯೂ ವ್ಯಾಸಂಗ ಮಾಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಲ್ಲಿ ಸಾಮಾನ್ಯ ಹಾಗೂ ಇತರೆ ಅಭ್ಯರ್ಥಿಗಳು ಶೇ.50ರಷ್ಟು ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಶೇ.45ರಷ್ಟು ಅಂಕಗಳು ಪಡೆದಿರಬೇಕು. ಸಾಮಾನ್ಯ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ರೂ.150 ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಅರ್ಜಿ ಶುಲ್ಕ ರೂ. 50, ಸಾಮಾನ್ಯ ಹಾಗೂ ಇತರೆ ವರ್ಗದವರಿಗೆ ದಾಖಲಾತಿ ಶುಲ್ಕ ರೂ. 3015 ಮಾತ್ರ ಇರುತ್ತದೆ. ಹಾಗೂ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗ ಅಭ್ಯರ್ಥಿಗಳಿಗೆ ಯಾವುದೇ ದಾಖಲಾತಿ ಶುಲ್ಕ ಇರುವುದಿಲ್ಲ. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪ್ರತಿ ವರ್ಷವೂ ಸರ್ಕಾರದ ವತಿಯಿಂದ ಪ್ರೋತ್ಸಾಹ ಧನ ರೂ. 25000ಗಳು ದೊರೆಯುತ್ತದೆ. ಜೂನ್ 5 ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ. ಆಸಕ್ತ ಅಭ್ಯರ್ಥಿಗಳು ಈ ಸಂಸ್ಥೆಯ ಉಪನ್ಯಾಸಕರ ದೂ.ಸಂ: 8884300503, 9481188769, 9611946744, 9880977918 ಸಂರ್ಕಿಸಬಹುದು ಎಂದು ಸಂಸ್ಥೆಯ ಪ್ರಾಂಶುಪಾಲರು ತಿಳಿಸಿದ್ದಾರೆ.

ದೇಶ – ವಿದೇಶ

ಕೆಂಟುಕಿ ಸೇರಿದಂತೆ ಅಮೆರಿಕದ ಹಲವು ರಾಜ್ಯಗಳಲ್ಲಿ ಬಿರುಗಾಳಿ: 27 ಮಂದಿ ಸಾವು



ಕೆಂಟುಕಿ: ಅಮೆರಿಕದ ಮಧ್ಯಪಶ್ಚಿಮ ಮತ್ತು ದಕ್ಷಿಣ ಭಾಗಗಳಲ್ಲಿ ಬೀಸಿದ ಪ್ರಬಲ ಬಿರುಗಾಳಿ ಮತ್ತು ಸಂಭಾವ್ಯ ಸುಂಟರಗಾಳಿಗೆ ಕನಿಷ್ಠ 27 ಜನ ಮೃತಪಟ್ಟಿದ್ದಾರೆ. ಕೆಂಟುಕಿ ಪ್ರದೇಶ ಅತ್ಯಂತ ತೀವ್ರ ವಾಗಿ ಹಾನಿಗೊಳಗಾಗಿದ್ದು, ರಾಜ್ಯಪಾಲ ಆಂಡಿ ಬೆಶಿಯರ್ ಅವರು ರಾಜ್ಯದಲ್ಲಿ 18 ಜನರು ಮೃತಪಟ್ಟಿದ್ದಾರೆ ಮತ್ತು 10 ಜನರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಿದ್ದಾರೆ. ಕೆಂಟುಕಿಯಲ್ಲಿ ಸುಂಟರಗಾಳಿಯಿಂದ ಅನೇಕ ಮನೆಗಳು ಹಾನಿಗೀಡಾಗಿವೆ. ಅನೇಕ ವಾಹನಗಳು ಉರುಳಿ ಬಿದ್ದಿದ್ದು, ಹಲವರು ದಿಕ್ಕುಪಾಲಾಗಿ ಓಡಿಹೋಗಿದ್ದಾರೆ. ರಾಜ್ಯದಲ್ಲಿ 17 ಸಾವು ಸಂಭವಿಸಿದ್ದು, ಆಗ್ನೇಯ ಕೆಂಟುಕಿಯ ಲಾರೆಲ್ ಕೌಂಟಿಯಲ್ಲಿ ಸಂಭವಿಸಿವೆ. ಪುಲಾಸ್ಕಿ ಕೌಂಟಿಯಲ್ಲಿ ಒಬ್ಬರು ಮೃತಪಟ್ಟಿದ್ದಾರೆ. 39 ವರ್ಷದ ಅಗ್ನಿಶಾಮಕ ದಳದ ಮೇಜರ್ ರೋಜರ್ ಲೆಸ್ಲೀ ಲೆದರ್ಮನ್, ಚಂಡಮಾರುತದ ಸಮಯದಲ್ಲಿ ಸಹಾಯ ಮಾಡುವಾಗ ಮಾರಣಾಂತಿಕವಾಗಿ ಗಾಯಗೊಂಡರು. ರಾಜ್ಯ ತುರ್ತು ನಿರ್ವಹಣಾ ನಿರ್ದೇಶಕ ಎರಿಕ್ ಗಿಬ್ಸನ್ ಪ್ರಕಾರ ನೂರಾರು ಮನೆಗಳು ಹಾನಿಗೊಳಗಾದವು.

ವಾಹನ ಸಂಚರಿಸುವ ವೇಳೆ ಬಾಯ್ತೆರೆದ ರಸ್ತೆ; ಗುಂಡಿಗೆ ಕಾರು ಪಲ್ಟಿ, ಐವರು ಬಚಾವ್

ಚೆನ್ನೈ: ಭಾರಿ ಮಳೆಯಿಂದಾಗಿ ನಗರದ ಟೈಡಲ್ ಪಾರ್ಕ್ ಬಳಿ ರಸ್ತೆ ಕುಸಿದು ಬೃಹತ್ ಗುಂಡಿಯಾ ಗಿದ್ದ ಕಾರಣ, ಪ್ರಯಾಣಿಕರನ್ನು ಕರೆದೊಯ್ಯುತ್ತಿದ್ದ ಕ್ಯಾಬ್ ಗುಂಡಿಗೆ ಉರುಳಿ ಭಾರಿ ಅವಘಡ ಸಂಭವಿಸಿದ ಘಟನೆ ನಡೆದಿದೆ.

ಚೆನ್ನೈನ ಟೈಡಲ್ ಪಾರ್ಕ್ ಸಿಗ್ನಲ್ ಬಳಿ ರಸ್ತೆಯೊಂದು ಕುಸಿದು ಆಳವಾದ ಹೊಂಡ ಉಂಟಾಯಿತು. ಅದರಲ್ಲಿ ಐವರು ಪ್ರಯಾಣಿಕರಿದ್ದ ಟ್ಯಾಕ್ಸಿಯೊಂದು ಬಿದ್ದಿದೆ. ಟ್ಯಾಕ್ಸಿ ಚಾಲಕ ವಿಘ್ನೇಶ್ ಅವರು ಶೋಲಿಂಗನಲ್ಲೂರಿನಿಂದ ಸಾಫ್ಟ್‌ವೇರ್ ಕಂಪನಿಯ ಉದ್ಯೋಗಿ ವಿಘ್ನೇಶ್, ಅವರ ಪತ್ನಿ ಮತ್ತು ಇಬ್ಬರು ಮಕ್ಕಳನ್ನು ಕರೆದು ಕೊಂಡು ಸೆಂಟ್ರಲ್ ರೈಲ್ವೆ ನಿಲ್ದಾಣದ ಕಡೆಗೆ ಹೋಗುತ್ತಿದ್ದರು. ಸಿಗ್ನಲ್ ಬಳಿ ಹೋಗುವಾಗ ರಸ್ತೆ ಇದ್ದಕ್ಕಿದ್ದಂತೆ ಕುಸಿದು ಟ್ಯಾಕ್ಸಿ ಹೊಂಡಕ್ಕೆ ಬಿದ್ದಿದೆ. ಅಲ್ಲಿ ಕರ್ತವ್ಯದಲ್ಲಿದ್ದ ಟ್ರಾಫಿಕ್ ಪೊಲೀಸರು ಮತ್ತು ಇತರ ವಾಹನ ಸವಾರರು ತಕ್ಷಣವೇ ರಕ್ಷಣೆಗೆ ಧಾವಿಸಿದರು. ಚೆನ್ನೈ ಮೆಟ್ರೋ ರೈಲು ಲಿಮಿಟೆಡ್ ಗುತ್ತಿಗೆದಾರರ ಸಹಾಯದಿಂದ ಪ್ರಯಾಣಿಕರನ್ನು ಸುರಕ್ಷಿತವಾಗಿ ಹೊರತೆಗೆದರು. ತಕ್ಷಣವೇ ಪೊಲೀಸರು ರಸ್ತೆಯನ್ನು ಬಂದ್ ಮಾಡಿ ಟ್ರಾಫಿಕ್ ಅನ್ನು ಬೇರೆಡೆಗೆ ತಿರುಗಿಸಿದರು.

ಅಮೆರಿಕದ ಕ್ಲಿನಿಕ್ ಹೊರಗೆ ಸ್ಫೋಟ: ಓರ್ವ ಸಾವು, ಐವರಿಗೆ ಗಾಯ

ನ್ಯೂಯಾರ್ಕ್: ಕ್ಯಾಲಿಫೋರ್ನಿಯಾದ ಪಾಮ್ ಸ್ಪ್ರಿಂಗ್ಸ್‌ನಲ್ಲಿರುವ ಫಲವತ್ತತೆ ಚಿಕಿತ್ಸಾಲಯದ ಹೊರಗೆ ಸ್ಥಳೀಯ ಕಾಲಮಾನ ಶನಿವಾರ ನಡೆದ ಭೀಕರ ಸ್ಫೋಟದಲ್ಲಿ ಒಬ್ಬರು ಮೃತಪಟ್ಟು, ಕನಿಷ್ಠ 5 ಮಂದಿ ಗಾಯಗೊಂಡಿದ್ದಾರೆ ಎಂದು ನ್ಯೂಯಾರ್ಕ್ ಪೋಸ್ಟ್ ವರದಿ ಮಾಡಿದೆ. ನ್ಯೂಯಾರ್ಕ್ ಪೋಸ್ಟ್ ಪ್ರಕಾರ ಇದು ಉದ್ದೇಶಪೂರ್ವಕ ಹಿಂಸಾಚಾರ ಎಂದು ಅಧಿಕಾರಿಗಳು ಹೇಳಿಕೊಂಡಿದ್ದು, ಘಟನೆಯ ಬಗ್ಗೆ ತನಿಖೆ ನಡೆಸುತ್ತಿದ್ದಾರೆ. ಫರ್ಟಿಲಿಟಿ ಕೇಂದ್ರದ ಬಳಿ ನಿಲ್ಲಿಸಿದ್ದ ಕಾರಿನಿಂದ ಈ ಸ್ಫೋಟ ಸಂಭವಿಸಿರಬಹುದು ಎಂದು ಪಾಮ್ ಸ್ಪ್ರಿಂಗ್ಸ್ ಮೇಯರ್ ರಾನ್ ಡಿಹಾರ್ಟೆ ಉಲ್ಲೇಖಿಸಿ ದಿ ನ್ಯೂಯಾರ್ಕ್ ಪೋಸ್ಟ್ ವರದಿ ಮಾಡಿದೆ. ಪಾಮ್ ಸ್ಪ್ರಿಂಗ್ಸ್ ಅಗ್ನಿಶಾಮಕ ದಳದ ಮುಖ್ಯಸ್ಥ ಪಾಲ್ ಅಲ್ವಾರಾಡೊ ಸ್ಫೋಟವು ಉದ್ದೇಶಪೂರ್ವಕವಾಗಿದೆ ಎಂದು ದೃಢಪಡಿಸಿದರು, ಸ್ಫೋಟವು ಹಲವಾರು ಬ್ಲಾಕ್‌ಗಳಲ್ಲಿ ಹಲವಾರು ಕಟ್ಟಡಗಳಿಗೆ ಹಾನಿಯನ್ನುಂಟುಮಾಡಿದೆ.

ಪಾಕಿಸ್ತಾನಕ್ಕೆ ಬೇಹುಗಾರಿಕೆ ಆರೋಪ: ಹರ್ಯಾಣದಲ್ಲಿ ಯುವಕ ಬಂಧನ

ನುಹ್ (ಹರ್ಯಾಣ): ಪಾಕಿಸ್ತಾನ ಪರವಾಗಿ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ಹರಿಯಾಣದ ನುಹ್ ಜಿಲ್ಲೆಯಲ್ಲಿ 26 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ದೆಹಲಿಯಲ್ಲಿರುವ ಪಾಕಿಸ್ತಾನ ಹೈಕ ಮಿಷನ್‌ನಲ್ಲಿ ನಿಯೋಜಿಸಲಾದ ಉದ್ಯೋಗಿ ಮೂಲಕ ಭಾರತೀಯ ಸೇನೆ ಮತ್ತು ಪಾಕಿ ಸ್ತಾನದೊಂದಿಗೆ ಇತರ ಮಿಲಿಟರಿ ಚಟುವಟಿಕೆಗಳಿಗೆ ಸಂಬಂ ಧಿಸಿದ ಮಾಹಿತಿಯನ್ನು ಹಂಚಿಕೊಂಡಿದ್ದಕ್ಕಾಗಿ ಆರೋಪಿ ಅರ್ಮಾನ್‌ನನ್ನು ಬಂಧಿಸಲಾಗಿದೆ ಎಂದು ನುಹ್ ಪೊಲೀಸರು ತಿಳಿಸಿದ್ದಾರೆ. ಸ್ಥಳೀಯ ನ್ಯಾಯಾಲಯವು ಅರ್ಮಾನ್‌ನನ್ನು ಆರು ದಿನಗಳ ಪೊಲೀಸ್ ಕಸ್ಟಡಿಗೆ ಕಳುಹಿಸಿದೆ. ಕೇಂದ್ರ ತನಿಖಾ ಸಂಸ್ಥೆಗಳಿಂದ ಸುಳಿವು ಪಡೆದ ನಂತರ ಅರ್ಮಾನ್‌ನನ್ನು ಬಂಧಿಸಲಾಗಿದೆ. ಅವರು ವಾಟ್ಸಾಪ್ ಮತ್ತು ಸೋಷಿಯಲ್ ಮೀಡಿಯಾ ಮೂಲಕ ದೀರ್ಘಕಾಲದವರೆಗೆ ಮಾಹಿತಿ ಹಂಚಿಕೊಳ್ಳುತ್ತಿದ್ದರು ಎನ್ನಲಾಗಿದೆ. ಅವರ ಮೊಬೈಲ್ ಫೋನ್ ಹುಡುಕಿದಾಗ, ಪಾಕಿಸ್ತಾನಿ ಸುಖ್ಯೆಗಳೊಂದಿಗೆ ಹಂಚಿಕೊಳ್ಳಲಾದ ಸಂಭಾಷಣೆಗಳು, ಫೋಟೋ, ವೀಡಿಯೊಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೈಸೂರು ಮಿತ್ರ ಸೋಮವಾರ 19 ಮೇ 2025

ಅರೆಭಾಷಿಕರ 'ಐನ್‌ಮನೆ' ಸಂಸ್ಕೃತಿ, ಸಂಪ್ರದಾಯ ದಾಖಲೀಕರಿಸಿ: ಶಾಸಕ ಡಾ.ಮಂತರ್ ಗೌಡ



ಅರೆಭಾಷಿಕರ 'ಐನ್‌ಮನೆ' ಕಾರ್ಯಕ್ರಮವನ್ನು ಡಾ.ಮಂತರ್‌ಗೌಡ ಉದ್ಘಾಟಿಸಿದರು.

ಮಡಿಕೇರಿ, ಮೇ 18– ಐನ್‌ಮನೆ ಸಂಸ್ಕೃತಿ, ಸಂಪ್ರದಾಯ ಮತ್ತು ಸಂಸ್ಕಾರವನ್ನು ಉಳಿಸಿ ಬೆಳೆಸುವಲ್ಲಿ ಅರೆ ಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಮೂಲಕ ದಾಖಲೀಕರಣ ಮಾಡುವಂತಾಗಬೇಕು ಎಂದು ಶಾಸಕ ಮಂತರ್‌ಗೌಡ ಹೇಳಿದ್ದಾರೆ.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಮಕ್ಕಂದೂರು ಗ್ರಾಮದ ಕುಂಭಗೌಡನ ಐನ್‌ಮನೆಯಲ್ಲಿ ನಡೆದ ಅರೆಭಾಷಿಕರ 'ಐನ್‌ಮನೆ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕುಂಭಗೌಡನ ಕುಟುಂಬಕ್ಕೆ ತಮ್ಮದೇ ಆದ ಐತಿಹಾಸಿಕ ಹಿನ್ನೆಲೆ ಇದ್ದು, ಕುಂಭಗೌಡನ ಐನ್‌ಮನೆಯನ್ನು ಸಂರಕ್ಷಿಸುವಂತಾಗಬೇಕು. ಈ ಭಾಗಕ್ಕೆ ಉತ್ತಮ ರಸ್ತೆ ನಿರ್ಮಾಣಕ್ಕೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಮಾಜಿ ಶಾಸಕಿ ಶಾಂತೆಯಂಡ ವೀಣಾ ಅಚ್ಚಯ್ಯ ಮಾತನಾಡಿ ನಾನು ಅರುವತ್ತೊಕ್ಲು ಗ್ರಾಮದಲ್ಲಿ ಅರೆಭಾಷಿಕರ ಜೊತೆ ಚಿಕ್ಕಂದಿನಿಂದ ಬೆಳೆದು ಬಂದವಳು, ಹಿಂದೆ ಅರೆಭಾಷಿಕರು ಮತ್ತು ಕೊಡವರು ಯಾರೆಂಬುದೇ ತಿಳಿಯುತ್ತಿರಲಿಲ್ಲ. ಅಷ್ಟರ ಮಟ್ಟಿಗೆ ಅತ್ಯಂತ ಅನ್ಯೋನ್ಯವಾಗಿ ಬದುಕುತ್ತಿದ್ದೆವು. ಆದರೆ ಇತ್ತೀಚಿನ ದಿನಗಳಲ್ಲಿನ ಬೆಳವಣಿಗೆಗಳನ್ನು ಗಮನಿಸಿದಾಗ ಬೇಸರ ತರಿಸುತ್ತದೆ ಎಂದು ನುಡಿದರು. 2018ರಲ್ಲಿ ಸಂಭವಿಸಿದ ಪ್ರಾಕೃತಿಕ ವಿಕೋಪದಿಂದ ಇಲ್ಲಿನ ಕುಟುಂಬಗಳು ಊರು ಬಿಡುವಂತಾಗಿತ್ತು. ಆದರೂ ಎದೆಗುಂದದೆ ಬದುಕು ಪುನರ್ ಸ್ಥಾಪಿಸಿಕೊಂಡು ಜೀವನ ನಡೆಸುತ್ತಿದ್ದೇವೆ ಎಂದರು.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ ಮಾತನಾಡಿ, ಅರೆ ಭಾಷೆ ಸಂಸ್ಕೃತಿ, ಸಂಪ್ರದಾಯ, ಜಾನಪದ ಕಲೆಗಳನ್ನು ಪಸರಿಸುವಲ್ಲಿ ಅರೆಭಾಷೆ ಐನ್‌ಮನೆ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು.

ಅರೆಭಾಷೆ ಕುಟುಂಬಗಳ ಐನ್‌ಮನೆ ಕುರಿತು ಎ.ಕೆ.ಹಿಮಕರ ಮಾತನಾಡಿದರು.

ಶಿವಮೊಗ್ಗ ಜಿಲ್ಲೆಯ ಅಬಕಾರಿ ಇಲಾಖೆ ಉಪ ಆಯುಕ್ತ ಸುಮಿತಾ ಕುಂಭಗೌಡ, ಮಕ್ಕಂದೂರು ವ್ಯವಸ್ಥಾಯ ಸಹಕಾರ ಸಂಘದ ಅಧ್ಯಕ್ಷ ಶಾಂತೆಯಂಡ ರವಿಕುಶಾಲಪ್ಪ ಮಾತನಾಡಿದರು. ಕುಂಭಗೌಡನ ಕುಟುಂಬ ಲಾಂಛನ ಬಿಡುಗಡೆ ಮಾಡಲಾಯಿತು. ಕುಂಭಗೌಡನ ಪಟ್ಟೆದಾರರಾದ ಕೆ.ಕೆ.ಓಂಕಾರಪ್ಪ ಮಕ್ಕಂದೂರು ಗ್ರಾಪಂ ಅಧ್ಯಕ್ಷ ಬಿ.ಎಸ್.ರಮೇಶ್, ಆನಂದ್ ಕರಂದ್ಲಾಜೆ, ಕೊಡಗು ಏಲಕ್ಕಿ ಮಾರಾಟ ಸಹಕಾರ ಸಂಘದ ನಿರ್ದೇಶಕ ಕೋಳು ಮುಡಿಯನ ಅನಂತಕುಮಾರ್, ಮಕ್ಕಂದೂರು ಗೌಡ ಸಮಾಜದ ಅಧ್ಯಕ್ಷ ಲಕ್ಕಪ್ಪನ ಕೆ.ಹರೀಶ್, ಕಾರ್ಯಕ್ರಮ ಸಂಚಾಲಕರು ಹಾಗೂ ಅಕಾಡೆಮಿ ಸದಸ್ಯರಾದ ಸೂದನ ಎಸ್.ಈರಪ್ಪ, ಚಂದ್ರಶೇಖರ್ ಪೆರಾಲು, ತೇಜಕುಮಾರ್ ಕುಡೆಕಲ್ಲು, ಚಂದ್ರಾವತಿ ಬಡ್ಡಡ್ಕ, ಲತಾ ಪ್ರಸಾದ್ ಕುದ್ಪಾಜೆ, ಪಿ.ಎಸ್.ಕಾರ್ಯಪ್ಪ, ಡಾ.ನಿಡ್ಯಮಲೆ ಜ್ಞಾನೇಶ್, ಲೋಕೇಶ್ ಊರುಬೈಲು, ಸಂದೀಪ್ ಇತರರಿದ್ದರು

ಹಾರಂಗಿ ಜಲಾಶಯದಲ್ಲಿ ಅಣಕು ಪ್ರದರ್ಶನ





ವಿಕೋಪಗಳು ಸಂಭವಿಸಿದ್ದಲ್ಲಿ, ಜನ, ಜಾನುವಾರು, ಆಸ್ತಿ-ಪಾಸ್ತಿ ರಕ್ಷಣೆ ಸಂಬಂಧ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳುವ ಬಗ್ಗೆ ಹಾರಂಗಿ ಜಲಾಶಯದಲ್ಲಿ ಅಣಕು ಪ್ರದರ್ಶನ ನಡೆಯಿತು.

ಮಡಿಕೇರಿ, ಮೇ 18– ಯಾವುದೇ ರೀತಿಯ ವಿಕೋಪಗಳು ಸಂಭವಿಸಿದ್ದಲ್ಲಿ, ಜನ, ಜಾನುವಾರು ಹಾಗೂ ಆಸ್ತಿ–ಪಾಸ್ತಿ ರಕ್ಷಣೆ ಸಂಬಂಧ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳುವ ಬಗ್ಗೆ ಹಾರಂಗಿ ಜಲಾಶಯದಲ್ಲಿ ಅಣಕು ಪ್ರದರ್ಶನ ನಡೆಯಿತು.

ಕೇಂದ್ರ ಮತ್ತು ರಾಜ್ಯ ಸರ್ಕಾರದ ನಿರ್ದೇಶನದಂತೆ ನಡೆದ ಅಣಕು ಕಾರ್ಯಾಚರಣೆಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಕಾರದಲ್ಲಿ ನಡೆದ ಅಣಕು ಪ್ರದರ್ಶನದಲ್ಲಿ ಕಂದಾಯ, ಪೊಲೀಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಗ್ನಿ ಶಾಮಕ, ಗೃಹರಕ್ಷಕ ದಳ, ಬೃಹತ್ ನೀರಾವರಿ ಹೀಗೆ ವಿವಿಧ ಇಲಾಖೆಗಳ 200ಕ್ಕೂ ಹೆಚ್ಚು ಸಿಬ್ಬಂದಿಗಳು ಅಣಕು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿ, ಯಾವುದೇ ರೀತಿಯ ವಿಕೋಪ ಸಂಭವಿಸಿದ ಸಂದರ್ಭದಲ್ಲಿ ಜನ, ಜಾನುವಾರು, ಆಸ್ತಿ ಪಾಸ್ತಿ ರಕ್ಷಣೆ ಮಾಡುವುದು ಅತಿ ಮುಖ್ಯವಾಗಿದೆ. ಆ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಸಮನ್ವಯತೆಯಿಂದ ಕಾರ್ಯ ನಿರ್ವಹಿಸುವುದು ಅತೀ ಮುಖ್ಯವಾಗಿದೆ ಎಂದು ವಿಕೋಪ ಎದುರಿಸುವಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಕಾರ್ಯನಿರ್ವಹಿಸುವುದು ಅತೀ ಮುಖ್ಯ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಾತನಾಡಿ, ವಿಪತ್ತುಗಳು ಸಂಭವಿಸಿದ ಸಂದರ್ಭದಲ್ಲಿ ಕಾರ್ಯಾಚರಣೆ ಮಾಡುವವರು ತಮ್ಮ ರಕ್ಷಣೆ ಮಾಡಿ ಕೊಳ್ಳುವುದರ ಜೊತೆಗೆ ಇತರರ ರಕ್ಷಣೆ ಮಾಡುವುದು ಅತೀ ಮುಖ್ಯ. ಯಾವುದೇ ಕಾರಣಕ್ಕೂ ಗಾಬರಿಗೆ ಒಳಗಾಗದೆ ರಕ್ಷಣೆ ಕಾರ್ಯದಲ್ಲಿ ಆಯಾಯ ಸಂದರ್ಭದಲ್ಲಿ ತೊಡಗಿಸಿಕೊಳ್ಳುವುದು ಅತ್ಯಗತ್ಯ ಎಂದು ಹೇಳಿದರು.

ಮಡಿಕೇರಿ ಡಿವೈಎಸ್‌ಪಿ ಸೂರಜ್, ತಹಶೀಲ್ದಾರ್ ಕಿರಣ್ ಗೌರಯ್ಯ, ಕೃಷ್ಣಮೂರ್ತಿ, ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತ ಅನನ್ಯ ವಾಸುದೇವ್, ಅಗ್ನಿಶಾಮಕ ಅಧಿಕಾರಿ ರಾಜೇಶ್, ತಾಲೂಕು ಆರೋಗ್ಯಾಧಿಕಾರಿ ಡಾ.ಇಂದುಧರ, ಗೃಹರಕ್ಷಕ ದಳದ ತರಬೇತಿದಾರರಾದ ಅಕ್ಷಯ್, ಹಾರಂಗಿ ಜಲಾಶಯ ಕಾರ್ಯಪಾಲಕ ಎಂಜಿನಿಯರ್ ಪುಟ್ಟಸ್ವಾಮಿ, ಕಂದಾಯ, ಪೊಲೀಸ್, ಅಗ್ನಿಶಾಮಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ರಾಜ ವಂಶಸ್ಥರ ಬಗ್ಗೆ ಬೆಳಕು ಚೆಲ್ಲುವ ನಾಣ್ಯ, ನೋಟು ಪ್ರದರ್ಶನ



ಪ್ರಾಚೀನ ನಾಣ್ಯ ಮತ್ತು ನೋಟುಗಳ ಪ್ರದರ್ಶನದಲ್ಲಿ ನಾಣ್ಯಗಳನ್ನು ನೋಡುವ ಅಪೂರ್ವ ಅವಕಾಶ ದೊರಕಿತು.

ಮಡಿಕೇರಿ, ಮೇ 18– ನಾಡಿನ ಗತ ಇತಿಹಾಸವನ್ನು ಪುಷ್ಟೀಕರಿಸುವ ಮೂಲಕ ರಾಜ ವಂಶಸ್ಥರ ಆಳ್ವಿಕೆಯ ಮೇಲೆ ಬೆಳಕು ಚೆಲ್ಲುವ 'ಪ್ರಾಚೀನ ನಾಣ್ಯ ಮತ್ತು ನೋಟು'ಗಳ ಪ್ರದರ್ಶನ ನಗರದ ಕೋಟೆ ಆವರಣದ ವಸ್ತು ಸಂಗ್ರಹಾಲಯದಲ್ಲಿ ನಡೆಯಿತು.

'ಅಂತರರಾಷ್ಟ್ರೀಯ ವಸ್ತು ಸಂಗ್ರಹಾಲಯ ದಿನಾಚರಣೆ' ಅಂಗವಾಗಿ ದಿ ಫ್ಯೂಚರ್ ಆಫ್ ಮ್ಯೂಸಿಯಂ ಇನ್ ರ್‍ಯಾಪಿಡ್ಲಿ ಚೇಂಜಿಂಗ್ ಕಮ್ಯುನಿಟೀಸ್ ಘೋಷ ವಾಕ್ಯದಡಿ ಖ್ಯಾತ ನಾಣ್ಯ ನೋಟು ಸಂಗ್ರಹಕಾರ ಹುಣಸೂರು ಪಿ.ಕೆ.ಕೇಶವಮೂರ್ತಿ ಅವರ 169ನೇ 'ಪ್ರಾಚೀನ ನಾಣ್ಯ–ನೋಟುಗಳ ಪ್ರದರ್ಶನ' ಕುತೂಹಲಕಾರಿಯಾಗಿ ಮೂಡಿ ಬಂದು ನೂರಾರು ಸಂಖ್ಯೆಯ ಜನರನ್ನು ಆಕರ್ಷಿಸಿತು. ಪ್ರಾಚೀನ ನಾಣ್ಯ ಮತ್ತು ನೋಟುಗಳ ಪ್ರದರ್ಶನವನ್ನು ನಾಡಿನ ಖ್ಯಾತ ವೈದ್ಯರು ಹಾಗೂ ನಾಣ್ಯ ಸಂಗ್ರಹಕಾರರೂ ಆಗಿರುವ ಡಾ.ಎಂ.ಜಿ.ಪಾಟ್ಕರ್ ಮತ್ತು ವಿಜಯಲಕ್ಷ್ಮೀ ಪಾಟ್ಕರ್ ಉದ್ಘಾಟಿಸಿದರು. ಸರ್ಕಾರಿ ವಸ್ತು ಸಂಗ್ರಹಾಲಯದ ಕ್ಯೂರೇಟರ್ ಬಿ.ಪಿ.ರೇಖಾ ಉಪಸ್ಥಿತರಿದ್ದರು.

ಪಂಚ್ ಮಾರ್ಕ್ ನಾಣ್ಯಗಳು: ನಾಣ್ಯ ಸಂಗ್ರಹಣೆಯಲ್ಲಿ ಪಂಚ್ ಮಾರ್ಕ್ ನಾಣ್ಯಗಳಿಗೆ ವಿಶೇಷ ಸ್ಥಾನವಿದೆ. ಇವು ಸರಿಸುಮಾರು ಕ್ರಿಸ್ತ ಪೂರ್ವ 5 ಇಲ್ಲವೆ 6 ಶತಮಾನದಲ್ಲಿ ಚಲಾವಣೆಯಲ್ಲಿದ್ದ ನಾಣ್ಯಗಳಾಗಿವೆ. ಇವುಗಳ ವೀಕ್ಷಣೆ ಇತಿಹಾಸದ ಪುಟಗಳನ್ನು ತಿರುಚಿ ಹಾಕಿದಂತೆ ಭಾಸವಾಗುತ್ತವೆ. ಈ ಪಂಚ್ ಮಾರ್ಕ್ ನಾಣ್ಯ ಸಂಗ್ರಹದಲ್ಲಿ ಗ್ರೀಕ್, ರೋಮನ್, ಕುಶಾನರು, ಗುಪ್ತ ಶಾತವಾಹನ, ಕದಂಬ, ಚೋಳ, ಪಾಂಡ್ಯರ ಕಾಲದ ನಾಣ್ಯಗಳನ್ನು ನೋಡುವ ಅಪೂರ್ವ ಅವಕಾಶ ಸಾರ್ವಜನಿಕರಿಗೆ ದೊರಕಿತು.

ವಿವಿಧ ದೇಶಗಳ ನೋಟುಗಳು: ಭಾರತವನ್ನು ಒಳಗೊಂಡಂತೆ ವಿಶ್ವದ ವಿವಿಧ ರಾಷ್ಟ್ರಗಳು ಹೊರ ತಂದಿರುವ ನೋಟುಗಳ ಪ್ರದರ್ಶನ ಕುತೂಹಲಕಾರಿಯಾಗಿದೆ. ಇಂಡೋನೇಷಿಯಾವು ಭಾರತದೊಂದಿಗೆ ಸೌಹಾರ್ದ ಸಂಬಂಧಗಳ ಹಿನ್ನೆಲೆಯಲ್ಲಿ ಹೊರ ತಂದ 'ಗಣೇಶ'ನ ಚಿತ್ರವನ್ನು ಹೊಂದಿದ ನೋಟು ಅಪರೂಪದ್ದಾಗಿದೆ. ನಿಜಾಮರ ಕಾಲದ ಕ್ರಿ.ಶ. 1657–1672ರ ಅವಧಿಯ ಸಿಲ್ವರ್ ಕಾಯಿನ್ 'ಲ್ಯಾರಿನ್' ನಾಣ್ಯ 'ಸೂಜಿ'ಯಂತೆ ಇದ್ದು, ಇದನ್ನು ಸ್ಥಳೀಯವಾಗಿ ಸೂಜಿ ನಾಣ್ಯವೆಂದು ಕರೆಯುವ ರೂಢಿಯಲಿದೆ ಎಂದು ಕೇಶವಮೂರ್ತಿ ಮಾಹಿತಿ ನೀಡಿದರು. ಇವುಗಳೊಂದಿಗೆ ತಾಮ್ರ, ಬೆಳ್ಳಿ, ಚಿನ್ನ, ಸೀಸ, ಹಿತ್ತಾಳೆಯ ನೂರಾರು ನಾಣ್ಯಗಳು ಪ್ರದರ್ಶನದ ಪ್ರಮುಖ ಆಕರ್ಷಣೆಯಾಗಿದೆ. ಅದರೊಂದಿಗೆ ಪುರಾತನ ಕಾಲದಿಂದ ಇಂದಿನವರೆಗೂ ಚಲಾವಣೆಯಲ್ಲಿರುವ ಸ್ಟ್ಯಾಂಪ್ ಪೇಪರ್‌ಗಳು, ವಿವಿಧ ಮಾದರಿಯ ಬಾಂಡ್ ಪೇಪರ್‌ಗಳು ವ್ಯಾಪಾರ, ವ್ಯವಹಾರದ ಕುರುಹುಗಳಾಗಿ ಗಮನ ಸೆಳೆಯುತ್ತಿವೆ.

ಬುಧವಾರ ಚಿನ್ನದ ಕಿರೀಟ ಸಮರ್ಪಣೆ ವಾರ್ಷಿಕೋತ್ಸವ

ಮಡಿಕೇರಿ: ಶ್ರೀಕೋಟೆ ಮಹಾಗಣಪತಿ ದೇವಾಲಯದಲ್ಲಿ ಮೇ 21 ಮತ್ತು 22ರಂದು ಚಿನ್ನದ ಕಿರೀಟ ಸಮರ್ಪಣೆ ವಾರ್ಷಿಕೋತ್ಸವ ನಡೆಯಲಿದೆ ಎಂದು ದೇವಾಲಯ ದಸರಾ ಮಂಟಪ ಸಮಿತಿ ತಿಳಿಸಿದೆ. ಮೇ 21ರ ಸಂಜೆ 6 ಗಂಟೆಗೆ ಶ್ರೀ ಕೋಟೆ ಮಹಾಗಣಪತಿ ದೇವಾಲಯದಲ್ಲಿ ಭಜನೆ, ವಿಶೇಷ ಪೂಜೆ ನಡೆಯಲಿದ್ದು, ಭಕ್ತರಿಗೆ ಪ್ರಸಾದ ವಿತರಣೆಯಾಗಲಿದೆ ಎಂದು ಸಮಿತಿಯ ಅಧ್ಯಕ್ಷ ಬಿ.ವಿ.ಅರವಿಂದ್ ಹೇಳಿದ್ದಾರೆ.

ಸಂಪತ್ ಹತ್ಯೆ: ದಂಪತಿ ಸೇರಿ ಮೂವರ ಬಂಧನ



ಎಸ್.ಪಿ ರಾಮರಾಜನ್



ಬಿ.ಎಂ.ಕಿರಣ್



ಸಂಗೀತ



ಪಿ.ಎಂ.ಗಣಪತಿ

ಮಡಿಕೇರಿ: ಕುಶಾಲನಗರ ನಿವಾಸಿ ಸಂಪತ್ ಅಲಿಯಾಸ್ ಶಂಭು ಕೊಲೆ ಪ್ರಕರಣದ ಮೂವರು ಆರೋಪಿಗಳನ್ನು ಜಿಲ್ಲಾ ಪೊಲೀಸರು ಬಂಧಿಸಿದ್ದಾರೆ.

ಸೋಮವಾರಪೇಟೆ ಹಾನಗಲ್ಲು ಗ್ರಾಮ ನಿವಾಸಿ ಬಿ.ಎಂ.ಕಿರಣ್(44), ಹಾನಗಲ್ಲು ಚೌಡ್ಲು ಗ್ರಾಮ ನಿವಾಸಿ ಪಿ.ಎಂ.ಗಣಪತಿ(44) ಹಾಗೂ ಪ್ರಮುಖ ಆರೋಪಿ ಕಿರಣನ ಪತ್ನಿ ಸಂಗೀತ(35) ಎಂಬವರೇ ಬಂಧಿತ ಆರೋಪಿಗಳಾಗಿದ್ದಾರೆ. ಕಿರಣ್‌ನನ್ನು ಬೆಂಗಳೂರು, ಗಣಪತಿಯನ್ನು ಬೆಳ್ತಂಗಡಿ ಹಾಗೂ 3ನೇ ಆರೋಪಿ ಸಂಗೀತಾಳನ್ನು ಸೋಮವಾರಪೇಟೆಯಲ್ಲಿ ಬಂಧಿಸಿರುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಸುದ್ದಿಗಾರರಿಗೆ ಮಾಹಿತಿ ನೀಡಿದರು.

ಅಕ್ರಮ ಸಂಬಂಧ: ಮೃತ ಸಂಪತ್ ಮತ್ತು ಸಂಗೀತಳೊಂದಿಗೆ ಅಕ್ರಮ ಸಂಬಂಧ ಹೊಂದಿದ್ದು, ಈ ವಿಚಾರ ಪತಿ ಕಿರಣ್‌ಗೆ ತಿಳಿದ ಬಳಿಕ ಸಂಪತ್ ಮತ್ತು ಕಿರಣ್ ನಡುವೆ ಹೊಡೆದಾಟ ನಡೆದಿತ್ತು. ಈ ವೇಳೆ ಎರಡೂ ಕಡೆಗಳಿಂದ ದೂರುಗಳು ದಾಖಲಾಗಿದ್ದವು. ಈ ಬಳಿಕ ಸಂಗೀತ ಮಂಗಳೂರು ಕಡೆಗೆ ತೆರಳಿ ಅಲ್ಲಿ ನೆಲೆಸಿದ್ದು, ಸಂಪತ್ ಆಕೆಯೊಂದಿಗೆ ಸಂಪರ್ಕ ಸಾಧಿಸಿ ತನ್ನ ಜೊತೆಯಲ್ಲಿ ಸಂಬಂಧ ಮುಂದುವರೆಸುವಂತೆ ಪೀಡಿಸಿದ್ದನಲ್ಲದೆ ಸಂಗೀತಾಳ ಖಾಸಗಿ ವಿಡಿಯೋ ಮುಂದಿಟ್ಟು ಬ್ಲಾಕ್ ಮೇಲ್ ಮಾಡುತ್ತಿದ್ದ. ಇದು ಸಾಲದೆಂಬಂತೆ ಗಣಪತಿ ಸಂಬಂಧಿ ಜೊತೆಯಲ್ಲೂ ಅಕ್ರಮ ಸಂಬಂಧ ಹೊಂದಿದ್ದನೆನ್ನಲಾಗಿದೆ ಇದೇ ವಿಚಾರವಾಗಿ ಸಂಪತ್‌ನನ್ನು ಹತ್ಯೆ ಮಾಡಲಾಗಿದೆ ಎಂದು ಎಸ್‌ಪಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಆರೋಪಿಗಳ ಸೆರೆ: ಈ ಮೊದಲು ನಡೆದ ಹೊಡೆದಾಟ ಮತ್ತಿತ್ತರ ಮಾಹಿತಿ ಕಲೆ ಹಾಕಿ ಸಂಗೀತಾಳನ್ನು ತೀವ್ರ ವಿಚಾರಣೆಗೆ ಒಳಪಡಿಸಿದ ಸಂದರ್ಭ ಅಕ್ರಮ ಕೊಲೆ ಕೃತ್ಯದ ಹಿಂದೆ ಪತಿ ಕಿರಣ್ ಮತ್ತು ಆತನ ಸ್ನೇಹಿತ ಗಣಪತಿ ಕೂಡ ಇರುವುದು ಪತ್ತೆಯಾಗಿದೆ. ಕೊಲೆಯಾದ ಸಂಪತ್ ಮತ್ತು 3 ಮಂದಿ ಆರೋಪಿಗಳು ಕಳೆದ 15 ವರ್ಷಗಳಿಂದ ಸ್ನೇಹಿತರಾಗಿದ್ದರು ಎಂದರು. ಮೃತ ಸಂಪತ್ ವಿರುದ್ಧ 2023ರಲ್ಲಿ ಫೋಕ್ಸೋ ಪ್ರಕರಣ ಕೂಡ ದಾಖಲಾಗಿದೆ. ಕೊಲೆ ಆರೋಪಿ ಗಣಪತಿ ವಿರುದ್ಧ 2019ರಲ್ಲಿ ವ್ಯಕ್ತಿ ಮೇಲೆ ಗುಂಡು ಹಾರಿಸಿದ ಪ್ರಕರಣವಿದೆ ಎಂದು ಎಸ್.ಪಿ. ರಾಮರಾಜನ್ ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಕೊಡಗು ಅಡಿಷನಲ್ ಎಸ್.ಪಿ. ಬಾರಿಕೆ ದಿನೇಶ್ ಕುಮಾರ್, ಸೋಮವಾರಪೇಟೆ ಡಿವೈಎಸ್‌ಪಿ ಚಂದ್ರಶೇಖರ್, ಕುಶಾಲನಗರ ವೃತ್ತ ನಿರೀಕ್ಷಕ ದಿನೇಶ್ ಕುಮಾರ್, ಮಡಿಕೇರಿ ಗ್ರಾಮಾಂತರ ವೃತ್ತ ನಿರೀಕ್ಷಕ ಚಂದ್ರಶೇಖರ್, ಜಿಲ್ಲಾ ಅಪರಾಧ ಪತ್ತೆದ ನಿರಂಜನ್, ಯೋಗೇಶ್, ಸಿಡಿಆರ್ ವಿಭಾಗದ ರಾಜೇಶ್ ಮತ್ತಿತ್ತರರು ಹಾಜರಿದ್ದರು.

ಅಶ್ವಿನಿ ಬಡಾವಣೆಯಲ್ಲಿ ನಮ್ಮ ಕ್ಲಿನಿಕ್ ಮತ್ತೆ ಕಾರ್ಯಾರಂಭ



ಅಶ್ವಿನಿ ಬಡಾವಣೆಯಲ್ಲಿ ಬಾಗಿಲು ಮುಚ್ಚಿದ್ದ ನಮ್ಮ ಕ್ಲಿನಿಕ್ ಅನ್ನು ಆರೋಗ್ಯ ಇಲಾಖೆ ಮತ್ತೆ ಆರಂಭವಾಗಿದೆ.

ಗುಂಡ್ಲುಪೇಟೆ, ಮೇ 18– (ಸೋಮ್.ಜಿ) ಪಟ್ಟಣದ ಅಶ್ವಿನಿ ಬಡಾವಣೆಯಲ್ಲಿ ನಮ್ಮ ಕ್ಲಿನಿಕ್ ಕಾರ್ಯಾರಂಭ ಮಾಡಿರುವುದು ಬಡಾವಣೆಯ ನಿವಾಸಿಗಳ ಮೆಚ್ಚುಗೆಗೆ ಪಾತ್ರವಾಗಿದೆ.

ಮೈಸೂರು ಮಿತ್ರ ಫಲಶ್ರುತಿ

'ಉದ್ಘಾಟನೆಗೊಂಡರೂ ಕಾರ್ಯಾರಂಭಗೊಳ್ಳದ ನಮ್ಮ ಕ್ಲಿನಿಕ್' ಎಂಬ ಶೀರ್ಷಿಕೆಯ ವಿಸ್ತೃತ ವರದಿಯನ್ನು ಪತ್ರಿಕೆ ಮೇ 14ರಂದು ಪ್ರಕಟಿಸಿತ್ತು. ಇದರಿಂದ ಎಚ್ಚೆತ್ತ ತಾಲೂಕು ಆರೋಗ್ಯ ಅಧಿಕಾರಿಗಳು ಮೂರು ದಿನಗಳಲ್ಲೇ ಮೇ 17 ರಿಂದ ನಮ್ಮ ಕ್ಲಿನಿಕ್ ಅನ್ನು ಕಾರ್ಯಾರಂಭ ಮಾಡಿದ್ದಾರೆ.

ಎರಡು ತಿಂಗಳ ಹಿಂದೆ ಉದ್ಘಾಟನೆಗೊಂಡರೂ ಸಿಬ್ಬಂದಿ ಕೊರತೆಯನ್ನು ಮುಂದಿಟ್ಟುಕೊಂಡು ಕಾರ್ಯಾರಂಭ ಮಾಡದೆ ಮುಚ್ಚಲಾಗಿತ್ತು. ಇಲ್ಲಿನ ನಿವಾಸಿಗಳು ಈ ಬಗ್ಗೆ ಬೇಸರ ವ್ಯಕ್ತಪಡಿಸಿದ್ದರು. ಈ ಬಗ್ಗೆ ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್ ಗಮನಕ್ಕೂ ತಂದಿತ್ತು. ಅಧಿಕಾರಿಗಳು ತಮ್ಮ ಸಿಬ್ಬಂದಿ ಮುಖಾಂತರ ಕಟ್ಟಡವನ್ನು ಶುಚಿಗೊಳಿಸಿ ಕಾರ್ಯ ಆರಂಭಗೊಳಿಸಿದ್ದು ಸಂತಸ ತಂದಿದೆ ಎಂದು ಬಡಾವಣೆಯ ನಿವಾಸಿಗಳು ಹರ್ಷ ವ್ಯಕ್ತಪಡಿಸಿದ್ದಾರೆ. ಇದಕ್ಕೆ ಕಾರಣವಾದ 'ಮೈಸೂರುಮಿತ್ರ'ನಿಗೆ ಧನ್ಯವಾದಗಳನ್ನು ತಿಳಿಸಿದ್ದಾರೆ.

ಮತೀಯವಾದದ ಮಾತಿಗೆ ಒಂದೇ ಉತ್ತರ ಸಂವಿಧಾನ: ಮಹದೇವಪ್ಪ



ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ಅಂಬೇಡ್ಕರ್ ಜಯಂತಿಯನ್ನು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಉದ್ಘಾಟಿಸಿದರು. ಶಾಸಕ ಎ.ಆರ್. ಕೃಷ್ಣಮೂರ್ತಿ ಮೊದಲಾದವರು ಇದ್ದರು.

ಯಳಂದೂರು, ಮೇ 18–(ವಿ.ನಾಗರಾಜು) ದೇಶದಲ್ಲಿ ಇಂದು ಹಿಂದುತ್ವ, ಮತೀಯವಾದ ಧರ್ಮಸಂಸತ್ತು ಇತರೆ ಮಾತುಗಳು ಕೇಳಿ ಬರುತ್ತಿದ್ದು, ಇಂತಹ ಮನಸ್ಥಿತಿ ಇರುವವರಿಗೆ ಅಂಬೇಡ್ಕರ್ ವಿರಚಿತ ಸಂವಿಧಾನವೇ ಪ್ರಬಲ ಉತ್ತರವಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಹೇಳಿದ್ದಾರೆ

ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಅಂಬೇಡ್ಕರ್ ಸೇವಾ ಸಮಿತಿ ವತಿಯಿಂದ ತಾಲೂಕಿನ ಎಲ್ಲಾ ಗ್ರಾಮಗಳ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಅಂಬೇಡ್ಕರ್ ಸಂವಿಧಾನದ ಮೂಲಕ ಪೀಠಿಕೆಯಲ್ಲೇ ಭಾರತೀಯರಾದ ನಾವು ಎಂಬ ಸ್ಪಷ್ಟ ಸಂದೇಶ ನೀಡಿದ್ದಾರೆ. ಇಲ್ಲಿ ಎಲ್ಲರನ್ನೂ ಒಳಗೊಂಡಂತೆ ಎಂಬ ವಿಶಾಲ ಅರ್ಥವಿದೆ. ಧರ್ಮದ ಆಧಾರದ ಮೇಲೆ ರಾಷ್ಟ್ರ ನಡೆಸುವ ಅಗತ್ಯತೆ ನಮ್ಮ ದೇಶಕ್ಕಿಲ್ಲ. ಭಾರತೀಯರೆಲ್ಲರೂ ಒಂದೇ ಸಂವಿಧಾನವೇ ನಮ್ಮ ಧರ್ಮ ಎಂಬ ಅಚಲ ನಿರ್ಧಾರವನ್ನು ಎಲ್ಲರೂ ತಾಳಬೇಕು ಎಂದು ಸಲಹೆ ನೀಡಿದರು.

ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ, ಈಗ ಜಾತಿ ಸಮೀಕ್ಷೆ ನಡೆಯುತ್ತಿದೆ. ನಾವು ಒಗ್ಗಟ್ಟಾಗುವ ಸಮಯ ಇದಾಗಿದೆ. ಹಾಗಾಗಿ ಆದಿ ಕರ್ನಾಟಕ, ಬಲಗೈ ಸಮುದಾಯದವರು ಉಪಜಾತಿಯಲ್ಲಿ ಹೊಲೆಯ ಎಂಬ ಪದವನ್ನೇ ನಮೂದಿಸಬೇಕು. ಈ ಮೂಲಕ ಮುಂದಿನ ಪೀಳಿಗೆಗೆ ಅನುಕೂಲ ಮಾಡಿಕೊಡಬೇಕು. ಎಂದರು.

ಉರಿಲಿಂಗಪೆದ್ದಿ ಮಠದ ಜ್ಞಾನಪ್ರಕಾಶ ಸ್ವಾಮೀಜಿ, ಸಂಸದ ಸುನೀಲ್ ಬೋಸ್, ಟಿ.ನರಸೀಪುರ ನಳಂದ ಬುದ್ಧವಿಹಾರದ ಬೋಧಿರತ್ನ ಬಂತೇಜಿ, ಮಾಜಿ ಶಾಸಕರಾದ ಎನ್.ಮಹೇಶ್, ಜಿ.ಎನ್. ನಂಜುಂಡಸ್ವಾಮಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಎಸ್‌ಎಸ್ ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಇದಕ್ಕೂ ಮುಂಚೆ ಸಾವಿರಾರು ಜನರು ವಿವಿಧ ಕಲಾತಂಡಗಳು ಅಲಂಕೃತ ಎತ್ತಿನಗಾಡಿ, ಆಟೋಗಳಲ್ಲಿ ಅಂಬೇಡ್ಕರ್ ಭಾವಚಿತ್ರವನ್ನು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಅದ್ಧೂರಿಯಾಗಿ ಮೆರವಣಿಗೆ ಮಾಡಲಾಯಿತು.

ಪಪಂ ಅಧ್ಯಕ್ಷೆ ಲಕ್ಷ್ಮಿ ಮಲ್ಲು ಸದಸ್ಯರಾದ ಸುಶೀಲಾ ಪ್ರಕಾಶ್, ಸವಿತಾ ಬಸವರಾಜು, ಲಿಂಗರಾಜಮೂರ್ತಿ, ಜಿಪಂ ಮಾಜಿ ಉಪಾಧ್ಯಕ್ಷ ಜೆ.ಯೋಗೇಶ್, ವಡಗೆರೆದಾಸ್, ಕಮಲ್ ನಾಗರಾಜು ಬಿಳಿಗಿರಿ ರಂಗನಬೆಟ್ಟ ದೇಗುಲದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಜೆ. ಶ್ರೀನಿವಾಸ್, ಕಿನಕಹಳ್ಳಿ ರಾಚಯ್ಯ, ಸಾಹಿತಿ ಶಂಕನಪುರ ಮಹದೇವ್ ತಾಪಂ ಮಾಜಿ ಅಧ್ಯಕ್ ನಿರಂಜನ್, ಸೇವಾಸ ಸಮಿತಿ ಸಂಚಾಲಕ ಕೆಸ್ತೂರು ಸಿದ್ದರಾಜು, ಸಿ.ರಾಜಣ್ಣ, ಉಮಾ ಶಂಕರ್, ಯರಿಯೂರು ಎನ್. ನಾಗೇಂದ್ರ, ಡಾ. ಶ್ರೀಧರ್, ಮುಡಿಗುಂಡ ಶಾಂತರಾಜು, ಹೊನ್ನೂರು ರೇವಣ್ಣ ಅನೇಕರು ಇದ್ದರು.

ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲು ನ್ಯಾಯಾಧೀಶ ಎನ್.ರಾಜು ಸಲಹೆ



ಅರಕಲವಾಡಿ ಗ್ರಾಮದಲ್ಲಿ ಅರಕಲವಾಡಿ ಜವರಯ್ಯ ತಮ್ಮ ಪುತ್ರನ ಸ್ಮರಣಾರ್ಥ ಮಕ್ಕಳಿಗೆ ಲೇಖನ ಸಾಮಾಗ್ರಿಗಳನ್ನು ವಿತರಿಸಿದರು.

ಚಾಮರಾಜನಗರ: ಶಿಕ್ಷಣಕ್ಕೆ ಆದ್ಯತೆ ನೀಡಿ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವಂತೆ ನ್ಯಾಯಾಧೀಶರಾದ ಎನ್.ರಾಜು ಕರೆ ನೀಡಿದ್ದಾರೆ.

ತಾಲೂಕಿನ ಅರಕಲವಾಡಿ ಗ್ರಾಮದ ಶ್ರೀರಾಮಲಿಂಗೇಶ್ವರ, ಶ್ರೀಮಂಟೇಸ್ವಾಮಿ ದೇವಸ್ಥಾನದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಪ್ರೋತ್ಸಾಹ ಧನ ವಿತರಿಸಿದ ಅವರು ಮಾತನಾಡಿ, ಗ್ರಾಮದ ಜವರಯ್ಯ ತಮ್ಮ ಪುತ್ರ ಅಭಿಷೇಕ ಸ್ಮರಣಾರ್ಥವಾಗಿ ಪ್ರತಿವರ್ಷವೂ ಗ್ರಾಮದ ಮಕ್ಕಳಿಗೆ ಲೇಖನ ಸಾಮಾಗ್ರಿಗಳ ವಿತರಣೆ, ಪ್ರೋತ್ಸಾಹ ಧನ ವಿತರಣೆ ಮಾಡುತ್ತಿರುವುದನ್ನು ಶ್ಲಾಘಿಸಿದರು. ಅಭಿಷೇಕ್ ಹೆಸರಿನಲ್ಲಿ ಟ್ರಸ್ಟ್ ಸ್ಥಾಪಿಸಿ ನಿರಂತರ ಸೇವೆ ಮಾಡಿದರೆ ಮುಂದಿನ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆಯುವ ವಿದ್ಯಾರ್ಥಿಗಳಿಗೆ ನಾನು ವೈಯಕ್ತಿಕವಾಗಿ ಸಹಾಯ ಮಾಡುತ್ತೇನೆ ಎಂದು ಆಶ್ವಾಸನೆ ನೀಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅರಕಲವಾಡಿ ಗುರುಸ್ವಾಮಿ ಮಾತನಾಡಿ, ಕಳೆದುಕೊಂಡ ಮಗನನ್ನು ಎಲ್ಲ ಮಕ್ಕಳಲ್ಲಿ ಕಾಣಬೇಕು ಎಂಬ ಅಭಿಲಾಷೆಯಿಂದ ಜವರಯ್ಯ ಅವರು ತಮ್ಮ ಮಗನ ಅಕಾಲಿಕ ಮರಣದಿಂದ ಬಂದ ಹಣವನ್ನು ಬ್ಯಾಂಕ್ ಠೇವಣಿ ಮಾಡಿ ಅದರಲ್ಲಿ ಬಂದ ಲಾಭದಿಂದ ಗ್ರಾಮದ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಅರಕಲವಾಡಿ ಜವರಯ್ಯ ಮಾತನಾಡಿ, ತಮ್ಮ ಪುತ್ರನ ಸ್ಮರಣಾರ್ಥವಾಗಿ ಪ್ರತಿ ವರ್ಷದಂತೆ ಈ ವರ್ಷವೂ 80 ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ, ಲೇಖನ ಸಾಮಾಗ್ರಿ, ಹಾಗೂ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಪಡೆದ 12 ಮಕ್ಕಳಿಗೆ ಪ್ರೋತ್ಸಾಹ ಧನ ವಿತರಿಸಲಾಗಿದೆ. ರೇಷ್ಮೆ ಇಲಾಖೆ ಜಂಟಿ ನಿರ್ದೇಶಕ ಮಹದೇವಯ್ಯ, ಮುಖಂಡ ಅರಕಲವಾಡಿ ನಾಗೇಂದ್ರ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ ಮಾಜಿ ಅಧ್ಯಕ್ಷ ಮಹದೇವಯ್ಯ, ರಾಮಯ್ಯ, ಯಜಮಾನ ಪುಟ್ಟಬಸಯ್ಯ ಹಾಜರಿದ್ದರು.

ಸಿಕಲ್ ಸೆಲ್ ರೋಗಿಗಳಿಗೆ ಉಚಿತ ಆರೋಗ್ಯ ತಪಾಸಣೆ



ಸಿಕಲ್ ಸೆಲ್ ಆರೋಗ್ಯ ಶಿಬಿರವನ್ನುದ್ದೇಶಿಸಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಂ.ಚಿದಂಬರ ಮಾತನಾಡಿದರು.

ಕೊಳ್ಳೇಗಾಲ: ತಾಲೂಕು ಆಸ್ಪತ್ರೆಯಲ್ಲಿ ಆದಿವಾಸಿ ಹಾಗೂ ಇತರೆ ಸಮುದಾಯದ ಸಿಕಲ್ ಸೆಲ್/ಕುಡಗೋಲು ಕೋಶ ರೋಗಿಗಳಿಗೆ ಉಚಿತ ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿತ್ತು. ಇದು ಕೇವಲ ಆರೋಗ್ಯ ಶಿಬಿರ ಮಾತ್ರವಾಗಿರದೆ, ಈ ಖಾಯಿಲೆ ಹೊಂದಿರುವವರಿಗೆ ಒಂದೇ ಸೂರಿನಡಿ ಅಂಗವೈಕಲ್ಯ ಪ್ರಮಾಣಪತ್ರಗಳನ್ನು ಸಹ ಒದಗಿಸಿದ ವೇದಿಕೆಯಾಗಿತ್ತು.

ಸೆಂಟರ್ ಫಾರ್ ಟ್ರೈನಿಂಗ್ ರಿಸರ್ಚ್ ಅಂಡ್ ಇನ್ನೋವೇಷನ್ ಇನ್ ಟ್ರೈಬಲ್ ಹೆಲ್ತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಂಟಿಯಾಗಿ ಜಿಲ್ಲೆಯಲ್ಲಿ ಎಸ್ಸಿಡಿ ಹೊಂದಿರುವ ಜನರಿಗಾಗಿ ಈ ಶಿಬಿರವನ್ನು ಆಯೋಜಿಸಿ ಇಂಥ 35 ಮಂದಿಗೆ ವಿಶಿಷ್ಟ ಅಂಗವೈಕಲ್ಯ ಐಡಿ (ಯುಡಿಐಡಿ)ಗಾಗಿ ಪ್ರಮಾಣೀಕರಿಸಲಾಯಿತು.

ಶಿಬಿರವನ್ನು ಉದ್ಘಾಟಿಸಿದ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಂ.ಚಿದಂಬರ ಮಾತನಾಡಿ, ಕುಡಗೋಲು ಕೋಶ ರೋಗದಿಂದ ಬಳಲುತ್ತಿರುವ ಜನರಿಗೆ ಇಂದು ಶಿಬಿರದ ಮಾದರಿಯಲ್ಲಿ ಅಂಗವೈಕಲ್ಯ ಪ್ರಮಾಣಪತ್ರಗಳನ್ನು ನೀಡಿದ ಮೊದಲ ಜಿಲ್ಲೆ ಎಂಬ ಹೆಮ್ಮೆಯ ಕ್ಷಣವಾಗಿದೆ. ಇದು ಮಕ್ಕಳಿಗೆ ಬರದಂತೆ ತಡೆಗಟ್ಟಲು ಈ ಖಾಯಿಲೆಯ ವಾಹಕಗಳಿಗೆ ಅನುವಂಶಿಕ ಸಮಾಲೋಚನೆಯ ಅಗತ್ಯ ಮತ್ತು ಜಾಗೃತಿಯ ಮಹತ್ವವನ್ನು ತಿಳಿಸಿದರು.

ಮೈಸೂರಿನ ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಜೆನೆಟಿಕ್ ಕೌನ್ಸೆಲರ್ ಮತ್ತು ಸೆಂಟರ್ ಫಾರ್ ಟ್ರೈನಿಂಗ್, ರಿಸರ್ಚ್ ಅಂಡ್ ಇನ್ನೋವೇಷನ್ ಇನ್ ಟ್ರೈಬಲ್ ಹೆಲ್ತ್ ಕೇಂದ್ರದ ಎಸ್ಸಿಡಿ ಕಾರ್ಯಕ್ರಮದ ಮುಖ್ಯಸ್ಥೆ ಡಾ.ದೀಪಾಭಟ್, ಮಾತನಾಡಿ, ಜಿಲ್ಲೆಯಲ್ಲಿ ಡಿಎಚ್‌ಒ ಡಾ.ಚಿದಂಬರ ಮತ್ತು ರಾಷ್ಟ್ರೀಯ ಸಿಕಲ್ ಸೆಲ್ ನಿರ್ಮೂಲನಾ ಅಭಿಯಾನ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ.ರವಿಕುಮಾರ್ ಅವರ ನಾಯಕತ್ವ ನಿಜಕ್ಕೂ ಶ್ಲಾಘನೀಯ. ಸಿಕಲ್ ಸೆಲ್ ಹೊಂದಿರುವ ಜನರಿಗೆ ನಿಯಮಿತವಾಗಿ ಶಿಬಿರಗಳನ್ನು ವ್ಯವಸ್ಥಿತವಾಗಿ ಆಯೋಜಿಸುತ್ತಿರುವ ಏಕೈಕ ಜಿಲ್ಲೆಯಾಗಿದೆ ಎಂದು ಶ್ಲಾಘಿಸಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ.ರವಿಕುಮಾರ್, ತಾಲೂಕು ಆಡಳಿತ ವೈದ್ಯಾಧಿಕಾರಿ ಡಾ.ರಾಜಶೇಖರ್, ವಿವಿಧ ಇಲಾಖೆಗಳ ತಜ್ಞ ವೈದ್ಯರು ಮತ್ತು ಸಿಬ್ಬಂದಿ, ಸೆಂಟರ್ ಫಾರ್ ಟ್ರೈನಿಂಗ್, ರಿಸರ್ಚ್, ಅಂಡ್ ಇನ್ನೋವೇಷನ್ ಇನ್ ಟ್ರೈಬಲ್ ಹೆಲ್ತ್ ಕೇಂದ್ರದ ಸಿಬ್ಬಂದಿ, ಬಿ.ಆರ್.ಹಿಲ್ಸ್‌ನ ವಿಜಿಕೆಕೆ ಆಸ್ಪತ್ರೆಯ ವೈದ್ಯಾಧಿಕಾರಿ ಮತ್ತು ಸಿಬ್ಬಂದಿ ಇದ್ದರು.

ಮಹಿಳಾ ಶಕ್ತಿಯಿಂದ ಕೆಎಸ್‌ಆರ್‌ಟಿಸಿಗೆ 328 ಕೋಟಿ ರೂ. ಲಾಭ

ಚಾಮರಾಜನಗರ, ಮೇ 18– ಜಿಲ್ಲೆಯಲ್ಲಿ ಶಕ್ತಿ ಯೋಜನೆ ಜಾರಿಯಾದ ದಿನದಿಂದ ಏಪ್ರಿಲ್‌ವರೆಗೆ ಚಾಮರಾಜನಗರ ವಿಭಾಗದಲ್ಲಿ ಮಹಿಳಾ ಪ್ರಯಾಣಿಕರು ಸಂಚರಿಸಿದ ಫಲವಾಗಿ ಕೆಎಸ್‌ಆರ್‌ಟಿಸಿಗೆ 328.16 ಕೋಟಿ ರೂ. ಆದಾಯ ಬಂದಿದೆ ಎಂದು ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಅಶೋಕ್ ತಿಳಿಸಿದ್ದಾರೆ.

2023ರ ಜೂನ್ 11 ರಂದು ಜಿಲ್ಲೆಯಲ್ಲಿ ಶಕ್ತಿ ಯೋಜನೆ ಜಾರಿಗೆ ಬಂದಿದ್ದು, ಇದುವರೆಗೆ 14,82,71,026 ಪ್ರಯಾಣಿಕರು ಪ್ರಯಾಣಿಸಿದ್ದು, ಈ ಪೈಕಿ 9,08,26,299 ಮಹಿಳಾ ಪ್ರಯಾಣಿಕರೇ ಆಗಿದ್ದಾರೆ. ಕೆಎಸ್‌ಆರ್‌ಟಿಸಿಗೆ ಒಟ್ಟಾರೆ 551,59,86,205 ರೂ. ಗಳ ಆದಾಯ ಬಂದಿದೆ. ಇದರಲ್ಲಿ ಮಹಿಳೆಯರು ಪ್ರಯಾಣಿಸಿದ್ದರಿಂದ 328,16,38,236 ರೂ. ಆದಾಯ ದೊರೆತಿದೆ. ಮಹಿಳೆಯರಿಗೆ ಶಕ್ತಿ ಯೋಜನೆಯ ಮೂಲಕ ಉಚಿತ ಪ್ರಯಾಣದ ಅವಕಾಶ ನೀಡಲಾಗಿದ್ದು, ಮಹಿಳೆಯರು ಪ್ರಯಾಣಿಸಿದ ಟಿಕೆಟ್ ಮೊತ್ತವನ್ನು ರಾಜ್ಯ ಸರ್ಕಾರ ಕೆಎಸ್‌ಆರ್‌ಟಿಸಿಗೆ ಪಾವತಿಸುತ್ತದೆ ಎಂದರು.

ಶಕ್ತಿ ಯೋಜನೆ ಜಾರಿಯಾದ ಬಳಿಕ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣಗಳು, ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುತ್ತಿರುವ ಮಹಿಳಾ ಭಕ್ತರ ಸಂಖ್ಯೆ ಗಣನೀಯವಾಗಿ ಹೆಚ್ಚಳವಾಗಿದೆ. ಮಲೆ ಮಹದೇಶ್ವರ ಬೆಟ್ಟ, ಬಿಳಿಗಿರಿರಂಗನಬೆಟ್ಟ, ಹಿಮವದ್ ಗೋಪಾಲಸ್ವಾಮಿ ಬೆಟ್ಟದ ದೇವಾಲಯಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭೇಟಿ ನೀಡಿದ್ದಾರೆ. ಈ ಯೋಜನೆಯಿಂದ ಧಾರ್ಮಿಕ ಕ್ಷೇತ್ರಗಳು, ಇನ್ನಿತರ ಪ್ರವಾಸಿ ತಾಣಗಳಲ್ಲಿ, ಜಾತ್ರಾ ಮಹೋತ್ಸವಗಳಲ್ಲಿ ಸಹಜವಾಗಿ ವ್ಯಾಪಾರ, ವಹಿವಾಟು ಬಿರುಸುಗೊಂಡಿರುವುದು ಕಂಡು ಬಂದಿದೆ.

ನನ್ನ ಇಂಜಿನಿಯರಿಂಗ್ ವ್ಯಾಸಂಗಕ್ಕಾಗಿ ಚಾಮರಾಜನಗರದಿಂದ ಮೈಸೂರಿಗೆ ಪ್ರತಿನಿತ್ಯ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಸಂಚರಿಸುತ್ತಿದ್ದೆ ಶಕ್ತಿಯೋಜನೆಯಿಂದಾಗಿ ನನಗೆ ಪ್ರತಿ ತಿಂಗಳು ಸಾವಿರಾರು ರೂ. ಉಳಿತಾಯವಾಯಿತು. ಈ ಹಣವನ್ನು ನನ್ನ ವ್ಯಾಸಂಗದ ಖರ್ಚಿಗೆ ಬಳಸಿಕೊಳ್ಳಲು ಸಹಾಯಕವಾಯಿತು.



– ಭಾವನಾ, ಚಾಮರಾಜನಗರ.

ಅಪರಿಚಿತ ವಾಹನ ಡಿಕ್ಕಿ : ಪಾದಚಾರಿ ಸಾವು

ಬೇಗೂರು: ಅಪರಿಚಿತ ವಾಹನ ಡಿಕ್ಕಿ ಹೊಡೆದು ಪಾದಚಾರಿ ಸಾವನ್ನಪ್ಪಿದ ಘಟನೆ ಗ್ರಾಮದ ಕೈಗಾರಿಕಾ ತರಬೇತಿ ಕೇಂದ್ರ ಮುಂದೆ ನಡೆದಿದೆ. ಮುಂಜಾನೆ ಅಪರಿಚಿತನೋರ್ವ ಮೈಸೂರು–ಊಟಿ ಹೆದ್ದಾರಿಯಲ್ಲಿ ಹೋಗುತ್ತಿದ್ದಾಗ ಅಪರಿಚಿತ ವಾಹನ ಡಿಕ್ಕಿ ಹೊಡೆದು ಪರಾರಿಯಾಗಿದೆ.

ನಿವೃತ್ತ ನ್ಯಾಯಮೂರ್ತಿ ಎಸ್.ಆರ್.ನಾಯಕ್ ನಿಧನ



ಬೆಂಗಳೂರು, ಮೇ 18– ನಿವೃತ್ತ ನ್ಯಾಯಮೂರ್ತಿ, ನಾಡೋಜ ಎಸ್.ಆರ್. ನಾಯಕ್ (80) ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಭಾನುವಾರ ನಿಧನರಾದರು. ಕರ್ನಾಟಕ ಹೈಕೋರ್ಟ್ ಹಂಗಾಮಿ ಮುಖ್ಯ ನ್ಯಾಯಮೂರ್ತಿಯಾಗಿದ್ದ ಇವರು ಛತ್ತೀಸ್‌ಗಢದ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿಯೂ ಸೇವೆ ಸಲ್ಲಿಸಿದ್ದಾರೆ. ಇವರು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಪ್ರಥಮ ಅಧ್ಯಕ್ಷರಾಗಿದ್ದರು. ಕರ್ನಾಟಕ ಕಾನೂನು ಆಯೋಗದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ನಾಯಕ್ ಸೇವೆಯನ್ನು ಪರಿಗಣಿಸಿ, ಹಂಪಿಯ ಕನ್ನಡ ವಿಶ್ವವಿದ್ಯಾಲಯವು ನಾಡೋಜ ಪ್ರಶಸ್ತಿಯನ್ನು ನೀಡಿ ಗೌರವಿಸಿತ್ತು.

ಎಸ್.ಆರ್.ನಾಯಕ್ ಅವರು ಪತ್ನಿ ಶಾಲಿನಿ ಎಸ್.ನಾಯಕ್, ಪುತ್ರ ಡಾ.ಎನ್.ಎಸ್. ನಾಯಕ್ ಹಾಗೂ ಪುತ್ರಿ ನಿಶಾ ಗಾಂವ್ಕರ್ ಹಾಗೂ ಅಪಾರ ಬಂಧುವರ್ಗವನ್ನು ಅಗಲಿದ್ದಾರೆ. ಮೇ 19ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಬೆಂಗಳೂರಿನ ಆರ್‌ಎಂವಿ ಎರಡನೇ ಹಂತದಲ್ಲಿರುವ ಸ್ವಗೃಹದಲ್ಲಿ ಪಾರ್ಥಿವ ಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ಇಡಲಾಗುತ್ತದೆ. ಸಂಜೆ 4 ಗಂಟೆಗೆ ಹೆಬ್ಬಾಳದ ಚಿತಾಗಾರದಲ್ಲಿ ಅಂತ್ಯ ಸಂಸ್ಕಾರವನ್ನು ನಡೆಸಲಾಗುತ್ತದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಸ್.ಆರ್.ನಾಯಕ್ ಅವರ ನಿಧನಕ್ಕೆ ಸಿಎಂ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದು, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಮೊದಲ ಅಧ್ಯಕ್ಷರು ಮತ್ತು ಕರ್ನಾಟಕ ಕಾನೂನು ಆಯೋಗದ ಮಾಜಿ ಅಧ್ಯಕ್ಷರು, ಮಾಜಿ ಮುಖ್ಯ ನ್ಯಾಯಮೂರ್ತಿ ಎಸ್.ಆರ್.ನಾಯಕ್ ನಿಧನದಿಂದ ತೀವ್ರ ದುಃಖವಾಗಿದೆ. ನ್ಯಾಯ, ಕಾನೂನು ಮತ್ತು ಮಾನವ ಹಕ್ಕುಗಳಿಗೆ ಅವರ ಕೊಡುಗೆಗಳು ಅನುಕರಣೀಯ. ಅವರ ಕುಟುಂಬ, ಸ್ನೇಹಿತರು ಮತ್ತು ಸಹೋದ್ಯೋಗಿಗಳಿಗೆ ನನ್ನ ಹೃತ್ಪೂರ್ವಕ ಸಂತಾಪಗಳು ಎಂದು ತಿಳಿಸಿದ್ದಾರೆ.

ಮಾವಿನ ಹಣ್ಣು ವಿಚಾರಕ್ಕೆ ದೊಡ್ಡಪ್ಪನ ಹತ್ಯೆ

ಮೈಸೂರು, ಮೇ 18– ಮಾವಿನಹಣ್ಣು ವಿಚಾರಕ್ಕೆ ದೊಡ್ಡಪ್ಪನನ್ನೇ ಹತ್ಯೆ ಮಾಡಿರುವ ಘಟನೆ ಬಿಳಿಕೆರೆ ಹೋಬಳಿ ವಡೆರಾಹೊಸಹಳ್ಳಿಯಲ್ಲಿ ಭಾನುವಾರ ಮಧ್ಯಾಹ್ನ ನಡೆದಿದೆ.

ಗ್ರಾಮದ ಮಲ್ಲೇಶ್(55) ಅವರನ್ನು ಇವರ ತಮ್ಮನ ಮಗನೇ ಚಾಕುವಿನಿಂದ ಚುಚ್ಚಿ ಕೊಲೆ ಮಾಡಿದ್ದು, ಈ ಸಂಬಂಧ ಬಿಳಿಕೆರೆ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತಲೆಮರೆಸಿಕೊಂಡಿದ್ದ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.

ಮಾವಿನ ಹಣ್ಣು ಹಂಚಿಕೆ ವಿಚಾರದಲ್ಲಿ ಮಲ್ಲೇಶ್ ಹಾಗೂ ಸಹೋದರರ ನಡುವೆ ಒಪ್ಪಂದವಾಗಿತ್ತು ಇಂದು ಮಧ್ಯಾಹ್ನ ಮಲ್ಲೇಶ್ ಅವರು ಮಾವಿನ ಹಣ್ಣು ಕೊಯ್ಯುವಾಗ ಅವರ ತಮ್ಮನ ಮಗ ಆಕ್ಷೇಪ ವ್ಯಕ್ತಪಡಿಸಿದ್ದಾನೆ ಈ ವೇಳೆ ಮಾತಿಗೆ ಮಾತು ಬೆಳೆದು ವಿಕೋಪಕ್ಕೆ ತಿರುಗಿದೆ. ಆ ವೇಳೆ ಮಲ್ಲೇಶ್ ಅವರಿಗೆ ತಮ್ಮನ ಮಗನೇ ಚಾಕುವಿನಿಂದ ಚುಚ್ಚಿದ್ದಾನೆ. ತೀವ್ರ ರಕ್ತಸ್ರಾವದಿಂದ ಮಲ್ಲೇಶ್ ಕುಸಿದು ಬಿದ್ದಿದ್ದಾರೆ. ಕೂಡಲೇ ಕುಟುಂಬದವರು ಹಾಗೂ ಗ್ರಾಮಸ್ಥರು ಮಲ್ಲೇಶ್ ಅವರನ್ನು ಬಿಳಿಕೆರೆ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೆ ಪರೀಕ್ಷಿಸಿದ ವೈದ್ಯರು, ಮಲ್ಲೇಶ್ ಸಾವನ್ನಪ್ಪಿರುವುದನ್ನು ದೃಢಪಡಿಸಿದ್ದಾರೆ.

ಬಳಿಕ ಮಲ್ಲೇಶ್ ದೇಹವನ್ನು ಮೈಸೂರು ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆಯ ಶವಾಗಾರಕ್ಕೆ ಸಾಗಿಸಿದ್ದು, ಸೋಮವಾರ ಬೆಳಗ್ಗೆ ವೈದ್ಯಕೀಯ ಪರೀಕ್ಷೆ ನಂತರ ದೇಹವನ್ನು ವಾರಸುದಾರರಿಗೆ ಒಪ್ಪಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಧರ್ಮಸ್ಥಳ ಮೂಲದ ಏರೋಸ್ಪೇಸ್ ಉದ್ಯೋಗಿ ಪಂಜಾಬ್‌ನಲ್ಲಿ ನಿಗೂಢ ಸಾವು



ಮಂಗಳೂರು, ಮೇ 18– ಧರ್ಮಸ್ಥಳ ಮೂಲದ ಯುವತಿ ಏರೋಸ್ಪೇಸ್ ಉದ್ಯೋಗಿ ಪಂಜಾಬ್‌ನಲ್ಲಿ ನಿಗೂಢವಾಗಿ ಮೃತಪಟ್ಟಿರುವ ಘಟನೆ ನಡೆದಿದೆ. ಆಕಾಂಕ್ಷ .ಎಸ್ ನಾಯರ್(22) ಮೃತ ಯುವತಿ.

22 ವರ್ಷದ ಆಕಾಂಕ್ಷ .ಎಸ್ ನಾಯರ್ ಏರೋಸ್ಪೇಸ್ ಉದ್ಯೋಗಿಯಾಗಿದ್ದು, ಧರ್ಮಸ್ಥಳ ಬಳಿಯ ಬೋಳಿಯಾರ್ ಗ್ರಾಮದ ನಿವಾಸಿ ಸುರೇಂದ್ರ ಮತ್ತು ಸಿಂಧೂದೇವಿ ದಂಪತಿ ಪುತ್ರಿ. ಆರು ತಿಂಗಳ ಹಿಂದೆ ಏರೋಸ್ಪೇಸ್ ಇಂಜಿನಿಯರ್ ಆಗಿ ಡೆಲ್ಲಿಯಲ್ಲಿ ಉದ್ಯೋಗಕ್ಕೆ ಸೇರಿದ್ದರು.

ಪಂಜಾಬಿನ ಎಲ್‌ಪಿಯು ಪಗ್ವಾಡ ಕಾಲೇಜಿನಲ್ಲಿ ಉನ್ನತ ಶಿಕ್ಷಣ ಪಡೆದುಕೊಂಡಿದ್ದ ಅವರು ಕಾಲೇಜಿನಿಂದ ಸರ್ಟಿಫಿಕೇಟ್ ಪಡೆಯಲು ಪಂಜಾಬ್‌ಗೆ ತೆರಳಿದ್ದರು. ಅಲ್ಲಿ ಉಳಿದುಕೊಂಡಿದ್ದ ಕೊಠಡಿಯ 3ನೇ ಮಹಡಿಯಿಂದ ಬಿದ್ದು ಮೃತಪಟ್ಟಿದ್ದಾರೆ.

ಈ ವಿಷಯ ತಿಳಿದ ಕೂಡಲೇ ಪಂಜಾಬ್‌ನ ಜಲಂದರ್ ಪೋಲೀಸರು ಸ್ಥಳಕ್ಕೆ ಭೇಟಿ ನೀಡಿ ತನಿಖೆ ನಡೆಸುತ್ತಿದ್ದಾರೆ. ಯುವತಿ ಸಾವಿನ ಬಗ್ಗೆ ಸಾಕಷ್ಟು ಅನುಮಾನ ಹುಟ್ಟಿಕೊಂಡಿದ್ದು, ಪಂಜಾಬ್‌ನ ಜಲಂದರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸುಪ್ರಿಯಾ ಸುಳೆ ಸೇರಿದಂತೆ 17 ಸಂಸದರಿಗೆ 'ಸಂಸದ್ ರತ್ನ' ಪ್ರಶಸ್ತಿ



ನವದೆಹಲಿ, ಮೇ 18– ಹದಿನೇಳು ಸಂಸದರು ಮತ್ತು ಎರಡು ಸಂಸದೀಯ ಸ್ಥಾಯಿ ಸಮಿತಿಗಳನ್ನು 2025ರ 'ಸಂಸದ್ ರತ್ನ' ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಸಂಸದರು ನೀಡಿದ ಕೊಡುಗೆಗಾಗಿ ಪ್ರೈಮ್ ಪಾಯಿಂಟ್ ಫೌಂಡೇಶನ್ ಸಂಸದರಿಗೆ ಈ ಪ್ರಶಸ್ತಿ ನೀಡುತ್ತಿದೆ. ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ (ಎನ್‌ಸಿಬಿಸಿ) ಅಧ್ಯಕ್ಷ ಹಂಸರಾಜ್ ಅಹಿರ್ ಅಧ್ಯಕ್ಷತೆಯ ತೀರ್ಪುಗಾರರ ಸಮಿತಿಯು ಆಯ್ಕೆ ಮಾಡಿದೆ.

ಮಹತಾಬ್, ಸುಪ್ರಿಯಾ ಸುಳೆ (ಎನ್‌ಸಿಪಿ–ಎಸ್‌ಪಿ), ಎನ್.ಕೆ. ಪ್ರೇಮಚಂದ್ರನ್ (ಆರ್‌ಎಸ್‌ಪಿ) ಮತ್ತು ಶ್ರೀರಂಗ ಅಪ್ಪ ಬಾರ್ನೆ ಅವರು ಸಂಸದೀಯ ಪ್ರಜಾಪ್ರಭುತ್ವಕ್ಕೆ ಅತ್ಯುತ್ತಮ ಮತ್ತು ಸ್ಥಿರ ಕೊಡುಗೆಗಾಗಿ ಪ್ರಶಸ್ತಿಗಳನ್ನು ಸ್ವೀಕರಿಸಲಿದ್ದಾರೆ.

ಈ ನಾಲ್ವರು ಸಂಸದರು 16 ಮತ್ತು 17ನೇ ಲೋಕಸಭೆಯಲ್ಲಿ ಅತ್ಯುತ್ತಮ ಕೆಲಸ ಮಾಡಿದ್ದರು ಹಾಗೂ ಸದ್ಯ ಅವರ ಅಧಿಕಾರಾವಧಿಯಲ್ಲಿಯೂ ಅದೇ ರೀತಿ ಮುಂದುವರೆದಿದ್ದಾರೆ ಎಂದು ಪ್ರೈಮ್ ಪಾಯಿಂಟ್ ಫೌಂಡೇಶನ್ ಹೇಳಿಕೆ ತಿಳಿಸಿದೆ.

ಸ್ಮಿತಾ ವಾಘ್ (ಬಿಜೆಪಿ), ಅರವಿಂದ ಸಾವಂತ್ (ಶಿವಸೇನಾ ಯುಬಿಟಿ), ನರೇಶ್ ಗಣಪತ್ ಮಾಸ್ಕೆ (ಶಿವಸೇನಾ), ವರ್ಷಾ ಗಾಯಕ್ವಾಡ್(ಕಾಂಗ್ರೆಸ್), ಮೇಧಾ ಕುಲಕರ್ಣಿ(ಬಿಜೆಪಿ), ಪ್ರವೀಣ್ ಪಟೇಲ್ (ಬಿಜೆಪಿ), ರವಿಕಿಶನ್ (ಬಿಜೆಪಿ), ನಿಶಿಕಾಂತ್ ದುಬೆ (ಬಿಜೆಪಿ), ಬಿದ್ಯುತ್ ಬರನ್ ಮಹಾತೋ (ಬಿಜೆಪಿ), ಪಿ.ಪಿ. ಚೌಧರಿ (ಬಿಜೆಪಿ), ಮದನ್ ರಾಥೋಡ್ (ಬಿಜೆಪಿ), ಸಿ.ಎನ್. ಅಣ್ಣಾದೊರೈ (ಡಿಎಂಕೆ) ಮತ್ತು ದಿಲೀಪ್ ಸೈಕಿಯಾ (ಬಿಜೆಪಿ) ಸೇರಿದ್ದಾರೆ.

ಸಂಸತ್ತಿಗೆ ಸಲ್ಲಿಸಿದ ವರದಿಗಳ ಆಧಾರದ ಮೇಲೆ ಅವರ ಅಸಾಧಾರಣ ಕಾರ್ಯಕ್ಷಮತೆಗಾಗಿ ಎರಡು ಇಲಾಖಾ ಸಂಬಂಧಿತ ಸ್ಥಾಯಿ ಸಮಿತಿಗಳಿಗೂ ಪ್ರಶಸ್ತಿ ಘೋಷಿಸಲಾಗಿದೆ. ಹಣಕಾಸು ಸ್ಥಾಯಿ ಸಮಿತಿಗೆ ಮಹ್ತಾಬ್ ಅಧ್ಯಕ್ಷತೆ ವಹಿಸಿದ್ದರೆ, ಕೃಷಿ ಸ್ಥಾಯಿ ಸಮಿತಿಗೆ ಕಾಂಗ್ರೆಸ್‌ನ ಚರಂಜಿತ್ ಸಿಂಗ್ ಚನ್ನಿ ಅಧ್ಯಕ್ಷತೆ ವಹಿಸಿದ್ದಾರೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 18– ನಗರದ ದಿ ಮೈಸೂರು ಮರ್ಚೆಂಟ್ಸ್ ಕೋಆಪರೇಟಿವ್ ಬ್ಯಾಂಕ್ ತನ್ನ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅರ್ಜಿ ಆಹ್ವಾನಿಸಿದೆ.

ಈ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿ.ಯು. ಪರೀಕ್ಷೆಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ತಲಾ 20 ಮಕ್ಕಳಿಗೆ 5 ಸಾವಿರ ನಗದು ಪುರಸ್ಕಾರ ಹಾಗೂ ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿದ ಮೂವರು ಮಕ್ಕಳಿಗೆ ತಲಾ 5 ಸಾವಿರ ನಗದು ಪುರಸ್ಕಾರ ನೀಡಲಾಗುವುದು.

ಆಸಕ್ತರು ಜೂನ್ 2ರೊಳಗೆ ಜಗನ್ಮೋಹನ ಅರಮನೆ ರಸ್ತೆಯಲ್ಲಿರುವ ಬ್ಯಾಂಕ್ ಕಚೇರಿಯ ಪ್ರಧಾನ ವ್ಯವಸ್ಥಾಪಕರಿಗೆ 2 ಭಾವಚಿತ್ರದೊಂದಿಗೆ ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

ಬಸವಣ್ಣನವರ ತತ್ವಾದರ್ಶ ಮೈಗೂಡಿಸಿಕೊಳ್ಳಿ

ವಾಟಾಳು ಸೂರ್ಯ ಸಿಂಹಾಸನ ಮಠದ ಪೀಠಾಧ್ಯಕ್ಷ ಶ್ರೀಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ

ತಿ.ನರಸೀಪುರ, ಮೇ 18– ಬಸವ ಜಯಂತಿ ಆಚರಣೆ ವೇಳೆ ಬಸವಣ್ಣನವರಿಗೆ ನಮನ ಸಲ್ಲಿಸುವ ಜೊತೆಗೆ ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲೂ ಮೈಗೂಡಿಸಿಕೊಳ್ಳಬೇಕು ಎಂದು ವಾಟಾಳು ಸೂರ್ಯ ಸಿಂಹಾಸನ ಮಠದ ಪೀಠಾಧ್ಯಕ್ಷ ಶ್ರೀಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಸಲಹೆ ನೀಡಿದರು.

ತಾಲೂಕಿನ ಸುಜ್ಜಲೂರು ಗ್ರಾಮದಲ್ಲಿ ಶ್ರೀಬಸವ ಬಳಗದಿಂದ ಹಮ್ಮಿಕೊಳ್ಳಲಾಗಿದ್ದ ಶ್ರೀಬಸವೇಶ್ವರ ಜಯಂತಿಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಸುಜ್ಜಲೂರು ಗ್ರಾಮದಲ್ಲಿ ಪ್ರತಿ ವರ್ಷ ನಡೆಯುವ ಕೊಂಡೋತ್ಸವ ಪ್ರಸಿದ್ಧಿ ಪಡೆದಿದೆ. ಅದರೊಂದಿಗೆ ಈಗ ಗ್ರಾಮಸ್ಥರೆಲ್ಲರೂ ಸೇರಿ ವಿಜೃಂಭಣೆಯಿಂದ ಬಸವ ಜಯಂತಿ ಆಚರಣೆಗೆ ಮುಂದಾಗಿರುವುದು ಶ್ಲಾಘನೀಯ. ಆದರೆ ಗ್ರಾಮಸ್ಥರು ಕೇವಲ ಬಸವ ಜಯಂತಿ ಆಚರಣೆ ಮಾಡುವುದು ಮುಖ್ಯವಲ್ಲ. ಬಸವಣ್ಣನವರ ತತ್ವ, ಸಿದ್ಧಾಂತಗಳು ಹಾಗೂ ಅವರ ವಚನಗಳನ್ನು ಅರ್ಥೈಸಿಕೊಂಡಾಗ ಮಾತ್ರ ಜಯಂತಿ ಆಚರಣೆಗೆ ಅರ್ಥ ಬಂದಂತಾಗುತ್ತದೆ. ಗುಡಿ ಗೋಪುರ ಮಾಡುವುದು ಮುಖ್ಯವಲ್ಲ. ಗುಡಿಯಲ್ಲಿ ಶಿವಲಿಂಗ ಸ್ಥಾಪನೆ ಸಹ ಮುಖ್ಯವಾಗುವುದಿಲ್ಲ. ಶುದ್ಧ ಮನಸ್ಸಿರಬೇಕು. ಭಕ್ತಿ ಇರಬೇಕು. ಇದು ಇಲ್ಲದ ಹೊರತು ಯಾವುದೇ ಗುಡಿ ಗೋಪುರ ಮಾಡಿದರು ಅದು ವ್ಯರ್ಥ. ದೇವರು ಭಕ್ತಿಗೆ ಒಲಿಯುತ್ತಾನೆಯೋ ಹೊರತು ಆಡಂಭರಕ್ಕಲ್ಲ ಎಂದರು.


ಬಸವ ಜಯಂತಿಯನ್ನು ವಾಟಾಳು ಮಠದ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಉದ್ಘಾಟಿಸಿದರು.

ಬಸವಣ್ಣನವರ ವಚನವನ್ನು ಪೋಷಕರು ತಮ್ಮ ಮಕ್ಕಳಿಗೆ ಹೇಳಿಕೊಡುವ ಮೂಲಕ ಅವರಲ್ಲಿ ಭಕ್ತಿ ಭಾವ ತುಂಬುವ, ಮಠ ಮಂದಿರಗಳೆಡೆಗೆ ಅವರನ್ನು ಕರೆತರುವ ಕೆಲಸ ಮಾಡಬೇಕಿದೆ. ಶರಣ ಸಾಹಿತ್ಯ ಪರಿಷತ್ತು ಈ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತವಾಗಿದ್ದು, ವಚನಗಳನ್ನು ಗ್ರಾಮಾಂತರ ಪ್ರದೇಶಗಳಲ್ಲಿ ಪ್ರಚುರ ಪಡಿಸಲು ವಚನ ಗ್ರಾಮ ಮಾಡುವ ಉದ್ದೇಶ ಹೊಂದಲಾಗಿದ್ದು, ವಾಟಾಳುಪುರ ಗ್ರಾಮವನ್ನು ವಚನ ಗ್ರಾಮಕ್ಕೆ ಆಯ್ಕೆ ಮಾಡಲಾಗಿದೆ ಎಂದರು.

ಭಕ್ತಿ ಭಂಡಾರಿ ಬಸವಣ್ಣನವರ ಜಯಂತಿಯನ್ನು ಈ ಬಾರಿ ಪ್ರತಿಯೊಂದು ಗ್ರಾಮಗಳಲ್ಲೂ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಗ್ರಾಮದಲ್ಲಿ ವೀರಶೈವ ಸಮಾಜ ಜಾಗೃತವಾಗಿರುವುದಕ್ಕೆ ಇದು ಉತ್ತಮ ಉದಾಹರಣೆಯಾಗಿದೆ ಎಂದರು.

ಜೆಎಸ್‌ಎಸ್ ಸಂಸ್ಥೆ ಸಹ ಪ್ರಾಧ್ಯಾಪಕ ರಾಜು ಮಾತನಾಡಿ, ವಿದ್ಯೆ ದಾನ ಮಾಡಿದ್ದ ನಮ್ಮ ಸಮಾಜ ಈಗ ಶೈಕ್ಷಣಿಕವಾಗಿ ಹಿಂದುಳಿದಿದೆ. ಹಾಗಾಗಿ ಪೋಷಕರು ಸಾಧ್ಯವಾದಷ್ಟು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು. ಬಸವಣ್ಣನವರ ವಚನ ಮಾರ್ಗದಲ್ಲಿ ಸಾಗಿದರೆ ಯಶಸ್ಸು ಲಭಿಸುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದರು.

ಹೊಸೂರುಹುಂಡಿ ಮಠದ ಶ್ರೀರಾಜಶೇಖರ ಸ್ವಾಮೀಜಿ, ವಾಟಾಳು ಮಠದ ಕಿರಿಯ ಶ್ರೀಗಳಾದ ಶಿವಕುಮಾರಸ್ವಾಮಿ, ಮೊರಾರ್ಜಿ ದೇಸಾಯಿ ಶಾಲೆ ಪ್ರಾಚಾರ್ಯ ಮಹೇಶ್, ವಕೀಲರ ಸಂಘದ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ, ಹೋಟೆಲ್ ರಾಜಣ್ಣ, ಡೈರಿ ಗುರುಮೂರ್ತಿ, ವಕೀಲ ಪಾಲಾಕ್ಷ ಮೂರ್ತಿ, ಪುರಸಭೆ ಸದಸ್ಯ ಕಿರಣ್, ಮಹದೇಶ್ವರ ಭವನ್ ಶಿವಕುಮಾರ್, ಗುರುಮಲ್ಲಪ್ಪ, ಪ್ರಸಾದ್, ತೊಂಟೇಶ್, ಮೂಗೂರು ಕುಮಾರಸ್ವಾಮಿ, ಪೂಜಿತ್ ಮೆಡಿಕಲ್ ಕುಮಾರ್, ಕರೋಹಟ್ಟಿ ರಾಜಶೇಖರ್, ಬಿಜೆಪಿ ಕ್ಷೇತ್ರಾಧ್ಯಕ್ಷ ಶಿವಕುಮಾರ್, ಗೌಡ್ರ ಜಯಶಂಕರಸ್ವಾಮಿ, ತಾಪಂ ಮಾಜಿ ಸದಸ್ಯ ಚಂದ್ರಶೇಖರ್, ಜಿ.ಎಲ್. ಉಮೇಶ್, ನಿಲಸೋಗೆ ಮಹದೇವಪ್ರಸಾದ್, ಧರ್ಮಯ್ಯನಹುಂಡಿ ಪ್ರಭು, ಪೋಟೋ ಜಗದೀಶ್, ಕುರುಬೂರು ಕೆ.ಎಂ.ಶಾಂತರಾಜು, ಕಾಂಗ್ರೆಸ್ ಮುಖಂಡ ಗುರುಮಲ್ಲಪ್ಪ, ಚಾವಡಿ ಹಟ್ಟಿ ಮಹೇಶ್, ಗೌಡ್ರ ಜಯಸ್ವಾಮಿ, ಚಾವಡಿಹಟ್ಟಿ ಶೇಖರಪ್ಪ, ಮಹೇಶ್, ಪಟೇಲ್ ಪ್ರಕಾಶ್, ಮಿಲ್ ಮಹೇಶ್, ಡೈರಿ ಗಿರೀಶ್, ವಸಂತ್, ಮಲ್ಲಿಕಾರ್ಜುನಸ್ವಾಮಿ, ಅಡುಗೆ ಕಂಟ್ರಾಕ್ಟರ್ ಚೇತನ್, ಉಮೇಶ್, ದೇವರಾಜು, ಸಂಜಯ್, ಶೋಭರಾಜು, ಬಸವಣ್ಣ, ಸುರೇಶ್, ನಿಂಗಪ್ಪ, ಸುಭಾಷ್, ಕರೋಹಟ್ಟಿ ನವೀನ, ಮಣಿಕಂಠ, ನಾಗಣ್ಣ, ಸಚಿನ್, ಯೋಗೇಶ್, ಕಂಠೀರವ ಸೇರಿದಂತೆ ಗ್ರಾಮಸ್ಥರು ಯಜಮಾನರು ಹಾಜರಿದ್ದರು.

> ಬಸವಣ್ಣನವರು ಜಾತ್ಯಾತೀತ, ಸಾಮರಸ್ಯ, ಕಾಯಕ ನಿಷ್ಠೆಯನ್ನು ಜನತೆಯ ಜೀವನದಲ್ಲಿ ಬಿತ್ತಿ ಬದುಕನ್ನು ಸುಂದರಗೊಳಿಸಿದ್ದಾರೆ. ಬಸವಣ್ಣ ನವರು ರಚಿಸಿದ ವಚನಗಳಲ್ಲಿ ಮಾನವೀಯ ಮೌಲ್ಯ ಗಳಿವೆ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಸಾರ ಸತ್ವವಿದೆ. ಅವರ ಕಾಯಕವೇ ಕೈಲಾಸ ಎಂಬ ಸಂದೇಶ ನಮಗೆಲ್ಲ ದಾರಿ ದೀಪವಾಗಿದೆ. ತಾಲೂಕಿನೆಲ್ಲೆಡೆ ಬಸವ ಜಯಂತಿ ವಿಜೃಂಭಣೆಯಿಂದ ಆಚರಣೆ ಮಾಡ ಲಾಗುತ್ತಿದೆ. ಅಂತೆಯೇ ಮುಂಬರುವ ಬಸವ ಜಯಂತಿ ವೇಳೆಗೆ ಪ್ರತಿ ಗ್ರಾಮದಲ್ಲೂ ಬಸವೇಶ್ವರರ ಪುತ್ಥಳಿ ನಿರ್ಮಾಣ ಮಾಡುವ ಗುರಿಯನ್ನು ಗ್ರಾಮಸ್ಥರು ಹೊಂದಬೇಕು.
>
> –ಎಸ್‌ಎಂಆರ್ ಪ್ರಕಾಶ್, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ.

ಮನುಗನಹಳ್ಳಿ ಡೈರಿಯಲ್ಲಿ ಜೆಡಿಎಸ್ ಬೆಂಬಲಿತರ ಜಯ


ಮನುಗನಹಳ್ಳಿ ಡೈರಿ ಸದಸ್ಯರನ್ನು ಸನ್ಮಾನಿಸಲಾಯಿತು.

ಬೆಟ್ಟದಪುರ, ಮೇ 18– ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಸಮೀಪದ ಮನುಗನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ಜಯಬೇರಿ ಬಾರಿಸಿದ್ದಾರೆ.

ಒಟ್ಟು 9 ಸದಸ್ಯ ಬಲದ ಡೇರಿಗೆ 18 ಮಂದಿ ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ನಂತರ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರಾದ ಶಂಕರ್, ಕಾಳೇ ಗೌಡ, ರಮೇಶ್, ರವೀಂದ್ರ, ಲೋಕೇಶ್, ಭಾಗ್ಯ, ಆಶಾ ಸೇರಿದಂತೆ 7 ಮಂದಿ ಜಯಗಳಿಸಿದರೆ, ಕಾಂಗ್ರೆಸ್ ಶಿವಣ್ಣ, ಯೋಗೇಶ್ ಜಯಗಳಿಸಿದರು.

ಮಾಜಿ ಗ್ರಾಪಂ ಅಧ್ಯಕ್ಷ ಎಂ.ಟಿ.ಹನುಮಂತು ಮಾತನಾಡಿ, ನಮ್ಮ ನಾಯಕರಾದ ಮಾಜಿ ಶಾಸಕ ಕೆ.ಮಹದೇವ್ ಅವರ ಸಹಕಾರದಿಂದ ನಮ್ಮ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಜೆಡಿಎಸ್ ಬೆಂಬಲಿತರು ಹೆಚ್ಚಿನ ಸಂಖ್ಯೆಯಲ್ಲಿ ಜಯಗಳಿಸಿದ್ದಾರೆ. ಮುಂದಿನ ದಿನಗಳಲ್ಲಿ ಸದಸ್ಯರು ಒಗ್ಗಟ್ಟಿನಿಂದ ಸಂಘದ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು.

ಚುನಾವಣಾಧಿಕಾರಿಯಾಗಿ ಸಹಕಾರ ಇಲಾಖೆಯ ಗಿರೀಶ್ ಕರ್ತವ್ಯ ನಿರ್ವಹಿಸಿದರು. ಸಂಘದ ಕಾರ್ಯದರ್ಶಿ ಸತೀಶ್ ಇದ್ದರು. ಈ ವೇಳೆ ಬಿಜೆಪಿ ಮುಖಂಡ ರಾಮೇಗೌಡ, ಜೆಡಿಎಸ್ ಮುಖಂಡರಾದ ಮಾಜಿ ಗ್ರಾಪಂ ಅಧ್ಯಕ್ಷ ವೆಂಕಟೇಶ್, ದಿವಾಕರ್, ಕೆ.ಮಹದೇವ್, ಯೋಗೇಶ್, ಹನುಮಯ್ಯ, ರಾಜೇಗೌಡ, ಪ್ರಕಾಶ್, ಸೋಮೇಗೌಡ, ದಲಿತ ಮುಖಂಡ ಸಂಘಟನಾ ಕಾರ್ಯದರ್ಶಿ ಶ್ರೀನಿವಾಸ್ ಇದ್ದರು.

ಪಿಎಚ್.ಡಿ ಪದವಿ

ಮೈಸೂರು, ಮೇ 18– ಡಾ.ಎಂ. ಅಮೂಲ್ಯ ಅವರ ಮಾರ್ಗದರ್ಶನದಲ್ಲಿ ಪಿ.ವಿಷ್ಣು, ನಿರ್ವಹಣೆ ವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಯಲ್ಲಿ ಪಾಲ್ಗೊಳ್ಳಿ

ಹುಣಸೂರು, ಮೇ 18– ಕಲಾಧರೆ ಮತ್ತು ರಂಗ ಗರಡಿ ಸಂಸ್ಥೆ ಆಯೋಜಿಸಿದ್ದ ಮಕ್ಕಳ ಬೇಸಿಗೆ ಶಿಬಿರ ಸಮಾರೋಪ ಸಮಾರಂಭವನ್ನು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಗೋವಿಂದಯ್ಯ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಪಾಲ್ಗೊಳ್ಳುವಂತೆ ಪೋಷಕರು ಪ್ರೋತ್ಸಾಹಿಸಬೇಕು. ಅವರಲ್ಲಿರುವ ಪ್ರತಿಭೆ ಗುರ್ತಿಸಿ ಅವರಿಗೆ ವೇದಿಕೆ ಕಲ್ಪಿಸುವ ಕೆಲಸವಾಗಬೇಕು. ಪಠ್ಯೇತರ ಚಟುವಟಿಕೆಗಳಲ್ಲಿ ಮಕ್ಕಳು ಭಾಗವಹಿಸಿದರೆ ಅವರಲ್ಲಿ ಸಕಾರಾತ್ಮಕ ಚಿಂತನೆಗಳು ಹೆಚ್ಚಾಗುತ್ತವೆ. ಅಲ್ಲದೆ ಮೊಬೈಲ್‌ನಿಂದ ದೂರ ಉಳಿಯುತ್ತಾರೆ. ಜೊತೆಗೆ ಕ್ರಿಯಾತ್ಮಕವಾಗಿ ಆಲೋಚಿಸುವ ಕಡೆಗೆ ಸಾಗುತ್ತಾರೆ ಎಂದರು.


ಕಾರ್ಯಕ್ರಮವನ್ನು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಗೋವಿಂದಯ್ಯ ಉದ್ಘಾಟಿಸಿದರು.

ನಾಟಕ ಅಕಾಡೆಮಿ ಸದಸ್ಯ ಡಾ.ಜಾಹಿದಾ ಕೊಡಗು ಮಾತನಾಡಿ, ರಂಗಭೂಮಿ ನಮಗೆ ಗಟ್ಟಿತನ ತಂದು ಕೊಡುತ್ತದೆ. ಇತ್ತೀಚಿನ ಮಕ್ಕಳಿಗೆ ರಂಗ ಶಿಕ್ಷಣ ಅತ್ಯಂತ ಮುಖ್ಯವಾದದ್ದು. ತಾಲೂಕು ಮಟ್ಟದಲ್ಲಿ ಇಂತಹ ರಂಗ ಚಟುವಟಿಕೆಗಳು, ಬೇಸಿಗೆ ಶಿಬಿರಗಳು ಇನ್ನೂ ಹೆಚ್ಚು ನಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ರಂಗ ಕರ್ಮಿ ಆನಂದ್, ರಂಗಭೂಮಿ ಮತ್ತು ಚಲನಚಿತ್ರ ನಟ ಕುಮಾರ್ ಅರಸೇಗೌಡ, ಕಸಾಪ ಅಧ್ಯಕ್ಷ ಮಹದೇವ್, ಡ್ರೀಮ್ ಡ್ರೀಲ್ ಸಂಸ್ಥೆ ನಿರ್ದೇಶಕ ಶ್ರೀನಿಕೇತನ್, ಕಲಾಧರೆ ಸಂಸ್ಥೆ ಸಂಸ್ಥಾಪಕ ಅರ್ಜುನ್ ಮತ್ತು ರಂಗ ಗರಡಿ ಸಂಸ್ಥೆ ಅಧ್ಯಕ್ಷ ಸುಭಾಷ್ ಉಪಸ್ಥಿತರಿದ್ದರು.

ಮಕ್ಕಳು ಬೇಸಿಗೆ ಶಿಬಿರದಲ್ಲಿ ಕಲಿತ ಹಾಡುಗಳು, ನೃತ್ಯ, ಯೋಗ, ಬೀಸು ಕಂಸಾಳೆ ಜೊತೆಗೆ ಸುಭಾಷ್ ನಿರ್ದೇಶಿಸಿದ ಕೋಟಿ ಗಾನಹಳ್ಳಿ ರಾಮಯ್ಯನವರ ಹಕ್ಕಿಹಾಡು ನಾಟಕ ಮತ್ತು ಲಕ್ಷ್ಮಣ್ ತೀರ್ಥ ಉಳಿಸಿ ಎಂಬ ಆಶಯವನ್ನು ಇಟ್ಟುಕೊಂಡು ಅರ್ಜುನ್ ನಿರ್ದೇಶಿಸಿದ ಮಾತಾಡಿ ಪ್ಲೀಸ್ ನಾಟಕಗಳನ್ನು ಪ್ರದರ್ಶಿಸಿ ಗಣ್ಯರ, ಪೋಷಕರ ಮತ್ತು ಪ್ರೇಕ್ಷಕರ ಮೆಚ್ಚುಗೆ ಗಳಿಸಿದರು.

ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅಂಚೆ ಚೀಟಿ ಲೋಕಾರ್ಪಣೆ

ನಂಜನಗೂಡು, ಮೇ 18– ಕರ್ನಾಟಕದ ರಾಬಿನ್ ಹುಡ್ ಎಂದು ಪ್ರಖ್ಯಾತಿ ಗಳಿಸಿದ್ದ ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಒಬ್ಬ ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರ. ಅಂಚೆ ಇಲಾಖೆ ಅವರ ಹೆಸರಿನಲ್ಲಿ ಅಂಚೆ ಚೀಟಿ ಹೊರ ತಂದಿರುವುದು ಉತ್ತಮ ಬೆಳವಣಿಗೆ ಎಂದು ಉಪ ಅಂಚೆ ನಿರೀಕ್ಷಕ ವೆಂಕಟೇಶ್ ತಿಳಿಸಿದರು.

ನಗರದ ಅಂಚೆ ಕಚೇರಿಯಲ್ಲಿ ಅಂಚೆ ಇಲಾಖೆ ಹಾಗೂ ನಂಜನಗೂಡು ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಏರ್ಪಡಿಸಿದ್ದ ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅಂಚೆ ಚೀಟಿ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

1920ರಲ್ಲಿ ಅಸಹಕಾರ ಚಳುವಳಿ ಪ್ರಾರಂಭವಾದಾಗ ಸಿಂಧೂರ ಲಕ್ಷ್ಮಣ ತನ್ನದೇ ಆದ ವಿಶಿಷ್ಟ ಹಿಂಸಾತ್ಮಕ ರೀತಿ ಬ್ರಿಟಿಷರ ವಿರುದ್ಧ ಹೋರಾಡಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರ. ಐದು ಜನ ಸಮಾನ ಮನಸ್ಕರ ಗುಂಪು ಕಟ್ಟಿಕೊಂಡು ಬ್ರಿಟಿಷ್ ಸರ್ಕಾರ ಶೇಖರಿಸಿದ್ದ ತೆರಿಗೆ ಹಣ ಲೂಟಿ ಹೊಡೆದು ಬಡವರಿಗೆ ಹಂಚಿಕೆ ಮಾಡಿದ್ದರು. ಕೇವಲ ಬ್ರಿಟಿಷರಷ್ಟೇ ಅಲ್ಲದೆ ನಿರ್ದಯಿ ಶ್ರೀಮಂತರ ಹಣ ಕೂಡ ದೋಚಿ ಬಡವರಿಗೆ ಹಂಚುತ್ತಿದ್ದರು. ಆದ್ದರಿಂದಲೇ ಅವರನ್ನು ಕರ್ನಾಟಕದ ರಾಬಿನ್ ಹುಡ್ ಎಂದು ಕರೆಯುತ್ತಾರೆ. ಸಿಂಧೂರ ಲಕ್ಷ್ಮಣ ಅವರ ಶೌರ್ಯ ಮತ್ತು ಸಾಹಸ ಇಂದಿನ ಯುವಕರಿಗೆ ಆದರ್ಶವಾಗಬೇಕು. ಅವರ ಇತಿಹಾಸವನ್ನು ಮುಂದಿನ ಪೀಳಿಗೆಗೆ ತಿಳಿಸುವ ಸಲುವಾಗಿ ಅಂಚೆ ಇಲಾಖೆ ಅವರ ಹೆಸರಿನಲ್ಲಿ ಅಂಚೆ ಚೀಟಿ ಹೊರ ತಂದಿರುವುದು ಸಂತಸದ ವಿಷಯ ಎಂದರು.


ಕಾರ್ಯಕ್ರಮದಲ್ಲಿ ಅಂಚೆ ಚೀಟಿ ಲೋಕಾರ್ಪಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅಂಚೆ ಚೀಟಿ ಲೋಕಾರ್ಪಣೆಗೊಳಿಸಲಾಯಿತು. ಸಮಾರಂಭದಲ್ಲಿ ರಾಜ್ಯ ಪರಿಶಿಷ್ಟ ಪಂಗಡ ಸರ್ಕಾರಿ ನೌಕರರ ರಾಜ್ಯಾಧ್ಯಕ್ಷ ಜಗದೀಶ್ವರ ಮೂರ್ತಿ, ಅಖಿಲ ಭಾರತ ಪ.ಪಂಗಡ ಅಂಚೆ ನೌಕರರ ಸಂಘದ ಮಹಾ ಕಾರ್ಯದರ್ಶಿ ಮಂಜುನಾಥ್, ನಂಜನಗೂಡು ಅಂಚೆ ವಿಭಾಗದ ಮಾರುಕಟ್ಟೆ ಅಧಿಕಾರಿ ಮಹದೇವಪ್ಪ, ನಗರಸಭಾ ಸದಸ್ಯೆ ಗಾಯಿತ್ರಿ, ಕಬ್ಬಳ್ಳಿ ಸರ್ಕಾರಿ ಕಾಲೇಜಿನ ಪ್ರಾಂಶುಪಾಲ ಬಸವನಾಯಕ, ಮುಖಂಡರಾದ ಹನುಮಂತ ನಾಯಕ, ಸುಧೀಂದ್ರ, ತ್ರಿಮೂರ್ತಿ, ರಾಜೇಂದ್ರ, ರವಿ, ಜಯರಾಮ, ಮಹೇಶ ಹಲವರಿದ್ದರು.

ದೂರು ಸ್ವೀಕಾರ ಕಾರ್ಯಕ್ರಮ

ಮೈಸೂರು, ಮೇ 18– ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳಿಂದ ಮೇ 21 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲೂಕು ಪಂಚಾಯತ್ ಕಚೇರಿಯ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಶಂಖಹಳ್ಳಿ ಸ್ಮಶಾನ ಜಾಗ ಪರಿಶೀಲಿಸಿದ ತಹಸೀಲ್ದಾರ್

ಸರಗೂರು, ಮೇ 18– ತಾಲೂಕಿನ ಶಂಖಹಳ್ಳಿಯಲ್ಲಿ ಖಾಸಗಿ ವ್ಯಕ್ತಿಗಳು ಸಾರ್ವಜನಿಕ ಸ್ಮಶಾನಕ್ಕೆ ಹಾಕಲಾಗಿದ್ದ ತಂತಿ ಬೇಲಿ ಕಿತ್ತು ಹಾಕಿ ಉಳುಮೆ ಮಾಡಿದ್ದ ಹಿನ್ನೆಲೆಯಲ್ಲಿ ತಹಸೀಲ್ದಾರ್ ಮೋಹನಕುಮಾರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ನಂಜನಗೂಡಿನ ಹರದನಹಳ್ಳಿ ಗ್ರಾಮದ ನಿವಾಸಿಗಳಾದ ಸಣ್ಣಕೂಸಯ್ಯ, ಮಲ್ಲಾಜಯ್ಯ, ಮಹದೇವ ಅಲಿಯಾಸ್ ಗುಂಡು, ರಾಜೇಶ್, ದೊರೆಸ್ವಾಮಿ ಅವರು ಸ್ಮಶಾನ ಜಾಗ ತಮ್ಮದೆಂದು ಬೇಲಿ ಕಿತ್ತು ಹಾಕಿ ಉಳುಮೆ ಮಾಡಿದ್ದರು. ಈ ಹಿನ್ನಲೆಯಲ್ಲಿ ಗ್ರಾಮಸ್ಥರು ಸರಗೂರು ಪೊಲೀಸ್ ಠಾಣೆಗೆ ಮೇ 4 ರಂದು ದೂರು ನೀಡಿ, ತಹಸೀಲ್ದಾರ್‌ಗೆ ಮನವಿ ಸಲ್ಲಿಸಿದ್ದರು. ಹೀಗಾಗಿ ತಹಸೀಲ್ದಾರ್ ಭೇಟಿ ನೀಡಿ ಪರಿಶೀಲಿಸಿದರು.

ಕಾಂಗ್ರೆಸ್ ಮುಖಂಡ ನಂಜಪ್ಪ ಮಾತನಾಡಿ, ಗ್ರಾಮದ 2.05 ಎಕರೆ ಗುಂಡು ತೋಪು ಸರ್ಕಾರದ ಜಮೀನಾಗಿದ್ದು, ಈ ಪೈಕಿ 1 ಎಕರೆಯನ್ನು 2023 ಮಾ. 27 ರಂದು ಅಂದಿನ ಜಿಲ್ಲಾಧಿಕಾರಿ ರಾಜೇಂದ್ರ ಅವರು ಮಂಜೂರು ಮಾಡಿಕೊಟ್ಟಿದ್ದರು. ಅದನ್ನು 2025ರ ಮಾ.3 ರಂದು ನಮಗೆ ಕೆ.ಬೆಳತೂರು ಪಿಡಿಓ ಹಸ್ತಾಂತರ ಮಾಡಿದ್ದರು. ಅಲ್ಲದೇ ಶಾಸಕ ಅನಿಲ್ ಸಹ ಗ್ರಾಮಸ್ಥರ ಅನುಕೂಲಕ್ಕಾಗಿ ಸ್ಮಶಾನಕ್ಕೆ ಜಾಗ ನೀಡಲು ತಹಸೀಲ್ದಾರ್‌ಗೆ ತಿಳಿಸಿದ್ದರು. ಅದರಂತೆ ಶಂಖಹಳ್ಳಿ ಗ್ರಾಮಸ್ಥರು ಬೇಲಿ ಕಲ್ಲುಗಳನ್ನು ನೆಟ್ಟು ನಾಮ ಫಲಕವನ್ನು ಅಳವಡಿಸಿದ್ದರು. ಆದರೆ ಕೆಲವರು ಈ ಜಾಗ ನಮ್ಮದೆಂದು ಬೇಲಿ ಕಿತ್ತು ಹಾಕಿ ಉಳುಮೆ ಮಾಡಿದ್ದಾರೆ ಎಂದು ಆರೋಪಿಸಿದರು.


ಶಂಖಹಳ್ಳಿ ಸ್ಮಶಾನವನ್ನು ತಹಸೀಲ್ದಾರ್ ಮೋಹನಕುಮಾರಿ ಪರಿಶೀಲಿಸಿದರು.

ತಹಸೀಲ್ದಾರ್ ಮೋಹನಕುಮಾರಿ ಮಾತನಾಡಿ ಘಟನೆ ಸಂಬಂಧ ಮಾಹಿತಿ ಪಡೆದು ಈ ಜಾಗ ಯಾವುದೇ ಖಾಸಗಿ ವ್ಯಕ್ತಿಯ ಹೆಸರಿನಲ್ಲಿ ಇಲ್ಲ. ಈ ಜಾಗವನ್ನು ಸ್ಮಶಾನಕ್ಕಾಗಿ ಈ ಹಿಂದಿನ ಜಿಲ್ಲಾಧಿಕಾರಿ ಮಂಜೂರು ಮಾಡಿದ್ದು, ಕೆ.ಬೆಳತೂರು ಪಿಡಿಓ ಗ್ರಾಮಸ್ಥರಿಗೆ ಹಸ್ತಾಂತರಿಸಿದ್ದಾರೆ. ಅಲ್ಲದೇ ಈ ಜಾಗದಲ್ಲಿ ಹಲವು ವರ್ಷಗಳಿಂದ ಗ್ರಾಮದಲ್ಲಿ ಮೃತಪಟ್ಟವರ ಅಂತ್ಯಕ್ರಿಯೆ ಮಾಡಲಾಗಿದೆ. ಯಾವುದೆ ದಾಖಲಾತಿ ಇಲ್ಲದೇ ಬೇಲಿ ಕಿತ್ತು ಉಳುಮೆ ಮಾಡಿರುವುದು ಕಾನೂನು ಬಾಹೀರ ಎಂದು ತಿಳಿಸಿ ಸ್ಥಳದಲ್ಲೇ ನಿಂತು ಗ್ರಾಮಸ್ಥರಿಗೆ ಬೇಲಿಕಲ್ಲು ಹಾಕಿಸಿ ಶಂಖಹಳ್ಳಿ ಸಾರ್ವಜನಿಕರ ಸ್ಮಶಾನ ಎಂಬ ನಾಮಫಲಕ ಹಾಕಲಾಯಿತು. ಅಲ್ಲದೇ ಎಸ್‌ಐ ಕಿರಣ್ ಕುಮಾರ್ ಅವರಿಗೆ ಮುಂದೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲು ಸೂಚಿಸಿದರು.

ಈ ವೇಳೆ ಆರ್‌ಐ ರವಿಚಂದ್ರ, ವಿಎ ಚಂದ್ರಶೇಖರ್, ಸರ್ವೆ ಇಲಾಖೆ ನಾಗರಾಜು, ಇಓ ಪ್ರೇಮ್ ಕುಮಾರ್, ಎಎಸ್‌ಐ ಕೃಷ್ಣಕುಮಾರ್, ಕೆ.ಬೆಳತೂರು ಪಿಡಿಓ ಟಿ.ಎಸ್.ಯೋಗೇಂದ್ರ, ಗೌಡಿಕೆ ರಾಜಪ್ಪ, ಯಜಮಾನರಾದ ಗಿರಿನಾಯಕರು, ಸಣ್ಣ ತಿಮ್ಮನಾಯಕ, ಶೇಷನಾಯಕ, ನರಸಿಂಹನಾಯಕ, ಮಾಜಿ ಯಜಮಾನ ಬಿ.ತಿಮ್ಮನಾಯಕ, ಗ್ರಾಪಂ ಉಪಾಧ್ಯಕ್ಷೆ ಪ್ರೀತಿ, ಸದಸ್ಯರಾದ ವರದನಾಯಕ, ಪೇದೆಗಳಾದ ಇಮ್ರಾನ್, ಶೋಭಾ, ಆನಂದ್ ಇತರರಿದ್ದರು.

ಅಕ್ಕೂರು ಶಾಲೆಯಲ್ಲಿ ಕಳಪೆ ಕಾಮಗಾರಿ: ಆರೋಪ

ತಿ.ನರಸೀಪುರ, ಮೇ 18– ಸರ್ಕಾರಿ ಶಾಲೆಗೆ ನೆಲಹಾಸು ಹಾಕುವ ಕಾಮಗಾರಿ ಕಳಪೆಯಿಂದ ಕೂಡಿದ್ದು ಸರ್ಕಾರಿ ಹಣ ಲೂಟಿ ಮಾಡಲಾಗುತ್ತಿದೆ ಎಂದು ಸಾಮಾಜಿಕ ಕಾರ್ಯಕರ್ತ ಅಕ್ಕೂರು ರಾಜೇಶ್ ಆರೋಪಿಸಿದ್ದಾರೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಅಕ್ಕೂರು ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ 5 ಮತ್ತು 6ನೇ ತರಗತಿ ಕೊಠಡಿಗಳ ನೆಲಹಾಸು (ಟೈಲ್ಸ್) ಹಾಕಲು ಹಾಗೂ ಸುಣ್ಣ ಬಣ್ಣ ಬಳಿಯುವ ಕಾಮಗಾರಿಗೆ ಸರ್ಕಾರ ಎಸ್ಟಿಮೇಟ್ ಪ್ರಕಾರ 3 ಲಕ್ಷ ರೂ. ಬಿಡುಗಡೆ ಮಾಡಿದೆ. ಆದರೆ ಗುತ್ತಿಗೆ ಪಡೆದ ಗುತ್ತಿಗೆದಾರ ಗ್ರಾಪಂ ಸದಸ್ಯ ಅಕ್ಕೂರು ಗುರುಮೂರ್ತಿ ಕುಮ್ಮಕ್ಕಿನೊಂದಿಗೆ ಕಳಪೆ ಕಾಮಗಾರಿ ನಡೆಸಿದ್ದಾನೆ. ಈ ಬಗ್ಗೆ ಸಂಬಂಧಿಸಿದ ಇಲಾಖೆಗೆ ದೂರು ನೀಡಿ 15 ದಿನ ಕಳೆದರೂ ಯಾವುದೇ ಕ್ರಮಕ್ಕೆ ಇಲಾಖಾಧಿಕಾರಿಗಳು ಮುಂದಾಗದಿರುವುದು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ ಎಂದು ಅನುಮಾನ ವ್ಯಕ್ತಪಡಿಸಿದರು.

ಎಸ್ಟಿಮೇಟ್ ಪ್ರಕಾರ ಗುಣಮಟ್ಟದ ಕೆಲಸ ನಡೆದಿಲ್ಲ. ವೈಟ್ ಸಿಮೆಂಟ್ ಬಳಕೆ ಮಾಡಿಲ್ಲ. ಬಡ ಮಕ್ಕಳು ವಿದ್ಯಾಭ್ಯಾಸ ಮಾಡುವ ಶಾಲೆ ಎನ್ನುವ ಕಾರಣಕ್ಕೆ ಗುತ್ತಿಗೆದಾರ ತನಗಿಷ್ಟ ಬಂದಂತೆ ಕೆಲಸ ಮಾಡಿ ಪಂಚಾಯತ್‌ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಅಭಿಯಂತರರೊಂದಿಗೆ ಶಾಮೀಲಾಗಿ ಕಳಪೆ ಕಾಮಗಾರಿ ಮಾಡಿದ್ದಾನೆ ಎಂದು ಗಂಭೀರ ಆರೋಪ ಮಾಡಿದರು.

ಈ ಬಗ್ಗೆ ಗ್ರಾಮಸ್ಥರು ಗುತ್ತಿಗೆದಾರರನ್ನು ಪ್ರಶ್ನಿಸಿದರೆ ಗುತ್ತಿಗೆದಾರನ ಪರ ಅಕ್ಕೂರು ಗ್ರಾಪಂ ಸದಸ್ಯ ಗುರುಮೂರ್ತಿ ನನಗೆ ಸಚಿವರು, ಸಂಸದರು ಗೊತ್ತು. ಬಿಲ್ ಮಾಡಿಸಿಕೊಳ್ಳುವುದು ಗೊತ್ತಿದೆ ಎಂದು ದುರ್ವರ್ತನೆ ಪ್ರದರ್ಶಿಸುತ್ತಿದ್ದು, ಕೂಡಲೇ ಸಂಬಂಧಿಸಿದ ಇಲಾಖೆಯವರು ಕಾಮಗಾರಿ ಪರಿಶೀಲಿಸಿ ಗುಣಮಟ್ಟದ ಕಾಮಗಾರಿ ಕೈಗೊಳ್ಳಲು ಆದೇಶಿಸಬೇಕು. ಅಲ್ಲಿಯವರೆಗೆ ಗುತ್ತಿಗೆದಾರನಿಗೆ ಯಾವುದೇ ಬಿಲ್ ನೀಡಬಾರದು ಎಂದು ಆಗ್ರಹಿಸಿದರು.

ಜಾತಿ ಗಣತಿ ಸಮೀಕ್ಷೆ ಪರಿಶೀಲನೆ


ಮೂಗೂರು ಗ್ರಾಪಂ ವ್ಯಾಪ್ತಿಯ ಅಂಬೇಡ್ಕರ್ ಬಡಾವಣೆಯಲ್ಲಿ ನಡೆದ ಜಾತಿ ಗಣತಿ ಸಮೀಕ್ಷೆಯನ್ನು ಗ್ರಾಪಂ ವ್ಯಾಪ್ತಿಯ ಮೇಲ್ವಿಚಾರಕ ಸಿ.ಪುಟ್ಟಸ್ವಾಮಿ ಪರಿಶೀಲನೆ ನಡೆಸಿದರು. ಈ ವೇಳೆ ಸಮೀಕ್ಷೆ ಸಿಬ್ಬಂದಿ ವರ್ಗ ಹಾಜರಿದ್ದರು.

ಬೈಕ್‌ಗೆ ಕಾರು ಡಿಕ್ಕಿ: ಸವಾರ ಸಾವು

ಬನ್ನೂರು, ಮೇ 18– ಬೈಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಪಟ್ಟಣದ ಕಾವೇರಿ ಸೇತುವೆ ಬಳಿ ಭಾನುವಾರ ಮಧ್ಯಾಹ್ನ ನಡೆದಿದೆ.



ಪಟ್ಟಣ ಸಮೀಪದ ಹೂವಿನಕೊಪ್ಪಲು ಗ್ರಾಮದ ಕೆಂಪಯ್ಯ(70) ಸಾವನ್ನಪ್ಪಿದವರು. ಈತ ಭಾನುವಾರ ರಂಗಚಾರಿ ಹುಂಡಿ ಗ್ರಾಮದಲ್ಲಿ ನಡೆದ ಅಕ್ಕನ ಮಗಳ ಒಪ್ಪಂದ ಶಾಸ್ತ್ರಕ್ಕೆ ತೆರಳಿ ಮಧ್ಯಾಹ್ನ ಸ್ವಗ್ರಾಮಕ್ಕೆ ವಾಪಸ್ಸಾಗುತ್ತಿದ್ದ ವೇಳೆ ಬನ್ನೂರಿನ ಕಾವೇರಿ ಸೇತುವೆ ಬಳಿ ಮಳವಳ್ಳಿಯಿಂದ ಮೈಸೂರು ಕಡೆಗೆ ವೇಗವಾಗಿ ಬಂದ ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ತೀವ್ರ ಗಾಯಗೊಂಡ ಕೆಂಪಯ್ಯ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಘಟನೆ ಬಳಿಕ ಕಾರು ನಿಲ್ಲಿಸದೇ ಚಾಲಕ ಪರಾರಿಯಾಗಿದ್ದಾನೆ ಎನ್ನಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಬನ್ನೂರು ಠಾಣೆ ಪೊಲೀಸರು ಪರಿಶೀಲನೆ ನಡೆಸಿ ಶವವನ್ನು ಬನ್ನೂರು ಸಮುದಾಯ ಆರೋಗ್ಯ ಕೇಂದ್ರಕ್ಕೆ ರವಾನಿಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಜಾನಪದ ಸಂಸ್ಕೃತಿ ನಮ್ಮ ಬದುಕಿನ ಅವಿಭಾಜ್ಯ ಅಂಗ

ಶಾಸಕ ಅನಿಲ್ ಅಭಿಪ್ರಾಯ

ಹೆಚ್.ಡಿ.ಕೋಟೆ, ಮೇ 18– ಆಧುನಿಕ ನಾಗರಿಕತೆಯ ಯಾಂತ್ರಿಕ ಓಟದ ಬದುಕಿನ ನಡುವೆ ನಮ್ಮ ಜಾನಪದ ಸಂಸ್ಕೃತಿ ಮರೆಯಾಗುತ್ತಿದೆ ಎಂದು ಶಾಸಕ ಅನಿಲ್ ತಿಳಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2024–25ನೇ ಸಾಲಿನ ಸಮಾರೋಪ ಸಮಾರಂಭ ಹಾಗೂ ಜನ ಪದ ಉತ್ಸವ ಅಂಗವಾಗಿ ವೇದಿಕೆ ಮೇಲೆ ರಾಗಿ ಮತ್ತು ಭತ್ತದ ರಾಶಿಗೆ ಪೂಜೆ ಸಲ್ಲಿಸಿ, ರಾಗಿಕಲ್ಲು ಬೀಸಿ, ಭತ್ತ ಕುಟ್ಟುವ ಮೂಲಕ ವಿಶಿಷ್ಟವಾಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಾನಪದ ಸಂಸ್ಕೃತಿ ನಮ್ಮ ಹೆಮ್ಮೆ ಮತ್ತು ನಮ್ಮ ಬದುಕಿನ ಅವಿಭಾಜ್ಯ ಅಂಗ. ಹಳ್ಳಿಯ ಗ್ರಾಮೀಣ ಪರಿಸರದ ಜನಪದ ಸಂಸ್ಕೃತಿಯನ್ನು ವಿದ್ಯಾರ್ಥಿಗಳು ಕಾಲೇಜಿನ ಆವರಣದಲ್ಲಿ ಮರು ಸೃಷ್ಟಿಸಿದ್ದಾರೆ ಎಂದರು.

ಉತ್ಸವ, ಆಟ, ಊಟ, ಹಾಡು–ಹಸೆಗಳ ಮೂಲಕ ಜಾನಪದ ಸಂಸ್ಕೃತಿ ಉಳಿಸುವ ಕೆಲಸವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಯಶಸ್ವಿಯಾಗಿ ಮಾಡಿದ್ದಾರೆ. ಯುವ ಜನತೆಗೆ ಜಾನಪದ ಸಂಸ್ಕೃತಿ ಅರಿಯುವ ನಿಟ್ಟಿನಲ್ಲಿ ಇಂತಹ ಉತ್ಸವ ಮತ್ತು ಹಬ್ಬಗಳನ್ನು ಕಾಲೇಜಿನಲ್ಲಿ ನಡೆಸುವುದು ಅಗತ್ಯ ಎಂದರು.



ಕಾರ್ಯಕ್ರಮವನ್ನು ಶಾಸಕ ಅನಿಲ್ ಉದ್ಘಾಟಿಸಿದರು. ಮತ್ತೊಂದು ಚಿತ್ರದಲ್ಲಿ ಶಾಸಕ ಅನಿಲ್ ಅವರನ್ನು ಎತ್ತಿನ ಗಾಡಿಯಲ್ಲಿ ಮೆರವಣಿಗೆ ಮೂಲಕ ಕರೆತರಲಾಯಿತು.

> ಸತ್ತಿಗೆಗಳು, ಪಟ ಕುಣಿತ, ಕಂಸಾಳೆ, ಡೊಳ್ಳು, ತಮಟೆ ವಾದ್ಯ ಸೇರಿದಂತೆ ಜಾನಪದ ಕಲಾ ತಂಡಗಳ ಮೆರವಣಿಗೆಯಲ್ಲಿ ಹಳ್ಳಿಕಾರ್ ಎತ್ತಿನ ಬಂಡಿಯಲ್ಲಿ ಶಾಸಕ ಅನಿಲ್ ಕಾಲೇಜಿನ ಆವರಣದ ಸಮಾರಂಭದ ವೇದಿಕೆಗೆ ಆಗಮಿಸಿದರು.
> ಜಾನಪದ ಹಬ್ಬದ ಅಂಗವಾಗಿ ಕಾಲೇಜಿನ ಆವರಣದಲ್ಲಿ ಅಪ್ಪಟ ಹಳ್ಳಿಯ ಪರಿಸರವನ್ನು ವಿದ್ಯಾರ್ಥಿಗಳು ನಿರ್ಮಿಸಿದ್ದರು. ಹಳ್ಳಿಯ ಅಡುಗೆ ಒಲೆ, ನೀರು ಸೇದುವ ಬಾವಿಕಟ್ಟೆ, ಮರಕ್ಕೆ ಕಟ್ಟಿದ ಉಯ್ಯಾಲೆ, ಪಗಡೆ, ಬುಗುರಿ, ಕುಂಟೆ ಬಿಲ್ಲೆ ಆಟ, ಕಬಡ್ಡಿ, ಆಣೆಕಲ್ಲು, ಗೋಲಿಯಾಟ ಹೀಗೆ ಹಳ್ಳಿಯ ಜನಪದ ಆಟಗಳನ್ನು ಕಾಲೇಜಿನ ಆವರಣದಲ್ಲಿ ವಿದ್ಯಾರ್ಥಿಗಳು ಮರು ಸೃಷ್ಟಿಸಿದ್ದರು.

ಈಗಾಗಲೇ 4.5 ಕೋಟಿ ಅನುದಾನವನ್ನು ಸರ್ಕಾರದಿಂದ ತಂದು ಕಾಲೇಜಿಗೆ ಮೂಲ ಸೌಕರ್ಯ ಒದಗಿಸಲಾಗಿದೆ. ಈ ವರ್ಷದಿಂದ ಬಿಸಿಎ ವಿಭಾಗ ಆರಂಭವಾಗುತ್ತಿರುವುದು ಸಂತಸದ ವಿಷಯ. ಕಾಲೇಜಿನ ಪ್ರಾಂಶುಪಾಲರು ಮತ್ತು ಅಧ್ಯಾಪಕರು ಹೆಚ್ಚು ಪರಿಶ್ರಮದಿಂದ ಪ್ರಥಮ ವರ್ಷಕ್ಕೆ 200ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ದಾಖಲು ಮಾಡಿಸಿದರೆ, ಕಾಲೇಜಿನ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವುದಾಗಿ ಭರವಸೆ ನೀಡಿದರು.

ತಾಲೂಕಿನ ಪ್ರಗತಿಪರ ರೈತ ಮಲಾರ ಗ್ರಾಮದ ಮಲಾರ ಪುಟ್ಟಯ್ಯ ಮಾತನಾಡಿ, ವಿದ್ಯಾರ್ಥಿಗಳು ನಮ್ಮ ಜಾನಪದ ಸಂಸ್ಕೃತಿ ಉಳಿಸಿ ಬೆಳೆಸುವ ಕೆಲಸ ಮಾಡಬೇಕು. ಕೇವಲ ಸರ್ಕಾರಿ ಉದ್ಯೋಗ ಇಲ್ಲವೇ ವ್ಯಾಪಾರ ಮಾಡುವುದರ ಜೊತೆಗೆ ಕೃಷಿಯಲ್ಲೂ ಹೆಚ್ಚಿನ ಉದ್ಯೋಗದ ಅವಕಾಶಗಳು ಇವೆ. ರೈತರು ಸ್ವಾವಲಂಬಿ ಜೀವನ ನಡೆಸಬಹುದು ಎನ್ನುವುದಕ್ಕೆ ನಾನೇ ಉದಾಹರಣೆ. ಈ ಕಾರಣಕ್ಕಾಗಿಯೇ ಅರ್ಜಿ ಹಾಕದೆಯೇ ನನಗೆ ದಸರಾ ಉದ್ಘಾಟನೆ, ರಾಜ್ಯೋತ್ಸವ ಪ್ರಶಸ್ತಿ, ರೈತ ರತ್ನ, ಸಹಕಾರ ರತ್ನ ಪ್ರಶಸ್ತಿ ಬಂದಿದೆ ಎಂದರು.

ಈ ವೇಳೆ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಸಾಂಸ್ಕೃತಿಕ ಮತ್ತು ಕ್ರೀಡೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಪ್ರಾಂಶುಪಾಲ ಪ್ರೊ.ಅರುಣ್ ಕುಮಾರ್, ಜಿಪಂ ಮಾಜಿ ಸದಸ್ಯ ಹೆಚ್.ಸಿ.ಮಂಜುನಾಥ್, ಪುರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಮಧು, ಪುಟ್ಟಯ್ಯ, ಕುಮಾರ್, ಡಾ.ಮರಿದೇವಯ್ಯ, ಜೀವಿಕ ಬಸವರಾಜು, ರಾಜೇಗೌಡ, ಚೌಡಳ್ಳಿ ಜವರಯ್ಯ, ಮಲ್ಲೇಶ್, ಸಿದ್ದರಾಜು, ಡಾ.ಸೋಮಶೇಖರ್, ಬಾಲಾಜಿ, ದೈಹಿಕ ಶಿಕ್ಷಣ ನಿರ್ದೇಶಕ ಪುಟ್ಟರಾಜು, ಎಸ್.ಜೆ.ಪ್ರೊ. ಬೋರಮ್ಮ ಎಸ್.ಅಂಗಡಿ, ನಿಂಗರಾಜು, ಗುರುದತ್ ಕಾಮತ್, ಸಾಂಸ್ಕೃತಿಕ ಸಮಿತಿ ಸಂಚಾಲಕ ಪ್ರೊ.ರಾಜಶೇಖರ್, ಕೃ.ಪ. ಗಣೇಶ, ಚಂದ್ರಮ್ಮ, ಪುಷ್ಪಲತಾ, ಅಜಿತ್ ಕುಮಾರ್, ಪೂರ್ಣಿಮಾ, ಮಂಜುನಾಥ್, ರವಿಕುಮಾರ್ ಇನ್ನಿತರರಿದ್ದರು.

ಮೈಸೂರು ಮಿತ್ರ

ಇಲವಾಲದಲ್ಲಿ ಅದ್ಧೂರಿ ಡಾ. ಅಂಬೇಡ್ಕರ್ ಜಯಂತಿ

ಎಲ್ಲಾ ಸಮಾಜದವರಿಗೂ ಸಮಾನತೆ ತಂದು ಕೊಟ್ಟ ಮಹಾನಾಯಕ ಅಂಬೇಡ್ಕರ್

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ಬಣ್ಣನೆ



ಮೈಸೂರು ತಾಲೂಕಿನ ಇಲವಾಲದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯುತ್ಸವ ಸಮಿತಿ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜಯಂತ್ಯುತ್ಸವವನ್ನು ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು. ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಹಾಗೂ ಹಲವು ಮುಖಂಡರು ಉಪಸ್ಥಿತರಿದ್ದರು.

ಮೈಸೂರು, ಮೇ 18– ಮೈಸೂರಿನ ಇಲವಾಲದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯುತ್ಸವ ಭಾನುವಾರ ಅದ್ಧೂರಿಯಾಗಿ ನೆರವೇರಿತು.

ಮೈಸೂರು ತಾಲೂಕು ಇಲವಾಲ ಹೋಬಳಿಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ವಸತಿ ನಿಲಯದ ಆವರಣದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತ್ಯುತ್ಸವ ಸಮಿತಿ ವತಿಯಿಂದ ಏರ್ಪಡಿಸಿದ್ದ ಕಾರ್ಯಕ್ರಮವನ್ನು ಉರಿಲಿಂಗಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಸಾನ್ನಿಧ್ಯದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ದೀಪ ಬೆಳಗುವ ಮೂಲಕ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಡಾ.ಬಿ.ಆರ್. ಅಂಬೇಡ್ಕರ್ ನೀಡಿದ ಸಂವಿಧಾನದ ಆಶಯದಂತೆ ಸರ್ವರಿಗೂ ಸಮಾನತೆ ದೊರೆಯಬೇಕು. ಕೇವಲ ಭಾಷಣಕ್ಕೆ ಸೀಮಿತವಾಗದೆ ಅಂಬೇಡ್ಕರರ ಚಿಂತನೆಗಳನ್ನು ಅನುಸರಿಸಿ ಮುನ್ನಡೆಯಬೇಕು ಎಂದು ಹೇಳಿದರು.

ಸ್ವಾತಂತ್ರ್ಯ ಬಂದು 75 ವರ್ಷಗಳ ಬಳಿಕ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರಭಾವವನ್ನು ದೊಡ್ಡ ಮಟ್ಟದಲ್ಲಿ ಕಾಣುತ್ತಿರುವುದು ಸಂತೋಷದ ಸಂಗತಿ. ಅಂಬೇಡ್ಕರ್ ಪರಿಶ್ರಮದಿಂದಾಗಿ ದೇಶಕ್ಕೆ ಶ್ರೇಷ್ಠ ಸಂವಿಧಾನ ಸಿಕ್ಕಿದೆ. ಇದನ್ನು ಜಗತ್ತೇ ಕೊಂಡಾಡುತ್ತಿದೆ. ಕೇಂದ್ರ ಸರ್ಕಾರವು ಡಾ.ಅಂಬೇಡ್ಕರ್ ಜನ್ಮದಿನವನ್ನು ಸರ್ಕಾರಿ ರಜಾ ದಿನವನ್ನಾಗಿ ಘೋಷಣೆ ಮಾಡಿದರೆ, ಕರ್ನಾಟಕದಲ್ಲಿ ಸಂವಿಧಾನ ಪೀಠಿಕೆ ಓದುವ ಮೂಲಕ ನಿತ್ಯ ಸ್ಮರಣೆ ಮಾಡಲಾಗುತ್ತಿದೆ. ಮೈಸೂರು ಜಿಲ್ಲೆಯ ಎಲ್ಲೆಡೆ ಅಂಬೇಡ್ಕರ್ ಜಯಂತಿ ಆಚರಿಸಲಾಗುತ್ತಿದೆ. ಅದರಲ್ಲೂ ಇಲವಾಲ ಹೋಬಳಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಜನ ಒಂದುಗೂಡಿ ಆಚರಿಸಿರುವುದು ವಿಶೇಷ ಎಂದರು.

ಡಾ.ಅಂಬೇಡ್ಕರ್ ಅವರು ದಲಿತ ವರ್ಗಕ್ಕೆ ಸೀಮಿತವಾದ ನಾಯಕರಲ್ಲ. ಎಲ್ಲಾ ಸಮಾಜದವರಿಗೂ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸಮಾನತೆಯನ್ನು ತಂದುಕೊಟ್ಟ ಎಲ್ಲಾ ವರ್ಗದ ಮಹಾನಾಯಕ. ಪದವೀಧರರು ಹಾಗೂ ವ್ಯಾಪಾರಸ್ಥರಿಗಷ್ಟೇ ಇದ್ದ ಮತದಾನದ ಹಕ್ಕನ್ನು ಪ್ರತಿಯೊಬ್ಬರಿಗೂ ನೀಡಿದರು. ಇದರಿಂದ ಎಲ್ಲರ ಮತಕ್ಕೂ ಒಂದೇ ಮೌಲ್ಯ ದೊರಕಿತು. ಜನರಿಗೆ ಆಯ್ಕೆ ಸ್ವಾತಂತ್ರ್ಯ ಸಿಕ್ಕಿದ್ದರಿಂದಲೇ ರೈತನ ಮಗನಾದ ನಾನು ಶಾಸಕ, ಸಿದ್ದರಾಮನ ಹುಂಡಿ ಗ್ರಾಮದ ಸಿದ್ದರಾಮಯ್ಯ ಮುಖ್ಯಮಂತ್ರಿ, ನರೇಂದ್ರ ಮೋದಿ ಪ್ರಧಾನಿಯಾಗಲು ಸಾಧ್ಯವಾಯಿತು. ಈಗ ಎಲ್ಲೆಡೆ ಸಾಮಾಜಿಕ ನ್ಯಾಯದ ಮಂತ್ರ ಪಠಿಸಲಾಗುತ್ತಿದೆ. ಸಂವಿಧಾನದ ಮಹತ್ವ ಇಂದು ಎಲ್ಲರಿಗೂ ಅರಿವಾಗುತ್ತಿದೆ. ಇದರಿಂದ ಸಮಾಜದಲ್ಲಿ ಹೊಸತನ ಕಾಣುತ್ತಿದೆ ಎಂದು ಅಭಿಪ್ರಾಯಿಸಿದರು.

ಮೀಸಲಾತಿಯಿಂದ ಅವಕಾಶ: ನಂಜನಗೂಡು ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ, ಸಂವಿಧಾನದಡಿ ಮೀಸಲಾತಿ ದೊರಕದಿದ್ದರೆ ನನ್ನಂತ ವ್ಯಕ್ತಿ ಶಾಸಕನಾಗಿ ನಿಮ್ಮ ಮುಂದೆ ನಿಲ್ಲಲು ಸಾಧ್ಯವಾಗುತ್ತಿರಲಿಲ್ಲ. ಡಾ.ಅಂಬೇಡ್ಕರ್ ಅವರು ದೇಶದ ಜನರ ಅಭಿವೃದ್ಧಿಗಾಗಿ ಮೀಸಲಾತಿ ತಂದುಕೊಟ್ಟರು. ಇಂದು ಅಂತಹ ಮಹಾನ್ ವ್ಯಕ್ತಿಗೆ ಕೆಲವೆಡೆ ಅಪಮಾನಿಸುವ ಕೆಲಸಗಳಾಗುತ್ತಿರುವುದು ನೋವಿನ ಸಂಗತಿ ಎಂದರು.

ಆಶಯ ಅರಿಯಬೇಕು: ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಮಾತನಾಡಿ, ದಲಿತರು, ಹಿಂದುಳಿದವರು ಒಂದಾಗಬೇಕು. ಅಂಬೇಡ್ಕರ್ ಅವರ ಆಶಯವನ್ನು ನಾವೆಲ್ಲರೂ ಅರಿತು ಅದರಂತೆ ಮುನ್ನಡೆಯಬೇಕು. ಈ ಮೂಲಕ ಸಂವಿಧಾನ ವಿರೋಧಿ ಶಕ್ತಿಗಳಿಂದ ಉಂಟಾಗುವ ಅಪಾಯವನ್ನು ತಪ್ಪಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಜಿ.ಎನ್.ನಂಜುಂಡಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ಎಸ್.ಅರುಣ್‌ಕುಮಾರ್, ಮುಡಾ ಮಾಜಿ ಅಧ್ಯಕ್ಷ ಕೆ.ಮರೀಗೌಡ, ಜಿಪಂ ಮಾಜಿ ಅಧ್ಯಕ್ಷ ಕೂರ್ಗಳ್ಳಿ ಮಹದೇವ್, ಜಿಪಂ ಮಾಜಿ ಸದಸ್ಯ ರಾಕೇಶ್ ಪಾಪಣ್ಣ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನರೇಂದ್ರ, ಮುಖಂಡರಾದ ಹುಯಿಲಾಳು ರಾಮಸ್ವಾಮಿ, ದಿನೇಶ್, ದೇವರಾಜ್ ಒಡೆಯರ್, ಶಿವಕುಮಾರ್, ಜಟ್ಟಿಹುಂಡಿ ಸುನೀಲ್, ಮಹೇಶ್, ಸ್ವಾಮಿ, ಜವರಪ್ಪ ಕರೀಗೌಡ, ಕುಮಾರ್, ಶಿವಲಿಂಗೇಗೌಡ, ವೈ.ಸಿ.ಸ್ವಾಮಿ, ಮೈದನಹಳ್ಳಿ ಶಿವಣ್ಣ, ಶ್ರೀಮತಿ ವಾಣಿ, ಭಾಗ್ಯ, ಲೋಕೇಶ್, ಶಿವಮ್ಮ ಮತ್ತಿತರರು ಪಾಲ್ಗೊಂಡಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಜಾನಪದ ಕಲಾತಂಡಗಳೊಂದಿಗೆ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರವನ್ನು ಇಲವಾಲದ ಮುಖ್ಯ ರಸ್ತೆಯಲ್ಲಿ ಮೆರವಣಿಗೆ ಮಾಡಲಾಯಿತು.

> ಭಾರತ ದೇಶದಲ್ಲಿ ಕ್ಷಣ ಕ್ಷಣಕ್ಕೂ ನೆನಪು ಮಾಡಿಕೊಳ್ಳುವ ಮಹಾನ್ ವ್ಯಕ್ತಿ ಡಾ.ಬಿ.ಆರ್.ಅಂಬೇಡ್ಕರ್ ಅವರು. ಶೋಷಿತರ ಬಾಳಿಗೆ ಬೆಳಕು ನೀಡಿದ ಎರಡನೇ ಸೂರ್ಯ ಅಂಬೇಡ್ಕರ್ ಎಂದು ನೆಲ್ಸನ್ ಮಂಡೇಲಾ ಅವರು ಬಣ್ಣಿಸಿದ್ದರು. ಅಂಬೇಡ್ಕರ್ ಅವರ ಅಗಾಧ ಜ್ಞಾನದ ಜೊತೆಗೆ ಅವರ ಶಿಸ್ತು, ಉಡುಗೆ–ತೊಡುಗೆ ಅನುಕರಣೀಯವಾಗಿತ್ತು. ಭಾರತದ ಮೊದಲ ರಾಷ್ಟ್ರಪತಿ ರಾಜೇಂದ್ರ ಪ್ರಸಾದ್ ಅವರು ಅಂಬೇಡ್ಕರ್ ಅವರ ಪೋಷಾಕಿಗೆ ಸಲ್ಯೂಟ್ ಎಂದಿದ್ದರು. ಅಂಬೇಡ್ಕರ್ ಅವರ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು.
> –ಶ್ರೀ ಜ್ಞಾನಪ್ರಕಾಶ್ ಸ್ವಾಮೀಜಿ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಿಷನ್ ಇಂಪಾಸಿಬಲ್ (ಇಂ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹಿಟ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಡೀ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಟಕೀಲಾ (ಕ)	4 ಪ್ರದರ್ಶನಗಳು
ರಾಜಕಮಲ್	
ಡೆವಿಲ್ಸ್ ಡಬಲ್ ನೆಕ್ಸ್ಟ್ ಲೆವಲ್ (ತ)	4 ಪ್ರದರ್ಶನಗಳು
ಸಂಗಂ	
ರೆಟ್ರೋ (ತ)	4 ಪ್ರದರ್ಶನಗಳು
ಲಿಡೋ	
ಯುದ್ಧಕಾಂಡ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ಸಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

‘ಆಪರೇಷನ್ ಸಿಂಧೂರ್’ ರೂವಾರಿಗಳಾದ ಸೈನಿಕರಿಗೆ ಅಭಿನಂದನಾ ನುಡಿ



ಮೈಸೂರು, ಮೇ 18(ಎಂಕೆ)– ಮೈಸೂರಿನ ಲಕ್ಷ್ಮಿಪುರಂನಲ್ಲಿರುವ ಬಿಎಸ್‌ಎಸ್ ವಿದ್ಯೋದಯ ಶಾಲೆಯಲ್ಲಿ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಯಶಸ್ಸಿನ ರೂವಾರಿಗಳಾದ ಸೈನಿಕರಿಗೆ ಅಭಿನಂದನಾ ನುಡಿಗಳನ್ನು ಸಲ್ಲಿಸಲಾಯಿತು.

ಈ ವೇಳೆ ಭಾರತಾಂಬೆ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಇಂಜಿನಿಯರ್ ತಿಲಕ್, ಆಪರೇಷನ್ ಸಿಂಧೂರ್ ಒಂದು ಅತ್ಯಾಧುನಿಕ ಕಾರ್ಯಾಚರಣೆ. ಇದರ ಯಶಸ್ಸಿನ ರೂವಾರಿಗಳಾದ ಭಾರತೀಯ ಸೇನಾಪಡೆ ಹಾಗೂ ಪ್ರಧಾನ ಮಂತ್ರಿಗಳಾದ ಮೋದಿ ಅವರಿಗೆ ಸಲ್ಲಬೇಕು ಎಂದರು. ಭಾರತ ಮಾತೆಯ ಸಿಂಧೂರವಾದ ಜಮ್ಮು ಮತ್ತು ಕಾಶ್ಮೀರದಲ್ಲಿ ನಮ್ಮ ಭಾರತೀಯ ಹೆಣ್ಣು ಮಕ್ಕಳ ಸಿಂಧೂರವನ್ನು ಮುಟ್ಟಿದ್ದಕ್ಕೆ ತಕ್ಕ ಉತ್ತರ ಇದಾಗಿದೆ. ದಕ್ಷಿಣ ಭಾರತೀಯರಿಗೆ ಯುದ್ಧದ ಬಿಸಿ ಕಡಿಮೆ ತಟ್ಟಿದ್ದರು, ಯುದ್ಧದ ಸಂದರ್ಭದಲ್ಲಿ ನಮ್ಮ ಮನೆಯಲ್ಲೊಂದು ದೀಪ ಹಚ್ಚಿ ಒಂದೆರಡು ಹೂವ್ರ ಹೆಚ್ಚಾಗಿ ದೇವರಿಗೆ ಅರ್ಪಿಸುವುದರ ಮೂಲಕ ನಮ್ಮ ಸೈನಿಕರ ಒಳಿತನ್ನು ಪ್ರತಿಯೊಂದು ಮನೆ ಮನೆಯಲ್ಲೂ ಬಯಸೋಣ ಎಂದರು. ಸಾವರ್ಕರ್ ಪ್ರತಿಷ್ಠಾನದ ಯಶಸ್ವಿನಿ ಸೇರಿದಂತೆ ನೂರಾರು ಮಹಿಳೆಯರು ಭಾಗವಹಿಸಿದ್ದರು.

ಅಭಿನಂದನೆ...



ಮೈಸೂರಿನ ರಾಮಕೃಷ್ಣ ಆಶ್ರಮ ಹಾಗೂ ಮೈಸೂರು ವಿಶ್ವವಿದ್ಯಾನಿಲಯಕ್ಕೆ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ.ಕೃಷ್ಣ ಅವರ ಹೆಸರಿನಲ್ಲಿ ದತ್ತಿ ನಿಧಿ ನೀಡಿದ ಮದ್ದೂರು ಶಾಸಕ ಕೆ.ಎಂ.ಉದಯ್ ಹಾಗೂ ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಅವರನ್ನು ಎಸ್.ಎಂ.ಕೃಷ್ಣ ಅಭಿಮಾನಿಗಳ ಬಳಗದ ಅಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ ಅಭಿನಂದಿಸಿದರು. ಈ ವೇಳೆ ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್ ಇದ್ದರು.

ಗಾನ ಮಾಧುರ್ಯಕ್ಕೆ ತಲೆದೂಗಿದ ಶ್ರೋತೃಗಳು



‘ಶ್ರೀ ನಾದ ಸಂಭ್ರಮ’ ಸಂಗೀತ ಕಾರ್ಯಕ್ರಮವನ್ನು ಮೇಲುಕೋಟೆಯ ಶ್ರೀ ಇಳೈ ಆಳ್ವಾರ್ ಸ್ವಾಮೀಜಿ ಉದ್ಘಾಟಿಸಿದರು.

ಮೈಸೂರು, ಮೇ 18(ಎಸ್‌ಪಿಎನ್)– ಮೈಸೂರು ಕುವೆಂಪುನಗರ ಗಾನಭಾರತೀ ಸಭಾಂಗಣದಲ್ಲಿ ನಾದ ವಿದ್ಯಾಲಯ ಮತ್ತು ಅಕಾಡೆಮಿ ಆಫ್ ಮ್ಯೂಸಿಕ್ ಅಂಡ್ ಡಾನ್ಸ್ ಮೈಸೂರು ಸಹಯೋಗದೊಂದಿಗೆ ‘ಶ್ರೀ ನಾದ ಸಂಭ್ರಮ’ ಶೀರ್ಷಿಕೆಯಡಿ ಏರ್ಪಡಿಸಿದ್ದ ವಿದ್ವಾನ್ ಎಂ.ಎಸ್. ನವೀನ್ ಅವರ ಶಿಷ್ಯೆ, ಲಕ್ಷ್ಮೀ ಕೇಶವಮೂರ್ತಿ ಅವರು ಕರ್ನಾಟಕ ಶಾಸ್ತ್ರೀಯ ಸಂಗೀತದಲ್ಲಿ ಹಲವು ಖ್ಯಾತನಾಮ ವಾಗ್ಗೇಯಕಾರರು ಸಂಯೋಜಿಸಿರುವ ಹಾಡುಗಳನ್ನು ಹಾಡಿ, ಪ್ರೇಕ್ಷಕರ ಮನಗೆದ್ದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮೇಲುಕೋಟೆ ವೆಂಗಿಪುರದ ಶ್ರೀ ಇಳೈಆಳ್ವಾರ್ ಸ್ವಾಮೀಜಿ, ಭಾರತೀಯ ಪರಂಪರೆಯಲ್ಲಿ ಕರ್ನಾಟಕ ಸಂಗೀತಕ್ಕೆ ವಿಶಿಷ್ಟ ಸ್ಥಾನಮಾನವಿದೆ. ಈ ಸಂಗೀತ ಪ್ರಕಾರ ನಮ್ಮ ಹಿರಿಯರು ನೀಡಿರುವ ಬಳುವಳಿ. ಇದನ್ನು ಉಳಿಸಿ, ಬೆಳೆಸುವುದು ನಮ್ಮೆಲ್ಲರ ಹೊಣೆ ಎಂದರು.

ವಿದ್ವಾನ್ ಎಂ.ಎಸ್. ನವೀನ್ ಅವರ ಶಿಷ್ಯೆ ಲಕ್ಷ್ಮೀ ಕೇಶವಮೂರ್ತಿ ಅವರು ಚಿಕ್ಕ ವಯಸ್ಸಿನಲ್ಲೇ ಕರ್ನಾಟಕ ಶ್ರೀ ನಾದ ಸಂಭ್ರಮ ಶೀರ್ಷಿಕೆಯಡಿ ಪ್ರಪ್ರಥಮ ಕರ್ನಾಟಕ ಸಂಗೀತ ಕಚೇರಿ ನಡೆಸಿಕೊಡುತ್ತಿರುವುದು ಸಂತೋಷ ಸಂಗತಿ. ಇದೇ ವೇದಿಕೆಯಲ್ಲಿ ವಿದುಷಿ ಸೂರ್ಯ ಗಾಯತ್ರಿ ಅವರು, ಈಗಾಗಲೇ ದೇಶದ ವಿವಿಧ ವೇದಿಕೆಗಳಲ್ಲಿ ಕರ್ನಾಟಕ ಸಂಗೀತದಲ್ಲಿ ಕಚೇರಿಗಳನ್ನು ನೀಡಿ, ಖ್ಯಾತರಾಗಿದ್ದಾರೆ. ಅವರು ಹಾಡಿರುವ ಸುಮಧುರ ಹಾಡುಗಳು ಸಿಡಿಗಳ ಮೂಲಕ, ಯೂಟ್ಯೂಬ್ ಮೂಲಕ ಕೇಳಬಹುದು ಎಂದರು.

ನೇಪಥ್ಯದಲ್ಲಿ ವಿದ್ವಾನ್ ಯಶಸ್ವಿ ಪಿಟೀಲು, ವಿದ್ವಾನ್ ವಿಕ್ರಂ ಭಾರದ್ವಾಜ್ ಮೃದಂಗ, ವಿದ್ವಾನ್ ದಾಸಪ್ಪ ತಬಲ, ವಿದ್ವಾನ್ ಪುರುಷೋತ್ತಮ್ ಕೀಬೋರ್ಡ್, ವಿದ್ವಾನ್ ಗುರುದತ್ತ ರಿದಂಪ್ಯಾಡ್ ನುಡಿಸಿ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

ಈ ವೇಳೆ ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯಕಿ ವಿದುಷಿ ಸೂರ್ಯ ಗಾಯತ್ರಿ, ಮಣಿ ಪಾಲ್ ಆಸ್ಪತ್ರೆ ಮುಖ್ಯ ಮೆಡಿಕಲ್ ಸೂಪರಿಂಟೆಂಡೆಂಟ್ ಡಾ. ಉಪೇಂದ್ರ ಶೆಣೈ, ಫಿಯೋನಿಕ್ಸ್ ಅಂತರಾಷ್ಟ್ರೀಯ ಅಕಾಡೆಮಿಯ ಕಾರ್ಯದರ್ಶಿ ತೇಜಸ್ವಿನಿ ಆಳ್ವಾರ್, ಕಾರ್ಯಕ್ರಮದ ನಿರ್ದೇಶನ ವಿದ್ವಾನ್ ಎಂ.ಎಸ್. ನವೀನ್, ಸೇರಿದಂತೆ ಇತರರಿದ್ದರು.

ಇಂದಿನಿಂದ ಮುದ್ರಾ ಪ್ರಾಣಾಯಾಮ ಶಿಬಿರ

ಮೈಸೂರು, ಮೇ 18 – ಮೈಸೂರಿನ ಧನ್ಯ ಸ್ಕೂಲ್ ಆಫ್ ಯೋಗ ಹಾಗೂ ಮುದ್ರಾ ಪ್ರಾಣಾಯಾಮ ರಿಸರ್ಚ್ ಸೆಂಟರ್ ವತಿಯಿಂದ ಜೆಎಲ್‌ಬಿ ರಸ್ತೆಯಲ್ಲಿರುವ ಮಹಿಳಾ ಸಮಾಜದಲ್ಲಿ ಮೇ 19 ರಿಂದ ಪ್ರತಿದಿನ ಬೆಳಗ್ಗೆ 6.30 ರಿಂದ 7.30 ರವರೆಗೆ ಹಾಗೂ ಸಂಜೆ 6.30 ರಿಂದ 7.30 ರವರೆಗೆ 5 ದಿನಗಳ ಕಾಲ ಮುದ್ರಾ ಪ್ರಾಣಾಯಾಮ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9945614565, 9141096102 ಸಂಪರ್ಕಿಸಬಹುದು.

ಬೋರೆ ಆನಂದೂರು ಅಗ್ನಿ ದುರಂತ ಮನೆಗಳಿಗೆ ಶಾಸಕ ಜಿ.ಟಿ.ದೇವೇಗೌಡ ಭೇಟಿ

ತಲಾ ಲಕ್ಷ ರೂ. ವೈಯಕ್ತಿಕ ಪರಿಹಾರ



ಬೋರೆ ಆನಂದೂರಿನಲ್ಲಿ ಅಗ್ನಿ ಅವಘಡದಿಂದ ಸುಟ್ಟು ಕರಕಲಾಗಿದ್ದ ಮನೆಗಳಿಗೆ ಶಾಸಕ ಜಿ.ಟಿ.ದೇವೇಗೌಡರು ಭೇಟಿ ನೀಡಿ, ಸಾಂತ್ವನ ಹೇಳಿದರು.

ಮೈಸೂರು, ಮೇ 18(ಎಸ್‌ಪಿಎನ್)–ಅಗ್ನಿ ಅವಘಡದಿಂದ ಸಂಪೂರ್ಣವಾಗಿ ಸುಟ್ಟು ಕರಕಲಾಗಿದ್ದ ಮನೆಗಳಿಗೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಭಾನುವಾರ ಭೇಟಿ ನೀಡಿ, ಸ್ಥಳ ಪರಿಶೀಲನೆ ನಡೆಸಿದರು.

ಬೋರೆಆನಂದೂರು ಗ್ರಾಮದ ಶನಿವಾರೆಗೌಡ, ವೆಂಕಟೇಶ್ ಗೌಡ ಹಾಗೂ ಶ್ರೀನಿವಾಸಗೌಡ ಎಂಬುವವರ ಮನೆಗಳು ಬೆಂಕಿಗೆ ಆಹುತಿಯಾಗಿದ್ದವು. ಅಗ್ನಿ ಅವಘಡದಿಂದ ಮನೆ ಕಳೆದುಕೊಂಡ ಕುಟುಂಬಗಳಿಗೆ ಶಾಸಕರು ವೈಯಕ್ತಿಕವಾಗಿ ಒಂದು ಲಕ್ಷ ರೂಪಾಯಿ ಪರಿಹಾರವನ್ನು ವಿತರಿಸಿ, ಧೈರ್ಯ ತುಂಬಿದರು.

ಆಕಸ್ಮಿಕವಾಗಿ ನಡೆದಿರುವ ಘಟನೆಯಿಂದ ಮನೆಯಲ್ಲಿ ಒಂದು ವಸ್ತುಗಳು ಇಲ್ಲದಂತೆ ಸುಟ್ಟು ಹೋಗಿದೆ. ನಮಗೆ ಆಹಾರ ಪದಾರ್ಥಗಳು ಇಲ್ಲದಂತಾಗಿದೆ ಎಂದು ಕುಟುಂಬಸ್ಥರು, ಶಾಸಕರ ಬಳಿ ಅಳಲು ತೋಡಿಕೊಂಡರು. ಈ ವೇಳೆ ಸೆಸ್ಕಾಂ ಎಂಡಿ ಕೆ.ಎಂ.ಮುನಿಗೋಪಾಲರಾಜು, ಅಧೀಕ್ಷಕ ಅಭಿಯಂತರ ಸುನಿಲ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

ಏಷ್ಯನ್ ಟೆನಿಸ್ ಚಾಂಪಿಯನ್‌ಶಿಪ್‌ನಲ್ಲಿ ಮೈಸೂರಿನ ಪದ್ಮಪ್ರಿಯಾ ಸಿಂಗಲ್ಸ್, ಡಬಲ್ಸ್‌ನಲ್ಲಿ ಚಾಂಪಿಯನ್



ಬಹ್ರೇನ್‌ನಲ್ಲಿ ನಡೆದ ಏಷ್ಯನ್ ಜ್ಯೂನಿಯರ್ ಟೆನ್ನಿಸ್ ಚಾಂಪಿಯನ್‌ಶಿಪ್ ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಮೈಸೂರಿನ ಪದ್ಮಪ್ರಿಯಾ ರಮೇಶ್‌ಕುಮಾರ್, ಸಿಂಗಲ್ಸ್ ವಿಭಾಗದಲ್ಲಿ ಚಾಂಪಿಯನ್ ಪ್ರಶಸ್ತಿ ಸ್ವೀಕರಿಸುತ್ತಿರುವುದು.

ಮೈಸೂರು, ಮೇ 18(ಎಂಟಿವೈ)– ಬಹ್ರೇನ್‌ನಲ್ಲಿ ನಡೆದ 14 ವರ್ಷದೊಳಗಿನ ಏಷ್ಯನ್ ಟೆನಿಸ್ ಚಾಂಪಿಯನ್‌ಶಿಪ್ ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಮೈಸೂರಿನ ಟೆನಿಸ್ ಪಟು ಪದ್ಮಪ್ರಿಯಾ ರಮೇಶ್‌ಕುಮಾರ್ ಸಿಂಗಲ್ಸ್ ಮತ್ತು ಡಬಲ್ಸ್ ವಿಭಾಗದಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮುವ ಮೂಲಕ ಪ್ರಶಂಸೆಗೆ ಪಾತ್ರರಾಗಿದ್ದಾರೆ.

ಇಂಟರ್‌ನ್ಯಾಷನಲ್ ಟೆನ್ನಿಸ್ ಫೆಡರೇಷನ್ ಹಾಗೂ ಬಹ್ರೇನ್ ಟೆನ್ನಿಸ್ ಫೆಡರೇಷನ್ ಸಂಯುಕ್ತಾಶ್ರಯದಲ್ಲಿ ಬಹ್ರೇನ್ ಟೆನ್ನಿಸ್ ಕ್ಲಬ್‌ನಲ್ಲಿ ಆಯೋಜಿಸಿದ್ದ ಐಟಿಸಿ ಏಷ್ಯನ್ ಜ್ಯೂನಿಯರ್ ಟೆನ್ನಿಸ್ ಚಾಂಪಿಯನ್‌ಶಿಪ್–2025 ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಪದ್ಮಪ್ರಿಯಾ ರಮೇಶ್‌ಕುಮಾರ್ ಪಂದ್ಯಾವಳಿಯುದ್ದಕ್ಕೂ ಉತ್ತಮ ಪ್ರದರ್ಶನ ನೀಡಿ, ಸಿಂಗಲ್ಸ್ ಮತ್ತು ಡಬಲ್ಸ್ ವಿಭಾಗದಲ್ಲಿ ಚಾಂಪಿಯನ್ ಆಗಿ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ.

ಪಂದ್ಯಾವಳಿಯಲ್ಲಿ ಮೊದಲ ಸುತ್ತಿನಲ್ಲಿ ಬೈ ಪಡೆದು ಎರಡನೇ ಸುತ್ತಿಗೆ ಅರ್ಹತೆ ಪಡೆದ ಪದ್ಮಪ್ರಿಯಾ, ಎರಡನೇ ಸುತ್ತಿನಲ್ಲಿ ರಷ್ಯಾದ ಆಟಗಾರ್ತಿ ವಿಕ್ಟೋರಿಯಾ ಕಾರ್ಪೆಂಕೊ ಅವರನ್ನು 6–0, 6–1 ಸೆಟ್‌ಗಳಿಂದ ಸೋಲಿಸಿದರು. ಕ್ವಾರ್ಟರ್–ಫೈನಲ್ ಪಂದ್ಯದಲ್ಲಿ ಫಿಲಿಪೈನ್ಸ್ ಆಟಗಾರ್ತಿ ಸೆರಾ ಬೆರ್ಮಾಸ್ ವಿರುದ್ಧ 6–0, 6–0 ಸೆಟ್ ಅಂತರದ ಗೆಲುವು ಸಾಧಿಸಿ, ಸೆಮಿಫೈನಲ್ ಪ್ರವೇಶಿಸಿದರು. ಸೆಮಿಫೈನಲ್‌ನಲ್ಲಿ ಸೌದಿ ಅರೇಬಿಯಾದ ಆಟಗಾರ್ತಿ ಫಾತಿಮಾ ಅಲ್ಬಜಾರಿ ಅವರನ್ನು 6–0, 6–1 ಅಂತರದಿಂದ ಸೋಲಿಸಿದರು. ಫೈನಲ್ ಪಂದ್ಯದಲ್ಲಿ ಪದ್ಮಪ್ರಿಯಾ, ಬಹ್ರೇನ್‌ನ ಸೋಫಿಯಾ ಬೇಡರ್ ಅವರನ್ನು 6–1, 6–1 ಸೆಟ್‌ನಿಂದ ಸೋಲಿಸಿ, ಸಿಂಗಲ್ಸ್ ವಿಭಾಗದಲ್ಲಿ ಚಾಂಪಿಯನ್ ಆದರು.

ಡಬಲ್ಸ್ ಫೈನಲ್‌ನಲ್ಲಿ: ಸಿಂಗಲ್ಸ್‌ನಲ್ಲಿ ವಿವಿಧ ದೇಶದ ಎದುರಾಳಿ ಆಟಗಾರರನ್ನು ಸೋಲಿಸಿ, ಚಾಂಪಿಯನ್ ಆದ ಪದ್ಮಪ್ರಿಯಾ ಡಬಲ್ಸ್ ವಿಭಾಗದಲ್ಲೂ ಉತ್ತಮ ಪ್ರದರ್ಶನ ನೀಡಿದರು. ಪದ್ಮಪ್ರಿಯಾ ರಷ್ಯಾದ ಆಟಗಾರ್ತಿ ವಿಕ್ಟೋರಿಯಾ ಕಾರ್ಪೆಂಕೊ ಅವರೊಂದಿಗೆ ಡಬಲ್ಸ್ ಫೈನಲ್ ಪಂದ್ಯದಲ್ಲಿ ಬಹ್ರೇನ್ ಟೆನ್ನಿಸ್ ಪಟುಗಳಾದ ಸೋಫಿಯಾ ಬೇಡರ್ ಮತ್ತು ಸಾರಾ ಬೆರ್ಮಾಸ್ ವಿರುದ್ಧ 6–2, 6–2 ಸೆಟ್ ಅಂತರದಿಂದ ಗೆಲುವು ಸಾಧಿಸಿ, ಡಬಲ್ಸ್‌ನಲ್ಲಿ ಚಾಂಪಿಯನ್ ಪಟ್ಟವನ್ನು ರಷ್ಯಾ ಆಟಗಾರ್ತಿಯೊಂದಿಗೆ ಹಂಚಿಕೊಂಡಿದ್ದಾರೆ.

ಮೈಸೂರು ವೃತ್ತದ ಸಿಎಫ್ ಡಾ.ಮಾಲತಿ ಪ್ರಿಯಾ ಹಾಗೂ ಹುಲಿ ಯೋಜನೆಯ ಸಿಎಫ್ ಡಾ.ಪಿ.ರಮೇಶ್ ಕುಮಾರ್ ದಂಪತಿ ಪುತ್ರಿಯಾಗಿರುವ ಪದ್ಮಪ್ರಿಯಾ ಮೈಸೂರಿನ ಎಕ್ಸೆಲ್ ಪಬ್ಲಿಕ್ ಶಾಲೆಯಲ್ಲಿ 8ನೇ ತರಗತಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ.

ರೈಲ್ವೆ ವರ್ಕ್‌ಶಾಪ್‌ನಲ್ಲಿ ಮಹಿಳಾ ಉದ್ಯೋಗಿಗೆ ಲೈಂಗಿಕ ಕಿರುಕುಳ

ಅಶೋಕಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲು

ಮೈಸೂರು, ಮೇ18(ಬಿಎಲ್‌ಯು)– ಮೈಸೂರಿನ ಅಶೋಕಪುರಂನಲ್ಲಿರುವ ಕೇಂದ್ರ ರೈಲ್ವೆ ವರ್ಕ್‌ಶಾಪ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಿರಿಯ ಅಧಿಕಾರಿಗಳು ತನಗೆ ಲೈಂಗಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ ಮಹಿಳಾ ಉದ್ಯೋಗಿಯೊಬ್ಬರು ಪೊಲೀಸರಿಗೆ ದೂರು ನೀಡಿದ್ದಾರೆ.

ಈ ಸಂಬಂಧ ನಗರದ ಅಶೋಕಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ತಾನು ಎಸಿ ಮೆಕಾನಿಕ್ ಶಾಪ್‌ನಲ್ಲಿ ಕೆಲಸ ಮಾಡುವಾಗ ಸೀನಿಯರ್ ಸೆಕ್ಷನ್ ಇಂಜಿನಿಯರ್–1 ಜಡ್. ಥಾಮಸ್ ಅವರು ನನ್ನ ಹಿರಿಯ ಅಧಿಕಾರಿಯಾಗಿದ್ದು, ಲೈಂಗಿಕ ಕಿರುಕುಳ ನೀಡುತ್ತಿದ್ದರು. ಲೈಂಗಿಕವಾಗಿ ಮಾತನಾಡುವುದು, ಲೈಂಗಿಕ ಚಿತ್ರಗಳನ್ನು ಬರೆದು ತೋರಿಸುವುದು, ಕೈಯಲ್ಲಿ ಕೆಟ್ಟದಾಗಿ ಸನ್ನೆ ಮಾಡುವುದು ಸೇರಿದಂತೆ ಲೈಂಗಿಕ ವಿಚಾರಗಳ ಬಗ್ಗೆ ಹಲವು ರೀತಿಯಲ್ಲಿ ಮಾನಸಿಕವಾಗಿ ಕಿರುಕುಳ ನೀಡುತ್ತಿದ್ದರು ಎಂದು ಆರೋಪಿಸಿದ್ದಾರೆ.

ನನಗೆ ಲೈಂಗಿಕ ಕಿರುಕುಳ ನೀಡುತ್ತಿದ್ದ ಜಡ್. ಥಾಮಸ್ ಅವರಿಗೆ ಸೀನಿಯರ್ ಸೆಕ್ಷನ್ ಇಂಜಿನಿಯರ್ ಪ್ರೋಗ್ರೆಸ್ ಪ್ರತಿಭಾ ಚೌಹಾನ್ ಹಾಗೂ ಸೀನಿಯರ್ ಸೆಕ್ಷನ್ ಇಂಜಿನಿಯರ್–2 ಗಿತೇಶ್ ಸಿಂಗ್ ಬೆಂಬಲ ನೀಡುತ್ತಿದ್ದರು ಎಂದು ದೂರಿದ್ದಾರೆ.

ಥಾಮಸ್ ಅವರು ನೀಡುತ್ತಿರುವ ಲೈಂಗಿಕ ಕಿರುಕುಳದ ಬಗ್ಗೆ ರೈಲ್ವೆ ಇಲಾಖೆ ಆಂತರಿಕ ಸಮಿತಿಗೆ ಆಗಸ್ಟ್ 8, 2024 ರಂದು ದೂರು ನೀಡಿದ್ದೆ. ಆದರೆ ಯಾವುದೇ ಪ್ರಯೋಜನವಾಗಿಲ್ಲ. ಆದರೆ ಜಡ್.ಥಾಮಸ್ ಅವರನ್ನು ಮಾತ್ರ ಬೇರೆ ಶಾಪ್‌ಗೆ ವರ್ಗಾವಣೆ ಮಾಡಲಾಯಿತು.

ಆದರೆ ನನಗೆ ಮಾನಸಿಕ ಕಿರುಕುಳ ಮಾತ್ರ ತಪ್ಪಲಿಲ್ಲ. ಸೀನಿಯರ್ ಸೆಕ್ಷನ್ ಇಂಜಿನಿಯರ್–2 ಗಿತೇಶ್ ಸಿಂಗ್ ಮತ್ತು ಸೀನಿಯರ್ ಸೆಕ್ಷನ್ ಇಂಜಿನಿಯರ್ ಎಸ್.ಸುಜೀತ್ ಅವರು ನಾನು ಕೆಲಸ ಮಾಡುವಾಗ ನನ್ನ ಫೋಟೋ ಮತ್ತು ವಿಡಿಯೋಗಳನ್ನು ಚಿತ್ರೀಕರಿಸಿದ್ದಾರೆ. ಈ ವಿಚಾರ ಮೇ 6, 2025 ರಂದು ನನ್ನ ಗಮನಕ್ಕೆ ಬಂದಿತು ಎಂದು ಆಪಾದಿಸಿದ್ದಾರೆ.

ಬಿಹಾರದಿಂದ ಹುಡುಗರನ್ನು ಕರೆಸಿ, ಯಾವುದೇ ಸಾಕ್ಷಿ ಸಿಗದಂತೆ ನಿನ್ನನ್ನು ಶೂಟ್ ಮಾಡಿಸಿ ಕೊಲೆ ಮಾಡುವುದಾಗಿ ಗಿತೇಶ್ ಬೆದರಿಕೆ ಹಾಕಿದ್ದಾರೆ. ಈ ಹಿನ್ನೆಲೆ ಜಡ್. ಥಾಮಸ್, ಗಿತೇಶ್ ಸಿಂಗ್, ಎಸ್.ಸುಜೀತ್, ಪ್ರತಿಭಾ ಚೌಹಾನ್ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಮಹಿಳಾ ಉದ್ಯೋಗಿ ಪೊಲೀಸರಿಗೆ ನೀಡಿರುವ ದೂರಿನಲ್ಲಿ ಮನವಿ ಮಾಡಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು, ಮೇ 18– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ತಿ.ನರಸೀಪುರ ತಾಲೂಕಿನಲ್ಲಿ 3 ಅಂಗನವಾಡಿ ಕಾರ್ಯಕರ್ತೆ ಮತ್ತು 28 ಅಂಗನವಾಡಿ ಸಹಾಯಕಿಯರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ದೂ.ಸಂ: 08227–297267, 7019403686 ಅನ್ನು ಸಂಪರ್ಕಿಸಬಹುದು ಎಂದು ತಿ.ನರಸೀಪುರ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಶ್ರೀ ಗೋವಿಂದೇಗೌಡ ರವರಿಗೆ
ಹುಟ್ಟು ಹಬ್ಬದ ಶುಭಾಶಯಗಳು
ಪ್ರಥಮ ದರ್ಜೆ ಗುತ್ತಿಗೆದಾರರು ಮತ್ತು ಮೈಸೂರಿನ
ಹೆಸರಾಂತ ವೈಶಾಖ್ ಗ್ರೂಪ್ ಆಫ್ ಹೋಟೆಲ್ಸ್‌ನ
ಮಾಲೀಕರು
(ಹೋಟೆಲ್ ವೈಶಾಖ್ ಇಂಟರ್‌ನಾಷನಲ್,
ಹೋಟೆಲ್ ವೈಶಾಖ್ ರೆಸಿಡೆನ್ಸಿ,
ಹೋಟೆಲ್ ವೈಶಾಖ್ ಕಂಫ಼ರ್ಟ್,
ಹೋಟೆಲ್ ರಿಯೋ ಮೆರಿಡಿಯನ್)
ಹಾಗೂ ನೂರಾರು ಕುಟುಂಬದ
ಅನ್ನದಾತರಾದ
ಶ್ರೀ ಗೋವಿಂದೇಗೌಡ ರವರಿಗೆ
ಹುಟ್ಟುಹಬ್ಬದ ಶುಭಾಷಯಗಳು.
ತಾಯಿ ಚಾಮುಂಡೇಶ್ವರಿ ಇವರಿಗೆ
ಆಯುರಾರೋಗ್ಯ ಕರುಣಿಸಲೆಂದು ಪ್ರಾರ್ಥಿಸುವ
ಆಡಳಿತ ಮಂಡಳಿ ಮತ್ತು ಸಿಬ್ಬಂದಿ ವರ್ಗದವರು
ಶುಭ ಕೋರುವವರು :
ಶ್ರೀ ಓಂಶಕ್ತಿ ಟ್ರಾವೆಲ್ಸ್
Hotel RIO MERIDIAN
your host in city of palaces
C. Praveen Kumar
Om
Shakthi